**ಸನ್ಮಾನ್ಯ ಸಭಾಧ್ಯಕ್ಷರೆ,**

1. 2025–26ನೇ ಸಾಲಿನ ಆಯವ್ಯಯವನ್ನು ಸದನದ ಮುಂದೆ ಮಂಡಿಸಲು ನಾನು ಹರ್ಷಿಸುತ್ತೇನೆ.

2. ಆಯವ್ಯಯ ಎನ್ನುವುದು ಕೂಡಿ ಕಳೆಯುವ ಅಂಕಿ ಸಂಖ್ಯೆಗಳ ನಿರ್ಜೀವ ಆಟವಲ್ಲ. ಏಳು ಕೋಟಿ ಜನರ ಬದುಕಿನ ಭರವಸೆಯ ಉಸಿರು ಎಂಬ ಅರಿವಿನೊಂದಿಗೆ ನಮ್ಮ ಸಂಕಲ್ಪಗಳನ್ನು ನಾಡಿನ ಜನಕೋಟಿಯ ಮುಂದಿರಿಸುವ ಬಹುದೊಡ್ಡ ಹೊಣೆಗಾರಿಕೆಯೊಂದಿಗೆ ನಿಂತಿದ್ದೇನೆ.

**ನಮ್ಮ ಕೈಬುಟ್ಟಿಯಲಿ**
**ಸಿಡಿಲ ಗೂಡಿಹುದು**
**ಹುಡುಕಿ ನೋಡಿದರಲ್ಲಿ**
**ಸುಮದ ಬೀಡಿಹುದು**

\- **ಕುವೆಂಪು**

3. ರಾಜ್ಯದ ಪ್ರತಿ ಪ್ರಜೆಯ ಕನಸನ್ನು ಸಾಕಾರಗೊಳಿಸುವ, ನಾಳೆಗಳ ಬಗ್ಗೆ ಭರವಸೆ ಮೂಡಿಸುವ, ನುಡಿದಂತೆ ನಡೆಯುವ ನಮ್ಮ

ವಾಗ್ದಾನವನ್ನು ಈ ಆಯವ್ಯಯ ಇನ್ನಷ್ಟು ದೃಢಪಡಿಸುತ್ತದೆ. ಆಯವ್ಯಯವು ಸುಸ್ಥಿರ ಮತ್ತು ನ್ಯಾಯಬದ್ಧ ಆರ್ಥಿಕತೆಯ ಮೂಲಕ ಪ್ರತಿಯೊಬ್ಬರ ಕಲ್ಯಾಣ ಸಾಧ್ಯವೆಂಬ ಮಹಾತ್ಮಾ ಗಾಂಧೀಜಿಯವರ ಆಶಯದ ಸ್ಪಷ್ಟ ದಿಕ್ಸೂಚಿಯಾಗಿದ್ದು, ಸರ್ಕಾರದ ಸಾಮಾಜಿಕ, ಆರ್ಥಿಕ ಸಮಾನತೆಯ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ.

4. ಬಲಿಷ್ಠವಾದುದು ಮಾತ್ರ ಬದುಕುತ್ತದೆ ಎಂಬುದು ಮೃಗೀಯ ತತ್ವ. ಮನುಷ್ಯ ಸಮಾಜದಲ್ಲೂ ಈ ರೀತಿಯಾದರೆ ಅದನ್ನು 'ಸೋಷಿಯಲ್ ಡಾರ್ವಿನಿಸಂ' ಎಂದು ಕರೆಯಲಾಗುತ್ತದೆ. ಈ ತತ್ವಕ್ಕೆ ವಿರುದ್ಧವಾಗಿ ಮಾನವೀಯ ನೆಲೆಯಲ್ಲಿ ಸಮ ಸಮಾಜದ ಆಶಯದ ಮೂಲಕ ದೇಶವನ್ನು ಕಟ್ಟಲು ಬಾಬಾ ಸಾಹೇಬ್ ಡಾ॥ ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನ ರಚಿಸಿಕೊಟ್ಟಿದ್ದಾರೆ. ಸಂವಿಧಾನದ ಹಿಂದೆ ಬುದ್ಧ, ಬಸವಣ್ಣ, ನಾರಾಯಣ ಗುರು ಮುಂತಾದ ದಾರ್ಶನಿಕರ ಕನಸುಗಳಿವೆ. ಇವರೆಲ್ಲರ ಆಶಯಗಳಂತೆ ನಾವು ಬದ್ಧತೆಯಿಂದ ರಾಜ್ಯವನ್ನು ಮುನ್ನಡೆಸುತ್ತಿದ್ದೇವೆ. ಸಾಮಾಜಿಕ ನ್ಯಾಯದ ತಳಹದಿ ಭದ್ರಗೊಳ್ಳುತ್ತಲೇ ಇರಬೇಕು ಎನ್ನುವುದು ನಮ್ಮ ಸರ್ಕಾರದ ದೃಢ ಸಂಕಲ್ಪ.

**ಇರುವೆಲ್ಲವನು ಎಲ್ಲ ಜನಕೆ ತೆರವಾಗಿಸುವ**
**ಸಮಬಗೆಯ ಸಮಸುಖದ ಸಮದುಃಖದ**
**ಸಾಮರಸ್ಯದ ಸಾಮಗಾನ ಲಹರಿಯ ಮೇಲೆ**
**ತೇಲಿ ಬರಲಿದೆ ನೋಡು, ನಮ್ಮ ನಾಡು.**

**– ಗೋಪಾಲ ಕೃಷ್ಣ ಅಡಿಗ**

5. ಲಭ್ಯ ಸಂಪನ್ಮೂಲಗಳನ್ನು ಸರ್ವರಿಗೂ ಲಭ್ಯವಾಗುವಂತೆ ನೋಡಿಕೊಳ್ಳುವುದು ಸರ್ಕಾರದ ಜವಾಬ್ದಾರಿ. ಆರ್ಥಿಕ ಅಭಿವೃದ್ಧಿ ಹಾಗೂ ಜನಕಲ್ಯಾಣಗಳ ನಡುವೆ ಸಮತೋಲನ ಸಾಧಿಸಿ, ಸಾರ್ವತ್ರಿಕ ಮೂಲ ಆದಾಯ ಪರಿಕಲ್ಪನೆಯ ಮೂಲಕ ಕರ್ನಾಟಕ ಅಭಿವೃದ್ಧಿ ಮಾದರಿಯನ್ನು ರೂಪಿಸುತ್ತಿದ್ದೇವೆ.

6. ಪಂಚ ಗ್ಯಾರಂಟಿಗಳು ಸೇರಿದಂತೆ ನೀಡಿರುವ ಹಲವು ಕಲ್ಯಾಣ ಕಾರ್ಯಕ್ರಮಗಳು ಉಚಿತ ಕೊಡುಗೆಗಳಲ್ಲ; ಇವು ಆರ್ಥಿಕ ಮತ್ತು ಸಾಮಾಜಿಕ ತತ್ವದಲ್ಲಿ ಮಾಡಿರುವ ಹೂಡಿಕೆಗಳು ಎಂದು ಆತ್ಮವಿಶ್ವಾಸದಿಂದ ಹೇಳಬಯಸುತ್ತೇನೆ. ನಾಡಿನ ಖ್ಯಾತ ವಿದ್ವಾಂಸರಾಗಿದ್ದ ಮುಜಾಫರ್ ಅಸ್ಸಾದಿಯವರು "ಗ್ಯಾರಂಟಿ ಯೋಜನೆಗಳ ಹಿಂದೆ ಬಡತನದ ನೋವಿದೆ, ಬಡತನದ ಹಿಂಸೆ ಇದೆ, ಮಹಿಳೆಯರಲ್ಲಿ ಮಡುಗಟ್ಟಿದ ನೋವುಗಳಿವೆ, ಅಸಮಾನ ಭಾರತದ ಪರಿಕಲ್ಪನೆ ಇದೆ" ಎಂದಿದ್ದಾರೆ.

7. ವಿಶ್ವದ ವಿವಿಧ ವೇದಿಕೆಗಳು ಯಾವ ಪ್ರಶ್ನೆಗಳಿಗೆ ಇಂದು ಹುಡುಕಾಟ ನಡೆಸುತ್ತಿವೆಯೊ ಅವುಗಳಿಗೆ ಕರ್ನಾಟಕ ಸರ್ಕಾರವು ಉತ್ತರ ರೂಪದಲ್ಲಿ ತನ್ನ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನ ಮಾಡುತ್ತಿದೆ. ಜನರಲ್ಲಿ ಕೊಂಡುಕೊಳ್ಳುವ ಶಕ್ತಿ ಲಭಿಸಲಿ ಎಂಬ ಆಶಯದಿಂದ ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೊಳಿಸಿದ್ದೇವೆ. ಮಹಿಳಾ ಸಶಕ್ತೀಕರಣದ ಮೂಲಕ ನಾಡನ್ನು ಮುನ್ನಡೆಸುವುದು ಒಂದು ಬಗೆಯಾದರೆ, **'ಹಸಿರು ಆರ್ಥಿಕತೆ'** ಯ ಮೂಲಕ ಪರಿಸರದ ಬಿಕ್ಕಟ್ಟುಗಳಿಗೆ ಉತ್ತರ ಕಂಡುಕೊಳ್ಳಲು ಪ್ರಯತ್ನಿಸಲಾಗುತ್ತಿದೆ. ರಾಜ್ಯವು ಇಂದು ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ದೇಶದಲ್ಲಿಯೇ ಮುಂಚೂಣಿಯಲ್ಲಿದೆ. ಪರಿಸರಕ್ಕೆ ಹಾನಿಕಾರಕವಲ್ಲದ ಕೈಗಾರಿಕೆಗಳಿಗೆ ಉತ್ತೇಜನ ನೀಡಲಾಗುತ್ತಿದೆ. ಬಳಸಿದ ನೀರನ್ನು ಶುದ್ಧೀಕರಿಸಿ ಸಶಕ್ತವಾಗಿ ಮರುಬಳಕೆ ಮಾಡುತ್ತಿರುವ ವಿಧಾನವೂ ಕೂಡ ವಿಶ್ವ ವೇದಿಕೆಗಳಿಂದ ಶ್ಲಾಘನೆಗೆ ಒಳಗಾಗಿದೆ. ರಾಜ್ಯವು ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಕ್ಕೆ ಹೆಚ್ಚಿನ ಪ್ರಾಧಾನ್ಯತೆಯನ್ನು ನೀಡುತ್ತಿದೆ. ನಮ್ಮ ವಸತಿ ಶಾಲೆಗಳಲ್ಲಿ, ವಿದ್ಯಾರ್ಥಿ ನಿಲಯಗಳಲ್ಲಿ ದೇಶದಲ್ಲಿಯೇ ಅತಿ ಹೆಚ್ಚು ವಿದ್ಯಾರ್ಥಿಗಳು ಗುಣಮಟ್ಟದ ಶಿಕ್ಷಣ ಮತ್ತು ಆಹಾರವನ್ನು ಪಡೆಯುತ್ತಿದ್ದಾರೆ. ಯುವ ಜನರನ್ನು ಜಾಗತಿಕ ಮಟ್ಟದ

ಕೌಶಲ್ಯವಂತರನ್ನಾಗಿಸಲು ಹಲವು ರೀತಿಯ ಯೋಜನೆಗಳನ್ನು ರೂಪಿಸಿ ಅನುಷ್ಠಾನ ಮಾಡುತ್ತಿದ್ದೇವೆ.

8. ಈ ವರ್ಷದ ಆಯವ್ಯಯದಲ್ಲಿ ಪ್ರಮುಖವಾಗಿ ಆರು ಅಭಿವೃದ್ಧಿಯ ಆಯಾಮಗಳನ್ನು ಗುರುತಿಸಿ ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗುತ್ತದೆ:

ಅ. **ಕಲ್ಯಾಣ ಕಾರ್ಯಕ್ರಮಗಳ ಆಯವ್ಯಯ;** ಗ್ಯಾರಂಟಿ ಯೋಜನೆಗಳ ಜೊತೆಗೆ ಇತರ ಜನಪರ ಕಾರ್ಯಕ್ರಮಗಳಿಗೂ ನಮ್ಮ ಸರ್ಕಾರ ಒತ್ತು ನೀಡಿದೆ. ದುರ್ಬಲ ವರ್ಗದವರಿಗೆ ನೀಡುತ್ತಿರುವ ಸವಲತ್ತುಗಳನ್ನು ಇನ್ನಷ್ಟು ಬಲಪಡಿಸುವ ಗುರಿ ಹೊಂದಿದ್ದೇವೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳು, ಅಲ್ಪಸಂಖ್ಯಾತರು, ಮಹಿಳೆಯರು, ರೈತರು, ಶ್ರಮಿಕರು ಸೇರಿದಂತೆ ವಿವಿಧ ವರ್ಗಗಳ ಅಭ್ಯುದಯಕ್ಕೆ ನಮ್ಮ ಸರ್ಕಾರ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಿದೆ.

ಆ. **ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಆಯವ್ಯಯ;** ಕೃಷಿ, ತೋಟಗಾರಿಕೆ, ರೇಷ್ಮೆ, ಪಶುಸಂಗೋಪನೆ, ಮೀನುಗಾರಿಕೆ ಮತ್ತು ಗ್ರಾಮೀಣಾಭಿವೃದ್ಧಿಗಳು ಪರಸ್ಪರ ಪೂರಕವಾಗಿ ದುಡಿಯುವ ಕಾರ್ಯಕ್ಷೇತ್ರಗಳು. ಇವುಗಳ ಸಮಗ್ರ ಅಭಿವೃದ್ಧಿ

ದೃಷ್ಟಿಯಿಂದ ಸರ್ಕಾರ ಹಲವು ಯೋಜನೆಗಳನ್ನು ರೂಪಿಸುತ್ತಿದೆ. ರೈತರು, ಮೀನುಗಾರರು ಮುಂತಾದವರ ಆದಾಯ ಹೆಚ್ಚಿಸುವ ಈ ಯೋಜನೆಗಳು ಭವಿಷ್ಯದ ಕರ್ನಾಟಕದ ಆರ್ಥಿಕಾಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಲಿವೆ. ಕೃಷಿ ಮತ್ತು ಇನ್ನಿತರೆ ಆಸ್ತಿಗಳ ದಾಖಲೀಕರಣ, ಮೂಲಸೌಲಭ್ಯ ಒದಗಿಸುವಿಕೆ, ಸಮರ್ಪಕ ವಿದ್ಯುತ್ ಪೂರೈಕೆ, ಗೋದಾಮುಗಳ ಒದಗಿಸುವಿಕೆ ಮುಂತಾದ ಚಟುವಟಿಕೆಗಳ ಮೂಲಕ ಗ್ರಾಮಗಳ ಅಭಿವೃದ್ಧಿಗೆ ಹಾಗೂ ಗ್ರಾಮೀಣ ಜನರ ಆದಾಯ ಹೆಚ್ಚಿಸಲು ಶ್ರಮಿಸಲಾಗುವುದು.

ಇ. **ಅಭಿವೃದ್ಧಿ ಕೇಂದ್ರಿತ ಆಯವ್ಯಯ:** ನಮ್ಮ ಸರ್ಕಾರ ರಾಜ್ಯದ ಆಮೂಲಾಗ್ರ ಆರ್ಥಿಕ ಬೆಳವಣಿಗೆ ಹೆಚ್ಚಿಸುವಲ್ಲಿ ಮೂಲಸೌಕರ್ಯ ಕ್ಷೇತ್ರದ ನಿರ್ಣಾಯಕ ಪಾತ್ರವನ್ನು ಗುರುತಿಸಿ, ಈ ಬಾರಿ ಬಂಡವಾಳದ ಮೇಲಿನ ವೆಚ್ಚಗಳಿಗೆ ಗಣನೀಯವಾದ ಅನುದಾನ ಒದಗಿಸಿದೆ. ಬಂಡವಾಳ ಲೆಕ್ಕದಲ್ಲಿ ಶೇ. 47.3 ರಷ್ಟು ಹೆಚ್ಚಳವಾಗಿರುವುದು ಅಭಿವೃದ್ಧಿ ಕೇಂದ್ರಿತ ಆಯವ್ಯಯ ಎನ್ನುವುದಕ್ಕೆ ಸಾಕ್ಷಿಯಾಗಿದೆ. ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಮಾಡಿರುವ ಹೂಡಿಕೆಯು ಸ್ವಸ್ಥ ಸಮಾಜದ ನಿರ್ಮಾಣಕ್ಕೆ ದಾರಿಯಾಗಲಿದೆ.

ಈ. **ನಗರಾಭಿವೃದ್ಧಿಗೆ ಆದ್ಯತೆ;** ದಿನೇ ದಿನೇ ವೇಗವಾಗಿ ಬೆಳೆಯುತ್ತಿರುವ ರಾಜ್ಯದ ನಗರಗಳಲ್ಲಿ ನಾಗರೀಕರಿಗೆ ಸಮರ್ಪಕ ಮೂಲಸೌಕರ್ಯ ಹಾಗೂ ಗುಣಮಟ್ಟದ ಸೇವೆಗಳನ್ನು ಒದಗಿಸಲು ನಗರಾಭಿವೃದ್ಧಿ ಯೋಜನೆಗಳಿಗೆ ವಿಶೇಷ ಒತ್ತು ನೀಡಲಾಗಿದೆ. ಜೊತೆಗೆ ರಾಜ್ಯದ ಬೊಕ್ಕಸಕ್ಕೆ ಅತಿ ದೊಡ್ಡ ಕೊಡುಗೆ ನೀಡುವ ಬೆಂಗಳೂರು ಮಹಾನಗರದ ಮೂಲಸೌಕರ್ಯ, ಸೇವಾಪೂರೈಕೆ ಹಾಗೂ ಸಂಚಾರ ಸುವ್ಯವಸ್ಥೆಗಳಿಗಾಗಿ 'ಬ್ರ್ಯಾಂಡ್ ಬೆಂಗಳೂರು' ಎಂಬ ಪರಿಕಲ್ಪನೆಯಡಿ ಮಹತ್ವಾಕಾಂಕ್ಷಿ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ. ಎರಡನೇ ಮತ್ತು ಮೂರನೇ ಹಂತದ ನಗರಗಳನ್ನು ಸಮಗ್ರವಾಗಿ ಅಭಿವೃದ್ಧಿಗೊಳಿಸುವುದರ ಮೂಲಕ ಬೆಂಗಳೂರಿನ ಮೇಲಿನ ಒತ್ತಡ ಕಡಿಮೆ ಮಾಡಲು ಯೋಜನೆಗಳನ್ನು ರೂಪಿಸಲಾಗಿದೆ.

ಉ. **ಹೂಡಿಕೆ ಮತ್ತು ಉದ್ಯೋಗ ಸೃಜನೆ;** ಅತಿಹೆಚ್ಚು ಉದ್ಯೋಗ ಸೃಜನೆಯಾಗುವ ಎಂ.ಎಸ್.ಎಂ.ಇ, ಪ್ರವಾಸೋದ್ಯಮ, ಐಟಿಬಿಟಿ ವಲಯಗಳಲ್ಲಿ ಹೊಸ ನೀತಿಗಳನ್ನು ಜಾರಿಗೆ ತರಲಾಗುತ್ತಿದೆ. ಇದರಿಂದ ರಾಜ್ಯದಲ್ಲಿ ಹೂಡಿಕೆದಾರ ಸ್ನೇಹಿ

ವಾತಾವರಣ ನಿರ್ಮಾಣವಾಗಿ ಹೆಚ್ಚಿನ ಹೂಡಿಕೆ ಆಕರ್ಷಿಸಿ ಉದ್ಯೋಗ ಸೃಜನೆಗೆ ಆದ್ಯತೆ ನೀಡಲಾಗುತ್ತಿದೆ.

ಊ. **ಆಡಳಿತ ಸುಧಾರಣೆ:** ಆಡಳಿತದಲ್ಲಿ ಪಾರದರ್ಶಕತೆ ಮತ್ತು ದಕ್ಷತೆಯನ್ನು ಹೆಚ್ಚಿಸಲು ಹಾಗೂ ಭ್ರಷ್ಟಾಚಾರವನ್ನು ನಿಗ್ರಹಿಸಲು ತಂತ್ರಜ್ಞಾನವನ್ನು ಸಮರ್ಪಕವಾಗಿ ಬಳಸಿಕೊಳ್ಳಲಾಗುತ್ತಿದೆ. ನಾಗರೀಕ ಸೇವಾ ಪೂರೈಕೆ ಪ್ರಕ್ರಿಯೆಗಳನ್ನು ಸರಳೀಕರಣಗೊಳಿಸಿ, ಕೌನ್ಸೆಲಿಂಗ್ ಮುಖಾಂತರ ವರ್ಗಾವಣೆ ನೀತಿ ಅಳವಡಿಸಿಕೊಂಡು ಆಡಳಿತ ಸುಧಾರಣಾ ಕ್ರಮಗಳನ್ನು ಕೈಗೊಳ್ಳಲಾಗುವುದು. ಜನಸ್ನೇಹಿ ಮತ್ತು ಪರಿಣಾಮಕಾರಿಯಾದ ಸೇವೆಯನ್ನು ಒದಗಿಸಲು ಕಾರ್ಯತಂತ್ರಗಳನ್ನು ರೂಪಿಸಿ ಅನುಷ್ಠಾನ ಮಾಡುತ್ತೇವೆ. ಸರ್ಕಾರದ ವಿವಿಧ ಯೋಜನೆಗಳ ಫಲಾನುಭವಿಗಳಿಗೆ 1 ಲಕ್ಷ ಕೋಟಿ ರೂ.ಗಳಿಗೂ ಅಧಿಕ ಮೊತ್ತವನ್ನು ಯಾವುದೇ ಮಧ್ಯವರ್ತಿಗಳ ಹಾವಳಿಯಿಲ್ಲದೆ, ನೇರವಾಗಿ ಫಲಾನುಭವಿಗಳ ಖಾತೆಗೆ ಹಾಗೂ ಕೆಲವು ರೀತಿಯ ಸಹಾಯಧನಗಳನ್ನು ಇಲಾಖೆಗಳ ಖಾತೆಗಳಿಗೆ ವರ್ಗಾವಣೆ ಮಾಡಲಾಗಿದೆ. ಗ್ಯಾರಂಟಿ ಯೋಜನೆಗಳೊಂದರಲ್ಲೇ ಈ ವರೆಗೆ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಸರಾಸರಿ 233 ಕೋಟಿ ರೂ.ಗಳನ್ನು

ನೇರವಾಗಿ ವರ್ಗಾಯಿಸಲಾಗಿದೆ. ನೇರ ನಗದು ವರ್ಗಾವಣೆಯಂತಹ ಕ್ರಮಗಳು ನಮ್ಮ ಸರ್ಕಾರದ ಉತ್ತರದಾಯಿತ್ವಕ್ಕೆ ಹಿಡಿದ ಕನ್ನಡಿ. ಇವೆಲ್ಲವೂ ಸರ್ಕಾರದ ಮೇಲೆ ಜನರ ಭರವಸೆಯನ್ನು ಇನ್ನಷ್ಟು ದೃಢಪಡಿಸುವ ಹೆಜ್ಜೆಗಳಾಗಿವೆ.

9. ಇವುಗಳ ಜೊತೆಗೆ ಪ್ರಾದೇಶಿಕ ಅಸಮಾನತೆಯ ನಿವಾರಣೆ, ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳ ಬಲವರ್ಧನೆ, ಸಾರಿಗೆಯ ಸುಗಮ ವ್ಯವಸ್ಥೆ, ಕಾನೂನು ಮತ್ತು ಸುವ್ಯವಸ್ಥೆ ನಿಭಾವಣೆಗೆ ಹೊಸ ಕಾರ್ಯತಂತ್ರಗಳಿಗೆ ಹೆಚ್ಚು ಆದ್ಯತೆ ನೀಡಲಾಗುವುದು. ಕಲ್ಯಾಣ ಇಲಾಖೆಗಳ ಮೂಲಕ ಅಸಹಾಯಕರ ಸಬಲೀಕರಣಕ್ಕೆ ಈ ಆಯವ್ಯಯದಲ್ಲಿ ಒತ್ತು ನೀಡಲಾಗಿದೆ.

10. ನಾಡು ಕಟ್ಟುವ ಪ್ರಕ್ರಿಯೆಯಲ್ಲಿ ಸುಸ್ಥಿರ ಅಭಿವೃದ್ಧಿಯ ಇಟ್ಟಿಗೆಗಳನ್ನು ಸುವ್ಯವಸ್ಥಿತವಾಗಿ ಜೋಡಿಸುವ ಆಶಯಕ್ಕೆ ಈ ಆಯವ್ಯಯ ಬಲ ನೀಡುತ್ತದೆ.

**ರಾಜ್ಯದ ಆರ್ಥಿಕತೆ**

11. ಕರ್ನಾಟಕ ರಾಜ್ಯವು ವೇಗವಾಗಿ ಬೆಳವಣಿಗೆ ಹೊಂದುತ್ತಿರುವ ರಾಜ್ಯಗಳಲ್ಲಿ ಒಂದಾಗಿದ್ದು, ದೇಶದ ಜಿ.ಡಿ.ಪಿ. ಗೆ ಶೇ. 8.4ರಷ್ಟು ಕೊಡುಗೆ ನೀಡಿದೆ. 2024–25ನೇ ಸಾಲಿನಲ್ಲಿ ರಾಜ್ಯ ಆರ್ಥಿಕತೆಯ

ಬೆಳವಣಿಗೆಯು ಶೇ. 7.4ರಷ್ಟು ದಾಖಲಾಗಿದ್ದು, ದೇಶದ ಆರ್ಥಿಕತೆಯು ಶೇ. 6.4ರಷ್ಟು ಬೆಳವಣಿಗೆಯಾಗಿದೆ. ರಾಜ್ಯವು ಆರ್ಥಿಕ ಅಭಿವೃದ್ಧಿಯ ಪಥದಲ್ಲಿ ಮುಂದುವರೆಯುತ್ತಿದ್ದು, ಪ್ರಸಕ್ತ ವರ್ಷದಲ್ಲಿ ರಾಜ್ಯದ ಆರ್ಥಿಕ ಬೆಳವಣಿಗೆಯು ದೇಶದ ಆರ್ಥಿಕತೆಗಿಂತ ಹೆಚ್ಚಾಗಿದೆ.

12. ಕಳೆದ ವರ್ಷದಲ್ಲಿ ಶೇ.-4.9 ರಷ್ಟು ಬೆಳವಣಿಗೆ ದಾಖಲಾಗಿದ್ದ ಕೃಷಿ ವಲಯವು, 2024-25ರಲ್ಲಿ ಶೇ. 4ರಷ್ಟು ಬೆಳವಣಿಗೆ ಸಾಧಿಸುವ ಮೂಲಕ ಚೇತರಿಕೆ ಕಂಡಿದ್ದು, ದೇಶದ ಕೃಷಿ ವಲಯದ ಬೆಳವಣಿಗೆ ಶೇ.3.8ಕ್ಕಿಂತ ಹೆಚ್ಚಾಗಿದೆ. ಮುಂಗಾರು ಬಿತ್ತನೆಗೆ ಸರ್ಕಾರದ ಸಕಾರಾತ್ಮಕ ಕ್ರಮಗಳೊಂದಿಗೆ ಉತ್ತಮ ಮುಂಗಾರು ಮತ್ತು ಜಲಾಶಯಗಳು ಭರ್ತಿಯಾಗಿದ್ದರಿಂದ 2024-25ನೇ ಸಾಲಿನಲ್ಲಿ ಕೃಷಿ ವಲಯದಲ್ಲಿ ಒಳ್ಳೆಯ ಬೆಳವಣಿಗೆ ಸಾಧಿಸಲು ಕಾರಣವಾಗಿದೆ. ರಾಜ್ಯ ಸರ್ಕಾರವು ರೈತರ ಕಲ್ಯಾಣ ಉದ್ದೇಶಿತ ಯೋಜನೆಗಳಿಗೆ ವಿವಿಧ ಇಲಾಖೆಗಳಿಗೆ ಕಳೆದ ವರ್ಷ 44,000 ಕೋಟಿ ರೂ. ನೀಡಲಾಗಿತ್ತು. ಪ್ರಸಕ್ತ ವರ್ಷದಲ್ಲಿ ಒಟ್ಟು 51,339 ಕೋಟಿ ರೂ. ಅನುದಾನವನ್ನು ನೀಡಿದೆ.

13. ಕೈಗಾರಿಕಾ ವಲಯದಲ್ಲಿ ಹೂಡಿಕೆ ಸ್ನೇಹಿ ವಾತಾವರಣವನ್ನು ನಿರ್ಮಿಸುವಲ್ಲಿ ಕರ್ನಾಟಕವು ನೆಚ್ಚಿನ ರಾಜ್ಯವಾಗಿದೆ. ನಮ್ಮ

ಸರ್ಕಾರವು ಹೆಚ್ಚಿನ ಉದ್ಯೋಗವನ್ನು ಸೃಜಿಸುವುದರೊಂದಿಗೆ, ಕೈಗಾರಿಕಾ ಮತ್ತು ಉತ್ಪಾದನಾ ವಲಯದ ಸಮಗ್ರ ಅಭಿವೃದ್ಧಿಗೆ ಬದ್ಧವಾಗಿದೆ. ರಾಜ್ಯ ಸರ್ಕಾರವು ಕೈಗಾರಿಕಾ ನೀತಿ 2025–30ಕ್ಕೆ ಚಾಲನೆ ನೀಡಿದ್ದು, ಇದು 2030 ರ ವೇಳೆಗೆ ಉತ್ಪಾದನಾ ವಲಯದಲ್ಲಿ ಶೇ.12ರಷ್ಟು ವಾರ್ಷಿಕ ಬೆಳವಣಿಗೆಯನ್ನು ಸಾಧಿಸುವುದರೊಂದಿಗೆ 20 ಲಕ್ಷ ಉದ್ಯೋಗಗಳನ್ನು ಸೃಜಿಸುವ ಗುರಿ ಹೊಂದಿದೆ. 2024–25ನೇ ಸಾಲಿನಲ್ಲಿ ಕೈಗಾರಿಕಾ ವಲಯವು ಶೇ.5.8ರಷ್ಟು ಬೆಳವಣಿಗೆ ಸಾಧಿಸಿದೆ. ರಾಜ್ಯಕ್ಕೆ ಹೆಚ್ಚಿನ ಹೂಡಿಕೆಗಳನ್ನು ಆಕರ್ಷಿಸುವ ಉದ್ದೇಶದಿಂದ ಒಟ್ಟು 13,692 ಕೋಟಿ ರೂ. ಆರ್ಥಿಕ ನೆರವು ಮತ್ತು ಸಹಾಯಧನವನ್ನು ಒದಗಿಸಲು ಸರ್ಕಾರವು ಸಮ್ಮತಿಸಿದೆ.

14. ಕರ್ನಾಟಕದ ಆರ್ಥಿಕತೆಯಲ್ಲಿ ಸೇವಾ ವಲಯದ ಕೊಡುಗೆಯೂ ಪ್ರಮುಖವಾಗಿದ್ದು, ಒಟ್ಟು ಮೌಲ್ಯವರ್ಧನೆಯಲ್ಲಿ (Gross Value Added) ಸೇವಾ ವಲಯಗಳ ಪಾಲು ಶೇ.66 ರಷ್ಟಿದೆ. 2024–25ನೇ ಸಾಲಿಗೆ ರಾಜ್ಯದಲ್ಲಿ ಸೇವಾ ವಲಯವು ಗಣನೀಯವಾಗಿ ಬೆಳವಣಿಗೆಯಾಗಿದ್ದು, ಶೇ.8.9 ರಷ್ಟು ಬೆಳವಣಿಗೆ ದಾಖಲಿಸುವ ಮೂಲಕ ದೇಶದ ಆರ್ಥಿಕತೆಯಲ್ಲಿನ ಸೇವಾ ವಲಯದ ಬೆಳವಣಿಗೆ ಶೇ.7.2 ಕ್ಕಿಂತ ಹೆಚ್ಚಾಗಿದೆ.

15. ಆರ್ಥಿಕ ಬೆಳವಣಿಗೆ ಮತ್ತು ಹೆಚ್ಚಿನ ಉದ್ಯೋಗಾವಕಾಶಗಳನ್ನು ಸೃಜಿಸಲು ಸರ್ಕಾರವು ಮಾಹಿತಿ ತಂತ್ರಜ್ಞಾನ, ಪ್ರವಾಸೋದ್ಯಮ, ಜೈವಿಕ ತಂತ್ರಜ್ಞಾನ ಸೇರಿದಂತೆ ಕೈಗಾರಿಕೆ ಮತ್ತು ಸೇವಾ ವಲಯದಲ್ಲಿ ಹಲವು ನೀತಿಗಳನ್ನು ಜಾರಿಗೆ ತಂದಿದೆ. ಈ ನೀತಿಗಳು ಮಾನವ ಸಂಪನ್ಮೂಲವನ್ನು ಸಮರ್ಥವಾಗಿ ಬಳಸುವುದರ ಜೊತೆಗೆ ರಾಜ್ಯದ ವಿವಿಧ ಕ್ಷೇತ್ರಗಳಲ್ಲಿ ಹೆಚ್ಚಿನ ಹೂಡಿಕೆಗಳನ್ನು ಉತ್ತೇಜಿಸಲಿವೆ. ಸರ್ಕಾರವು ಜಾರಿಗೆ ತಂದಿರುವ ಈ ನೀತಿಗಳಿಂದ ರಾಜ್ಯದಲ್ಲಿ ಅಂದಾಜು ಒಂದು ಲಕ್ಷ ಕೋಟಿ ರೂ. ಹೂಡಿಕೆಯನ್ನು ನಿರೀಕ್ಷಿಸಲಾಗಿದೆ. ಈ ಉದ್ದೇಶಕ್ಕೆ ಸರ್ಕಾರವು 13,500 ಕೋಟಿ ರೂ. ಸಹಾಯಧನ ಮತ್ತು ಆರ್ಥಿಕ ನೆರವು ನೀಡಲು ಸಹಮತಿಸಿದೆ.

16. ನಮ್ಮ ಸರ್ಕಾರವು ಆರ್ಥಿಕತೆಯ ಬೆಳವಣಿಗೆಗೆ ಹೆಚ್ಚಿನ ಪ್ರಾಶಸ್ತ್ಯ ನೀಡಿದ್ದು, 2024–25ರ ಡಿಸೆಂಬರ್ ಅಂತ್ಯದವರೆಗೆ 4.4 ಬಿಲಿಯನ್ ಡಾಲರ್ ಮೌಲ್ಯದ ವಿದೇಶಿ ಹೂಡಿಕೆಗಳನ್ನು ಆಕರ್ಷಿಸುವ ಮೂಲಕ ದೇಶದಲ್ಲಿಯೇ ಮೂರನೇ ಸ್ಥಾನದಲ್ಲಿದೆ.

**ರಾಜ್ಯದ ಹಣಕಾಸು ಪರಿಸ್ಥಿತಿ**

17. ಕರ್ನಾಟಕ ರಾಜ್ಯವು, ಸುಸ್ಥಿರ ಋಣ ನಿರ್ವಹಣೆ ಮತ್ತು ವಿತ್ತೀಯ ಶಿಸ್ತು ಪಾಲಿಸುವ ಮೂಲಕ ವಿತ್ತೀಯ ಹೊಣೆಗಾರಿಕೆಯನ್ನು ಉತ್ತಮವಾಗಿ ನಿಭಾಯಿಸಿದೆ. ನಮ್ಮ ರಾಜ್ಯದಲ್ಲಿ ವಿತ್ತೀಯ

ಹೊಣೆಗಾರಿಕೆ ಅಧಿನಿಯಮವನ್ನು ಕೇಂದ್ರ ಸರ್ಕಾರವು ಅನುಷ್ಠಾನಕ್ಕೆ ತರುವ ಮುನ್ನವೇ ಜಾರಿಗೆ ತರಲಾಯಿತು. ಅಲ್ಲದೆ, ರಾಜ್ಯದ ಒಟ್ಟು ಹೊಣೆಗಾರಿಕೆಗಳಲ್ಲಿ ಆಯವ್ಯಯದ ಹೊರಗಿನ ಸಾಲಗಳನ್ನು ಪರಿಗಣಿಸಿದ ಮೊದಲ ರಾಜ್ಯ ಕರ್ನಾಟಕ. ಆದಾಗ್ಯೂ, ಜಿ.ಎಸ್.ಟಿ ಜಾರಿಯಿಂದ ರಾಜ್ಯಕ್ಕೆ ಆದ ರಾಜಸ್ವ ನಷ್ಟವನ್ನು ಸಂಪೂರ್ಣವಾಗಿ ಸರಿದೂಗಿಸಲು ಕೇಂದ್ರ ಸರ್ಕಾರ ವಿಫಲವಾದ ಕಾರಣ ಮತ್ತು ಕೇಂದ್ರ ಸರ್ಕಾರ ವಿಧಿಸುವ ಸೆಸ್‌ಗಳು ಮತ್ತು ಸರ್‌ಚಾರ್ಜ್‌ಗಳನ್ನು ರಾಜ್ಯಗಳಿಗೆ ಹಂಚಿಕೆಯಾಗುವ ತೆರಿಗೆ ಪಾಲಿನಲ್ಲಿ ಪರಿಗಣಿಸದಿರುವುದರಿಂದ ಹಾಗೂ 15ನೇ ಹಣಕಾಸು ಆಯೋಗದ ಶಿಫಾರಸ್ಸಿನನ್ವಯ ರಾಜ್ಯದ ತೆರಿಗೆ ಪಾಲು ಕಡಿಮೆಯಾದ ಕಾರಣ ರಾಜ್ಯವು ವಿತ್ತೀಯ ಸವಾಲುಗಳನ್ನು ಎದುರಿಸುವಂತಾಯಿತು.

18. 15ನೇ ಹಣಕಾಸು ಆಯೋಗದ ಶಿಫಾರಸ್ಸಿನ ಅನ್ವಯ ತೆರಿಗೆ ಹಂಚಿಕೆಯಲ್ಲಿ ಅತಿ ಹೆಚ್ಚು ನಷ್ಟವನ್ನು ಅನುಭವಿಸಿದ ರಾಜ್ಯ ಕರ್ನಾಟಕ. 14ನೇ ಹಣಕಾಸು ಆಯೋಗವು ಕರ್ನಾಟಕಕ್ಕೆ ಶಿಫಾರಸ್ಸು ಮಾಡಿದ್ದ ತೆರಿಗೆ ಪಾಲು ಶೇ. 4.713 ರಿಂದ, 15ನೇ ಹಣಕಾಸು ಆಯೋಗದ ಅವಧಿಯಲ್ಲಿ ಶೇ.3.647ಕ್ಕೆ ಇಳಿಕೆಯಾಯಿತು. ಇದರಿಂದಾಗಿ ರಾಜ್ಯದ ತೆರಿಗೆ ಹಂಚಿಕೆಯು ಶೇ.23ರಷ್ಟು ಕುಸಿತವಾಗಿ, ರಾಜ್ಯವು ವಾರ್ಷಿಕ ಅಂದಾಜು 12 ಸಾವಿರ ಕೋಟಿ

ರೂ. ನಷ್ಟ ಅನುಭವಿಸಬೇಕಾಯಿತು. ಅಲ್ಲದೆ, 15ನೇ ಹಣಕಾಸು ಆಯೋಗವು ರಾಜ್ಯದ ತೆರಿಗೆ ಪಾಲು ಕಡಿಮೆಯಾದ ಕಾರಣ 5,495 ಕೋಟಿ ರೂ.ಗಳ ವಿಶೇಷ ಅನುದಾನ, ಬೆಂಗಳೂರಿನಲ್ಲಿ ಕೆರೆಗಳ ಸಂರಕ್ಷಣೆಗಾಗಿ 3,000 ಕೋಟಿ ರೂ. ಮತ್ತು ಪೆರಿಫೆರಲ್ ರಿಂಗ್ ರಸ್ತೆ ಅಭಿವೃದ್ಧಿಗೆ 3,000 ಕೋಟಿ ರೂ. ಸೇರಿ ಒಟ್ಟು 11,495 ಕೋಟಿ ರೂ.ಗಳನ್ನು ತನ್ನ ವರದಿಯಲ್ಲಿ ಶಿಫಾರಸ್ಸು ಮಾಡಿತು. ಆದರೆ, ಕೇಂದ್ರ ಸರ್ಕಾರ ಈ ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲ. 2023–24ನೇ ಸಾಲಿನ ಕೇಂದ್ರ ಸರ್ಕಾರದ ಆಯವ್ಯಯ ಭಾಷಣದಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ 5,300 ಕೋಟಿ ರೂ.ಗಳನ್ನು ಘೋಷಿಸಿತ್ತು. ಆದರೆ, ಕೇಂದ್ರ ಸರ್ಕಾರವು ಈವರೆಗೂ ಯಾವುದೇ ಅನುದಾನ ಬಿಡುಗಡೆ ಮಾಡಿರುವುದಿಲ್ಲ.

19. ರಾಜ್ಯಗಳಿಗೆ ತೆರಿಗೆ ಹಂಚಿಕೆಯನ್ನು ಹೆಚ್ಚಿಸುವ ಬಗ್ಗೆ 16ನೇ ಹಣಕಾಸು ಆಯೋಗದ ಮುಂದೆ ರಾಜ್ಯವು ಪ್ರಬಲವಾಗಿ ತನ್ನ ವಾದವನ್ನು ಪ್ರತಿಪಾದಿಸಿದೆ. ಆರೋಗ್ಯಕರ ಮತ್ತು ಸಾಮರಸ್ಯದ ಆರ್ಥಿಕ ಒಕ್ಕೂಟ ರೂಪಿಸಲು ರಾಜ್ಯಗಳಿಗೆ ನೀಡುವ ತೆರಿಗೆ ಪಾಲನ್ನು ಸಮಾನತೆ ಮತ್ತು ದಕ್ಷತೆಯನ್ನು ಆಧರಿಸಿ ಹಂಚಿಕೆ ಮಾಡುವಂತೆ ಹಣಕಾಸು ಆಯೋಗಕ್ಕೆ ಮನವರಿಕೆ ಮಾಡಿದೆ. ಬಲಿಷ್ಠ ಆರ್ಥಿಕತೆ ಹೊಂದಿರುವ ರಾಜ್ಯಗಳು ಬಡ ರಾಜ್ಯಗಳಿಗೆ

ನೆರವಾಗಲು ಬದ್ಧರಾಗಿದ್ದರೂ, ಅದು ತನ್ನ ನಾಗರೀಕರ ಹಿತ ಕಾಯುವಲ್ಲಿ ಅಥವಾ ಆರ್ಥಿಕ ಪ್ರಗತಿಗೆ ಕುಂದುಂಟು ಮಾಡುವಂತಿರಬಾರದು. ಆದಾಯ–ಅಂತರ ಮತ್ತು ತಲಾ ಆದಾಯ ನಿರ್ಧರಿಸುವ ಮಾನದಂಡಗಳಲ್ಲಿಯೂ ಲೋಪಗಳಿರುವ ಹಿನ್ನೆಲೆಯಲ್ಲಿ, ಈ ಮಾನದಂಡಗಳಿಗೆ ಕಡಿಮೆ ಅಂಕ ನೀಡುವಂತೆ ಮನವಿ ಮಾಡಿದ್ದೇವೆ.

20. ಕೇಂದ್ರ ಹಾಗೂ ರಾಜ್ಯಗಳ ನಡುವಿನ ತೆರಿಗೆ ಹಂಚಿಕೆಯಲ್ಲಿ ಕನಿಷ್ಠ ಶೇ.50ರಷ್ಟು ಪಾಲನ್ನು ರಾಜ್ಯಗಳಿಗೆ ನೀಡಬೇಕು ಎಂದು ನಾವು ಪ್ರಸ್ತಾವನೆ ಸಲ್ಲಿಸಿದ್ದೇವೆ. ಇದು ಕೇಂದ್ರ ಮತ್ತು ರಾಜ್ಯಗಳ ನಡುವೆ ಸಂಪನ್ಮೂಲಗಳ ನ್ಯಾಯಯುತ ಹಂಚಿಕೆಯನ್ನು ಖಚಿತಪಡಿಸುತ್ತದೆ. ಕೇಂದ್ರ ಸರ್ಕಾರ ವಿಧಿಸುವ ಸೆಸ್ ಮತ್ತು ಸರ್‌ಚಾರ್ಜ್‌ಗಳನ್ನು ಒಟ್ಟು ತೆರಿಗೆ ರಾಜಸ್ವದ ಶೇ.5 ಕ್ಕೆ ಮಿತಿಗೊಳಿಸಬೇಕು. ಇದಕ್ಕಿಂತ ಹೆಚ್ಚಿನ ಸೆಸ್ ಮತ್ತು ಸರ್‌ಚಾರ್ಜ್‌ಗಳನ್ನು ವಿಧಿಸಿದರೆ, ಹೆಚ್ಚಿನ ಮೊತ್ತವನ್ನು ರಾಜ್ಯಗಳಿಗೆ ಹಂಚಿಕೆಯಾಗುವ ತೆರಿಗೆ ಪಾಲಿನಲ್ಲಿ ಪರಿಗಣಿಸಬೇಕು. ರಾಜ್ಯಗಳ ನಡುವಿನ ತೆರಿಗೆ ಹಂಚಿಕೆಗೆ ಸಂಬಂಧಿಸಿದಂತೆ, ಒಟ್ಟು ತೆರಿಗೆ ಹಂಚಿಕೆಯಲ್ಲಿ ತೆರಿಗೆ ಸಂಗ್ರಹಿಸುವ ರಾಜ್ಯಕ್ಕೆ ಶೇ.60ರಷ್ಟು ಪಾಲನ್ನು ಮರಳಿಸಬೇಕು. ಆದ್ದರಿಂದ, ಹಂಚಿಕೆಯಾಗುವ ತೆರಿಗೆಯಲ್ಲಿ ಇತರೆ ರಾಜ್ಯಗಳ ಪಾಲನ್ನು

ಶೇ.40ಕ್ಕೆ ಮಿತಿಗೊಳಿಸಬೇಕು ಎಂದು ನಾವು 16ನೇ ಹಣಕಾಸು ಆಯೋಗಕ್ಕೆ ಒತ್ತಾಯ ಮಾಡಿದ್ದೇವೆ.

21. ಈ ಸವಾಲುಗಳ ನಡುವೆಯೂ, ರಾಜ್ಯ ಸರ್ಕಾರದ ಸಂಪನ್ಮೂಲ ಕ್ರೋಢೀಕರಣ ಕ್ರಮಗಳಿಂದ ರಾಜಸ್ವ ಸ್ವೀಕೃತಿಗಳು ಉತ್ತಮ ಬೆಳವಣಿಗೆ ಸಾಧಿಸಿದ್ದು, ರಾಜ್ಯದ ಅಭಿವೃದ್ಧಿ ಕುರಿತ ನಮ್ಮ ದೂರದೃಷ್ಟಿಯ ಯೋಜನೆಗಳನ್ನು ಸಾಕಾರಗೊಳಿಸಲು ಸಾಧ್ಯವಾಗಿದೆ. 2024–25ನೇ ಸಾಲಿಗೆ ರಾಜಸ್ವ ಸ್ವೀಕೃತಿಗಳು ವಾರ್ಷಿಕ ಶೇ. 10.3 ರಷ್ಟು ಬೆಳವಣಿಗೆಯನ್ನು ದಾಖಲಿಸುವ ನಿರೀಕ್ಷೆಯಿದೆ.

22. 2024–25ನೇ ಸಾಲಿಗೆ ತೆರಿಗೆಯೇತರ ರಾಜಸ್ವದಲ್ಲಿ 14,500 ಕೋಟಿ ರೂ.ಗಳು ಸಂಗ್ರಹವಾಗುವ ನಿರೀಕ್ಷೆಯಿದ್ದು, ಆಯವ್ಯಯ ಗುರಿಗಿಂತ ಹೆಚ್ಚು ಸಂಗ್ರಹವಾಗಲಿದೆ. ತೆರಿಗೆಯೇತರ ರಾಜಸ್ವವು ವರ್ಷವಾರು ಶೇ.10.5ರಷ್ಟು ಬೆಳವಣಿಗೆ ಸಾಧಿಸುವ ನಿರೀಕ್ಷೆಯಿದೆ. ಆದರೂ ಜಿ.ಎಸ್.ಡಿ.ಪಿ.ಯ ಶೇಕಡಾವಾರು ಪರಿಗಣಿಸಿದಾಗ ತೆರಿಗೆಯೇತರ ಸಂಪನ್ಮೂಲ ಹೆಚ್ಚಳಕ್ಕೆ ವಿಪುಲ ಅವಕಾಶಗಳಿವೆ. ಸಂಪನ್ಮೂಲ ಕ್ರೋಢೀಕರಣಕ್ಕಾಗಿ ರಾಜ್ಯ ಸರ್ಕಾರವು 'ಸಂಪನ್ಮೂಲ ಕ್ರೋಢೀಕರಣ ಸಮಿತಿ'ಯನ್ನು ರಚನೆ ಮಾಡಿರುತ್ತದೆ. ಈ ಸಮಿತಿಯು ಮಧ್ಯಂತರ ವರದಿಯನ್ನು ನೀಡಿದ್ದು, ಸಮಿತಿಯ

ಶಿಫಾರಸ್ಸಿನ ಅನ್ವಯ ಸರ್ಕಾರವು ಸಮಯಾನುಸಾರ ಅಗತ್ಯ ಕ್ರಮಗಳನ್ನು ಕೈಗೊಳ್ಳಲಿದೆ.

23. ಪ್ರಸಕ್ತ ಹಣಕಾಸು ವರ್ಷದಲ್ಲಿ ಗ್ಯಾರಂಟಿ ಯೋಜನೆಗಳಿಗಾಗಿ 51,034 ಕೋಟಿ ರೂ. ಒದಗಿಸಲಾಗಿದೆ. ಕಳೆದ ಎರಡು ಆಯವ್ಯಯಗಳಲ್ಲಿ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನ ಮಾಡುವುದರ ಜೊತೆಗೆ ವಿತ್ತೀಯ ಕೊರತೆಯನ್ನು ಜಿ.ಎಸ್.ಡಿ.ಪಿ. ಯ ಶೇ.3ರ ಮಿತಿಯೊಳಗೆ ಮತ್ತು ಒಟ್ಟು ಹೊಣೆಗಾರಿಕೆಯನ್ನು ಜಿ.ಎಸ್.ಡಿ.ಪಿ. ಯ ಶೇ.25ರ ಮಿತಿಯೊಳಗೆ ನಿಯಂತ್ರಿಸುವ ಮೂಲಕ ವಿತ್ತೀಯ ಶಿಸ್ತನ್ನು ಪಾಲಿಸಲಾಗಿರುತ್ತದೆ ಎಂಬುದು ಗಮನಾರ್ಹ.

24. ರಾಜ್ಯದ ರಸ್ತೆ ಮತ್ತು ಮೂಲಸೌಕರ್ಯದ ಅಭಿವೃದ್ಧಿಗಾಗಿ ಮುಖ್ಯಮಂತ್ರಿ ಮೂಲಸೌಕರ್ಯ ಅಭಿವೃದ್ಧಿ ಕಾರ್ಯಕ್ರಮ ಎಂಬ ಹೊಸ ಯೋಜನೆಯನ್ನು ಜಾರಿಗೆ ತರಲಾಗುವುದು. ಈ ಯೋಜನೆಯ ಮೂಲಕ ರಾಜ್ಯದ ಎಲ್ಲಾ ವಿಧಾನಸಭಾ ಕ್ಷೇತ್ರಗಳಿಗೂ ರಸ್ತೆ, ಸಣ್ಣ ನೀರಾವರಿ ಹಾಗೂ ಮೂಲಸೌಕರ್ಯ ಒದಗಿಸಲು 8,000 ಕೋಟಿ ರೂ. ನೀಡಲಾಗುವುದು.

25. ಸರ್ಕಾರವು ತನ್ನ ಆಡಳಿತ ಪ್ರಕ್ರಿಯೆಗಳನ್ನು ಸುಗಮಗೊಳಿಸಲು ಹಾಗೂ ಪಾರದರ್ಶಕತೆಯನ್ನು ಹೆಚ್ಚಿಸಲು ಬದ್ಧವಾಗಿದೆ.

ಈ ನಿಟ್ಟಿನಲ್ಲಿ ವಿವಿಧ ತೆರಿಗೆ ಸಂಗ್ರಹಣಾ ಇಲಾಖೆಗಳಾದ ವಾಣಿಜ್ಯ ತೆರಿಗೆ, ಅಬಕಾರಿ, ನೋಂದಣಿ ಮತ್ತು ಮುದ್ರಾಂಕ, ಸಾರಿಗೆ ಹಾಗೂ ಗಣಿ ಮತ್ತು ಭೂ ವಿಜ್ಞಾನ ಇಲಾಖೆಗಳ 'ಬಿ' ಮತ್ತು 'ಸಿ' ವೃಂದಗಳಲ್ಲಿ ಕೌನ್ಸೆಲಿಂಗ್ ಮೂಲಕ ವರ್ಗಾವಣೆ ಪ್ರಕ್ರಿಯೆ ಜಾರಿಗೊಳಿಸಲಾಗುವುದು. ವಿವಿಧ ನಿಯಮಗಳ ಸರಳೀಕರಣದ ಮೂಲಕ ಆಡಳಿತದಲ್ಲಿ ದಕ್ಷತೆಯನ್ನು ಹೆಚ್ಚಿಸಲಾಗುವುದು.

26. ವಿತ್ತೀಯ ಕೊರತೆ ಮತ್ತು ಒಟ್ಟು ಹೊಣೆಗಾರಿಕೆಯನ್ನು ವಿತ್ತೀಯ ಹೊಣೆಗಾರಿಕೆ ಅಧಿನಿಯಮ ಸೂಚಿಸಿರುವ ಮಿತಿಯೊಳಗೆ ನಿರ್ವಹಿಸಿ, ನಾವು ಗ್ಯಾರಂಟಿ ಯೋಜನೆಗಳಿಗೆ ಸಾಕಷ್ಟು ಅನುದಾನ ನೀಡುವುದರೊಂದಿಗೆ ಬಂಡವಾಳ ವೆಚ್ಚದಲ್ಲಿಯೂ ಗಣನೀಯ ಹೆಚ್ಚಳ ಮಾಡಿದ್ದು, ಹೆಮ್ಮೆಯ ಸಂಗತಿ.

27. ವಿತ್ತೀಯ ಶಿಸ್ತು ಕಾಯ್ದುಕೊಂಡು ಜನಕಲ್ಯಾಣ ಹಾಗೂ ಅಭಿವೃದ್ಧಿ ಯೋಜನೆಗಳಿಗೆ ಆಯವ್ಯಯ ಹಂಚಿಕೆ ಮಾಡುವುದರೊಂದಿಗೆ, ಬಂಡವಾಳ ವೆಚ್ಚಗಳಿಗೂ ಅನುದಾನ ಒದಗಿಸಿ, ರಾಜ್ಯದ ಆರ್ಥಿಕತೆಯನ್ನು ಸದೃಢಗೊಳಿಸುವ ಅಂಶಗಳೊಂದಿಗೆ ಕಳೆದ ಸಾಲಿನ ಆಯವ್ಯಯ ಮಂಡಿಸಿದ್ದೆನು. ಇದೀಗ 2025–26ನೇ ಸಾಲಿನ ಆಯವ್ಯಯವನ್ನು ಸಹ ಇದೇ ಆಶಯದೊಂದಿಗೆ ಮಂಡಿಸುತ್ತಿದ್ದೇನೆ.

**ಕೃಷಿ**

**ಕೃಷಿ ಮೊದಲು ಸರ್ವಕ್ಕೆ ಕೃಷಿಯಿಂ**
**ಪಸರಿಸುವುದು ಆ ಕೃಷಿಯನುದ್ಯೋಗಿಸುವ**
**ಜನವನು ಪಾಲಿಸುವುದು**

**– ಕುಮಾರವ್ಯಾಸ**

28. ರಾಜ್ಯದ ಸಣ್ಣ ಮತ್ತು ಅತಿಸಣ್ಣ ಹಿಡುವಳಿದಾರರಿಗೆ ಕೃಷಿಯನ್ನು ಸುಸ್ಥಿರ ಮತ್ತು ಲಾಭದಾಯಕವಾಗಿಸಲು, ನಮ್ಮ ಸರ್ಕಾರವು ರೈತ ಸಮೃದ್ಧಿ ಯೋಜನೆಯನ್ನು ಜಾರಿಗೊಳಿಸಿದೆ. ಪ್ರಸಕ್ತ ಸಾಲಿನಲ್ಲಿ, ಈ ಯೋಜನೆಯಡಿ 10 ಹವಾಮಾನ ವಲಯಗಳಲ್ಲಿ ಕೃಷಿ ಇಲಾಖೆಯ ಅಧೀನದ ಕ್ಷೇತ್ರಗಳಲ್ಲಿ ಸಮಗ್ರ ಕೃಷಿ ಪದ್ಧತಿಯ ಮಾದರಿ ಪ್ರಾತ್ಯಕ್ಷಿಕೆ ತಾಕುಗಳನ್ನು ಅಭಿವೃದ್ಧಿಪಡಿಸಿ, ಈ ಪದ್ಧತಿಯನ್ನು ಅಳವಡಿಸಿಕೊಳ್ಳಲು ರೈತರಿಗೆ ಪ್ರಚುರಪಡಿಸಲಾಗುವುದು.

29. 2025-26ನೇ ಸಾಲಿನಲ್ಲಿ ರಾಜ್ಯದಲ್ಲಿ ಕೃಷಿ ಯಾಂತ್ರೀಕರಣ ಕಾರ್ಯಕ್ರಮದಡಿ 50 ಸಾವಿರ ರೈತರಿಗೆ ಸಹಾಯಧನ ಒದಗಿಸಲು 428 ಕೋಟಿ ರೂ. ಅನುದಾನ ಕಲ್ಪಿಸಲಾಗುವುದು.

30. ಕೃಷಿ ಬೆಳೆಗಳಲ್ಲಿ ನೀರನ್ನು ಸಮರ್ಥ ಬಳಕೆ ಮಾಡಿ, ಮಳೆಯಾಶ್ರಿತ ಪ್ರದೇಶದಲ್ಲಿ ಕೃಷಿ ಉತ್ಪಾದನೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಅಂದಾಜು 1.81 ಲಕ್ಷ ರೈತರಿಗೆ ಹನಿ ಮತ್ತು ತುಂತುರು ನೀರಾವರಿ ಘಟಕಗಳ ಅಳವಡಿಕೆಗೆ 440 ಕೋಟಿ ರೂ. ಸಹಾಯಧನವನ್ನು ಒದಗಿಸಲಾಗುವುದು.

31. ತೊಗರಿ ಬೆಳೆಯಲ್ಲಿ ನೂತನ ತಾಂತ್ರಿಕತೆಗಳ ಅಳವಡಿಕೆ, ಕ್ಷೇತ್ರ ವಿಸ್ತರಣೆ ಮತ್ತು ತೊಗರಿಯನ್ನು ಅಂತರ ಬೆಳೆಯನ್ನಾಗಿ ಪ್ರೋತ್ಸಾಹಿಸುವುದರ ಮೂಲಕ ಉತ್ಪಾದನೆಯಲ್ಲಿ ರಾಷ್ಟ್ರದಲ್ಲೇ ಮುಂಚೂಣಿ ರಾಜ್ಯವನ್ನಾಗಿಸಲು ಉದ್ದೇಶಿಸಿದೆ. ಈ ಮೂಲಕ ರೈತರ ಆದಾಯ ಮತ್ತು ಪೌಷ್ಟಿಕ ಭದ್ರತೆಯನ್ನು ಸುಧಾರಿಸಲು 88 ಕೋಟಿ ರೂ. ಒದಗಿಸಲಾಗುವುದು.

32. ರಾಜ್ಯದಲ್ಲಿ 6,000 ಕಿರು ಆಹಾರ ಸಂಸ್ಕರಣಾ ಘಟಕಗಳು ಹಾಗೂ 14 ಸಾಮಾನ್ಯ ಇನ್‌ಕ್ಯೂಬೇಷನ್ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಪ್ರಸಕ್ತ ಸಾಲಿನಲ್ಲಿ 5,000 ಕಿರು ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲು ಕ್ರಮವಹಿಸಲಾಗುವುದು.

33. ಕೃಷಿ ಭಾಗ್ಯ ಯೋಜನೆಯಡಿ ಮೂರು ಲಕ್ಷಕ್ಕಿಂತ ಅಧಿಕ ಕೃಷಿ ಹೊಂಡಗಳನ್ನು ನಿರ್ಮಿಸಿ ಮಳೆಯಾಶ್ರಿತ ಕೃಷಿ ಪ್ರದೇಶದ ಬೆಳೆಗಳಿಗೆ ರಕ್ಷಣಾತ್ಮಕ ನೀರಾವರಿ ಒದಗಿಸುವುದರೊಂದಿಗೆ ರೈತರ

ಬೆಳೆಗಳ ಉತ್ಪಾದಕತೆ ಹಾಗೂ ಆದಾಯವನ್ನು ಹೆಚ್ಚಿಸಲಾಗಿದೆ. ಪ್ರಸಕ್ತ ವರ್ಷದಲ್ಲಿ ಈ ಯೋಜನೆಯಡಿ 12,000 ಕೃಷಿ ಹೊಂಡಗಳನ್ನು ನಿರ್ಮಿಸಲಾಗುವುದು.

34. ಜಾಗತಿಕ ಮಟ್ಟದಲ್ಲಿ ಡಿಜಿಟಲ್, ಕೃತಕ ಬುದ್ಧಿಮತ್ತೆ ಹಾಗೂ ಜಿಯೋ ಸ್ಪೇಷಿಯಲ್ ಕ್ಷೇತ್ರದಲ್ಲಿ ಆಗುತ್ತಿರುವ ಆವಿಷ್ಕಾರಗಳನ್ನು ಕೃಷಿ ಕ್ಷೇತ್ರದಲ್ಲಿ ಅಳವಡಿಸಿ, ಡಿಜಿಟಲ್ ಕೃಷಿ ಸೇವೆಗಳ ಕೇಂದ್ರವನ್ನು ಸ್ಥಾಪಿಸಲಾಗುವುದು. ಈ ಕೇಂದ್ರವು ರೈತರಿಗೆ ಮತ್ತು ನೀತಿ ನಿರೂಪಕರಿಗೆ ಬೆಳೆಗಳ ಕುರಿತು ನಿಖರವಾದ ತೀರ್ಮಾನವನ್ನು ಕೈಗೊಂಡು ಬೆಳೆಗಳಲ್ಲಿ ಉತ್ಪಾದಕತೆಯನ್ನು ಹೆಚ್ಚಿಸಲು ಸಹಕಾರಿಯಾಗಲಿದೆ.

35. ರಾಜ್ಯದಲ್ಲಿ ಚಾಲ್ತಿಯಿರುವ ಹವಾಮಾನ ವಲಯಗಳ ವರ್ಗೀಕರಣ ಬಹಳ ವರ್ಷಗಳ ಹಿಂದೆ ಗುರುತಿಸಲಾಗಿರುವುದರಿಂದ ಹಾಗೂ ಇತ್ತೀಚಿನ ವರ್ಷಗಳ ನೈಸರ್ಗಿಕ ವೈಪರೀತ್ಯಗಳ ಬದಲಾವಣೆಯಿಂದ ಹವಾಮಾನ ವಲಯಗಳನ್ನು ಮರುವ್ಯಾಖ್ಯಾನಗೊಳಿಸಲು ತಜ್ಞರ ಸಮಿತಿಯನ್ನು ರಚಿಸಲಾಗುವುದು.

36. ಕರ್ನಾಟಕ ರಾಜ್ಯದ ಸಾಗುವಳಿ ಪ್ರದೇಶದ ಶೇ.64ರಷ್ಟು ಪ್ರದೇಶವು ಮಳೆಯಾಶ್ರಿತ ಪ್ರದೇಶವಾಗಿದ್ದು, ಮಳೆಯಾಶ್ರಿತ ಕೃಷಿಯನ್ನು ಜೀವನಾಧಾರವಾಗಿಸಿ ಸುಸ್ಥಿರವನ್ನಾಗಿಸಲು ಹಾಗೂ ರೈತರ

ಜೀವನೋಪಾಯವನ್ನು ಸುಧಾರಿಸಲು 'ಸಮಗ್ರ ಮಳೆಯಾಶ್ರಿತ ಕೃಷಿ ನೀತಿ'ಯನ್ನು ಅನುಷ್ಠಾನಕ್ಕೆ ತರಲಾಗುವುದು.

37. ರೈತರಿಗೆ ಮಣ್ಣು ಪರೀಕ್ಷೆ ಹಾಗೂ ಅವರು ಬಳಸುವ ಪರಿಕರಗಳಾದ ರಸಗೊಬ್ಬರ, ಬಿತ್ತನೆ ಬೀಜ, ಸಸ್ಯ ಸಂರಕ್ಷಣಾ ಔಷಧಿ, ಜೈವಿಕ ಗೊಬ್ಬರ ಇತ್ಯಾದಿಗಳ ಗುಣಮಟ್ಟವನ್ನು ಪರೀಕ್ಷಿಸಲು ಇಲಾಖೆಯಡಿ ಇರುವ 58 ಪ್ರಯೋಗಾಲಯಗಳನ್ನು ಅತ್ಯಾಧುನಿಕ ತಂತ್ರಜ್ಞಾನಗಳೊಂದಿಗೆ ಬಲವರ್ಧನೆಗೊಳಿಸಲಾಗುವುದು.

38. ಸುಸ್ಥಿರ ಸಾವಯವ ಕೃಷಿಯನ್ನು ಉತ್ತೇಜಿಸಲು ಉತ್ತರ ಕನ್ನಡ ಜಿಲ್ಲೆಯ ಜೋಯಿಡಾ ತಾಲ್ಲೂಕನ್ನು ರಾಜ್ಯದ ಪ್ರಥಮ ಸಾವಯವ ತಾಲ್ಲೂಕನ್ನಾಗಿ ಪರಿವರ್ತಿಸಿ, ರೈತರ ಸಾವಯವ ಉತ್ಪನ್ನಗಳಿಗೆ ಮಾರುಕಟ್ಟೆ ಒದಗಿಸಲು ಸಾವಯವ ಪ್ರಮಾಣೀಕರಣ ವ್ಯವಸ್ಥೆ ಕಲ್ಪಿಸಲಾಗುವುದು.

39. ಬೆಳಗಾವಿ, ಬಾಗಲಕೋಟೆ, ವಿಜಯಪುರ, ಕಲಬುರಗಿ, ಮತ್ತು ಮಂಡ್ಯ ಜಿಲ್ಲೆಗಳಲ್ಲಿ ಒಟ್ಟಾರೆ 3,000 ಹೆಕ್ಟೇರ್ ಪ್ರದೇಶದಲ್ಲಿ ಸಮಗ್ರ ಮಣ್ಣು ಮತ್ತು ನೀರಿನ ನಿರ್ವಹಣೆ, ಸಮರ್ಪಕ ತ್ಯಾಜ್ಯ ನಿರ್ವಹಣೆ, ನೀರಿನ ಬಳಕೆ ಮತ್ತು ಸಮತೋಲನ ಪೋಷಕಾಂಶ ನಿರ್ವಹಣೆಯನ್ನು ಸಕ್ಕರೆ ಕಾರ್ಖಾನೆಗಳ ಸಹಯೋಗದೊಂದಿಗೆ ಜಾರಿಗೊಳಿಸಲಾಗುವುದು.

40. ಜೈವಿಕ ಕೃಷಿ ಪರಿಕರ ಸ್ಟಾರ್ಟ್–ಅಪ್‌ಗಳು (Agri Start-up) ಉತ್ಪಾದಿಸುವ ಜೈವಿಕ ಪರಿಕರಗಳನ್ನು ರೈತ ಸಂಪರ್ಕ ಕೇಂದ್ರಗಳ ಮೂಲಕ ರೈತರಿಗೆ ಸೂಕ್ತ ದರದಲ್ಲಿ ಮಾರಾಟ ಮಾಡಲು ಉತ್ತೇಜಿಸಲಾಗುವುದು.

41. ವಿಶ್ವ ಬ್ಯಾಂಕ್ ನೆರವಿನ ರಿವಾರ್ಡ್ ಯೋಜನೆಯಡಿ ಈವರೆಗೆ ಒಟ್ಟಾರೆ 12.90 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಭೂ–ಸಂಪನ್ಮೂಲ ಸಮೀಕ್ಷೆ ಪೂರ್ಣಗೊಳಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ 11 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಸಮೀಕ್ಷೆಯನ್ನು ಪೂರ್ಣಗೊಳಿಸಲು ಕ್ರಮವಹಿಸಲಾಗುವುದು. ಭೂ–ಸಂಪನ್ಮೂಲ ಸಮೀಕ್ಷೆ ಆಧಾರದ ಮೇಲೆ ರೈತರು ಸೂಕ್ತವಾದ ಬೆಳೆಗಳನ್ನು ಬೆಳೆಯಲು, ಅಗತ್ಯವಿರುವ ರಾಸಾಯನಿಕ ಗೊಬ್ಬರ ಹಾಗೂ ಪೋಷಕಾಂಶಗಳನ್ನು ಬಳಸಿ ಬೆಳೆಗಳ ಉತ್ಪಾದನೆ ಹೆಚ್ಚಿಸಲು ಪ್ರೋತ್ಸಾಹಿಸಲಾಗುವುದು.

42. ಮಂಡ್ಯ ಕೃಷಿ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ಈಗಾಗಲೇ ಅನುಮೋದನೆ ನೀಡಿದ್ದು, ಮೂಲಸೌಕರ್ಯ ಕಲ್ಪಿಸಲು 25 ಕೋಟಿ ರೂ. ಒದಗಿಸಿ, ಪ್ರಸಕ್ತ ಸಾಲಿನಲ್ಲಿ ತರಗತಿಗಳನ್ನು ಆರಂಭಿಸಲಾಗುವುದು.

43. ಬರ ಮತ್ತು ರೋಗ ನಿರೋಧಕ ಲಕ್ಷಣಗಳ ಸಂಶೋಧನೆ ಕೈಗೊಂಡು ಬೆಳೆಗಳ ಉತ್ತಮ ತಳಿ ಅಭಿವೃದ್ಧಿಪಡಿಸಲು

ಬೆಂಗಳೂರಿನ ಗಾಂಧಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ಸಸ್ಯ ಫೀನೋಟೈಪಿಂಗ್ (Phenotyping) ಸೌಲಭ್ಯ ಕಲ್ಪಿಸಲಾಗುವುದು.

44. ಸಾವಯವ ಉತ್ಪನ್ನಗಳು ಮತ್ತು ಸಿರಿಧಾನ್ಯಗಳ ಬೇಡಿಕೆ ಮತ್ತು ಪೂರೈಕೆಗಳ ಅಂತರವನ್ನು ಸರಿದೂಗಿಸಲು ಹಾಗೂ ರೈತರಿಗೆ ಸೂಕ್ತ ಮಾರುಕಟ್ಟೆಯನ್ನು ಕಲ್ಪಿಸುವ ಉದ್ದೇಶದಿಂದ 20 ಕೋಟಿ ರೂ. ಮೊತ್ತದಲ್ಲಿ 'ಸಾವಯವ ಮತ್ತು ಸಿರಿಧಾನ್ಯಗಳ ಹಬ್' ಅನ್ನು ಸ್ಥಾಪಿಸಲಾಗುವುದು.

45. ವಿಜಯಪುರದ ಮುದ್ದೇಬಿಹಾಳ ತಾಲ್ಲೂಕಿನಲ್ಲಿ ಕೃಷಿ ಸಂಶೋಧನಾ ಕೇಂದ್ರವನ್ನು ಸ್ಥಾಪಿಸಲಾಗುವುದು.

46. ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನಲ್ಲಿ ಹೊಸ ಕೃಷಿ ಕಾಲೇಜನ್ನು ಸ್ಥಾಪಿಸಲು ತಜ್ಞರಿಂದ ಕಾರ್ಯಸಾಧ್ಯತಾ ವರದಿಯನ್ನು ಪಡೆದುಕೊಳ್ಳಲಾಗುವುದು.

**ತೋಟಗಾರಿಕೆ**

47. ರೈತರಿಗೆ ಹೆಚ್ಚಿನ ಆದಾಯ ಒದಗಿಸುವಲ್ಲಿ ತೋಟಗಾರಿಕಾ ಬೆಳೆಗಳ ಕೊಡುಗೆ ಮಹತ್ವದ್ದಾಗಿದೆ. ಇತ್ತೀಚಿನ ಬೆಳೆ ಪದ್ಧತಿ, ಸಂಸ್ಕರಣೆ ಮತ್ತು ಮೌಲ್ಯವರ್ಧನೆಯ ತಂತ್ರಜ್ಞಾನದಲ್ಲಾದ ಆಧುನೀಕರಣದ ಅನುಕೂಲವನ್ನು ಬೆಳೆಗಾರರಿಗೆ ತಲುಪಿಸುವ ಉದ್ದೇಶದಿಂದ ಸಮಗ್ರ

ತೋಟಗಾರಿಕಾ ಅಭಿವೃದ್ಧಿ ಯೋಜನೆ–2 ಅನ್ನು ಜಾರಿಗೊಳಿಸಲಾಗುವುದು. ಪ್ರಸಕ್ತ ಸಾಲಿನಲ್ಲಿ ಈ ಯೋಜನೆಗೆ 95 ಕೋಟಿ ರೂ. ಅನುದಾನ ಒದಗಿಸಿದೆ.

48. ತೋಟಗಾರಿಕಾ ಬೆಳೆಗಳ ವಿಸ್ತೀರ್ಣ, ಉತ್ಪಾದನೆ, ಬೆಳೆಗಳ ಆರೋಗ್ಯ, ಮಾರುಕಟ್ಟೆ ಇತ್ಯಾದಿಗಳ ಬಗ್ಗೆ ನೈಜ ಸಮಯದ (Real Time) ಆಧಾರದ ಮೇಲೆ ರೈತರಿಗೆ ಮಾಹಿತಿ ಒದಗಿಸಲು ಉದ್ದೇಶಿಸಲಾಗಿದೆ. ಇದಕ್ಕಾಗಿ, ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸ್ಪೇಸ್ ಸೈನ್ಸ್ ಟೆಕ್ನಾಲಜಿ ಮತ್ತು ಖಾಸಗಿ ಸಹಯೋಗದಲ್ಲಿ ಜ್ಞಾನ ಕೋಶ ಸ್ಥಾಪಿಸಲಾಗುವುದು.

49. ರಾಜ್ಯದ 20 GI ಟ್ಯಾಗ್ ಹೊಂದಿರುವ ಬೆಳೆಗಳು ಹಾಗೂ ಇತರೆ ದೇಸಿ ತಳಿಗಳು ಕಣ್ಮರೆಯಾಗಿ ನಶಿಸಿ ಹೋಗುವುದನ್ನು ತಪ್ಪಿಸಲು ದೇಶಿ ತಳಿಗಳ ಬೀಜ ಬ್ಯಾಂಕ್ ಸ್ಥಾಪಿಸಲಾಗುವುದು.

50. ಬ್ಯಾಡಗಿ ಮೆಣಸಿನಕಾಯಿ ತಳಿಯ ಸಂರಕ್ಷಣೆ ಮತ್ತು ಎಲೆ ಮುಟುರು ರೋಗ, ತ್ರಿಪ್ಸ್ ಇತ್ಯಾದಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸಂಶೋಧನೆ ಕೈಗೊಳ್ಳಲಾಗುವುದು.

51. ತೋಟಗಾರಿಕೆ ಇಲಾಖೆಯ ಅಧೀನದ ಆಯ್ದ ಕ್ಷೇತ್ರಗಳು ಮತ್ತು ನರ್ಸರಿಗಳಡಿ ಸಾರ್ವಜನಿಕ–ಖಾಸಗಿ ಸಹಯೋಗದೊಂದಿಗೆ ಹೂ–ಕೃಷಿ, ಅಲಂಕಾರಿಕ ಸಸ್ಯಗಳು, ಔಷಧೀಯ ಸಸ್ಯಗಳನ್ನು

ಬೆಳೆಸಲು ಹಾಗೂ ತೋಟಗಾರಿಕಾ ಪ್ರವಾಸೋದ್ಯಮವನ್ನು ಉತ್ತೇಜಿಸಲು ಕಾರ್ಯಕ್ರಮವನ್ನು ರೂಪಿಸಲಾಗುವುದು.

52. ಗದಗ ಜಿಲ್ಲೆಯ ಡಂಬಳದಲ್ಲಿ ತೋಟಗಾರಿಕಾ ಕಾಲೇಜನ್ನು ಸ್ಥಾಪಿಸಲು ತಜ್ಞರಿಂದ ಕಾರ್ಯಸಾಧ್ಯತಾ ವರದಿಯನ್ನು ಪಡೆದುಕೊಳ್ಳಲಾಗುವುದು.

53. ತೋಟಗಾರಿಕಾ ಬೆಳೆಗಳ ಹನಿ ನೀರಾವರಿ ಕಾರ್ಯಕ್ರಮದಡಿ ಸುಮಾರು 52,000 ಫಲಾನುಭವಿಗಳಿಗೆ 426 ಕೋಟಿ ರೂ. ಸಹಾಯ ಧನವನ್ನು ಒದಗಿಸಲಾಗುವುದು.

54. ಮಲೆನಾಡು ಜಿಲ್ಲೆಗಳಲ್ಲಿ ಎಲೆ ಚುಕ್ಕೆ ರೋಗದ ಬಾಧೆಗೆ ತುತ್ತಾಗಿ 2 ಲಕ್ಷಕ್ಕಿಂತ ಅಧಿಕ ಅಡಿಕೆ ಬೆಳೆಗಾರರು ಸಂಕಷ್ಟಕ್ಕೀಡಾಗಿದ್ದಾರೆ. ಈ ರೋಗ ನಿಯಂತ್ರಿಸಲು ಸಸ್ಯ ಸಂರಕ್ಷಣಾ ಕ್ರಮಗಳಿಗಾಗಿ 62 ಕೋಟಿ ರೂ. ಒದಗಿಸಲಾಗಿದೆ.

55. ತೆಂಗು ಬೆಳೆಯುವ ಪ್ರದೇಶಗಳಲ್ಲಿ ಕಪ್ಪು ತಲೆ ಹುಳುವಿನ ಬಾಧೆಯ ಕುರಿತು ವೈಜ್ಞಾನಿಕ ಸಮೀಕ್ಷೆ ನಡೆಸಿ, ಇದರ ಆಧಾರದ ಮೇಲೆ ಸಸ್ಯ ಸಂರಕ್ಷಣಾ ಕ್ರಮಗಳನ್ನು ಕೈಗೊಳ್ಳಲಾಗುವುದು.

**ರೇಷ್ಮೆ**

56. ಅಂತಾರಾಷ್ಟ್ರೀಯ ದರ್ಜೆಯ ದ್ವಿತಳಿ ಕಚ್ಚಾ ರೇಷ್ಮೆಯ ದೇಶೀಯ ಬೇಡಿಕೆಯನ್ನು ಪೂರೈಸಲು ಮಧ್ಯಮ ವರ್ಗದ ರೇಷ್ಮೆ ನೂಲು ಬಿಚ್ಚಾಣಿಕೆದಾರರಿಗೆ 120 ಕೊನೆಗಳ ಸ್ವಯಂಚಾಲಿತ ರೀಲಿಂಗ್ ಘಟಕಗಳನ್ನು ಸ್ಥಾಪಿಸಲು ಪ್ರೋತ್ಸಾಹಿಸಲಾಗುವುದು.

57. ರಾಮನಗರ ಮತ್ತು ಶಿಡ್ಲಘಟ್ಟ ಹೈ–ಟೆಕ್ ರೇಷ್ಮೆ ಗೂಡಿನ ಮಾರುಕಟ್ಟೆಯ ಮೊದಲನೇ ಹಂತದ ಕಾಮಗಾರಿಗಳು ಮುಕ್ತಾಯಗೊಳ್ಳಲಿದ್ದು, ಪ್ರಸಕ್ತ ಸಾಲಿನಲ್ಲಿ ಎರಡನೇ ಹಂತದ ಕಾಮಗಾರಿಗಳನ್ನು 250 ಕೋಟಿ ರೂ. ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗುವುದು.

58. ಮೈಸೂರು ಮತ್ತು ಸುತ್ತಮುತ್ತಲಿನ ಭಾಗದ ರೇಷ್ಮೆ ಬೆಳೆಗಾರರಿಗೆ ಅನುಕೂಲವಾಗುವಂತೆ ಮೈಸೂರಿನಲ್ಲಿ ರೇಷ್ಮೆಗೂಡಿನ ಮಾರುಕಟ್ಟೆಯನ್ನು NABARD ಸಹಯೋಗದಲ್ಲಿ ಸ್ಥಾಪಿಸಲಾಗುವುದು.

59. ರೈತರು ಉತ್ಪಾದಿಸುವ ರೇಷ್ಮೆಗೂಡುಗಳಿಗೆ ಸೂಕ್ತ ಬೆಲೆ ದೊರಕಿಸಲು ಹಾಗೂ ಅಂತಾರಾಷ್ಟ್ರೀಯ ಮಟ್ಟದ ಗುಣಮಟ್ಟವನ್ನು ಸಾಧಿಸುವ ದೃಷ್ಟಿಯಿಂದ ಸರ್ಕಾರಿ ರೇಷ್ಮೆ ಗೂಡಿನ ಮಾರುಕಟ್ಟೆಗಳಲ್ಲಿ ಗುಣಮಟ್ಟ

ಪರೀಕ್ಷೆ ಮತ್ತು ಶ್ರೇಣೀಕರಣದ ಕಾರ್ಯಕ್ಕಾಗಿ Assayer ಗಳನ್ನು ನಿಯೋಜಿಸಲಾಗುವುದು.

60. ರಾಜ್ಯದಲ್ಲಿ ರೇಷ್ಮೆ ಬೆಳೆ ವಿಸ್ತರಿಸಲು ರೇಷ್ಮೆ ಗೂಡಿನ ಪೂರ್ವ ಮತ್ತು ನಂತರದ ಚಟುವಟಿಕೆಗಳಿಗೆ ಪ್ರೋತ್ಸಾಹಿಸಲು ರೇಷ್ಮೆ ಅಭಿವೃದ್ಧಿ ಯೋಜನೆಯಡಿಯಲ್ಲಿ ಪ್ರಸಕ್ತ ಸಾಲಿನಲ್ಲಿ 55 ಕೋಟಿ ರೂ. ಅನುದಾನ ಒದಗಿಸಲಾಗುವುದು.

**ಪಶುಸಂಗೋಪನೆ**

61. ಜಾನುವಾರುಗಳ ಆಕಸ್ಮಿಕ ಸಾವಿನ ಸಂದರ್ಭದಲ್ಲಿ ರೈತರು ಅನುಭವಿಸುತ್ತಿರುವ ಸಂಕಷ್ಟ ನಿವಾರಣೆಗೆ "ಅನುಗ್ರಹ" ಯೋಜನೆಯನ್ನು ಜಾರಿಗೆ ತರಲಾಗಿದೆ. ಇದರಡಿ ಹಸು, ಎಮ್ಮೆ ಮತ್ತು ಎತ್ತುಗಳಿಗೆ ಪ್ರಸ್ತುತ ನೀಡಲಾಗುತ್ತಿರುವ ಪರಿಹಾರದ ಮೊತ್ತವನ್ನು 10,000 ರೂ. ಗಳಿಂದ 15,000 ರೂ. ಗಳಿಗೆ; ಕುರಿ/ಮೇಕೆಗಳಿಗೆ ನೀಡಲಾಗುತ್ತಿರುವ ಮೊತ್ತವನ್ನು 5,000 ರೂ. ಗಳಿಂದ 7,500 ರೂ. ಗಳಿಗೆ ಹಾಗೂ 3–6 ತಿಂಗಳ ಕುರಿ/ಮೇಕೆ ಮರಿಗಳಿಗೆ ನೀಡಲಾಗುತ್ತಿರುವ ಮೊತ್ತವನ್ನು 3,500 ರೂ.ಗಳಿಂದ 5,000 ರೂ.ಗಳಿಗೆ ಹೆಚ್ಚಿಸಲಾಗುವುದು.

62. ಕಳೆದ ಎರಡು ವರ್ಷಗಳಲ್ಲಿ 60 ಹೊಸ ಪಶು ಚಿಕಿತ್ಸಾಲಯಗಳನ್ನು ಕಾರ್ಯಾರಂಭಗೊಳಿಸಲಾಗಿದ್ದು, 2025–26ನೇ ಸಾಲಿನಲ್ಲಿ 50 ನೂತನ ಪಶು ಚಿಕಿತ್ಸಾಲಯಗಳನ್ನು ಪ್ರಾರಂಭಿಸಲಾಗುವುದು.

63. 2025–26ನೇ ಸಾಲಿನಲ್ಲಿ 100 ಪಶು ವೈದ್ಯಕೀಯ ಸಂಸ್ಥೆಗಳ ನೂತನ ಕಟ್ಟಡಗಳನ್ನು ನಬಾರ್ಡ್ ಸಹಯೋಗದೊಂದಿಗೆ ನಿರ್ಮಿಸಲಾಗುವುದು.

64. ಅಮೃತ್ ಮಹಲ್ ಕಾವಲುಗಳಲ್ಲಿನ ಭೂ ಒತ್ತುವರಿ ತಡೆಯಲು ಹಾಗೂ ಅಮೃತ್ ಮಹಲ್ ರಾಸುಗಳಿಗೆ ಮೇವು ಲಭ್ಯವಾಗುವಂತೆ ಮಾಡಲು, ಅರಣ್ಯ ಇಲಾಖೆ ಹಾಗೂ ನರೇಗಾ ಸಹಯೋಗದೊಂದಿಗೆ ಮೇವಿನ ಮರಗಳ ನೆಡುತೋಪು ಅಭಿವೃದ್ಧಿಗೊಳಿಸಲಾಗುವುದು.

65. ರಾಜ್ಯದ ಹೆಮ್ಮೆಯ ದೇಶಿ ದನದ ತಳಿಗಳಾದ ಹಳ್ಳಿಕಾರ್, ಕಿಲಾರಿ, ಅಮೃತ್ ಮಹಲ್ ಹಾಗೂ ಬಂಡೂರು ಕುರಿ ತಳಿಯ ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ ಎರಡು ಕೋಟಿ ರೂ. ಒದಗಿಸಲಾಗುವುದು.

66. ಆಧುನಿಕ ಕುರಿ ಸಾಕಾಣಿಕೆ ಪದ್ಧತಿಗಳು ಮತ್ತು ನೈಸರ್ಗಿಕ ವಿಕೋಪಗಳ ಸಂದರ್ಭದಲ್ಲಿ ಅನುಸರಿಸಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ವಲಸೆ ಕುರಿಗಾರರಿಗೆ ಕರ್ನಾಟಕ ಪಶುವೈದ್ಯಕೀಯ

ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಸಹಯೋಗದಲ್ಲಿ ತರಬೇತಿ ನೀಡಲಾಗುವುದು.

67. ನಮ್ಮ ಸರ್ಕಾರವು ಅಸ್ತಿತ್ವಕ್ಕೆ ಬಂದ ನಂತರ "ನಂದಿನಿ" ಬ್ರ್ಯಾಂಡ್‌ನ ಮಾರುಕಟ್ಟೆಯನ್ನು ವಿಸ್ತರಿಸಿ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾರಾಜಿಸುವಂತೆ ಮಾಡಿದೆ. 2024-25ನೇ ಸಾಲಿನಲ್ಲಿ ಪ್ರತಿ ಒಂದು ಕೋಟಿಗೂ ಹೆಚ್ಚು ಲೀಟರ್ ಹಾಲನ್ನು ಶೇಖರಿಸಲಾಗಿದೆ.

**ಮೀನುಗಾರಿಕೆ**

68. ರಾಜ್ಯದ ಮತ್ಸ್ಯ ಸಂಪತ್ತಿನ ರಕ್ಷಣೆಯೊಂದಿಗೆ ಸುಸ್ಥಿರ ಮೀನುಗಾರಿಕೆ ಹಾಗೂ ಮೀನುಗಾರರ ಆರ್ಥಿಕ ಅಭಿವೃದ್ಧಿಗೆ ಉತ್ತೇಜನ ನೀಡಲು ಮೀನುಗಾರಿಕಾ ನೀತಿಯನ್ನು ರೂಪಿಸಲಾಗುವುದು.

69. ಮಂಗಳೂರಿನಲ್ಲಿರುವ ಮೀನುಗಾರಿಕೆ ಕಾಲೇಜಿಗೆ ಪ್ರಸ್ತುತ ನಿಗದಿಪಡಿಸಿರುವ ವಿದ್ಯಾರ್ಥಿಗಳ ಸಂಖ್ಯಾಬಲವನ್ನು ದ್ವಿಗುಣಗೊಳಿಸಲಾಗುವುದು.

70. ಕರಾವಳಿ ಜಿಲ್ಲೆಗಳಲ್ಲಿನ ಮೀನುಗಾರಿಕೆ ಕೊಂಡಿ ರಸ್ತೆಗಳನ್ನು ನಬಾರ್ಡ್ ಸಹಯೋಗದೊಂದಿಗೆ ಅಭಿವೃದ್ಧಿಪಡಿಸಲು 30 ಕೋಟಿ ರೂ. ಒದಗಿಸಲಾಗುವುದು.

71. ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡದ ಆಯ್ದ ಮೀನು ಮಾರಾಟಗಾರರಿಗೆ ನಾಲ್ಕು ಚಕ್ರ ವಾಹನ ಖರೀದಿಸಲು ಶೇ.50ರಷ್ಟು ಅಥವಾ ಗರಿಷ್ಠ 3 ಲಕ್ಷ ರೂ. ಆರ್ಥಿಕ ನೆರವು ನೀಡಲಾಗುವುದು.

72. ರಾಜ್ಯದಲ್ಲಿ ನೋಂದಣಿಯಾಗಿರುವ ಮೋಟರೀಕೃತ ದೋಣಿಗಳಲ್ಲಿ 15 ವರ್ಷ ಕಾಲಾವಧಿ ಮೀರಿರುವ ಹಳೆಯ ಇಂಜಿನ್‌ಗಳನ್ನು ಬದಲಾಯಿಸಿ, ಹೊಸ ಇಂಜಿನ್ ಖರೀದಿಸಲು ಶೇ.50 ರಷ್ಟು ಒಂದು ಲಕ್ಷ ರೂ. ಮಿತಿಗೊಳಪಟ್ಟು ಸಹಾಯಧನ ನೀಡಲಾಗುವುದು.

73. ಪ್ರವಾಸಿಗರಿಗೆ ಶುಚಿ–ರುಚಿಯಾದ ಪೌಷ್ಟಿಕ ಮೀನು ಖಾದ್ಯಗಳನ್ನು ಒದಗಿಸಲು ಮೈಸೂರಿನಲ್ಲಿ ಹೈ–ಟೆಕ್ ಮತ್ಸ್ಯದರ್ಶಿನಿಯನ್ನು ಪ್ರಾರಂಭಿಸಲಾಗುವುದು.

74. ಮಲ್ಪೆ ಮೀನುಗಾರಿಕಾ ಬಂದರಿನಲ್ಲಿ ವಾಹನ ದಟ್ಟಣೆಯನ್ನು ನಿರ್ವಹಿಸಲು "ಮಲ್ಟಿ–ಲೆವೆಲ್ ಪಾರ್ಕಿಂಗ್" ವ್ಯವಸ್ಥೆಯನ್ನು ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ನಿರ್ಮಿಸಲಾಗುವುದು.

75. ಆಳ ಸಮುದ್ರ ಮೀನುಗಾರಿಕೆಯನ್ನು ಪ್ರೋತ್ಸಾಹಿಸಲು ಪ್ರಸ್ತುತ ಇರುವ ಮೀನುಗಾರಿಕೆ ದೋಣಿಗಳ ಉದ್ದದ ಮಿತಿಯನ್ನು ಸಡಿಲಿಸಲು ಕ್ರಮವಹಿಸಲಾಗುವುದು.

**ಸಹಕಾರ**

76. 2024–25ನೇ ಸಾಲಿನಲ್ಲಿ 21.78 ಲಕ್ಷ ರೈತರಿಗೆ 18,960 ಕೋಟಿ ರೂ. ಕೃಷಿ ಸಾಲ ವಿತರಿಸಲಾಗಿದೆ. ರಿಯಾಯತಿ ಬಡ್ಡಿ ದರದಲ್ಲಿ ನೀಡುವ ಪುನರ್ಧನದ ಮಿತಿಯನ್ನು ನಬಾರ್ಡ್ ಶೇ.58ರಷ್ಟು ಕಡಿಮೆ ಮಾಡಿದ್ದರೂ ಸಹ, ನಿಗದಿತ ಗುರಿಯನ್ನು ಸಾಧಿಸಲು ನಾವು ಬದ್ಧರಾಗಿದ್ದೇವೆ. ಪ್ರಸಕ್ತ ಸಾಲಿನಲ್ಲಿ 37 ಲಕ್ಷ ರೈತರಿಗೆ 28,000 ಕೋಟಿ ರೂ. ಸಾಲವನ್ನು ವಿತರಿಸುವ ಗುರಿಯನ್ನು ಹೊಂದಲಾಗಿದೆ.

77. 2023–24ನೇ ಸಾಲಿನ ಬೆಳಗಾವಿ ಅಧಿವೇಶನದಲ್ಲಿ ಘೋಷಿಸಿದಂತೆ, ಡಿಸಿಸಿ (DCC) ಹಾಗೂ ಪಿಕಾರ್ಡ್ (PCARD) ಬ್ಯಾಂಕುಗಳಿಗೆ ಸಂಬಂಧಿಸಿದ ಮಧ್ಯಮಾವಧಿ ಮತ್ತು ದೀರ್ಘಾವಧಿ ಸುಸ್ತಿ ಸಾಲಗಳ ಮೇಲಿನ 240 ಕೋಟಿ ರೂ. ಬಡ್ಡಿಯನ್ನು ಮನ್ನಾ ಮಾಡಲಾಗಿದೆ.

78. ಯಶಸ್ವಿನಿ ಯೋಜನೆಯಡಿ ಇಲ್ಲಿಯವರೆಗೆ 700 ನೆಟ್‌ವರ್ಕ್ ಆಸ್ಪತ್ರೆಗಳು ನೋಂದಣಿಯಾಗಿದ್ದು, ಈ ಆಸ್ಪತ್ರೆಗಳಲ್ಲಿ ಇದುವರೆಗೂ ರಾಜ್ಯಾದ್ಯಂತ 59,000 ಫಲಾನುಭವಿಗಳು 103 ಕೋಟಿ ರೂ. ಮೊತ್ತದ ಚಿಕಿತ್ಸೆ ಪಡೆದಿರುತ್ತಾರೆ.

79. ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ (PACS) ಕೇಂದ್ರ ಪುರಸ್ಕೃತ ಗಣಕೀಕರಣ ಯೋಜನೆಯಡಿ 93 ಕೋಟಿ ರೂ.ಗಳಷ್ಟು

ಬಿಡುಗಡೆ ಮಾಡಿ, ರಾಜ್ಯದಲ್ಲಿ 110 ಸಂಘಗಳ ಗಣಕೀಕರಣವನ್ನು ಪೂರ್ಣಗೊಳಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ, 3,000 ಸಂಘಗಳನ್ನು ಸಂಪೂರ್ಣವಾಗಿ ಗಣಕೀಕರಣಗೊಳಿಸಲು ಉದ್ದೇಶಿಸಲಾಗಿದೆ.

80. ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿಗೆ ಪ್ರತಿ ಕ್ವಿಂಟಾಲ್‌ಗೆ 7,550 ರೂ. ಜೊತೆಗೆ ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿ ಪ್ರೋತ್ಸಾಹಧನ 450 ರೂ.ಗಳಂತೆ ಒಟ್ಟು 138 ಕೋಟಿ ರೂ. ನೀಡಲು ತೀರ್ಮಾನಿಸಲಾಗಿದೆ. ಇದರಿಂದ, ತೊಗರಿ ಬೆಳೆಯುವ ಪ್ರಮುಖ ಜಿಲ್ಲೆಗಳಾದ ಕಲಬುರಗಿ, ಬೀದರ್, ಯಾದಗಿರಿ, ವಿಜಯಪುರ, ಬಾಗಲಕೋಟೆ, ರಾಯಚೂರು, ಕೊಪ್ಪಳ, ಕೋಲಾರ, ಚಿತ್ರದುರ್ಗ ಹಾಗೂ ಚಿಕ್ಕಬಳ್ಳಾಪುರ ಭಾಗದ ರೈತರಿಗೆ ಅನುಕೂಲವಾಗಲಿದೆ.

81. ಸಹಕಾರ ಇಲಾಖೆಯಲ್ಲಿ ಕಾರ್ಯಕ್ಷಮತೆ, ಪಾರದರ್ಶಕತೆ ಹಾಗೂ ಜನಸ್ನೇಹಿ ಸೇವೆಗಳನ್ನು ನೀಡಲು ಈ ಕೆಳಕಂಡ ಸುಧಾರಣಾ ಕ್ರಮಗಳನ್ನು ಜಾರಿಗೆ ತರಲಾಗುವುದು:

i) ರಾಜ್ಯದ ಎಲ್ಲಾ ನೊಂದಾಯಿತ ಗೃಹ ನಿರ್ಮಾಣ ಸಹಕಾರ ಸಂಘಗಳ ಮಾಹಿತಿಯನ್ನು ಕರ್ನಾಟಕ ರಾಜ್ಯ ಸಹಕಾರ ವಸತಿ ಮಹಾಮಂಡಳದ ವತಿಯಿಂದ ಆನ್‌ಲೈನ್‌ನಲ್ಲಿ ಅಳವಡಿಸಲಾಗುವುದು.

ii) ಠೇವಣಿದಾರರ ಹಿತಾಸಕ್ತಿಯನ್ನು ಕಾಪಾಡಲು ಹಾಗೂ ಅವ್ಯವಹಾರವನ್ನು ತಡೆಯಲು ಸಹಾಯವಾಣಿಯನ್ನು ಪ್ರಾರಂಭಿಸಲಾಗುವುದು.

iii) ಸಹಕಾರ ಸಂಘಗಳ ಲೆಕ್ಕ ಪರಿಶೋಧನೆ ವರದಿಗಳನ್ನು ಡಿಜಿಟಲೀಕರಣಗೊಳಿಸಲಾಗುವುದು.

82. ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಅಪೂರ್ಣಗೊಂಡಿರುವ ಉಗ್ರಾಣಗಳ ನಿರ್ಮಾಣ ಹಾಗೂ ಮೂಲಸೌಕರ್ಯ ಕಾಮಗಾರಿಗಳನ್ನು ಪೂರ್ಣಗೊಳಿಸಲು 376 ಕೋಟಿ ರೂ. ಸಹಾಯಾನುದಾನವನ್ನು ಹಿಂದಿನ ಆಯವ್ಯಯದಲ್ಲಿ ಘೋಷಿಸಿದ್ದೇನೆ. ಅದರಂತೆ, ಈಗಾಗಲೇ 329 ಕೋಟಿ ರೂ. ಬಿಡುಗಡೆಗೊಳಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ, ಬಾಕಿ ಇರುವ 47 ಕೋಟಿ ರೂ. ಮೊತ್ತವನ್ನು ಒದಗಿಸಲಾಗುವುದು.

83. ರಾಜ್ಯದ ಎಲ್ಲಾ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಪರವಾನಿಗೆ ಪಡೆದು ಕಾರ್ಯನಿರ್ವಹಿಸುತ್ತಿರುವ ಶ್ರಮಿಕರು ಮೃತರಾದಾಗ ಅವರ ವಾರಸುದಾರರಿಗೆ ಒಂದು ಲಕ್ಷ ರೂ. ವಿಮಾ ಮೊತ್ತವನ್ನು ನೀಡಲಾಗುತ್ತಿದ್ದು, ಸದರಿ ವಿಮಾ ಮೊತ್ತವನ್ನು ಐದು ಲಕ್ಷ ರೂ.ಗಳಿಗೆ ಹೆಚ್ಚಿಸಲಾಗುವುದು.

84. ಬೆಂಗಳೂರಿನಲ್ಲಿರುವ ಮಾರುಕಟ್ಟೆ ಸಮಿತಿಗಳಲ್ಲಿ ವಾಹನಗಳ ದಟ್ಟಣೆ ಹೆಚ್ಚಾಗಿರುವುದರಿಂದ ಬೆಂಗಳೂರಿನ ಹೊರವಲಯದಲ್ಲಿ ಹೊಸ Satellite Market ಅನ್ನು ಸ್ಥಾಪಿಸಲಾಗುವುದು.

85. ಕೊಪ್ಪಳ ಜಿಲ್ಲೆಯ ಬೂದುಗುಂಪ ಗ್ರಾಮದಲ್ಲಿ ಕುರಿ ಮತ್ತು ಮೇಕೆ ಮಾರುಕಟ್ಟೆಯನ್ನು KKRDB ವತಿಯಿಂದ 25 ಕೋಟಿ ರೂ. ವೆಚ್ಚದಲ್ಲಿ ಅಗತ್ಯ ಮೂಲಸೌಲಭ್ಯಗಳೊಂದಿಗೆ ಸ್ಥಾಪಿಸಲಾಗುವುದು.

86. ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೈನುಗಾರಿಕೆಯನ್ನು ಉತ್ತೇಜಿಸಲು 10 ಕೋಟಿ ರೂ. ಅನುದಾನವನ್ನು ಪ್ರಥಮ ಹಂತದಲ್ಲಿ ನೀಡಲಾಗುವುದು. ಕಲಬುರಗಿಯಲ್ಲಿ ನೂತನ ಮೆಗಾ ಡೈರಿಯನ್ನು ಪ್ರಾರಂಭಿಸಲು KKRDB ವತಿಯಿಂದ 50 ಕೋಟಿ ರೂ. ಅನುದಾನ ಒದಗಿಸಲಾಗುವುದು.

87. KKRDB ವತಿಯಿಂದ ಕಲಬುರಗಿಯಲ್ಲಿ ಪ್ರಾದೇಶಿಕ ಸಹಕಾರ ಭವನವನ್ನು 10 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿದೆ.

88. KKRDB ಸಹಯೋಗದಿಂದ ಗ್ರಾಮೀಣ ಉಗ್ರಾಣಗಳನ್ನು 60 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ ಮಾಡಲಾಗುವುದು.

89. ಕುರಿ ಮತ್ತು ಮೇಕೆ ಸಾಕಾಣಿಕೆದಾರರಿಗೆ ಅನುವಾಗುವಂತೆ ಬೆಂಗಳೂರಿನಲ್ಲಿ ಸುಸಜ್ಜಿತ ಕುರಿ ಮತ್ತು ಮೇಕೆ ಮಾರುಕಟ್ಟೆಯನ್ನು ಪ್ರಾರಂಭಿಸಲಾಗುವುದು.

90. ಚಿಕ್ಕಬಳ್ಳಾಪುರದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ವತಿಯಿಂದ ಅಂತಾರಾಷ್ಟ್ರೀಯ ಮಟ್ಟದ ಹೈಟೆಕ್ ಹೂವಿನ ಮಾರುಕಟ್ಟೆಯನ್ನು ಹಾಗೂ ಕೆ.ಜಿ.ಎಫ್. ನಲ್ಲಿ ರೈತರ ಆಧುನಿಕ ಮಾರುಕಟ್ಟೆಯನ್ನು ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸಲಾಗುವುದು.

**ಜಲಸಂಪನ್ಮೂಲ**

**ಹಾ! ಗಂಟಲು ಒಣಗಿದೆ!!**
**ತಕೋ ಈ ಬಂಗಾರದ ಸರಪಳಿ**
**ಬದಲಾಗಿ**
**ಒಂದು ಗುಟುಕು ನೀರು ಕೊಡು**

- **ವಿಲ್ಸನ್ ಕಟೀಲ್**

91. ನೀರಾವರಿ ಯೋಜನೆಗಳಡಿ ನೀರಿನ ಬಳಕೆಯಲ್ಲಿ ದಕ್ಷತೆ ಹೆಚ್ಚಿಸಲು ಹಾಗೂ ನೀರು ನಿರ್ವಹಣೆಯಲ್ಲಿ ಸುಧಾರಣೆ ತರುವ ನಿಟ್ಟಿನಲ್ಲಿ ಕರ್ನಾಟಕ ನೀರಾವರಿ (ತಿದ್ದುಪಡಿ) ವಿಧೇಯಕ 2024ನ್ನು ತಿದ್ದುಪಡಿ ಮಾಡಿ ಜಾರಿಗೊಳಿಸಲಾಗಿದೆ.

92. ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯಡಿ ನೀರನ್ನು ಮೇಲೆತ್ತಿ ಗುರುತ್ವಾ ಕಾಲುವೆಯ ಸರಪಳಿ: 32.5 ಕಿ.ಮೀ ವರೆಗೆ ಹರಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಎಲ್ಲಾ ಎಂಟು ವಿಯರ್ ಗಳಲ್ಲಿ ಲಭ್ಯವಾಗುವ ನೀರನ್ನು ಗುರುತ್ವಾ ಕಾಲುವೆಯ ಸರಪಳಿ: 241 ಕಿ.ಮೀ ವರೆಗೆ ಹರಿಸಲಾಗುವುದು. ಈ ಯೋಜನೆಯನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಲು ಕ್ರಮಕೈಗೊಳ್ಳಲಾಗುವುದು.

93. ಭದ್ರಾ ಮೇಲ್ದಂಡೆ ಯೋಜನೆಗೆ 2023–24ರ ಕೇಂದ್ರ ಸರ್ಕಾರದ ಆಯವ್ಯಯದಲ್ಲಿ ಘೋಷಿಸಿದ 5,300 ಕೋಟಿ ರೂ. ಅನುದಾನ ಇನ್ನೂ ಬಿಡುಗಡೆಯಾಗಿರುವುದಿಲ್ಲ. ಆದರೂ, ರಾಜ್ಯ ಸರ್ಕಾರವು ಅಗತ್ಯ ಅನುದಾನವನ್ನು ಒದಗಿಸಿ ಈ ಯೋಜನೆಯನ್ನು ಪೂರ್ಣಗೊಳಿಸಲು ಕ್ರಮವಹಿಸುತ್ತಿದೆ. ತರೀಕೆರೆ ಏತ ನೀರಾವರಿ ಯೋಜನೆಯಡಿ 79 ಕೆರೆಗಳನ್ನು ತುಂಬಿಸುವ ಮೂಲಕ 49,790 ಎಕರೆ ಸೂಕ್ಷ್ಮ ನೀರಾವರಿ ಸಾಮರ್ಥ್ಯ ಕಲ್ಪಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ 2,611 ಕೋಟಿ ರೂ. ಅಂದಾಜು ಮೊತ್ತದ ಚಿತ್ರದುರ್ಗ ಶಾಖಾ ಕಾಲುವೆ ಕಾಮಗಾರಿಗಳನ್ನು ಪೂರ್ಣಗೊಳಿಸುವ ಮೂಲಕ ಹೊಸದುರ್ಗ, ಹೊಳಲ್ಕೆರೆ, ಜಗಳೂರು, ಮೊಳಕಾಲ್ಮೂರು, ಚಳ್ಳಕೆರೆ ಮತ್ತು ಪಾವಗಡ ತಾಲ್ಲೂಕುಗಳಲ್ಲಿನ 30 ಕೆರೆಗಳನ್ನು ತುಂಬಿಸಿ

ಒಂದು ಲಕ್ಷದ ಎಪ್ಪತ್ತೇಳು ಸಾವಿರ ಎಕರೆ ಪ್ರದೇಶಕ್ಕೆ ಸೂಕ್ಷ್ಮ ನೀರಾವರಿ ಸಾಮರ್ಥ್ಯವನ್ನು ಕಲ್ಪಿಸಲಾಗುವುದು.

94. ಕೃಷ್ಣ ಮೇಲ್ದಂಡೆ ಯೋಜನೆ ಹಂತ–3ರ ವ್ಯಾಪ್ತಿಯ ಆಲಮಟ್ಟಿ ಅಣೆಕಟ್ಟಿನ ಗೇಟನ್ನು 524.256 ಮೀಟರ್‌ವರೆಗೆ ಎತ್ತರಿಸುವುದರಿಂದ ಮುಳುಗಡೆಯಾಗುವ ಜಮೀನುಗಳನ್ನು ಒಪ್ಪಂದ ಐತೀರ್ಪಿನ (Consent Award) ಮುಖಾಂತರ ಒಂದೇ ಹಂತದಲ್ಲಿ ಭೂಸ್ವಾಧೀನಪಡಿಸಿಕೊಂಡು ರೈತರಿಗೆ ಪರಿಹಾರ ವಿತರಣೆಗೆ ಕ್ರಮವಹಿಸಲಾಗುವುದು. ಅಲ್ಲದೇ, 2.01 ಲಕ್ಷ ಎಕರೆ ನೀರಾವರಿ ಸಾಮರ್ಥ್ಯ ಕಲ್ಪಿಸುವ ಬಾಕಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗುವುದು.

95. ಮೇಕೆದಾಟು ಸಮತೋಲನ ಜಲಾಶಯ ಯೋಜನೆಯ ಪೂರ್ವ ಸಿದ್ಧತಾ ಕಾರ್ಯ ಅಂತಿಮಗೊಂಡಿದ್ದು, ಕೇಂದ್ರ ಸರ್ಕಾರದ ಸಕ್ಷಮ ಪ್ರಾಧಿಕಾರಗಳ ತೀರುವಳಿ ದೊರೆತ ಕೂಡಲೇ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು.

96. ಕಳಸಾ–ಬಂಡೂರಾ ನಾಲಾ ತಿರುವು ಯೋಜನೆಯಡಿ 3.9 ಟಿಎಂಸಿ ನೀರಿನ ಬಳಕೆಗಾಗಿ ಕೇಂದ್ರ ಸರ್ಕಾರದಿಂದ ತೀರುವಳಿಗಳನ್ನು ನಿರೀಕ್ಷಿಸಿ ಈಗಾಗಲೇ ಯೋಜನಾ ಕಾಮಗಾರಿಗಳನ್ನು ಕೆಲವು ಷರತ್ತುಗಳೊಂದಿಗೆ ಗುತ್ತಿಗೆ ವಹಿಸಲಾಗಿದೆ. ಕೇಂದ್ರ ಸರ್ಕಾರದ

ಅನುಮೋದನೆ ದೊರೆತ ಕೂಡಲೇ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು.

97. ಕೃಷ್ಣಾ ಕಣಿವೆ, ಕಾವೇರಿ ಕಣಿವೆ ಹಾಗೂ ಇತರ ನದಿಗಳ ಕಣಿವೆಯ ವಿವಿಧ ಯೋಜನೆಗಳಡಿ ಬಾಕಿ ಇರುವ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಪ್ರಸಕ್ತ ಸಾಲಿನಲ್ಲಿ ಪೂರ್ಣಗೊಳಿಸಲು ಕ್ರಮವಹಿಸಲಾಗುವುದು. (ಯೋಜನೆಯ ವಿವರಗಳನ್ನು ಅನುಬಂಧ-1 ರಲ್ಲಿ ಲಗತ್ತಿಸಿದೆ)

98. ಕೃಷ್ಣಾ ಕಣಿವೆಯ ಅನುಷ್ಠಾನ ಹಂತದಲ್ಲಿರುವ ಆಧುನೀಕರಣ ಹಾಗೂ ಏತ ನೀರಾವರಿ ಯೋಜನೆಗಳನ್ನು PMKSY – AIBP ಯೋಜನೆಯಡಿ ಕೇಂದ್ರ ಸರ್ಕಾರದ ಸಹಾಯಧನ ಪಡೆಯಲು ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು. (ಯೋಜನೆಯ ವಿವರಗಳನ್ನು ಅನುಬಂಧ-2 ರಲ್ಲಿ ಲಗತ್ತಿಸಿದೆ)

99. ಜಲಸಂಪನ್ಮೂಲ ಇಲಾಖೆಯಲ್ಲಿ ಕಾಮಗಾರಿಗಳ ಅಂದಾಜು ತಯಾರಿಕೆಯಲ್ಲಿ ಏಕರೂಪದ ತಾಂತ್ರಿಕ ಮಾನದಂಡಗಳನ್ನು ಜಾರಿಗೊಳಿಸಲಾಗುವುದು.

100. ತುಂಗಭದ್ರಾ ಜಲಾಶಯದಲ್ಲಿ ತುಂಬಿರುವ ಹೂಳಿನಿಂದಾಗಿ ನೀರಿನ ಸಂಗ್ರಹಣೆಯಲ್ಲಿ ಆಗಿರುವ ಕೊರತೆಯನ್ನು ಸರಿದೂಗಿಸಲು ಕೊಪ್ಪಳ ಜಿಲ್ಲೆಯಲ್ಲಿ ನವಲಿ ಸಮತೋಲನಾ ಜಲಾಶಯ ನಿರ್ಮಾಣವೂ

ಸೇರಿದಂತೆ ಪರ್ಯಾಯ ಮಾರ್ಗೋಪಾಯಗಳ ಬಗ್ಗೆ ಆಂಧ್ರ ಪ್ರದೇಶ ಮತ್ತು ತೆಲಂಗಾಣ ರಾಜ್ಯಗಳೊಂದಿಗೆ ಚರ್ಚಿಸಿ ಅಂತಿಮಗೊಳಿಸಲಾಗುವುದು.

101. ರಾಜ್ಯದ ಪ್ರಮುಖ ಅಣೆಕಟ್ಟು ಗೇಟುಗಳ ಸದೃಢತೆಯನ್ನು ತಾಂತ್ರಿಕ ಪರಿಶೀಲನೆಗೊಳಪಡಿಸಿ ಅಗತ್ಯ ಕಂಡುಬಂದಲ್ಲಿ ಗೇಟುಗಳನ್ನು ದುರಸ್ತಿಗೊಳಿಸಲು ಮತ್ತು ಬದಲಿಸಲು ಆದ್ಯತೆಯ ಮೇಲೆ ಕ್ರಮವಹಿಸಲಾಗುವುದು.

**ಸಣ್ಣ ನೀರಾವರಿ**

102. ಎತ್ತಿನಹೊಳೆಯ ಯೋಜನೆಯಿಂದ ತುಮಕೂರು ಜಿಲ್ಲೆಯ ಮಧುಗಿರಿ ತಾಲ್ಲೂಕಿನ 45 ಕೆರೆಗಳನ್ನು ಹಾಗೂ ಕೊರಟಗೆರೆ ತಾಲ್ಲೂಕಿನ 62 ಕೆರೆಗಳನ್ನು ತುಂಬಿಸಿ ಅಂತರ್ಜಲ ಹೆಚ್ಚಿಸುವ ಯೋಜನೆಯನ್ನು 553 ಕೋಟಿ ರೂ. ಮೊತ್ತದಲ್ಲಿ ಅನುಷ್ಠಾನಗೊಳಿಸಲು ಕ್ರಮವಹಿಸಲಾಗುವುದು.

103. ಪ್ರಗತಿಯಲ್ಲಿರುವ ಈ ಕೆಳಗಿನ ಯೋಜನೆಗಳನ್ನು ಪ್ರಸಕ್ತ ಸಾಲಿನಲ್ಲಿ ಪೂರ್ಣಗೊಳಿಸಲಾಗುವುದು.

   i) 1,080 ಕೋಟಿ ರೂ. ಮೊತ್ತದ ವೃಷಭಾವತಿ ವ್ಯಾಲಿ ಮೊದಲನೇ ಹಂತದ 70 ಕೆರೆ ತುಂಬಿಸುವ ಯೋಜನೆ;

ii) 70 ಕೋಟಿ ರೂ. ಮೊತ್ತದ ಹೆಚ್.ಎನ್ ವ್ಯಾಲಿ 2ನೇ ಹಂತದ ಯೋಜನೆಯಡಿ 24 ಕೆರೆ ತುಂಬಿಸುವ ಯೋಜನೆ;

iii) 93.50 ಕೋಟಿ ರೂ. ಮೊತ್ತದ ಬೆಂಗಳೂರು ಪೂರ್ವ ತಾಲ್ಲೂಕಿನ 18 ಕೆರೆ ತುಂಬಿಸುವ ಯೋಜನೆ ಹಾಗೂ ಇತರೆ ಯೋಜನೆಗಳು (ಯೋಜನೆಯ ವಿವರಗಳನ್ನು ಅನುಬಂಧ–3 ರಲ್ಲಿ ಲಗತ್ತಿಸಿದೆ)

104. ಪ್ರಸಕ್ತ ಸಾಲಿನಲ್ಲಿ ರಾಜ್ಯಾದ್ಯಂತ ಸಣ್ಣ ನೀರಾವರಿ ಯೋಜನೆಗಳಾದ ಕೆರೆಗಳ ಆಧುನೀಕರಣ, ಅಣೆಕಟ್ಟು ಮತ್ತು ಪಿಕಪ್, ಕಿಂಡಿ ಅಣೆಕಟ್ಟು, ಏತ ನೀರಾವರಿ, ನಿಷ್ಕ್ರಿಯ ಯೋಜನೆಗಳ ಪುನರುಜ್ಜೀವನ ಇತ್ಯಾದಿ ಯೋಜನೆಗಳಡಿ ಒಟ್ಟಾರೆ 2,000 ಕೋಟಿ ರೂ. ಮೊತ್ತದ ಹೊಸ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು.

**ಶಾಲಾ ಶಿಕ್ಷಣ**

**ಶೋಷಿತರ ಬಹಿಷ್ಕೃತರ ಕಣ್ಣೀರನ್ನು ತೊಡೆದು ಹಾಕು,**
**ಜಾತಿವ್ಯವಸ್ಥೆ ಸಂಕೋಲೆಯನ್ನು ಮುರಿದು ಶಿಕ್ಷಣ ಪಡೆದುಕೋ…..**
**– ಸಾವಿತ್ರಿಬಾಯಿ ಫುಲೆ**

105. ಪೂರ್ವ ಪ್ರಾಥಮಿಕದಿಂದ ಪದವಿ ಪೂರ್ವ ಹಂತದವರೆಗೂ ಒಂದೇ ಸೂರಿನಡಿ ಗುಣಮಟ್ಟದ ಶಿಕ್ಷಣ ನೀಡಲು ನಮ್ಮ ಸರ್ಕಾರದ ಹಿಂದಿನ ಅವಧಿಯಲ್ಲಿ ಪ್ರಾರಂಭಿಸಲಾಗಿರುವ ಕರ್ನಾಟಕ ಪಬ್ಲಿಕ್

ಶಾಲೆಗಳನ್ನು ವಿಸ್ತರಿಸಲು ಉದ್ದೇಶಿಸಿದೆ. ಏಷಿಯನ್ ಡೆವಲಪ್‌ಮೆಂಟ್ ಬ್ಯಾಂಕ್ ನೆರವಿನೊಂದಿಗೆ 2,500 ಕೋಟಿ ರೂ. ವೆಚ್ಚದಲ್ಲಿ 500 ಹೊಸ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲಾಗುವುದು.

106. ಶಾಲಾ ಮಕ್ಕಳ ಅಪೌಷ್ಟಿಕತೆ ನಿವಾರಿಸುವ ನಿಟ್ಟಿನಲ್ಲಿ ಪ್ರಸ್ತುತ 53 ಲಕ್ಷ ಮಕ್ಕಳಿಗೆ ವಾರದಲ್ಲಿ ಎರಡು ದಿನ ವಿತರಿಸಲಾಗುತ್ತಿರುವ ಮೊಟ್ಟೆ/ಬಾಳೆಹಣ್ಣನ್ನು ಅಜೀಮ್ ಪ್ರೇಮ್‌ಜಿ ಫೌಂಡೇಶನ್ ಸಹಯೋಗದೊಂದಿಗೆ 1,500 ಕೋಟಿ ರೂ. ವೆಚ್ಚದಲ್ಲಿ ವಾರದಲ್ಲಿ ಆರು ದಿನಕ್ಕೆ ವಿಸ್ತರಿಸಲಾಗಿದೆ. ಈ ಯೋಜನೆಯನ್ನು 2025–26ನೇ ಸಾಲಿನಲ್ಲಿಯೂ ಮುಂದುವರೆಸಲಾಗುವುದು.

107. ಶಾಲಾ ಮಕ್ಕಳಿಗೆ ಶ್ರೀ ಸತ್ಯ ಸಾಯಿ ಅನ್ನಪೂರ್ಣ ಟ್ರಸ್ಟ್ ವತಿಯಿಂದ ಪ್ರಸ್ತುತ ವಾರದಲ್ಲಿ ಮೂರು ದಿನ ಸಾಯಿ ಶ್ಯೂರ್ ರಾಗಿ ಹೆಲ್ತ್ ಮಿಕ್ಸ್ ಪುಡಿಯನ್ನು ಬಿಸಿ ಹಾಲಿನೊಂದಿಗೆ ಮಿಶ್ರಣ ಮಾಡಿ ವಿತರಿಸಲಾಗುತ್ತಿದೆ. ಈ ಕಾರ್ಯಕ್ರಮವನ್ನು ವಾರದ ಐದು ದಿನಗಳಿಗೆ ವಿಸ್ತರಿಸಲಾಗುವುದು. ಒಟ್ಟಾರೆ 100 ಕೋಟಿ ರೂ. ವೆಚ್ಚದ ಈ ಯೋಜನೆಯ ಶೇ.25 ರಷ್ಟು ವೆಚ್ಚವನ್ನು ರಾಜ್ಯ ಸರ್ಕಾರದಿಂದ ಭರಿಸಲಾಗುವುದು.

108. ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಅತಿಥಿ ಶಿಕ್ಷಕರು ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ನೀಡಲಾಗುತ್ತಿರುವ ಮಾಸಿಕ ಗೌರವಧನವನ್ನು ತಲಾ 2,000 ರೂ. ಹೆಚ್ಚಿಸಲಾಗುವುದು.

109. ಸರ್ಕಾರಿ ಶಾಲೆಗಳಲ್ಲಿ ಬಿಸಿಯೂಟ ತಯಾರಿಸುವ ಸಿಬ್ಬಂದಿಗೆ ನೀಡುತ್ತಿರುವ ಮಾಸಿಕ ಗೌರವಧನವನ್ನು ತಲಾ 1,000 ರೂ. ಹೆಚ್ಚಿಸಲಾಗುವುದು.

110. ರಾಜ್ಯದ ಅರ್ಹ 100 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು ಪ್ರೌಢ ಶಾಲೆಗಳನ್ನಾಗಿ ಹಾಗೂ 50 ಪ್ರೌಢಶಾಲೆಗಳನ್ನು ಪದವಿ ಪೂರ್ವ ಕಾಲೇಜುಗಳನ್ನಾಗಿ ಉನ್ನತೀಕರಿಸಲಾಗುವುದು.

111. LKG ಯಿಂದ ದ್ವಿತೀಯ ಪಿ.ಯು.ಸಿ ವರೆಗಿನ ಎಲ್ಲಾ ತರಗತಿಗಳ ವಿದ್ಯಾರ್ಥಿಗಳು, ಆಯಾ ತರಗತಿಗೆ ತಕ್ಕಂತೆ ಕಲಿಕೆಯ ಮಟ್ಟವನ್ನು ಹೊಂದುವ ನಿಟ್ಟಿನಲ್ಲಿ ಮೂರು ವರ್ಷಗಳ ಮಹತ್ವಾಕಾಂಕ್ಷಿ ಕಾರ್ಯಕ್ರಮವನ್ನು ಜಾರಿಗೊಳಿಸಲಾಗುವುದು. ಈ ಮೂಲಕ SSLC ಮತ್ತು PUC ಪರೀಕ್ಷೆಗಳ ಫಲಿತಾಂಶದಲ್ಲಿ ಸುಧಾರಣೆ ತರಲಾಗುವುದು. ಇದಕ್ಕಾಗಿ, ಈ ಕೆಳಕಂಡ ಉಪಕ್ರಮಗಳನ್ನು ಕೈಗೊಳ್ಳಲಾಗುವುದು:

i) ಪ್ರಸ್ತುತ 2,619 ಸರ್ಕಾರಿ ಶಾಲೆಗಳ ಪೂರ್ವ ಪ್ರಾಥಮಿಕ ತರಗತಿಗಳಿಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಒಟ್ಟು 90,195 ವಿದ್ಯಾರ್ಥಿಗಳು ದಾಖಲಾಗಿರುತ್ತಾರೆ. ಈ ಯೋಜನೆಯನ್ನು 70 ಕೋಟಿ ರೂ. ವೆಚ್ಚದಲ್ಲಿ ಒಟ್ಟಾರೆ 5,000 ಶಾಲೆಗಳಿಗೆ ವಿಸ್ತರಿಸಲಾಗುವುದು.

ii) 'ಕಲಿಕಾ ಚಿಲುಮೆ' ಕಾರ್ಯಕ್ರಮದಡಿ ಒಂದರಿಂದ ಐದನೇ ತರಗತಿವರೆಗಿನ ವಿದ್ಯಾರ್ಥಿಗಳಿಗೆ ಸಂತಸದಾಯಕ ಕಲಿಕಾ ಅನುಭವ ಒದಗಿಸುವುದು.

iii) 'ಗಣಿತ ಗಣಕ' ಕಾರ್ಯಕ್ರಮದಡಿ 3 ರಿಂದ 5ನೇ ತರಗತಿ ವಿದ್ಯಾರ್ಥಿಗಳಿಗೆ ಫೋನ್ ಮೂಲಕ ವೈಯಕ್ತಿಕ ಬೋಧನೆಯೊಂದಿಗೆ ಬುನಾದಿ ಗಣಿತ ಕೌಶಲ್ಯವನ್ನು ಅಭಿವೃದ್ಧಿಪಡಿಸಿ ರಾಜ್ಯಾದ್ಯಂತ ವಿಸ್ತರಿಸುವುದು.

iv) 'ಓದು ಕರ್ನಾಟಕ' ಯೋಜನೆಯಡಿ 4 ಮತ್ತು 5ನೇ ತರಗತಿ ವಿದ್ಯಾರ್ಥಿಗಳಿಗೆ ಬುನಾದಿ ಸಾಕ್ಷರತೆ ಹಾಗೂ ಸಂಖ್ಯಾಜ್ಞಾನದ ಕೌಶಲ್ಯಗಳನ್ನು ಅಭಿವೃದ್ಧಿಪಡಿಸುವುದು.

v) ಸರ್ಕಾರಿ ಶಾಲೆಗಳಲ್ಲಿ ಅತೀ ಕಡಿಮೆ ಕಲಿಕಾ ಸ್ತರದಲ್ಲಿರುವ 6 ರಿಂದ 10ನೇ ತರಗತಿ ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯ

ಹೆಚ್ಚಿಸುವ 'ಮರುಸಿಂಚನ' ಕಾರ್ಯಕ್ರಮವನ್ನು ರಾಜ್ಯಾದ್ಯಂತ ವಿಸ್ತರಿಸುವುದು.

vi) ಕನ್ನಡ ಮತ್ತು ಆಂಗ್ಲ ಭಾಷೆಯನ್ನು ಆತ್ಮವಿಶ್ವಾಸದಿಂದ ಓದಲು ಹಾಗೂ ಗಣಿತದ ಆರಂಭಿಕ ಸಾಮರ್ಥ್ಯಗಳನ್ನು ಗಳಿಸಲು Ek-Step ಸಂಸ್ಥೆಯ ಸಹಯೋಗದೊಂದಿಗೆ AI ಆಧಾರಿತ 'ಕಲಿಕಾದೀಪ' ಕಾರ್ಯಕ್ರಮವನ್ನು 2,000 ಶಾಲೆಗಳಿಗೆ ವಿಸ್ತರಿಸುವುದು.

vii) 'ಜ್ಞಾನಸೇತು' ಕಾರ್ಯಕ್ರಮದಡಿ ಸರ್ಕಾರಿ ಶಾಲೆಗಳಲ್ಲಿ ವಿಜ್ಞಾನ ಮತ್ತು ಗಣಿತ ವಿಷಯಗಳ ಬೋಧನಾ ವಿಧಾನದಲ್ಲಿ ನಾವೀನ್ಯತೆ ಅಳವಡಿಸಿ, ಖಾನ್ ಅಕಾಡೆಮಿ ಸಹಯೋಗದಲ್ಲಿ ಯೋಜನೆ ರೂಪಿಸಲಾಗುವುದು. ರಾಜ್ಯದ 5,000 ಸರ್ಕಾರಿ ಶಾಲೆಗಳ 20 ಲಕ್ಷ ವಿದ್ಯಾರ್ಥಿಗಳು ಹಾಗೂ 15,000 ಶಿಕ್ಷಕರು ಈ ಯೋಜನೆಯ ಪ್ರಯೋಜನ ಪಡೆಯಲಿದ್ದಾರೆ.

viii) ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ಕೋಡಿಂಗ್ ಕಲಿಕೆ ಪರಿಚಯಿಸಲು ಅಗಸ್ತ್ಯ ಫೌಂಡೇಶನ್ ಸಹಯೋಗದೊಂದಿಗೆ ಐ–ಕೋಡ್ ಲ್ಯಾಬ್ ಸ್ಥಾಪಿಸಲಾಗುವುದು. ಈ ನಿಟ್ಟಿನಲ್ಲಿ ಪ್ರಸಕ್ತ ವರ್ಷ ICT ಸೌಲಭ್ಯವಿರುವ ಆಯ್ದ 63 ಶಾಲೆಗಳನ್ನು ಹಬ್

ಗಳೆಂದು ಪರಿಗಣಿಸಿ 756 ಸ್ಟೋಕ್ ಶಾಲೆಗಳಿಗೆ ಅನುಕೂಲ ಕಲ್ಪಿಸುವುದು.

ix) 'ವಿದ್ಯಾವಿಜೇತ' ಕಾರ್ಯಕ್ರಮದಡಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ 25,000 ವಿದ್ಯಾರ್ಥಿಗಳಿಗೆ CET/NEET/JEE ತರಬೇತಿ ನೀಡಲಾಗಿದ್ದು, ಸದರಿ ಕಾರ್ಯಕ್ರಮವನ್ನು ಮುಂದುವರೆಸಲು 5 ಕೋಟಿ ರೂ. ಒದಗಿಸಲಾಗುವುದು.

112. 'ನಿರಂತರ' ಕಾರ್ಯಕ್ರಮದಡಿ Face Recognition ತಂತ್ರಜ್ಞಾನದ ಮೂಲಕ ಮಕ್ಕಳ ಹಾಜರಾತಿಯನ್ನು ಖಚಿತಪಡಿಸುವ ವ್ಯವಸ್ಥೆಯನ್ನು ಜಾರಿಗೊಳಿಸಲಾಗುವುದು.

113. ವಿದ್ಯಾರ್ಥಿಗಳಲ್ಲಿ ಮಾತೃಭಾಷೆಯ ಜೊತೆಗೆ ಆಂಗ್ಲಭಾಷೆಯ ಕೌಶಲ್ಯ ಬೆಳೆಸಲು ರಾಜ್ಯದ 4,000 ಸರ್ಕಾರಿ ಶಾಲೆಗಳಲ್ಲಿ ದ್ವಿಭಾಷಾ ವಿಭಾಗವನ್ನು ಪ್ರಾರಂಭಿಸಲಾಗುವುದು.

114. ರಾಜ್ಯದ 2,710 ಸರ್ಕಾರಿ ಪ್ರೌಢಶಾಲೆಗಳಲ್ಲಿ ಈಗಾಗಲೇ ಕಂಪ್ಯೂಟರ್ ಮತ್ತು ವಿಜ್ಞಾನ ಪ್ರಯೋಗಾಲಯಗಳನ್ನು ಸ್ಥಾಪಿಸಲಾಗಿದ್ದು, ಪ್ರಸಕ್ತ ಸಾಲಿನಲ್ಲಿ ಇನ್ನೂ 500 ಶಾಲೆಗಳಿಗೆ ಈ ಸೌಲಭ್ಯ ವಿಸ್ತರಿಸಲಾಗುವುದು.

115. ಪ್ರೌಢಶಾಲಾ / ಪದವಿ ಪೂರ್ವ ಕಾಲೇಜು ಹಂತದಲ್ಲಿಯೇ ವಿದ್ಯಾರ್ಥಿಗಳಿಗೆ ಕೌಶಲ್ಯ ತರಬೇತಿ ನೀಡಲು Skill at School ಕಾರ್ಯಕ್ರಮ ರೂಪಿಸಲಾಗಿದೆ. ಇದರಡಿ, ಆಯ್ದ 7,500 ವಿದ್ಯಾರ್ಥಿಗಳಿಗೆ ಉನ್ನತೀಕರಿಸಿದ 150 ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ತರಬೇತಿ ನೀಡಲಾಗುವುದು.

116. ಸರ್ಕಾರಿ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಹೆಚ್ಚುವರಿ ಕೊಠಡಿ, ಶೌಚಾಲಯಗಳ ನಿರ್ಮಾಣ ಮತ್ತು ದುರಸ್ತಿ ಕಾರ್ಯಗಳಿಗೆ 725 ಕೋಟಿ ರೂ. ಹಾಗೂ ಅಗತ್ಯ ಪೀಠೋಪಕರಣಗಳನ್ನು ಒದಗಿಸಲು 50 ಕೋಟಿ ರೂ. ನೀಡಲಾಗಿದೆ.

117. ಮಧ್ಯಾಹ್ನ ಉಪಹಾರ ಯೋಜನೆಯಡಿ ರಾಜ್ಯದ 16,347 ಶಾಲೆಗಳ ಅಡುಗೆಮನೆ ಆಧುನೀಕರಣ ಕಾರ್ಯ ಮತ್ತು ಹೊಸ ಪಾತ್ರೆ ಪರಿಕರಗಳನ್ನು ಒದಗಿಸಲು 46 ಕೋಟಿ ರೂ. ವೆಚ್ಚ ಮಾಡಲಾಗುವುದು.

118. ಕಲ್ಯಾಣ ಕರ್ನಾಟಕ ಭಾಗದಲ್ಲಿ ಅಕ್ಷರ ಆವಿಷ್ಕಾರ ಯೋಜನೆ ಅಡಿ 200 ಕೋಟಿ ರೂ. ವೆಚ್ಚದಲ್ಲಿ ಆಯ್ದ 50 ಶಾಲೆಗಳನ್ನು ಸುಸಜ್ಜಿತ ಕೆ.ಪಿ.ಎಸ್. ಶಾಲೆಗಳನ್ನಾಗಿ ಉನ್ನತೀಕರಿಸಲಾಗುವುದು.

119. ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ 5,267 ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು. ಮುಂದುವರೆದು, ಇಲಾಖೆಯಲ್ಲಿ ಇನ್ನೂ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ತರ್ಕಬದ್ಧಗೊಳಿಸಿ 5,000 ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುವುದು.

120. ದಕ್ಷಿಣ ಕನ್ನಡ ಜಿಲ್ಲೆಯ ಪಿಲಿಕುಳದಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಅಂತಾರಾಷ್ಟ್ರೀಯ ಯುವಕರ ತರಬೇತಿ ಕೇಂದ್ರದ ಅಭಿವೃದ್ಧಿಗಾಗಿ ಎರಡು ಕೋಟಿ ರೂ. ಒದಗಿಸಲಾಗುವುದು.

**ಉನ್ನತ ಶಿಕ್ಷಣ**

121. ಗುಣಮಟ್ಟದ ಉನ್ನತ ಶಿಕ್ಷಣವನ್ನು ಒದಗಿಸಲು ರಾಜ್ಯದ ಪ್ರಥಮ ದರ್ಜೆ ಕಾಲೇಜುಗಳ ಬಲವರ್ಧನೆ, ಶಿಕ್ಷಣ ಸಂಸ್ಥೆಗಳಲ್ಲಿ ಉತ್ಕೃಷ್ಟತಾ ಕೇಂದ್ರಗಳ (Centre of Excellence) ಸ್ಥಾಪನೆ ಹಾಗೂ ಸಂಶೋಧನಾ ಸಾಮರ್ಥ್ಯ ಹೆಚ್ಚಿಸುವ ಉದ್ದೇಶಕ್ಕಾಗಿ ಮುಂದಿನ ನಾಲ್ಕು ವರ್ಷಗಳಲ್ಲಿ ವಿಶ್ವಬ್ಯಾಂಕ್ ನೆರವಿನೊಂದಿಗೆ 2,500 ಕೋಟಿ ರೂ. ಯೋಜನೆಯನ್ನು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ.

122. ಬೆಂಗಳೂರು ನಗರ ವಿಶ್ವವಿದ್ಯಾಲಯವನ್ನು ಡಾ॥ ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯ ಎಂದು ಮರುನಾಮಕರಣ ಮಾಡಲಾಗುವುದು. ಈ ವಿಶ್ವವಿದ್ಯಾಲಯವನ್ನು

ದೇಶದಲ್ಲಿ ಮಾದರಿಯನ್ನಾಗಿಸುವ ಉದ್ದೇಶದಿಂದ, ಸರ್ಕಾರಿ ಕಲಾ ಕಾಲೇಜು ಹಾಗೂ ಸರ್ಕಾರಿ ಆರ್.ಸಿ. ಕಾಲೇಜುಗಳನ್ನು ವಿಶ್ವವಿದ್ಯಾಲಯದ ಘಟಕ ಕಾಲೇಜುಗಳನ್ನಾಗಿ ಅಭಿವೃದ್ಧಿಪಡಿಸಲಾಗುವುದು.

123. ಮಹಿಳಾ ಉನ್ನತ ಶಿಕ್ಷಣದ ಬಲವರ್ಧನೆಗಾಗಿ 31 ಮಹಿಳಾ ಕಾಲೇಜುಗಳನ್ನು ಹಿಂದಿನ ವರ್ಷದಲ್ಲಿ ಉನ್ನತೀಕರಿಸಲು ಕ್ರಮ ಕೈಗೊಂಡಿದ್ದು, ಉಳಿದ 26 ಕಾಲೇಜುಗಳ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಲು 26 ಕೋಟಿ ರೂ. ಒದಗಿಸಲಾಗುವುದು.

124. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು, ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್‌ಗಳಲ್ಲಿ ಖಾಲಿಯಿರುವ 2,000 ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುವುದು.

125. ರಾಜ್ಯದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಪಾಲಿಟೆಕ್ನಿಕ್ ಸಂಸ್ಥೆಗಳು ಹಾಗೂ ಪದವಿ ಕಾಲೇಜುಗಳಿಗೆ ಒಟ್ಟಾರೆ 275 ಕೋಟಿ ರೂ. ವೆಚ್ಚದಲ್ಲಿ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಲಾಗುವುದು.

126. ಹೊಸದಾಗಿ ಪ್ರಾರಂಭಿಸಲಾದ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಿಗೆ 10 ಕೋಟಿ ರೂ. ವೆಚ್ಚದಲ್ಲಿ ಪೀಠೋಪಕರಣಗಳು, ಉಪಕರಣಗಳು, ಕಂಪ್ಯೂಟರ್‌ಗಳು ಹಾಗೂ ಪುಸ್ತಕಗಳನ್ನು ಒದಗಿಸಲಾಗುವುದು.

127. ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿನಿಯರಿಗೆ ಇಂಗ್ಲೆಂಡ್ ದೇಶದ ಪ್ರತಿಷ್ಠಿತ ವಿಶ್ವವಿದ್ಯಾಲಯಗಳಲ್ಲಿ Chevening Karnataka Masters Fellowship ನೆರವಿನೊಂದಿಗೆ ಒಂದು ವರ್ಷದ ಸ್ನಾತಕೋತ್ತರ ಪದವಿ ಪಡೆಯುವ ಯೋಜನೆ ರೂಪಿಸಲಾಗಿದೆ.

128. ರಾಜ್ಯದ 16 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಜ್ಞಾನದಿಂದ ಉದ್ಯೋಗಾರ್ಹತೆಯನ್ನು ಹೆಚ್ಚಿಸಲು ವೃತ್ತಿಪರ ವಿಷಯ ತಜ್ಞರನ್ನು 'Professor of Practice' ರನ್ನಾಗಿ ನೇಮಿಸಲು ಉದ್ದೇಶಿಸಲಾಗಿದೆ.

129. ಉನ್ನತ ಶಿಕ್ಷಣ ಸಂಸ್ಥೆಗಳ ಸಮಗ್ರ ನಿರ್ವಹಣೆಗಾಗಿ ಜಾರಿಮಾಡಿರುವ UUCMS ತಂತ್ರಾಂಶವನ್ನು ಇನ್ನೂ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಒಟ್ಟಾರೆ 30 ಕೋಟಿ ರೂ. ವೆಚ್ಚದಲ್ಲಿ ಉನ್ನತೀಕರಿಸಲಾಗುವುದು.

130. ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಘಟಕ ಕಾಲೇಜನ್ನು 150 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುವುದು.

131. ಅಜೀಂ ಪ್ರೇಮ್‌ಜೀ ಫೌಂಡೇಶನ್‌ರವರ ಸಹಯೋಗದೊಂದಿಗೆ ಕಾಲೇಜು ಶಿಕ್ಷಣ ಇಲಾಖೆಯ ಎಲ್ಲಾ ಬೋಧಕರಿಗೆ ಬೋಧನೆ ಮತ್ತು ಕಲಿಕೆಯನ್ನು ಉತ್ತಮಪಡಿಸಲು ಮುಂದಿನ ಮೂರು ವರ್ಷದೊಳಗೆ ಪುನರ್ ಮನನ ತರಬೇತಿ ನೀಡಲಾಗುವುದು.

132. ಸರ್ಕಾರಿ ಶಿಕ್ಷಣ ಸಂಸ್ಥೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಮಾರುಕಟ್ಟೆ ಆಧಾರಿತ ಕೌಶಲ್ಯ ತರಬೇತಿಗಳನ್ನು ಒದಗಿಸಿ ಉದ್ಯೋಗಕ್ಕೆ ಸಜ್ಜುಗೊಳಿಸಲು ಕೈಗಾರಿಕೆಗಳ ಸಹಭಾಗಿತ್ವದಲ್ಲಿ Internship Program ಹಾಗೂ ವಿಶೇಷ ಕಾರ್ಪೋರೇಟ್ ತರಬೇತಿ ಯೋಜನೆಗಳನ್ನು ರೂಪಿಸಲಾಗುವುದು.

133. KKRDB ವತಿಯಿಂದ 23,000 ವಿದ್ಯಾರ್ಥಿಗಳಿಗೆ ವಿಶೇಷ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮಗಳನ್ನು 10 ಕೋಟಿ ರೂ. ವೆಚ್ಚದಲ್ಲಿ ಹಮ್ಮಿಕೊಳ್ಳಲಾಗುವುದು.

134. ಪ್ರೊ. ನಂಜುಂಡ ಸ್ವಾಮಿ ಸಂಶೋಧನಾ ಪೀಠವನ್ನು ಮೈಸೂರು ವಿಶ್ವವಿದ್ಯಾಲಯದಲ್ಲಿ ಪ್ರಾರಂಭಿಸಲಾಗುವುದು.

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ**

135. ಆರೋಗ್ಯವಂತ ಜನರಿಂದ ಮಾತ್ರ ಸಮತೋಲಿತ ಸಮಾಜ ನಿರ್ಮಾಣ ಸಾಧ್ಯ ಎಂದು ನಾವು ನಂಬಿದ್ದೇವೆ. ಜನನದಿಂದ ಎಲ್ಲಾ

ವಯೋಮಾನದವರಿಗೂ ವರ್ಗಬೇಧವಿಲ್ಲದೇ, ಕೈಗೆಟಕುವ ದರದಲ್ಲಿ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಖಾತ್ರಿಪಡಿಸಲು ನಾವು ಬದ್ಧರಾಗಿದ್ದೇವೆ. ತಡೆಗಟ್ಟಬಹುದಾದ ತಾಯಿ ಮರಣ ಪ್ರಮಾಣವನ್ನು ಶೂನ್ಯಕ್ಕೆ ಇಳಿಸುವುದು ನಮ್ಮ ಸಂಕಲ್ಪವಾಗಿದೆ.

136. ರಾಜ್ಯದಲ್ಲಿ ತಡೆಗಟ್ಟಬಹುದಾದ ತಾಯಿ ಮರಣ ಪ್ರಮಾಣವನ್ನು ಶೂನ್ಯಕ್ಕೆ ಇಳಿಸಲು ಅಭಿಯಾನ ರೂಪದಲ್ಲಿ ಕ್ರಮ ಕೈಗೊಳ್ಳಲು 320 ಕೋಟಿ ರೂ. ಒದಗಿಸಲಾಗಿದೆ:

i) ಗರ್ಭಿಣಿಯರಲ್ಲಿ ಮತ್ತು ಪ್ರಸೂತಿ ವೇಳೆಯಲ್ಲಿನ ತೀವ್ರತರಹದ ರಕ್ತಸ್ರಾವ ತಡೆಗಟ್ಟಲು ಮತ್ತು ಚಿಕಿತ್ಸೆ ನೀಡಲು ಅವಶ್ಯವಿರುವ ಉಪಕರಣಗಳನ್ನು ನೀಡಲಾಗುವುದು. ನವೀನ ಡಿಜಿಟಲ್ ತಂತ್ರಜ್ಞಾನದ ಮೂಲಕ ಹೆರಿಗೆ ಸೇವೆಗಳನ್ನು ಬಲಪಡಿಸಲಾಗುವುದು.

ii) ಗರ್ಭಿಣಿಯರಲ್ಲಿ ರಕ್ತಹೀನತೆ ತಡೆಗಟ್ಟಲು ಹಿಂದುಳಿದ ಜಿಲ್ಲೆಗಳಲ್ಲಿ ಪೌಷ್ಟಿಕಾಂಶ ಕಿಟ್‌ಗಳು, ಪ್ರೋತ್ಸಾಹ ಧನ ಹಾಗೂ ತಾಯಂದಿರಿಗೆ ವಾತ್ಸಲ್ಯ ಕಿಟ್‌ಗಳನ್ನು ವಿತರಣೆ ಮಾಡಲಾಗುವುದು.

iii) ಹುದ್ದೆಗಳನ್ನು ಪುನರ್ ಹಂಚಿಕೆ ಮಾಡುವ ಮೂಲಕ ಪ್ರತಿ ತಾಲ್ಲೂಕು ಆಸ್ಪತ್ರೆಯಲ್ಲಿ MCH ತಜ್ಞರನ್ನು ನಿಯೋಜಿಸಲಾಗುವುದು.

iv) ರಾಜ್ಯದಲ್ಲಿ ಸಂಭವಿಸುವ ತಾಯಿ ಮರಣವನ್ನು ರಾಜ್ಯ ತಾಂತ್ರಿಕ ತಜ್ಞರ ಸಮಿತಿಯಿಂದ ಆಡಿಟ್ ಮಾಡಿಸಿ ಶಿಫಾರಸ್ಸುಗಳನ್ನು ರಾಜ್ಯ ಅಧಿಕಾರಯುಕ್ತ ಸಮಿತಿ ಮುಂದೆ ಮಂಡಿಸಲಾಗುವುದು. ಸಮಿತಿಯ ನಿರ್ದೇಶನದಂತೆ ತಾಯಿ ಮರಣ ತಡೆಗಟ್ಟುವ ನಿಟ್ಟಿನಲ್ಲಿ ಯೋಜನೆಗಳನ್ನು ರೂಪಿಸಲಾಗುವುದು.

137. ರಾಜ್ಯದಲ್ಲಿ ಆರೋಗ್ಯ ಮೂಲಸೌಕರ್ಯ ಅಭಿವೃದ್ಧಿ ದೃಷ್ಟಿಯಿಂದ ಈ ಕೆಳಕಂಡ ಕ್ರಮಗಳನ್ನು ತೆಗೆದುಕೊಳ್ಳಲಾಗಿರುತ್ತದೆ:

i) ರಾಜ್ಯದಲ್ಲಿ 50 ಹಾಸಿಗೆ ಸಾಮರ್ಥ್ಯದ 14 Critical Care Block ಗಳು ಹಾಗೂ ಬೆಂಗಳೂರು ನಗರದಲ್ಲಿ 100 ಹಾಸಿಗೆ ಸಾಮರ್ಥ್ಯದ ಒಂದು Critical Care Block ಕಟ್ಟಡವನ್ನು ನಿರ್ಮಾಣ ಮಾಡಲಾಗಿದೆ.

ii) ಅಥಣಿ, ಹುನಗುಂದ ಮತ್ತು ಮುಧೋಳದಲ್ಲಿ 50 ಹಾಸಿಗೆ ಸಾಮರ್ಥ್ಯದ ತಾಯಿ ಮತ್ತು ಮಕ್ಕಳ ಆಸ್ಪತ್ರೆಗಳನ್ನು ಸ್ಥಾಪನೆ ಮಾಡಲು ಅನುಮೋದನೆ ನೀಡಲಾಗಿದೆ.

iii) ಆಶಾಕಿರಣ ರಾಷ್ಟ್ರೀಯ ಅಂಧತ್ವ ನಿವಾರಣಾ ಕಾರ್ಯಕ್ರಮದಡಿ 1.4 ಕೋಟಿ ಜನರಿಗೆ ಕಣ್ಣಿನ ತಪಾಸಣೆ; 3.3 ಲಕ್ಷ ಜನರಿಗೆ ಉಚಿತ ಕನ್ನಡಕ ವಿತರಣೆ ಮತ್ತು 93,800 ಜನರಿಗೆ ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆ ಕೈಗೊಳ್ಳಲಾಗಿದೆ.

iv) ನರವೈಜ್ಞಾನಿಕ ಖಾಯಿಲೆಗಳಿಗೆ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮದಡಿ (KaBHI) ನಿಮ್ಹಾನ್ಸ್ ಸಹಯೋಗದೊಂದಿಗೆ ಒಟ್ಟು 2.61 ಲಕ್ಷ ತಪಾಸಣೆ ಮಾಡಿ 32,630 ನರರೋಗಿಗಳಿಗೆ ಚಿಕಿತ್ಸೆ ನೀಡಲಾಗಿದೆ. ಈ ಯೋಜನೆಯನ್ನು ಈ ವರ್ಷ ಎಲ್ಲಾ ಹಂತದ ಆರೋಗ್ಯ ಕೇಂದ್ರಗಳಿಗೆ ವಿಸ್ತರಿಸಲು 20 ಕೋಟಿ ರೂ. ಒದಗಿಸಲಾಗಿದೆ. ಅಲ್ಲದೇ, ಮಾನಸಿಕ ಅಸ್ವಸ್ಥರ ಆರೈಕೆಗೆ ಜಿಲ್ಲಾ ಮಟ್ಟದ ಆಸ್ಪತ್ರೆಗಳಲ್ಲಿ ಸರ್ಕಾರೇತರ ಸಂಸ್ಥೆಗಳ ಸಹಯೋಗದೊಂದಿಗೆ ಆರೈಕೆ ಕೇಂದ್ರಗಳನ್ನು ಸ್ಥಾಪಿಸಲಾಗುವುದು.

138. 2025–26 ನೇ ಸಾಲಿನಲ್ಲಿ ಈ ಕೆಳಗಿನಂತೆ ಆರೋಗ್ಯ ಮೂಲ ಸೌಕರ್ಯ ಅಭಿವೃದ್ಧಿ ಕಾರ್ಯ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುವುದು:

i) ಬೆಂಗಳೂರು ಉತ್ತರ ತಾಲ್ಲೂಕಿನ ವ್ಯಾಪ್ತಿಯಲ್ಲಿ 200 ಹಾಸಿಗೆಯ ಅತ್ಯಾಧುನಿಕ ಮತ್ತು ಸುಸಜ್ಜಿತ ಆಸ್ಪತ್ರೆಯನ್ನು 150 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವುದು.

ii) ಹೊಸದಾಗಿ ಘೋಷಣೆಯಾಗಿರುವ ತಾಲ್ಲೂಕುಗಳಾದ ಹನೂರು, ಅಳ್ನಾವರ, ಅಣ್ಣಿಗೇರಿ, ಮಸ್ಕಿ, ಸಿರಿವಾರ, ಕಾಪು, ಬಬಲೇಶ್ವರ, ಕೊಲ್ಹಾರ, ಚೇಳೂರು, ತೇರದಾಳದ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳಾಗಿ ಉನ್ನತೀಕರಿಸಲಾಗುವುದು. ಪೊನ್ನಂಪೇಟೆಯಲ್ಲಿ ಹೊಸದಾಗಿ ಸಮುದಾಯ ಆರೋಗ್ಯ ಕೇಂದ್ರವನ್ನು ಆರಂಭಿಸಲಾಗುವುದು.

iii) ಮಾಲೂರು, ಮಾಗಡಿ, ಕುಶಾಲನಗರ, ಕೊರಟಗೆರೆ, ಜಗಳೂರು, ಸವಣೂರು, ರಾಮದುರ್ಗ ಮತ್ತು ಸವದತ್ತಿ ತಾಲ್ಲೂಕು ಮಟ್ಟದ ಆಸ್ಪತ್ರೆಗಳನ್ನು ಹಾಗೂ ದಾವಣಗೆರೆ ಜಿಲ್ಲಾ ಆಸ್ಪತ್ರೆ ಮತ್ತು ಮಂಗಳೂರಿನ ವೆನ್ಲಾಕ್ ಆಸ್ಪತ್ರೆಗಳನ್ನು ಒಟ್ಟು 650 ಕೋಟಿ ರೂ. ವೆಚ್ಚದಲ್ಲಿ ನವೀಕರಣ ಮಾಡಲಾಗುವುದು.

iv) ಪುತ್ತೂರಿನಲ್ಲಿ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ. ಇದಕ್ಕಾಗಿ ಈಗಿರುವ 100 ಹಾಸಿಗೆ

ಸಾಮರ್ಥ್ಯದ ತಾಲ್ಲೂಕು ಆಸ್ಪತ್ರೆಯನ್ನು ಉನ್ನತೀಕರಿಸಲು ಪ್ರಸಕ್ತ ವರ್ಷದಲ್ಲಿ ಕ್ರಮವಹಿಸಲಾಗುವುದು.

v) ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರಿನಲ್ಲಿ 200 ಹಾಸಿಗೆ ಹಾಗೂ ಕೊಡಗು ಜಿಲ್ಲೆಯ ವಿರಾಜಪೇಟೆಯಲ್ಲಿ 400 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಗಳನ್ನು ಸ್ಥಾಪಿಸಲಾಗುವುದು.

vi) ಮೈಸೂರು ಜಿಲ್ಲೆಯ ತಗಡೂರು ಸಮುದಾಯ ಆರೋಗ್ಯ ಕೇಂದ್ರವನ್ನು 100 ಹಾಸಿಗೆ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲಾಗುವುದು.

vii) ಹೆಚ್ಚಿನ ದುರಸ್ತಿ ಅಗತ್ಯವಿರುವ ಜಿಲ್ಲಾ ಆಸ್ಪತ್ರೆ ಮತ್ತು ತಾಲ್ಲೂಕು ಆಸ್ಪತ್ರೆಗಳನ್ನು 183 ಕೋಟಿ ರೂ. ವೆಚ್ಚದಲ್ಲಿ ಹಂತ ಹಂತವಾಗಿ ದುರಸ್ತಿಗೊಳಿಸಲಾಗುವುದು.

139. ಕಲ್ಯಾಣ ಕರ್ನಾಟಕ ಸಂಪೂರ್ಣ ಆರೋಗ್ಯ ಅಭಿವೃದ್ಧಿ ಯೋಜನೆಯಡಿ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಒದಗಿಸಲು ಹಾಗೂ ಕಲ್ಯಾಣ ಕರ್ನಾಟಕ ಭಾಗದ ಆರೋಗ್ಯ ಸೂಚ್ಯಂಕವನ್ನು ವೃದ್ಧಿಸಲು ಒಟ್ಟು 873 ಕೋಟಿ ರೂ. ವೆಚ್ಚದಲ್ಲಿ ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸಲು ವಿವಿಧ ಕಾರ್ಯಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗುವುದು. (ವಿವರಗಳನ್ನು ಅನುಬಂಧ-4ರಲ್ಲಿ ಲಗತ್ತಿಸಿದೆ.)

140. ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ, ಹೊರಗುತ್ತಿಗೆ ಹಾಗೂ ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಮೂರು ಲಕ್ಷಕ್ಕೂ ಅಧಿಕ ಸಿಬ್ಬಂದಿ ವರ್ಗ ಹಾಗೂ ಅವಲಂಬಿತರಿಗೆ 5 ಲಕ್ಷ ರೂ. ವರೆಗೆ ನಗದು ರಹಿತ ಚಿಕಿತ್ಸೆ ನೀಡಲು ಯೋಜನೆ ರೂಪಿಸಲಾಗಿದೆ. ಸಿಬ್ಬಂದಿಯ ವೈಯಕ್ತಿಕ ಮಾಸಿಕ ವಂತಿಕೆ 100 ರೂ. ಮತ್ತು ಸರ್ಕಾರದ ಮಾಸಿಕ ವಂತಿಕೆ 200 ರೂ. ಗಳೊಂದಿಗೆ ಸುವರ್ಣ ಆರೋಗ್ಯ ಟ್ರಸ್ಟ್ ಮೂಲಕ ಅನುಷ್ಠಾನಗೊಳಿಸಲಾಗುವುದು.

141. ಪ್ರಸವ ಪೂರ್ವ ಮತ್ತು ನವಜಾತ ಶಿಶುಗಳಲ್ಲಿ ಅಪರೂಪದ ಚಯಾಪಚಯ ಖಾಯಿಲೆಗಳನ್ನು (Rare Metabolic Disorder) ಪತ್ತೆ ಹಚ್ಚಲು ಕಾರ್ಯಕ್ರಮವನ್ನು ರೂಪಿಸಲಾಗುವುದು. ಮೊದಲನೆಯ ಹಂತದಲ್ಲಿ ಕಲ್ಯಾಣ ಕರ್ನಾಟಕ ಮತ್ತು ಗಣಿಬಾಧಿತ ಪ್ರದೇಶಗಳಲ್ಲಿ ಪ್ರಾಯೋಗಿಕವಾಗಿ 10 ಕೋಟಿ ರೂ. ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗುವುದು.

142. ಮಹಿಳೆಯರಲ್ಲಿ ಗರ್ಭಕಂಠದ ಕ್ಯಾನ್ಸರ್ ಅನ್ನು ತಡೆಗಟ್ಟಲು ಪ್ರಥಮ ಹಂತದಲ್ಲಿ ಗಣಿ ಬಾಧಿತ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶದ 20 ತಾಲ್ಲೂಕುಗಳಲ್ಲಿ 9 ಕೋಟಿ ರೂ. ವೆಚ್ಚದಲ್ಲಿ 14 ವರ್ಷದ ಹೆಣ್ಣುಮಕ್ಕಳಿಗೆ HPV ಲಸಿಕೆಯನ್ನು ನೀಡಲಾಗುವುದು.

143. ‘ಗೃಹ ಆರೋಗ್ಯ’ ಯೋಜನೆಯಡಿ 2024–25 ನೇ ಸಾಲಿನಲ್ಲಿ ಆರು ಅಸಾಂಕ್ರಾಮಿಕ ರೋಗಗಳ ತಪಾಸಣೆ ಮತ್ತು ಚಿಕಿತ್ಸಾ ಕಾರ್ಯಕ್ರಮವನ್ನು ಕೋಲಾರ ಜಿಲ್ಲೆಯಲ್ಲಿ ಪ್ರಾರಂಭಿಸಲಾಗಿದ್ದು, ಈ ಯೋಜನೆಯನ್ನು 100 ಕೋಟಿ ರೂ. ವೆಚ್ಚದಲ್ಲಿ ರಾಜ್ಯಾದ್ಯಂತ ವಿಸ್ತರಿಸಲಾಗುವುದು.

144. ರಾಜ್ಯದಲ್ಲಿ 108 ಆ್ಯಂಬುಲೆನ್ಸ್ ಸೇವೆಯನ್ನು ಉತ್ತಮಗೊಳಿಸುವ ಉದ್ದೇಶದಿಂದ, ಈ ಸೇವೆಯನ್ನು ನಿಯಂತ್ರಣ ಮಾಡುವ ಕಮಾಂಡ್ ಕಂಟ್ರೋಲ್ ಕೇಂದ್ರವನ್ನು ಆರೋಗ್ಯ ಇಲಾಖೆಯ ಅಧೀನಕ್ಕೆ ಒಳಪಡಿಸುವುದರ ಮೂಲಕ ‘ಆರೋಗ್ಯ ಕವಚ’ ಸೇವೆಯನ್ನು ಬಲಪಡಿಸಲಾಗುವುದು.

145. ಸಾಂಕ್ರಾಮಿಕ ರೋಗಗಳಾದ ಚಿಕೂನ್‌ಗುನ್ಯ, ಡೆಂಗ್ಯೂ ಹಾಗೂ ಮಲೆನಾಡು ಭಾಗದಲ್ಲಿ ಕಾಣಿಸಿಕೊಳ್ಳುವ ಕ್ಯಾಸನೂರು ಕಾಡಿನ ಖಾಯಿಲೆಗಳ (KFD) ಪರಿಣಾಮಕಾರಿ ನಿಯಂತ್ರಣಕ್ಕಾಗಿ 50 ಕೋಟಿ ರೂ. ವೆಚ್ಚದಲ್ಲಿ ವಿಶೇಷ ಅಭಿಯಾನ ರೂಪದಲ್ಲಿ ಮುಂಜಾಗ್ರತಾ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಲಾಗುವುದು.

146. ‘ಶ್ರವಣ ಸಂಜೀವಿನಿ’ ಯೋಜನೆಯಡಿ ಮಕ್ಕಳಲ್ಲಿ ಕಂಡುಬರುವ ಶ್ರವಣದೋಷವನ್ನು ಆರಂಭದಲ್ಲಿಯೇ ಗುರುತಿಸಿ ಕಾಕ್ಲಿಯರ್ ಇಂಪ್ಲಾಂಟ್ (Cochlear Implant) ಶಸ್ತ್ರ ಚಿಕಿತ್ಸೆ ಹಾಗೂ

ಇಂಪ್ಲಾಂಟ್‌ಗಳ ಬಿಡಿಭಾಗಗಳ ನಿರ್ವಹಣೆ, ದುರಸ್ತಿ ಮತ್ತು ಬದಲಾವಣೆ ಮಾಡಲು 12 ಕೋಟಿ ರೂ. ಒದಗಿಸಲಾಗುವುದು.

147. ಹೆಚ್ಚಿನ ಟಿ.ಬಿ ಪ್ರಕರಣಗಳಿರುವ ಆರೋಗ್ಯ ಕೇಂದ್ರಗಳಿಗೆ 2025–26ನೇ ಸಾಲಿನಲ್ಲಿ 100 True-NAT machine ಗಳನ್ನು ಒದಗಿಸಲಾಗುವುದು.

148. ಆಶಾ ಕಾರ್ಯಕರ್ತೆಯರಿಗೆ ತಂಡ ಆಧಾರಿತ ಪ್ರೋತ್ಸಾಹಧನ ನೀಡುವುದರ ಮೂಲಕ ಗೌರವಧನವನ್ನು 1,000 ರೂ. ಹೆಚ್ಚಿಸಲಾಗುವುದು.

149. ಆಹಾರದ ಗುಣಮಟ್ಟ ಮತ್ತು ಸುರಕ್ಷತೆಯನ್ನು ದೃಢಪಡಿಸಲು ಸಂಚಾರಿ ಆಹಾರ ಪ್ರಯೋಗಾಲಯಗಳ ಮೂಲಕ ಆಹಾರ ಮಾದರಿಗಳನ್ನು ವಿಶ್ಲೇಷಿಸಿ, ಅಸುರಕ್ಷಿತ ಮತ್ತು ಕಳಪೆ ಆಹಾರವನ್ನು ಗುರುತಿಸಿ ಕಾನೂನಿನ ಅನುಸಾರ ಕ್ರಮಕೈಗೊಳ್ಳಲಾಗುತ್ತಿದೆ.

150. ಸಾರ್ವಜನಿಕ ಆರೋಗ್ಯ ಸಂಸ್ಥೆಗಳಲ್ಲಿ ಗುಣಮಟ್ಟದ ಔಷಧಗಳನ್ನು ವಿತರಿಸಲು KSMSCL ಸಂಸ್ಥೆಯನ್ನು ಬಲಪಡಿಸಲಾಗುವುದು. ವೈದ್ಯಕೀಯ ಉಪಕರಣಗಳ ಮೇಲ್ವಿಚಾರಣೆ ಮತ್ತು ನಿರ್ವಹಣೆಗಾಗಿ ತಂತ್ರಾಂಶವನ್ನು ಪರಿಚಯಿಸಲಾಗುವುದು.

151. ಸುಟ್ಟ ಗಾಯಗಳ ತಡೆಗಟ್ಟುವಿಕೆ ಹಾಗೂ ಸಂತ್ರಸ್ತರ ಚಿಕಿತ್ಸೆಗೆ ಸಂಬಂಧಿಸಿದಂತೆ, ಸುಟ್ಟ ಗಾಯಗಳ ಚಿಕಿತ್ಸಾ ನೀತಿಯನ್ನು ರಾಷ್ಟ್ರದಲ್ಲಿಯೇ ಪ್ರಪ್ರಥಮವಾಗಿ ರಾಜ್ಯದಲ್ಲಿ ಜಾರಿಗೆ ತರಲಾಗುವುದು.

152. ಆರೋಗ್ಯ ಇಲಾಖೆಯಲ್ಲಿ ಈ ಕೆಳಕಂಡ ಸುಧಾರಣಾ ಕ್ರಮಗಳನ್ನು ಪ್ರಸಕ್ತ ಸಾಲಿನಲ್ಲಿ ತೆಗೆದುಕೊಳ್ಳಲಾಗುವುದು:

i) ಕೆ.ಪಿ.ಎಂ.ಇ ಕಾಯ್ದೆಯಡಿ ನೀಡಲಾಗುವ ಮಾನ್ಯತೆ ಪ್ರಮಾಣ ಪತ್ರವನ್ನು (Accreditation Certificate) 30 ದಿನದ ಕಾಲಮಿತಿಯೊಳಗೆ ಒದಗಿಸಲಾಗುವುದು.

ii) ಮೊಬೈಲ್ ತಂತ್ರಾಂಶದ ಮೂಲಕ ಹಾಜರಾತಿ ನೀಡುವ ವ್ಯವಸ್ಥೆಯನ್ನು ಜಾರಿಗೆ ತರಲಾಗುವುದು. ವರ್ಗಾವಣೆ ಕಾಯ್ದೆಗೆ ತಿದ್ದುಪಡಿ ತರುವ ಮೂಲಕ ಎಲ್ಲಾ ಅಧಿಕಾರಿ ಸಿಬ್ಬಂದಿ ವರ್ಗದವರಿಗೂ ಪಾರದರ್ಶಕವಾದ ವರ್ಗಾವಣೆ ನೀತಿಯನ್ನು ರೂಪಿಸಲಾಗುವುದು.

iii) ರಾಜ್ಯದಲ್ಲಿನ ತಾಲ್ಲೂಕು ಆಸ್ಪತ್ರೆಗಳ ಆಡಳಿತವನ್ನು ಜಿಲ್ಲಾ ಶಸ್ತ್ರಚಿಕಿತ್ಸಕರ ವ್ಯಾಪ್ತಿಗೆ ಒಳಪಡಿಸಲಾಗುವುದು.

iv) ಇಲಾಖೆಯಲ್ಲಿ ಖಾಲಿಯಿರುವ Critical Vacancy ಹುದ್ದೆಗಳನ್ನು ತರ್ಕಬದ್ಧಗೊಳಿಸಿ (Rationalize) ಆದ್ಯತೆಯ ಮೇಲೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

**ವೈದ್ಯಕೀಯ ಶಿಕ್ಷಣ**

153. ವೈದ್ಯಕೀಯ ಶಿಕ್ಷಣ ಇಲಾಖೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಈ ಕೆಳಕಂಡ ಉಪಕ್ರಮಗಳನ್ನು ತೆಗೆದುಕೊಳ್ಳಲಾಗಿರುತ್ತದೆ.

i) 177 ಕೋಟಿ ರೂ. ಮೊತ್ತದಲ್ಲಿ 114 Modular Operation Theater ಗಳನ್ನು, 34 ಕೋಟಿ ರೂ. ವೆಚ್ಚದಲ್ಲಿ 64 Anaesthesia Work Station ಗಳನ್ನು ಸ್ಥಾಪಿಸಲಾಗಿದೆ.

ii) ಗದಗ ಮೆಡಿಕಲ್ ಕಾಲೇಜಿನಲ್ಲಿ Cathlab ಸೌಲಭ್ಯದೊಂದಿಗೆ Super Speciality Cardiac Unit ಅನ್ನು 10 ಕೋಟಿ ರೂ. ವೆಚ್ಚದಲ್ಲಿ ಪ್ರಾರಂಭಿಸಲಾಗಿದೆ.

iii) ಕಲಬುರಗಿಯಲ್ಲಿ 92 ಕೋಟಿ ರೂ. ವೆಚ್ಚದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯನ್ನು ಹಾಗೂ 304 ಕೋಟಿ ರೂ. ವೆಚ್ಚದ ಜಯದೇವ ಹೃದ್ರೋಗ ಆಸ್ಪತ್ರೆಯನ್ನು ಸ್ಥಾಪಿಸಲಾಗಿದೆ.

iv) 26 ಕೋಟಿ ರೂ. ವೆಚ್ಚದ ಬೆಂಗಳೂರಿನ ನೆಫ್ರೊ–ಯುರಾಲಾಜಿ ಸಂಸ್ಥೆಯ ಕಟ್ಟಡವನ್ನು ಪೂರ್ಣಗೊಳಿಸಿ ಸಾರ್ವಜನಿಕರ ಸೇವೆಗೆ ಸಮರ್ಪಿಸಲಾಗುವುದು.

154. ಬಾಗಲಕೋಟೆಯಲ್ಲಿ ರಾಜೀವ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಘಟಕ ವೈದ್ಯಕೀಯ ಕಾಲೇಜನ್ನು ಹಾಗೂ ಕೋಲಾರದಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದ ಆಧಾರದ ಮೇಲೆ ವೈದ್ಯಕೀಯ ಕಾಲೇಜನ್ನು ಆರಂಭಿಸಲು ಉದ್ದೇಶಿಸಲಾಗಿದೆ.

155. ಬೀದರ್ ಸರ್ಕಾರಿ ವೈದ್ಯಕೀಯ ಕಾಲೇಜು ಆಸ್ಪತ್ರೆಯಲ್ಲಿ ಕ್ಯಾನ್ಸರ್ ಪತ್ತೆ ವಿಭಾಗವನ್ನು ಆರಂಭಿಸಲಾಗುವುದು.

156. ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಯಲ್ಲಿ 500 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯನ್ನು 297 ಕೋಟಿ ರೂ. ವೆಚ್ಚದಲ್ಲಿ ಪೂರ್ಣಗೊಳಿಸಲಾಗುವುದು.

157. 2025–26ನೇ ಸಾಲಿನಲ್ಲಿ ಸಾರ್ವಜನಿಕರಿಗೆ ಸುಧಾರಿತ ಆರೋಗ್ಯ ಸೇವೆಯನ್ನು ಒದಗಿಸಲು ಈ ಕೆಳಕಂಡಂತೆ ಹೊಸ ಕಾರ್ಯಯೋಜನೆಗಳನ್ನು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ.

i) ರಾಜ್ಯದ 22 ವೈದ್ಯಕೀಯ ಕಾಲೇಜುಗಳಲ್ಲಿ ಲಭ್ಯವಿರುವ ಮೂಲಭೂತ ಸೌಕರ್ಯ ಮತ್ತು ಮಾನವ ಸಂಪನ್ಮೂಲವನ್ನು ಬಳಕೆ ಮಾಡಿಕೊಂಡು ಅಲೈಡ್ ಹೆಲ್ತ್ ಸೈನ್ಸ್ ಕೋರ್ಸ್‌ಗಳನ್ನು ಪ್ರಾರಂಭಿಸಲಾಗುವುದು.

ii) ಬಾದಾಮಿ ತಾಲ್ಲೂಕಿನ ಕುಳಗೇರಿ ಕ್ರಾಸ್ ಹಾಗೂ ಚಿತ್ರದುರ್ಗದಲ್ಲಿ ಸುಸಜ್ಜಿತ ಟ್ರಾಮಾ ಕೇರ್ ಕೇಂದ್ರಗಳನ್ನು ಸ್ಥಾಪಿಸಲಾಗುವುದು.

iii) ಮೈಸೂರು ಮತ್ತು ಕಲಬುರಗಿ ವೈದ್ಯಕೀಯ ಕಾಲೇಜುಗಳ ವ್ಯಾಪ್ತಿಯಲ್ಲಿ ಒಟ್ಟು 100 ಕೋಟಿ ರೂ. ವೆಚ್ಚದಲ್ಲಿ ಪ್ರಾದೇಶಿಕ ಎಂಡೋಕ್ರೈನಾಲಜಿ (Endocrinology) ಕೇಂದ್ರಗಳನ್ನು ಆರಂಭಿಸಲಾಗುವುದು.

iv) ಮೈಸೂರು ಮತ್ತು ಕಲಬುರಗಿಯ ವೈದ್ಯಕೀಯ ಕಾಲೇಜುಗಳಲ್ಲಿ ನಿಮ್ಹಾನ್ಸ್ ಮಾದರಿಯ ಸಂಸ್ಥೆಗಳನ್ನು ತಲಾ 100 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುವುದು.

v) ಕೊಪ್ಪಳ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಅಧೀನದಲ್ಲಿ 100 ಕೋಟಿ ರೂ. ವೆಚ್ಚದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆರಂಭಿಸಲಾಗುವುದು.

vi) ರಾಯಚೂರಿನ ರಾಜೀವ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಆವರಣದಲ್ಲಿ 50 ಕೋಟಿ ರೂ. ವೆಚ್ಚದಲ್ಲಿ ಕಿದ್ವಾಯಿ ಪೆರಿಫರೆಲ್ ಕ್ಯಾನ್ಸರ್ ಚಿಕಿತ್ಸಾ ಘಟಕ ಸ್ಥಾಪಿಸಲಾಗುವುದು.

vii) ಯಲಬುರ್ಗಾ, ಜೇವರ್ಗಿ ಮತ್ತು ಯಾದಗಿರಿಯಲ್ಲಿ ತಲಾ ಆರು ಕೋಟಿ ರೂ. ವೆಚ್ಚದಲ್ಲಿ ಹೊಸದಾಗಿ ನರ್ಸಿಂಗ್ ಕಾಲೇಜುಗಳನ್ನು KKRDB ಅನುದಾನದಲ್ಲಿ ಆರಂಭಿಸಲಾಗುವುದು.

**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ**

> **ರಾಷ್ಟ್ರವು ತನ್ನ ಅರ್ಧದಷ್ಟಿರುವ ಮಹಿಳೆಯರನ್ನು ಆರ್ಥಿಕವಾಗಿ ನಿಷ್ಕ್ರಿಯವಾಗಿಸಿ ಅಭಿವೃದ್ಧಿ ಸಾಧಿಸಲು ಸಾಧ್ಯವಿಲ್ಲ. ಅವರನ್ನು ಆರ್ಥಿಕವಾಗಿ ಸ್ವತಂತ್ರರನ್ನಾಗಿಸದೆ ಮಾಡುವ ಎಲ್ಲಾ ಅಭಿವೃದ್ಧಿ ಮಾದರಿಗಳು ಟೊಳ್ಳಾಗಿರುತ್ತವೆ.**
>
> **– ಡಾ॥ ಬಿ. ಆರ್. ಅಂಬೇಡ್ಕರ್**

158. ಗೃಹಲಕ್ಷ್ಮಿ ಯೋಜನೆಯನ್ನು 2023–24ನೇ ಸಾಲಿನಿಂದ ಜಾರಿಗೊಳಿಸಲಾಗಿದೆ. 2024–25ನೇ ಸಾಲಿನಲ್ಲಿ 1.22 ಕೋಟಿ ಕುಟುಂಬಗಳ ಯಜಮಾನಿಯರಿಗೆ ಧನಸಹಾಯ ಒದಗಿಸಲಾಗಿತ್ತು.

ಪ್ರಸಕ್ತ ವರ್ಷದಲ್ಲಿ ಈ ಯೋಜನೆಗೆ 28,608 ಕೋಟಿ ರೂ. ಒದಗಿಸಲಾಗಿದೆ.

159. ರಾಜ್ಯದ 37 ಲಕ್ಷ ಮಕ್ಕಳ ಆರೈಕೆ ಮತ್ತು ಕಲಿಕೆಯಲ್ಲಿ ಮಹತ್ತರ ಪಾತ್ರ ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯರ ಗೌರವಧನವನ್ನು 1,000 ರೂ. ಹಾಗೂ ಸಹಾಯಕಿಯರ ಗೌರವಧನವನ್ನು 750 ರೂ. ಹೆಚ್ಚಿಸಲಾಗುವುದು.

160. ಸಕ್ಷಮ ಅಂಗನವಾಡಿ ಯೋಜನೆಯಡಿ ರಾಜ್ಯದ 17,454 ಅಂಗನವಾಡಿ ಕೇಂದ್ರಗಳಿಗೆ ಹೆಚ್ಚುವರಿ ಸೌಲಭ್ಯಗಳನ್ನು ಕಲ್ಪಿಸಲು ತಲಾ ಒಂದು ಲಕ್ಷ ರೂ. ನಂತೆ ಒಟ್ಟು 175 ಕೋಟಿ ರೂ. ಒದಗಿಸಲಾಗುವುದು.

161. ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕಾಗಿ ನಗರಸಭೆ/ ಪುರಸಭೆಗಳಲ್ಲಿ ಲಭ್ಯವಿರುವ 173 ಸಿ.ಎ ನಿವೇಶನಗಳನ್ನು ನಗರಾಭಿವೃದ್ಧಿ ಇಲಾಖೆಯಿಂದ ಶೇ.50 ರಷ್ಟು ರಿಯಾಯಿತಿ ದರದಲ್ಲಿ ಖರೀದಿಸಲು 10 ಕೋಟಿ ರೂ. ಮೀಸಲಿರಿಸಲಾಗಿದೆ.

162. ವಿಕಲಚೇತನರ ಸಾಮಾಜಿಕ, ಆರ್ಥಿಕ ಸ್ಥಿತಿಗತಿ ಕುರಿತಂತೆ ನಿಖರ ಮಾಹಿತಿ ಸಂಗ್ರಹಿಸಲು ಹಾಗೂ ಅವರಿಗೆ ಸೂಕ್ತ ಸೌಲಭ್ಯ ಒದಗಿಸುವ ಹಿತದೃಷ್ಟಿಯಿಂದ ವಿಕಲಚೇತನರ ಸಮೀಕ್ಷೆ ನಡೆಸಲಾಗುವುದು.

163. ಮೈಸೂರು ಮತ್ತು ಬೆಳಗಾವಿಯಲ್ಲಿರುವ ವಿಶೇಷ ಮಕ್ಕಳ ಸರ್ಕಾರಿ ವಸತಿಯುತ ಶಾಲೆಗಳನ್ನು ಉನ್ನತೀಕರಿಸಲು ಐದು ಕೋಟಿ ರೂ. ನೀಡಲಾಗುವುದು. ಇವುಗಳ ನಿರ್ವಹಣೆಯನ್ನು ಸ್ವಯಂ ಸೇವಾ ಸಂಸ್ಥೆಗಳ ಸಹಕಾರದೊಂದಿಗೆ ಕೈಗೊಳ್ಳಲಾಗುವುದು.

164. Cerebral Palsy, Muscular Dystrophy, Parkinsons ಮತ್ತು Multiple Sclerosis ಕಾಯಿಲೆಗಳಿಂದ ಬಳಲುತ್ತಿರುವ ವ್ಯಕ್ತಿಗಳ ಆರೈಕೆದಾರರಿಗೆ ನೀಡುತ್ತಿರುವ ಮಾಸಿಕ 1,000 ರೂ. ಪ್ರೋತ್ಸಾಹಧನ ಯೋಜನೆಯನ್ನು ಆಟಿಸಂ, ಬೌದ್ಧಿಕ ವಿಕಲತೆ ಮತ್ತು ಬಹುವಿಧ ಅಂಗವಿಕಲತೆ (ಶ್ರವಣ ಮತ್ತು ದೃಷ್ಟಿ ನ್ಯೂನ್ಯತೆ) ಕಾಯಿಲೆಗಳಿಂದ ಬಳಲುತ್ತಿರುವ ಆರೈಕೆದಾರರಿಗೂ ವಿಸ್ತರಿಸಲಾಗುವುದು.

165. ಬಳ್ಳಾರಿಯ ಸರ್ಕಾರಿ ಶ್ರವಣದೋಷವುಳ್ಳ ಮಕ್ಕಳ ಶಾಲೆ ಹಾಗೂ ಹುಬ್ಬಳ್ಳಿಯ ದೃಷ್ಟಿದೋಷವುಳ್ಳ ಮಕ್ಕಳ ಶಾಲೆಗಳನ್ನು ಪ್ರಾಥಮಿಕ ಶಾಲಾ ಹಂತದಿಂದ ಪ್ರೌಢಶಾಲಾ ಹಂತಕ್ಕೆ ಮೇಲ್ದರ್ಜೆಗೇರಿಸಲಾಗುವುದು.

166. ವಿಶೇಷ ಪಾಲನಾ ಯೋಜನೆಯಡಿ ಹೆಚ್.ಐ.ವಿ. ಸೋಂಕಿತ ಮತ್ತು ಬಾಧಿತ ಮಕ್ಕಳ ಪೌಷ್ಟಿಕ ಆಹಾರ ಮತ್ತು ಶಿಕ್ಷಣವನ್ನು ಪ್ರೋತ್ಸಾಹಿಸಲು ಪ್ರಸ್ತುತ ನೀಡಲಾಗುತ್ತಿರುವ ಮಾಸಿಕ

ಧನಸಹಾಯವನ್ನು 1,000 ರೂ.ನಿಂದ 2,000 ರೂ.ಗೆ ಹೆಚ್ಚಿಸಲಾಗುವುದು.

167. ರಾಜ್ಯ ಅನುದಾನದಡಿಯಲ್ಲಿ ನಡೆಯುತ್ತಿರುವ ವಸತಿಯುತ ವಿಶೇಷ ಶಾಲೆಗಳ ಮಕ್ಕಳ ಪಥ್ಯಾಹಾರ ಭತ್ಯೆಯನ್ನು ಮಾಸಿಕ 1,750 ರೂ.ಗಳಿಗೆ ಹೆಚ್ಚಿಸಲಾಗುವುದು.

168. ಮಹಿಳಾ ಉದ್ದೇಶಿತ ಕಾರ್ಯಕ್ರಮಗಳಿಗಾಗಿ 2025–26ನೇ ಸಾಲಿನಲ್ಲಿ ಒಟ್ಟಾರೆಯಾಗಿ 94,084 ಕೋಟಿ ರೂ. ಒದಗಿಸಲಾಗುವುದು.

169. ಮಕ್ಕಳ ಉದ್ದೇಶಿತ ಕಾರ್ಯಕ್ರಮಗಳಿಗಾಗಿ 2025–26ನೇ ಸಾಲಿನಲ್ಲಿ ಒಟ್ಟಾರೆಯಾಗಿ 62,033 ಕೋಟಿ ರೂ. ಒದಗಿಸಲಾಗುವುದು.

**ಸಮಾಜ ಕಲ್ಯಾಣ**

**ಸಮಾಜವು ತನ್ನ ಅಸಹಾಯಕ ಸದಸ್ಯರ ಕುರಿತು ತೋರುವ ಕಾಳಜಿಯು ಆ ನಾಗರಿಕತೆಯ ಪ್ರಬುದ್ಧತೆಯನ್ನು ತೋರಿಸುತ್ತದೆ.**

**– ಡಾ॥ ರಾಮ ಮನೋಹರ ಲೋಹಿಯಾ**

170. ಕರ್ನಾಟಕ ಅನುಸೂಚಿತ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆಯಡಿಯಲ್ಲಿ 2025–26ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಉಪಯೋಜನೆಗೆ 29,992 ಕೋಟಿ ರೂ. ಹಾಗೂ ಬುಡಕಟ್ಟು

ಉಪಯೋಜನೆಗೆ 12,026 ಕೋಟಿ ರೂ.ಗಳೂ ಸೇರಿದಂತೆ ಒಟ್ಟಾರೆ 42,018 ಕೋಟಿ ರೂ. ಅನುದಾನವನ್ನು ಒದಗಿಸಲಾಗಿದೆ.

171. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದನ್ವಯ ಎರಡು ಕೋಟಿ ರೂ. ಮೊತ್ತದವರೆಗಿನ ಕಾಮಗಾರಿಗಳಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ ಮತ್ತು 2ಬಿ ಗುತ್ತಿಗೆದಾರರಿಗೆ ಮೀಸಲಾತಿ ಒದಗಿಸಲಾಗುವುದು.

172. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದನ್ವಯ ಸರ್ಕಾರದ ವಿವಿಧ ಇಲಾಖೆ, ನಿಗಮ ಹಾಗೂ ಸಂಸ್ಥೆಗಳಲ್ಲಿ ಖರೀದಿಸುವ ಸರಕು ಮತ್ತು ಸೇವೆಗಳಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ ಮತ್ತು 2ಬಿ ಸರಬರಾಜುದಾರರಿಗೆ ಒಂದು ಕೋಟಿ ರೂ. ವರೆಗೆ ಮೀಸಲಾತಿಯನ್ನು ನೀಡಲಾಗುವುದು.

173. ರಾಜ್ಯದಲ್ಲಿನ ಪರಿಶಿಷ್ಟ ಜಾತಿ ಕಾಲೋನಿಗಳಲ್ಲಿ ಅಗತ್ಯ ಮೂಲಸೌಕರ್ಯ ಕಲ್ಪಿಸಲು ಪ್ರಗತಿ ಕಾಲೋನಿ ಯೋಜನೆಯಡಿ 2024-25 ನೇ ಸಾಲಿನಲ್ಲಿ 559 ಕೋಟಿ ರೂ. ವೆಚ್ಚದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಮಂಜೂರಾತಿ ನೀಡಲಾಗಿರುತ್ತದೆ.

2025-26 ನೇ ಸಾಲಿನಲ್ಲಿ ಈ ಕಾಮಗಾರಿಗಳನ್ನು ಪೂರ್ಣಗೊಳಿಸಲು 222 ಕೋಟಿ ರೂ. ಒದಗಿಸಲಾಗುವುದು.

174. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರ ಮೇಲಿನ ದೌರ್ಜನ್ಯ ತಡೆಗಾಗಿ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ವ್ಯಾಪ್ತಿಯಲ್ಲಿ 33 ವಿಶೇಷ ಪೊಲೀಸ್ ಠಾಣೆಗಳನ್ನು ಪ್ರಾರಂಭಿಸಲಾಗಿದೆ.

175. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಪ್ರತಿ ಜಿಲ್ಲೆಗೆ ಒಂದರಂತೆ ಒಟ್ಟು 31 ವಸತಿ ಶಾಲೆಗಳನ್ನು ಪಿ.ಯು ಕಾಲೇಜನ್ನಾಗಿ ಉನ್ನತೀಕರಿಸಲಾಗುವುದು.

176. ವಸತಿ ಶಾಲೆಗಳಿಲ್ಲದ ಹೋಬಳಿಗಳಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ 26 ಹೊಸ ವಸತಿ ಶಾಲೆಗಳನ್ನು ಪ್ರಾರಂಭಿಸಲಾಗುವುದು.

177. ಪರಿಶಿಷ್ಟ ಜಾತಿಯ 40, ಪರಿಶಿಷ್ಟ ಪಂಗಡದ ಏಳು ಮತ್ತು ಹಿಂದುಳಿದ ವರ್ಗಗಳ 14 ವಸತಿ ಶಾಲೆಗಳು ಸೇರಿದಂತೆ ನಿವೇಶನ ಲಭ್ಯವಿರುವ ಒಟ್ಟು 61 ಕ್ರೈಸ್ ವಸತಿ ಶಾಲೆಗಳಿಗೆ 1,292 ಕೋಟಿ ರೂ. ವೆಚ್ಚದಲ್ಲಿ ಸ್ವಂತ ಕಟ್ಟಡಗಳನ್ನು ನಿರ್ಮಿಸಲಾಗುವುದು.

178. ಕ್ರೈಸ್ ವಸತಿ ಶಾಲೆಗಳಿಗೆ ಒಟ್ಟು 213 ಕೋಟಿ ರೂ. ವೆಚ್ಚದಲ್ಲಿ ಅಗತ್ಯವಿರುವ ಡೆಸ್ಕ್, ಬೆಂಚ್, ಪೀಠೋಪಕರಣಗಳು ಇತ್ಯಾದಿ ಶೈಕ್ಷಣಿಕ ಮೂಲಸೌಕರ್ಯಗಳನ್ನು ಒದಗಿಸಲಾಗುವುದು.

179. ಬಾಡಿಗೆ ಕಟ್ಟಡದಲ್ಲಿ ನಡೆಸಲಾಗುತ್ತಿರುವ ಸಮಾಜ ಕಲ್ಯಾಣ ಇಲಾಖೆಯ 34 ವಿದ್ಯಾರ್ಥಿನಿಲಯಗಳಿಗೆ 238 ಕೋಟಿ ರೂ. ವೆಚ್ಚದಲ್ಲಿ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲಾಗುವುದು.

180. ಸಂವಿಧಾನ ಶಿಲ್ಪಿ ಡಾ॥ ಬಿ.ಆರ್.ಅಂಬೇಡ್ಕರ್ ರವರು ಅಧ್ಯಯನ ಮಾಡಿರುವ ಲಂಡನ್ ಸ್ಕೂಲ್ ಆಫ್ ಎಕನಾಮಿಕ್ಸ್ ಮತ್ತು ಕೊಲಂಬಿಯಾ ವಿಶ್ವವಿದ್ಯಾಲಯಗಳಲ್ಲಿ ವ್ಯಾಸಂಗಕ್ಕೆ ಆಯ್ಕೆಯಾದ ಇಬ್ಬರು ವಿದ್ಯಾರ್ಥಿಗಳಿಗೆ ಡಾ॥ ಬಿ.ಆರ್.ಅಂಬೇಡ್ಕರ್ ಫೆಲೋಶಿಪ್ ಯೋಜನೆಯಡಿ ಒಂದು ಕೋಟಿ ರೂ. ಅನುದಾನ ಒದಗಿಸಲಾಗುವುದು.

181. ಪರಿಶಿಷ್ಟ ಜಾತಿ ನಿರುದ್ಯೋಗಿ ಯುವಕ/ಯುವತಿಯರಿಗೆ ಫಾಸ್ಟ್ ಫುಡ್ ಟ್ರಕ್ ಟ್ರೈಲರ್/ಮೊಬೈಲ್ ಕಿಚನ್ ಫುಡ್ ಕಿಯೋಸ್ಕ್ (Kiosk) ಸೌಲಭ್ಯಗಳನ್ನು ನಿಗಮಗಳ ಉದ್ಯಮಶೀಲತಾ ಅಭಿವೃದ್ಧಿ ಯೋಜನೆಯಡಿ ನೀಡಲಾಗುವುದು.

182. ನಿರಾಶ್ರಿತರ ಮಾನಸಿಕ ಸ್ವಸ್ಥತೆಗಾಗಿ ಬೆಂಗಳೂರಿನ ನಿರಾಶ್ರಿತರ ಪರಿಹಾರ ಕೇಂದ್ರದಲ್ಲಿ ಮಾನಸಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸಲಾಗುವುದು.

183. ವಿದ್ಯಾರ್ಥಿನಿಲಯಗಳಲ್ಲಿ ನೀಡಲಾಗುತ್ತಿರುವ ಆಹಾರ ವ್ಯವಸ್ಥೆಯ ಬಗ್ಗೆ ಪಾರದರ್ಶಕತೆಯನ್ನು ತರಲು ಸಾಮಾಜಿಕ ಪರಿಶೋಧನೆ ವ್ಯವಸ್ಥೆಯನ್ನು ಜಾರಿಗೊಳಿಸಲಾಗುವುದು.

184. ಬಂಜಾರ ಸಮುದಾಯದ ಪ್ರಮುಖ ಧಾರ್ಮಿಕ ಸ್ಥಳವಾದ ದಾವಣಗೆರೆ ಜಿಲ್ಲೆಯ ಸಂತ ಸೇವಾಲಾಲ್ ಪುಣ್ಯಕ್ಷೇತ್ರ ಸೂರಗೊಂಡನ ಕೊಪ್ಪದಲ್ಲಿ ಒಂದು ವಸತಿ ಶಾಲೆಯನ್ನು ಕ್ರೈಸ್ ವತಿಯಿಂದ ಪ್ರಾರಂಭಿಸಲಾಗುವುದು.

185. ದೇಶದ ಪ್ರತಿಷ್ಠಿತ 100 ಶಿಕ್ಷಣ ಸಂಸ್ಥೆಗಳಲ್ಲಿ ಪದವಿ/ಸ್ನಾತಕೋತ್ತರ ಪದವಿ ಕೋರ್ಸ್‌ಗಳಿಗೆ ಪ್ರವೇಶ ಪಡೆಯುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣಕ್ಕೆ ಬೆಂಬಲ ನೀಡಲು ಪ್ರೋತ್ಸಾಹಧನ ನೀಡಲಾಗುವುದು.

186. ಕರ್ನಾಟಕ ಅನುಸೂಚಿತ ಜಾತಿಗಳ ಉಪಹಂಚಿಕೆ ಮತ್ತು ಬುಡಕಟ್ಟು ಉಪಹಂಚಿಕೆ ಅಧಿನಿಯಮ–2013 ರನ್ವಯ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಸಮಗ್ರ ಅಭಿವೃದ್ಧಿಗಾಗಿ ಹಂಚಿಕೆ

ಮಾಡಿರುವ ಅನುದಾನದ ಸದ್ಬಳಕೆಯ ಬಗ್ಗೆ ಮೌಲ್ಯಮಾಪನವನ್ನು ಮಾಡಲಾಗುವುದು.

187. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ಸಮಸ್ಯೆಗಳ ಬಗ್ಗೆ ವಿಧಾನ ಮಂಡಲ ಅಧಿವೇಶನದಲ್ಲಿ ವಿಶೇಷ ಚರ್ಚೆ ನಡೆಸಲಾಗುವುದು.

188. ಸರ್ಕಾರಿ ಮತ್ತು ಖಾಸಗಿ ಮೆಡಿಕಲ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳು ಅದೇ ಕಾಲೇಜಿನ ವಸತಿ ನಿಲಯಗಳಲ್ಲಿ ಪ್ರವೇಶ ಪಡೆದಿದ್ದಲ್ಲಿ, ಅವರಿಗೆ ವಸತಿ ನಿಲಯದ ವೆಚ್ಚವಾಗಿ ಪ್ರತಿ ಮಾಹೆ ರೂ.3,500/– ಗಳನ್ನು ಪಾವತಿಸಲಾಗುವುದು.

189. ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಸಮುದಾಯದವರು ಹೈನುಗಾರಿಕೆ ಕೈಗೊಳ್ಳಲು ಎರಡು ಎಮ್ಮೆ/ಹಸುಗಳಿಗೆ ಘಟಕ ವೆಚ್ಚದ ಶೇ.50 ರಷ್ಟು ಅಥವಾ ಗರಿಷ್ಠ 1.25 ಲಕ್ಷ ರೂ. ಸಹಾಯಧನವನ್ನು ನಿಗಮದ ಮೂಲಕ ನೀಡಲಾಗುವುದು.

190. ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಮಹಿಳಾ ಸ್ವಸಹಾಯ ಸಂಘಗಳಿಗೆ ನೀಡುತ್ತಿರುವ ಒಂದು ಲಕ್ಷ ರೂ. ಸಾಲ ಮತ್ತು 1.50

ಲಕ್ಷ ರೂ. ಸಹಾಯಧನವನ್ನು 2.50 ಲಕ್ಷ ರೂ. ಸಾಲ ಮತ್ತು 2.50 ಲಕ್ಷ ರೂ. ಸಹಾಯಧನ ಮೊತ್ತಕ್ಕೆ ಹೆಚ್ಚಿಸಲಾಗುವುದು.

191. ಸಮಾಜ ಕಲ್ಯಾಣ ಇಲಾಖೆಯಡಿ ಬರುವ ನಿಗಮಗಳಿಗೆ 2025–26 ನೇ ಸಾಲಿನಲ್ಲಿ 488 ಕೋಟಿ ರೂ. ಅನುದಾನವನ್ನು ಒದಗಿಸಲಾಗಿದೆ.

**ಪರಿಶಿಷ್ಟ ವರ್ಗಗಳ ಕಲ್ಯಾಣ**

192. 2024–25ನೇ ಸಾಲಿನಲ್ಲಿ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಒಟ್ಟಾರೆ 3,67,281 ವಿದ್ಯಾರ್ಥಿಗಳಿಗೆ ಒಟ್ಟು 120 ಕೋಟಿ ರೂ. ವಿದ್ಯಾರ್ಥಿವೇತನ ಮಂಜೂರು ಮಾಡಲಾಗಿದೆ. ಈ ಯೋಜನೆಯನ್ನು ಮುಂದುವರೆಸಲಾಗುವುದು.

193. ಅರಣ್ಯ ಮತ್ತು ಅರಣ್ಯದ ಅಂಚಿನಲ್ಲಿ ವಾಸಿಸುತ್ತಿರುವ ಪರಿಶಿಷ್ಟ ಪಂಗಡದ 12 ಬುಡಕಟ್ಟು ಸಮುದಾಯಗಳ 47,859 ಕುಟುಂಬಗಳಿಗೆ ಪೌಷ್ಟಿಕ ಆಹಾರ ಯೋಜನೆಯಡಿ 120 ಕೋಟಿ ರೂ. ವೆಚ್ಚದಲ್ಲಿ ಪೌಷ್ಟಿಕ ಆಹಾರ ಕಿಟ್‌ಗಳನ್ನು ನೀಡಲಾಗುತ್ತಿದೆ.

194. ಬುಡಕಟ್ಟು ಜನಾಂಗದ ಶೈಕ್ಷಣಿಕ ಉದ್ದೇಶಕ್ಕಾಗಿ ಸ್ಥಾಪಿಸಲಾಗಿರುವ 78 ಬುಡಕಟ್ಟು ವಸತಿ ಶಾಲೆಗಳಲ್ಲಿ 2025–26ನೇ ಸಾಲಿನಿಂದ 7ನೇ ತರಗತಿಯನ್ನು ಪ್ರಾರಂಭಿಸಲಾಗುವುದು. ಚಾಮರಾಜನಗರ, ಮೈಸೂರು ಮತ್ತು ಕೊಡಗು ಜಿಲ್ಲೆಗಳಲ್ಲಿನ ಐದು ವಸತಿ ಶಾಲೆಗಳನ್ನು 12ನೇ ತರಗತಿಯವರೆಗೆ ಮೇಲ್ದರ್ಜೆಗೇರಿಸಲಾಗುವುದು.

195. 2025–26ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡದ ಮೆಟ್ರಿಕ್ ನಂತರದ 20 ವಿದ್ಯಾರ್ಥಿನಿಲಯಗಳನ್ನು ಹೊಸದಾಗಿ ಪ್ರಾರಂಭಿಸಲಾಗುವುದು.

196. ಕಿರು ಅರಣ್ಯ ಉತ್ಪನ್ನಗಳನ್ನು ಸಂಗ್ರಹಿಸಿ ಸಂಸ್ಕರಿಸಲು ನೆರವಾಗುವಂತೆ ಲ್ಯಾಂಪ್ಸ್ (LAMPS) ಸಹಕಾರ ಸಂಘಗಳಿಗೆ ದುಡಿಯುವ ಬಂಡವಾಳ ರೂಪದಲ್ಲಿ ತಲಾ ಐದು ಲಕ್ಷ ರೂ. ಸಹಾಯಧನ ನೀಡಲಾಗುವುದು.

197. ರಾಜ್ಯದ ಬುಡಕಟ್ಟು ಸಂಸ್ಕೃತಿಯನ್ನು ಪರಿಚಯಿಸಲು ಮೈಸೂರು ನಗರದಲ್ಲಿ ಇರುವ ಬುಡಕಟ್ಟು ಸಂಶೋಧನಾ ಕೇಂದ್ರದ ಆವರಣದಲ್ಲಿ ಬುಡಕಟ್ಟು ವಸ್ತು ಸಂಗ್ರಹಾಲಯವನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ.

198. ಅರಣ್ಯ, ಅರಣ್ಯದಂಚಿನ ಹಾಡಿಗಳಲ್ಲಿ ವಾಸ ಮಾಡುತ್ತಿರುವ ಸೋಲಿಗ, ಹಲಸರು, ಜೇನು ಕುರುಬ, ಗೌಡಲು, ಸಿದ್ಧಿ, ಕುಡಿಯ, ಮಲೆಕುಡಿಯ, ಕಾಡುಕುರುಬ, ಇರುಳಿಗ, ಕೊರಗ, ಬೆಟ್ಟಕುರುಬ,

ಯರವ, ಪಣಿಯನ್ ಇತ್ಯಾದಿ ಪರಿಶಿಷ್ಟ ಪಂಗಡದ ಬುಡಕಟ್ಟುಗಳ ಜನಾಂಗದವರಿಗೆ ಮೂಲಸೌಕರ್ಯಗಳನ್ನು ಒದಗಿಸಲು 200 ಕೋಟಿ ರೂ. ಅನುದಾನ ನೀಡಲಾಗುವುದು.

199. ಅರಣ್ಯ, ಅರಣ್ಯದಂಚಿನ ಹಾಡಿಗಳಲ್ಲಿ ವಾಸ ಮಾಡುತ್ತಿರುವ 13 ಬುಡಕಟ್ಟು ಜನಾಂಗಗಳಾದ ಜೇನು ಕುರುಬ, ಇರುಳಿಗ, ಕೊರಗ, ಸೋಲಿಗ, ಯರವ, ಪಣಿಯನ್, ಹಲಸರು, ಗೌಡಲು, ಸಿದ್ಧಿ, ಬೆಟ್ಟಕುರುಬ, ಕಾಡುಕುರುಬ, ಕುಡಿಯ ಮತ್ತು ಮಲೆಕುಡಿಯ ಈ ಜನಾಂಗಗಳಿಗೆ ರಾಜ್ಯ ಸಿವಿಲ್ ಸೇವೆಗಳಲ್ಲಿ ಪ್ರಾತಿನಿಧ್ಯ ನೀಡುವ ಸಲುವಾಗಿ ವಿಶೇಷ ನೇರ ನೇಮಕಾತಿಯನ್ನು ಕೈಗೊಳ್ಳಲಾಗುವುದು.

**ಹಿಂದುಳಿದ ವರ್ಗಗಳ ಕಲ್ಯಾಣ**

200. ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳಿಗೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಲು 50 ಕೋಟಿ ರೂ. ಒದಗಿಸಲಾಗುವುದು.

201. ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ 30 ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲಾಗುವುದು.

202. ಶೈಕ್ಷಣಿಕ ಸೌಲಭ್ಯಗಳಿಂದ ವಂಚಿತರಾಗಿರುವ, ಹಿಂದುಳಿದ ವರ್ಗಗಳಲ್ಲಿಯೇ ಅತ್ಯಂತ ಹಿಂದುಳಿದ 46 ಅಲೆಮಾರಿ ಅರೆಅಲೆಮಾರಿ ಜನಾಂಗದ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ರಾಜ್ಯದ ನಾಲ್ಕು ಕಂದಾಯ ವಿಭಾಗಗಳಲ್ಲಿ ತಲಾ ಒಂದರಂತೆ ಡಿ.ದೇವರಾಜ ಅರಸು ವಸತಿ ಶಾಲೆಗಳನ್ನು ಕ್ರೈಸ್ ವತಿಯಿಂದ ಪ್ರಾರಂಭಿಸಲಾಗುವುದು.

203. ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪ್ರಾಧಿಕಾರದ ವತಿಯಿಂದ ಬೈಲಹೊಂಗಲ ತಾಲ್ಲೂಕಿನ ಸಂಗೊಳ್ಳಿ ಮತ್ತು ಖಾನಾಪುರ ತಾಲ್ಲೂಕಿನ ನಂದಗಡದಲ್ಲಿ 28 ಕೋಟಿ ರೂ. ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಹಂತ ಹಂತವಾಗಿ ಕೈಗೊಳ್ಳಲಾಗುವುದು.

204. ಇಂಜಿನಿಯರಿಂಗ್ ಮತ್ತು ಮೆಡಿಕಲ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪ್ರತಿ ಜಿಲ್ಲೆಗೆ ಎರಡರಂತೆ 62 ಮೆಟ್ರಿಕ್ ನಂತರದ ವಸತಿ ನಿಲಯಗಳನ್ನು ಪ್ರಾರಂಭಿಸಲಾಗುವುದು. ಪ್ರಸಕ್ತ ಸಾಲಿನಲ್ಲಿ 15 ಕೋಟಿ ರೂ. ಒದಗಿಸಲಾಗಿದೆ. ಇವುಗಳ ಪೈಕಿ ಒಟ್ಟು 10 ಇಂಜಿನಿಯರಿಂಗ್ ವಸತಿ ನಿಲಯಗಳನ್ನು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ

50:50 ಅನುದಾನದ ಅನುಪಾತದಲ್ಲಿ ಕಟ್ಟಡ ನಿರ್ಮಾಣ ಮಾಡಲಾಗುವುದು.

205. ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳ ಕಟ್ಟಡ ದುರಸ್ತಿ ಮಾಡಲು 25 ಕೋಟಿ ರೂ. ಒದಗಿಸಲಾಗುವುದು.

206. ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದವರ ಕಾಲೋನಿಗಳ ಸಮಗ್ರ ಅಭಿವೃದ್ಧಿಗಾಗಿ 100 ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು. ಹಿಂದುಳಿದ ವರ್ಗಗಳಿಗೆ ಸೇರಿದ ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದವರಿಗೆ ಭೂ ಒಡೆತನ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು. ಇದರೊಂದಿಗೆ ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಕೌಶಲ್ಯ ತರಬೇತಿ ನೀಡಲಾಗುವುದು.

207. ಹಿಂದುಳಿದ ವರ್ಗಗಳ ಅಭ್ಯರ್ಥಿಗಳು IAS, IPS, KAS, KSPS ಮುಂತಾದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ವಸತಿ ಸಹಿತ ತರಬೇತಿ ನೀಡಲು ಬೆಂಗಳೂರು ನಗರದಲ್ಲಿ ಎರಡು ಸುಸಜ್ಜಿತ ವಸತಿ ನಿಲಯಗಳನ್ನು ಪ್ರಾರಂಭಿಸಲಾಗುವುದು.

208. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ಕೈಗಾರಿಕಾ ನಿವೇಶನ/ಜಮೀನುಗಳನ್ನು ಮಂಜೂರು ಮಾಡುವಾಗ ಪ್ರತಿ

ಕೈಗಾರಿಕಾ ಪ್ರದೇಶದ ಹಂಚಿಕೆಯಲ್ಲಿ, ಹಿಂದುಳಿದ ವರ್ಗಗಳ ಪ್ರವರ್ಗ–1, ಪ್ರವರ್ಗ–2ಎ ಮತ್ತು 2ಬಿ ಸಮುದಾಯಗಳಿಗೆ ಶೇ.20 ರಷ್ಟು ಭೂಮಿ ಮೀಸಲಿರಿಸಲಾಗುವುದು. ಹಂಚಿಕೆ ಸಂದರ್ಭದಲ್ಲಿ ನಿವೇಶನದ ಪ್ರಾರಂಭಿಕ ಠೇವಣಿ ಭರಿಸಿದ ನಂತರ ಬಾಕಿ ಹಣ ಪಾವತಿಸಲು ಒಂದು ವರ್ಷದ ಕಾಲಾವಕಾಶವನ್ನು ನೀಡಲಾಗುವುದು.

209. ಜಿಲ್ಲಾ ಕೇಂದ್ರಗಳಲ್ಲಿರುವ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ನಿಲಯಾರ್ಥಿಗಳಿಗೆ, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಮತ್ತು ವೃತ್ತಿ ಮಾರ್ಗದರ್ಶನಕ್ಕೆ (career guidance) ತರಬೇತಿ ನೀಡಲಾಗುವುದು.

210. ಹಿಂದುಳಿದ ವರ್ಗಗಳ ನಿರುದ್ಯೋಗಿಗಳಿಗೆ ವಿದ್ಯುತ್ ಚಾಲಿತ ನಾಲ್ಕು ಚಕ್ರಗಳ ವಾಹನ ಖರೀದಿಸಿ, ಆಹಾರ ಕಿಯೋಸ್ಕ್ (Kiosk) ಪ್ರಾರಂಭಿಸಲು ಪ್ರತಿ ಫಲಾನುಭವಿಗೆ ಗರಿಷ್ಠ 3 ಲಕ್ಷ ರೂ. ಸಹಾಯಧನವನ್ನು ನಿಗಮಗಳ ಮೂಲಕ ಒದಗಿಸಲಾಗುವುದು.

211. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಬರುವ ನಿಗಮಗಳಿಗೆ 2025–26 ನೇ ಸಾಲಿನಲ್ಲಿ 422 ಕೋಟಿ ರೂ. ಅನುದಾನ ಒದಗಿಸಲಾಗುವುದು.

**ಅಲ್ಪಸಂಖ್ಯಾತರ ಕಲ್ಯಾಣ**

**ಹಲವೆನ್ನದ ಹಿರಿಮೆಯೆ, ಕುಲವೆನ್ನದ ಗರಿಮೆಯೆ,**
**ಸದ್ವಿಕಾಸಶೀಲ ನುಡಿಯ ಲೋಕಾವೃತ ಸೀಮೆಯೆ,**
**ಈ ವತ್ಸರ ನಿರ್ಮತ್ಸರ ಮನದುದಾರ ಮಹಿಮೆಯೆ**
**– ಕೆ. ಎಸ್. ನಿಸಾರ್ ಅಹಮದ್**

212. ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ 250 ಮೌಲಾನಾ ಆಜಾದ್ ಆಂಗ್ಲ ಮಾಧ್ಯಮ ಮಾದರಿ ಶಾಲೆಗಳಲ್ಲಿ ಹಂತ ಹಂತವಾಗಿ ಕರ್ನಾಟಕ ಪಬ್ಲಿಕ್ ಶಾಲೆಗಳ ಮಾದರಿಯಲ್ಲಿ ಪೂರ್ವ ಪ್ರಾಥಮಿಕ ಹಂತದಿಂದ ಪಿ.ಯು ವರೆಗೂ ತರಗತಿಗಳನ್ನು ಪ್ರಾರಂಭಿಸಲಾಗುವುದು. ಇದಕ್ಕಾಗಿ ಒಟ್ಟಾರೆ 500 ಕೋಟಿ ರೂ. ವೆಚ್ಚದಲ್ಲಿ ಯೋಜನೆ ರೂಪಿಸಲಾಗುವುದು. ಪ್ರಸಕ್ತ ವರ್ಷದಲ್ಲಿ 100 ಕೋಟಿ ರೂ. ಅನುದಾನವನ್ನು ಒದಗಿಸಲಾಗಿದೆ. ಶಾಲಾ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುವುದು.

213. ಶಿಕ್ಷಣ ಇಲಾಖೆಯಲ್ಲಿ ಅತೀ ಹೆಚ್ಚು ದಾಖಲಾತಿಯಿರುವ ಆಯ್ದ 100 ಉರ್ದು ಮಾಧ್ಯಮದ ಶಾಲೆಗಳಿಗೆ ಕರ್ನಾಟಕ ಪಬ್ಲಿಕ್ ಶಾಲೆ ಮಾದರಿಯಲ್ಲಿ ಮೂಲಸೌಕರ್ಯಗಳನ್ನು ಒದಗಿಸಿ ಕಲಿಕಾ ಗುಣಮಟ್ಟವನ್ನು ಹೆಚ್ಚಿಸಲು ಕ್ರಮವಹಿಸಿ ಮೌಲಾನಾ ಆಜಾದ್

ಪಬ್ಲಿಕ್ ಶಾಲೆಗಳನ್ನಾಗಿ ಉನ್ನತೀಕರಿಸಲಾಗುವುದು. ಒಟ್ಟಾರೆ 400 ಕೋಟಿ ರೂ. ವೆಚ್ಚದಲ್ಲಿ ಅನುಷ್ಠಾನವಾಗಲಿರುವ ಈ ಯೋಜನೆಗೆ ಈ ವರ್ಷದಲ್ಲಿ 100 ಕೋಟಿ ರೂ. ಒದಗಿಸಲಾಗಿದೆ

214. 2023–24ನೇ ಸಾಲಿನಲ್ಲಿ ಪದವಿ ಪೂರ್ವ ತರಗತಿಗಳನ್ನು ಪ್ರಾರಂಭಿಸಲಾಗಿರುವ 62 ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ವಾಣಿಜ್ಯ ವಿಭಾಗವನ್ನು ಪ್ರಾರಂಭಿಸಲಾಗುವುದು.

215. ಮುಖ್ಯಮಂತ್ರಿಗಳ ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿ ಯೋಜನೆಯಡಿ 1,000 ಕೋಟಿ ರೂ. ಕ್ರಿಯಾ ಯೋಜನೆಯನ್ನು ತಯಾರಿಸಲಾಗಿದ್ದು, ಕಾಮಗಾರಿಗಳನ್ನು 2025–26ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲಾಗುವುದು.

216. ಮದರಸಾಗಳಲ್ಲಿ ಧಾರ್ಮಿಕ ಶಿಕ್ಷಣದೊಂದಿಗೆ ಔಪಚಾರಿಕ ಶಿಕ್ಷಣವನ್ನು ನೀಡಲು ಕಂಪ್ಯೂಟರ್, ಸ್ಮಾರ್ಟ್ ಬೋರ್ಡ್ ಇತ್ಯಾದಿ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಿ, ಈ ವಿದ್ಯಾರ್ಥಿಗಳು NIOS ಮೂಲಕ SSLC ಪರೀಕ್ಷೆ ಬರೆಯಲು ಅವಕಾಶವಾಗುವಂತೆ ಸಜ್ಜುಗೊಳಿಸಲಾಗುವುದು.

217. ಕರ್ನಾಟಕ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದ ವತಿಯಿಂದ ಯುವಕ/ಯುವತಿಯರಿಗೆ ನವೋದ್ಯಮಗಳನ್ನು ಪ್ರಾರಂಭಿಸಲು ಉತ್ತೇಜನ ನೀಡಲಾಗುವುದು.

218. ವಕ್ಫ್ ಸಂಸ್ಥೆಗಳ ದುರಸ್ತಿ, ಜೀರ್ಣೋದ್ಧಾರ ಮತ್ತು ಖಬರಸ್ತಾನಗಳಲ್ಲಿ ಮೂಲಸೌಕರ್ಯಕ್ಕಾಗಿ ಹಾಗೂ ಆಸ್ತಿಗಳ ಸಂರಕ್ಷಣೆಗಾಗಿ 150 ಕೋಟಿ ರೂ. ಒದಗಿಸಲಾಗಿದೆ.

219. ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಮತ್ತು ವೃತ್ತಿ ಮಾರ್ಗದರ್ಶನಕ್ಕೆ (career guidance) ತರಬೇತಿ ನೀಡಲಾಗುವುದು.

220. ಪದವಿ ಶಿಕ್ಷಣದಿಂದ ವಂಚಿತರಾಗುತ್ತಿರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಬೆಂಗಳೂರಿನ ಹಜ್ ಭವನದಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ (KSOU) ಪ್ರಾದೇಶಿಕ ಕೇಂದ್ರ ತೆರೆದು, ವಿವಿಧ ಪದವಿ/ಸ್ನಾತಕೋತ್ತರ ಪದವಿ ಶಿಕ್ಷಣ ನೀಡಲಾಗುವುದು.

221. ಅಲ್ಪಸಂಖ್ಯಾತರ 169 ವಸತಿ ಶಾಲೆ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ 25,000 ವಿದ್ಯಾರ್ಥಿನಿಯರಿಗೆ ಸ್ವಯಂ ರಕ್ಷಣಾ ಕೌಶಲ್ಯ ತರಬೇತಿಯನ್ನು ನೀಡಲಾಗುವುದು.

222. ಆರ್ಥಿಕವಾಗಿ ಹಿಂದುಳಿದಿರುವ ಅಲ್ಪಸಂಖ್ಯಾತ ಸಮುದಾಯದವರ ಸರಳ ವಿವಾಹಕ್ಕೆ ಪ್ರೋತ್ಸಾಹ ನೀಡಲು ಸ್ವಯಂಸೇವಾ ಸಂಸ್ಥೆಗಳ ಮೂಲಕ ನಡೆಯುವ ಸಮೂಹ ವಿವಾಹಗಳ ವೆಚ್ಚಗಳಿಗಾಗಿ ಪ್ರತಿ ಜೋಡಿಗೆ 50,000 ರೂ. ನೀಡಲಾಗುವುದು.

223. ಹಜ್ ಯಾತ್ರಿಕರು ಹಾಗೂ ಅವರ ಸಂಬಂಧಿಕರಿಗೆ ಅಗತ್ಯ ಸೌಲಭ್ಯ ಮತ್ತು ಸೌಕರ್ಯಗಳನ್ನು ಒದಗಿಸಲು ಬೆಂಗಳೂರಿನ ಹಜ್ ಭವನದಲ್ಲಿ ಹೆಚ್ಚುವರಿ ಕಟ್ಟಡವನ್ನು ನಿರ್ಮಿಸಲಾಗುವುದು.

224. ಅಲ್ಪಸಂಖ್ಯಾತ ಮಹಿಳೆಯರ ಉನ್ನತ ಶಿಕ್ಷಣಕ್ಕೆ ಪೂರಕವಾಗಿ 2024–25ನೇ ಸಾಲಿನಲ್ಲಿ ವಕ್ಫ್ ಸಂಸ್ಥೆಗಳ ಖಾಲಿ ನಿವೇಶನಗಳಲ್ಲಿ 15 ಮಹಿಳಾ ಕಾಲೇಜುಗಳ ನಿರ್ಮಾಣಕ್ಕೆ ಕ್ರಮಕೈಗೊಳ್ಳಲಾಗಿದೆ. ಮುಂದುವರೆದು, 2025–26ನೇ ಸಾಲಿನಲ್ಲಿ 16 ಹೊಸ ಮಹಿಳಾ ಕಾಲೇಜುಗಳನ್ನು ಸ್ಥಾಪಿಸಲಾಗುವುದು.

225. ರಾಜ್ಯದಲ್ಲಿರುವ ಗುರುದ್ವಾರಗಳಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸಲು 2 ಕೋಟಿ ರೂ. ಅನುದಾನ ಒದಗಿಸಲಾಗುವುದು.

226. ಬೆಂಗಳೂರಿನಲ್ಲಿ ಬೌದ್ಧ ಅಧ್ಯಯನ ಅಕಾಡೆಮಿಯನ್ನು ಸ್ಥಾಪಿಸಲಾಗುವುದು ಹಾಗೂ ಮಹಾಭೋಧಿ ಅಧ್ಯಯನ ಕೇಂದ್ರದ 100 ವರ್ಷಗಳ ಹಳೆಯ ಗ್ರಂಥಾಲಯವನ್ನು 1 ಕೋಟಿ ರೂ. ವೆಚ್ಚದಲ್ಲಿ ಡಿಜಿಟಲೀಕರಣಗೊಳಿಸಿ ಉನ್ನತೀಕರಿಸಲಾಗುವುದು.

227. ಜೈನ, ಬೌದ್ಧ ಹಾಗೂ ಸಿಖ್ಖ್ ಸಮುದಾಯಗಳ ಸಮಗ್ರ ಅಭಿವೃದ್ಧಿಗಾಗಿ 100 ಕೋಟಿ ರೂ. ಅನುದಾನವನ್ನು ಮೀಸಲಿರಿಸಲಾಗಿದೆ.

228. ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿಗಾಗಿ 250 ಕೋಟಿ ರೂ. ಒದಗಿಸಲಾಗುವುದು.

229. ಜೈನ ಅರ್ಚಕರು, ಸಿಖ್ಖ್ ಮುಖ್ಯಗ್ರಂಥಿಗಳು, ಮಸೀದಿಗಳ ಪೇಷ್ ಇಮಾಮ್ ಗಳಿಗೆ ನೀಡುತ್ತಿರುವ ಮಾಸಿಕ ಗೌರವಧನವನ್ನು 6,000 ರೂ. ಗಳಿಗೆ ಹೆಚ್ಚಿಸಲಾಗುವುದು. ಸಿಖ್ಖ್ ಸಹಾಯಕ ಗ್ರಂಥಿಗಳು ಹಾಗೂ ಮೋಝಿನ್ ಗಳಿಗೆ ನೀಡುವ ಮಾಸಿಕ ಗೌರವಧನವನ್ನು 5,000 ರೂ.ಗಳಿಗೆ ಹೆಚ್ಚಿಸಲಾಗುವುದು.

230. ಪ್ರಾಚೀನ ಬೌದ್ಧ ಕೇಂದ್ರವಾಗಿರುವ ಕಲುಬುರಗಿ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನಲ್ಲಿ ಸನ್ನತಿ ಅಭಿವೃದ್ಧಿ ಪ್ರಾಧಿಕಾರ ರಚಿಸಲಾಗುವುದು.

231. ಅಲ್ಪಸಂಖ್ಯಾತರ ಸಮುದಾಯದವರಿಗೆ ಸಾಂಸ್ಕೃತಿಕ ಮತ್ತು ಸಾಮಾಜಿಕ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಹೋಬಳಿ ಮತ್ತು ತಾಲ್ಲೂಕು ಮಟ್ಟದಲ್ಲಿ 50 ಲಕ್ಷ ರೂ. ಹಾಗೂ ಜಿಲ್ಲಾ ಮತ್ತು ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಒಂದು ಕೋಟಿ ರೂ. ವೆಚ್ಚದಲ್ಲಿ ಬಹುಪಯೋಗಿ ಭವನಗಳನ್ನು ನಿರ್ಮಿಸಲಾಗುವುದು.

232. ಅಲ್ಪಸಂಖ್ಯಾತರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ಪ್ರದೇಶಗಳಲ್ಲಿರುವ ಐ.ಟಿ.ಐ ಗಳಲ್ಲಿ ಹೊಸ ಕೋರ್ಸ್‌ಗಳನ್ನು ಹಾಗೂ ಹೆಚ್ಚುವರಿ ತರಗತಿ ಪ್ರಾರಂಭಿಸಲಾಗುವುದು.

233. KEA ಮುಖಾಂತರ ವೃತ್ತಿಪರ ಕೋರ್ಸ್‌ಗಳಲ್ಲಿ ಪ್ರವೇಶ ಪಡೆಯುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಐದು ಲಕ್ಷ ರೂ.ಗಳಿಗೆ ಸೀಮಿತಗೊಳಿಸಿ ಶುಲ್ಕದಲ್ಲಿ ಶೇ.50 ರಷ್ಟನ್ನು ಮರುಪಾವತಿ ಮಾಡಲಾಗುವುದು.

234. ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ರಾಷ್ಟ್ರೀಯ ವಿದೇಶಿ ವಿದ್ಯಾರ್ಥಿವೇತನವನ್ನು 20 ಲಕ್ಷ ರೂ.ಗಳಿಂದ 30 ಲಕ್ಷ ರೂ.ಗಳಿಗೆ ಹೆಚ್ಚಿಸಲಾಗುವುದು.

235. ಉಳ್ಳಾಲದಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿನಿಯರಿಗಾಗಿ ವಸತಿ ಸಹಿತ ಪಿ.ಯು. ಕಾಲೇಜನ್ನು ಸ್ಥಾಪಿಸಲಾಗುವುದು.

**ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳು**

236. ರಾಜ್ಯದ ಬಡವರ ಹಸಿವು ನೀಗಿಸುವ ಉದ್ದೇಶದಿಂದ ಆರಂಭಿಸಲಾದ ಅನ್ನಭಾಗ್ಯ ಯೋಜನೆಯಡಿ, ಇದುವರೆಗೆ ಹೆಚ್ಚುವರಿ 5 ಕೆ.ಜಿ. ಆಹಾರ ಧಾನ್ಯಕ್ಕೆ ಪರ್ಯಾಯವಾಗಿ ನೀಡಲಾಗುತ್ತಿರುವ ಸಹಾಯಧನದ ಬದಲಾಗಿ, 5 ಕೆ.ಜಿ. ಅಕ್ಕಿಯನ್ನು ವಿತರಿಸಲಾಗುವುದು. ಇದರಿಂದ 4.21 ಕೋಟಿ ಫಲಾನುಭವಿಗಳಿಗೆ ಹೆಚ್ಚುವರಿ ಅಕ್ಕಿ ಲಭ್ಯವಾಗಲಿದೆ.

237. ಸಾರ್ವಜನಿಕ ವಿತರಣಾ ವ್ಯವಸ್ಥೆಯನ್ನು ಇನ್ನಷ್ಟು ಸುಧಾರಿಸಲು ತಂತ್ರಜ್ಞಾನವನ್ನು ಗರಿಷ್ಠ ಬಳಕೆ ಮಾಡಲಾಗುವುದು. ಇದಕ್ಕಾಗಿ ಒಟ್ಟಾರೆ 5 ಕೋಟಿ ರೂ. ವೆಚ್ಚದಲ್ಲಿ ಸಗಟು ಗೋದಾಮುಗಳಿಗೆ CCTV ಅಳವಡಿಕೆ, GPS ಆಧಾರಿತ ವಾಹನ Tracking ವ್ಯವಸ್ಥೆ ಮತ್ತು Command Control Centre ಸ್ಥಾಪಿಸಲಾಗುವುದು.

238. 80 ವರ್ಷ ಮೇಲ್ಪಟ್ಟ ಹಿರಿಯ ನಾಗರೀಕರು ಮಾತ್ರ ಇರುವ ಮನೆಗಳಿಗೆ ಆಹಾರ ಧಾನ್ಯಗಳನ್ನು ತಲುಪಿಸಲು ಹಿಂದಿನ ವರ್ಷ 'ಅನ್ನ–ಸುವಿಧಾ' ಯೋಜನೆ ಜಾರಿಗೊಳಿಸಲಾಗಿದೆ. ಈ ಯೋಜನೆಯಡಿ 2 ಲಕ್ಷ ಫಲಾನುಭವಿಗಳನ್ನು ಗುರುತಿಸಲಾಗಿದ್ದು, 75 ವಯಸ್ಸಿನ ಮೇಲ್ಪಟ್ಟ ಹಿರಿಯ ನಾಗರೀಕರು ಮಾತ್ರ ಇರುವ ಮನೆಗಳಿಗೂ ಈ ಸೇವೆ ವಿಸ್ತರಿಸಲಾಗುವುದು. ಇದರಿಂದ 3.30 ಲಕ್ಷ ಫಲಾನುಭವಿಗಳಿಗೆ ಅನುಕೂಲವಾಗಲಿದೆ.

239. ಸಾರ್ವಜನಿಕ ವಿತರಣಾ ವ್ಯವಸ್ಥೆಯನ್ನು ಸಮರ್ಪಕವಾಗಿ ನಿಗಾವಹಿಸಲು ಸಾಧ್ಯವಾಗುವಂತೆ, ನ್ಯಾಯಬೆಲೆ ಅಂಗಡಿಗಳಲ್ಲಿ ಸ್ಥಾಪಿಸಿರುವ Electronic Weighing Machine ಮತ್ತು Point of Sale System ಗಳನ್ನು ಸಾರ್ವಜನಿಕ ವಿತರಣಾ ಪದ್ಧತಿಯ IT ವ್ಯವಸ್ಥೆಯೊಂದಿಗೆ ಸಂಯೋಜಿಸಲಾಗುವುದು.

240. ಅನ್ನಭಾಗ್ಯ ಯೋಜನೆಯ ಸಗಟು ಲಾಭಾಂಶ ಪ್ರತಿ ಕ್ವಿಂಟಾಲ್ ಗೆ 35 ರೂ. ಗಳಿಂದ 45 ರೂ. ಗಳಿಗೆ ಹೆಚ್ಚಳ ಮಾಡಲಾಗುವುದು.

241. ಹೊಸ ನ್ಯಾಯಬೆಲೆ ಅಂಗಡಿಗಳನ್ನು ಅವಶ್ಯಕತೆಗನುಗುಣವಾಗಿ ಪ್ರಾರಂಭಿಸಲಾಗುವುದು. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಸಮುದಾಯದವರಿಗೆ ಮತ್ತು ಸಹಕಾರ ಸಂಘಗಳಿಗೆ ಹಂಚಿಕೆಯಲ್ಲಿ ಆದ್ಯತೆ ನೀಡಲಾಗುವುದು.

**ವಸತಿ**

242. ರಾಜೀವ್ ಗಾಂಧಿ ವಸತಿ ನಿಗಮದಿಂದ ಅನುಷ್ಠಾನಗೊಳಿಸಲಾಗುತ್ತಿರುವ AHP ಮನೆಗಳ ಫಲಾನುಭವಿಗಳಿಗೆ ಸಾಲದ ಮೇಲಿನ ಬಡ್ಡಿ ಹೊರೆಯನ್ನು ಕಡಿಮೆ ಮಾಡಲು 'Interest subvention' ಯೋಜನೆಯನ್ನು ಜಾರಿಗೆ ತರಲಾಗುವುದು.

243. ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ವತಿಯಿಂದ ಪ್ರಧಾನ ಮಂತ್ರಿ ಆವಾಸ್ ಯೋಜನೆ (ನ) ಅಡಿಯಲ್ಲಿ ಒಟ್ಟಾರೆ 1,80,253 ಮನೆಗಳ ಗುರಿಯನ್ನು ಅನುಮೋದಿಸಲಾಗಿದೆ. ಸದರಿ ಮನೆಗಳಿಗೆ ಫಲಾನುಭವಿಗಳ ವಂತಿಕೆಯನ್ನು ಒಂದು ಲಕ್ಷಗಳಿಗೆ ಇಳಿಕೆ ಮಾಡಲಾಗಿದ್ದು, ರಾಜ್ಯ ಸರ್ಕಾರವು ಐದು ಲಕ್ಷಗಳನ್ನು ಫಲಾನುಭವಿಗಳ ಪರವಾಗಿ ಭರಿಸುತ್ತಿದೆ. ಈಗಾಗಲೇ, 86,651

ಮನೆಗಳು ಪೂರ್ಣಗೊಂಡಿರುತ್ತವೆ. ಉಳಿದ ಮನೆಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಕ್ರಮವಹಿಸಲಾಗುವುದು.

244. ಸರ್ಕಾರದ ಭೂಮಿಯನ್ನು ಬಳಸಿ ಖಾಸಗಿ ಸಹಭಾಗಿತ್ವದೊಂದಿಗೆ ವಸತಿ ಘಟಕಗಳನ್ನು ನಿರ್ಮಿಸಿ, ಆರ್ಥಿಕವಾಗಿ ದುರ್ಬಲ ವರ್ಗದ ಜನರಿಗೆ ಹಂಚಿಕೆ ಮಾಡಲು ಯೋಜನೆಯನ್ನು ರೂಪಿಸಲಾಗುವುದು.

245. ಕರ್ನಾಟಕ ಗೃಹ ಮಂಡಳಿಯಿಂದ ಆನೇಕಲ್ ತಾಲ್ಲೂಕಿನ ಸೂರ್ಯ ನಗರದ 4ನೇ ಹಂತದ ಯೋಜನೆಯಡಿ 16,140 ನಿವೇಶನಗಳನ್ನು 2025–26ನೇ ಸಾಲಿನಲ್ಲಿ ಅಭಿವೃದ್ಧಿಪಡಿಸಲಾಗುವುದು. 50:50 ಅನುಪಾತದ ಪಾಲುದಾರಿಕೆಯಡಿ ಭೂ ಮಾಲೀಕರ ಪಾಲಿನ ನಿವೇಶನಗಳನ್ನು ನೀಡಿ, ಉಳಿದ ನಿವೇಶನಗಳನ್ನು ಸಾರ್ವಜನಿಕರಿಗೆ ಹಂಚಿಕೆ ಮಾಡಲಾಗುವುದು.

246. ರಾಜೀವ್ ಗಾಂಧಿ ವಸತಿ ನಿಗಮದಿಂದ ಬೆಂಗಳೂರಿನಲ್ಲಿ ಅನುಷ್ಠಾನಗೊಳಿಸಲಾದ ಮುಖ್ಯಮಂತ್ರಿಗಳ ಒಂದು ಲಕ್ಷ ಬಹುಮಹಡಿ ಯೋಜನೆಯಡಿ, ಈಗಾಗಲೇ ಠೇವಣಿ ಮೊತ್ತವನ್ನು ಪಾವತಿಸಿರುವ 12,153 ಫಲಾನುಭವಿಗಳಿಗೆ ಅವರ ವಂತಿಕೆಯ ಮೊತ್ತದಲ್ಲಿ ಒಂದು ಲಕ್ಷಗಳನ್ನು ಕಡಿತಗೊಳಿಸಿ ರಾಜ್ಯ ಸರ್ಕಾರದಿಂದ 121 ಕೋಟಿ ರೂ. ಭರಿಸಲಾಗುವುದು.

**ಕಾರ್ಮಿಕ**

**ಗುರುವಾದರೂ ಕಾಯಕದಿಂದಲೇ ಜೀವನ್ಮುಕ್ತಿ**
**ಲಿಂಗವಾದರೂ ಕಾಯಕದಿಂದಲೇ ಶಿಲೆಯ ಕುಲ ಹರಿವುದು**
**ಜಂಗಮವಾದರೂ ಕಾಯಕದಿಂದಲೇ ವೇಷಪಾಶ ಹರಿವುದು**
**– ವಚನಕಾರ ನುಲಿಯ ಚಂದಯ್ಯ**

247. ಕಟ್ಟಡ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹ ನೀಡಲು ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ರಾಜ್ಯದ 31 ಜಿಲ್ಲೆಗಳಲ್ಲಿ 06ನೇ ತರಗತಿಯಿಂದ 12ನೇ ತರಗತಿವರೆಗಿನ ವಸತಿ ಶಾಲೆಗಳನ್ನು ನಿರ್ಮಿಸಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮುಖಾಂತರ ನಿರ್ವಹಿಸಲಾಗುವುದು. ಇದಕ್ಕೆ ಒಟ್ಟಾರೆ 750 ಕೋಟಿ ರೂ. ವೆಚ್ಚ ಮಾಡಲಾಗುವುದು.

248. ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯ ನೋಂದಾಯಿತ ಕಾರ್ಮಿಕರಿಗೆ ಮತ್ತು ಅವರ ಅವಲಂಬಿತರಿಗೆ ನೀಡುತ್ತಿರುವ ಶೈಕ್ಷಣಿಕ, ವೈದ್ಯಕೀಯ ಮತ್ತು ಇತರೆ ಸೌಲಭ್ಯಗಳನ್ನು ವಿಸ್ತರಿಸಲಾಗುವುದು. ಇದಕ್ಕಾಗಿ ಸರ್ಕಾರದ ವತಿಯಿಂದ ನೀಡುತ್ತಿರುವ ಧನಸಹಾಯವನ್ನು ದ್ವಿಗುಣಗೊಳಿಸಲಾಗಿದೆ.

249. ನೋಂದಾಯಿತ ಕಟ್ಟಡ ಕಾರ್ಮಿಕರು ಸಹಜ ಮರಣ ಹೊಂದಿದಲ್ಲಿ, Ex-gratia ಮೊತ್ತವನ್ನು 75,000 ರೂ.ನಿಂದ 1.5 ಲಕ್ಷ ರೂ.ಗೆ ಮತ್ತು ಕೆಲಸದ ಸ್ಥಳದಲ್ಲಿ ಮರಣ ಹೊಂದುವ ಕಾರ್ಮಿಕರ ಅವಲಂಬಿತರಿಗೆ ಪರಿಹಾರದ ಮೊತ್ತವನ್ನು 5 ಲಕ್ಷ ರೂ.ನಿಂದ 8 ಲಕ್ಷ ರೂ.ಗೆ ಹೆಚ್ಚಿಸಲಾಗುವುದು.

250. ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಡಿ ನೋಂದಾಯಿತ ಮಂಡಳಿಯ ಫಲಾನುಭವಿಗಳು 5 ಲಕ್ಷ ರೂ. ಚಿಕಿತ್ಸೆ ಮಿತಿಯನ್ನು ಪೂರ್ಣಗೊಳಿಸಿದ್ದಲ್ಲಿ ಮಂಡಳಿಯಿಂದ ಹೆಚ್ಚುವರಿಯಾಗಿ ಹೃದ್ರೋಗ ಮತ್ತು ಕ್ಯಾನ್ಸರ್ ಖಾಯಿಲೆಗಳಿಗೆ 5 ಲಕ್ಷ ರೂ.ವರೆಗೆ ಮತ್ತು ಇತರೆ ಖಾಯಿಲೆಗಳಿಗೆ 2 ಲಕ್ಷ ರೂ.ವರೆಗೆ ವೈದ್ಯಕೀಯ ವೆಚ್ಚವನ್ನು ಮರುಪಾವತಿ ಮಾಡಲಾಗುವುದು.

251. ಕಾರ್ಮಿಕರಿಗೆ ಉತ್ತಮ ಆರೋಗ್ಯ ಸೇವೆಯನ್ನು ಒದಗಿಸಲು ಪೂರಕವಾಗಿ ರಾಜ್ಯ ವಿಮಾ ಆಸ್ಪತ್ರೆಗಳಿಗೆ ಅಗತ್ಯ ಮೂಲಸೌಲಭ್ಯ ಕಲ್ಪಿಸಲು 51 ಕೋಟಿ ರೂ. ಅನುದಾನ ನಿಗದಿಪಡಿಸಲಾಗುವುದು. ಇದರಡಿ ಆಸ್ಪತ್ರೆಗಳ ಶುಚಿತ್ವ, ಪರಿಕರಗಳ ಖರೀದಿ, ತುರ್ತು ವಿಭಾಗಗಳ ನವೀಕರಣ, ಪ್ರಯೋಗಾಲಯಗಳ ಉನ್ನತೀಕರಣ ಮುಂತಾದ ಕ್ರಮಗಳನ್ನು ಕೈಗೊಳ್ಳಲಾಗುವುದು.

**ಕೌಶಲ್ಯಾಭಿವೃದ್ಧಿ**

252. ನಿರುದ್ಯೋಗಿಗಳಾಗಿರುವ ಪದವೀಧರರಿಗೆ ಹಾಗೂ ಡಿಪ್ಲೋಮ ಪಡೆದವರಿಗೆ ನಿರುದ್ಯೋಗ ಭತ್ಯೆಯನ್ನು ನೀಡಲು ನಮ್ಮ ಸರ್ಕಾರವು 'ಯುವನಿಧಿ' ಯೋಜನೆಯನ್ನು ಅನುಷ್ಠಾನಗೊಳಿಸಿದೆ. ಈಗಾಗಲೇ ಸುಮಾರು 2.58 ಲಕ್ಷ ಯುವಕರು ಈ ಯೋಜನೆಯಡಿ ನೋಂದಾಯಿಸಿಕೊಂಡಿದ್ದು, 286 ಕೋಟಿ ರೂ. ನೇರ ನಗದು ವರ್ಗಾವಣೆ ಮಾಡಲಾಗಿದೆ. ನಿರುದ್ಯೋಗ ಭತ್ಯೆ ನೀಡುವುದರೊಂದಿಗೆ ಈ ಯುವಕರಿಗೆ Industry Linkage Cell ಅಡಿ ಭವಿಷ್ಯ ಕೌಶಲ್ಯ ತರಬೇತಿ ನೀಡಲಾಗುವುದು.

253. ನಮ್ಮ ಸರ್ಕಾರದ ಹಿಂದಿನ ಆಡಳಿತಾವಧಿಯಲ್ಲಿ, ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯನ್ನು (CMKKY) ಪ್ರಾರಂಭಿಸಲಾಗಿತ್ತು. ಪ್ರಸ್ತುತ, ರಾಜ್ಯದ ಯುವಕರ ಉದ್ಯೋಗಾರ್ಹತೆ ಮತ್ತು ಉದ್ಯಮಶೀಲತೆಯನ್ನು ಇನ್ನಷ್ಟು ಉತ್ತೇಜಿಸಲು ಯೋಜನೆಯ ಮಾರ್ಗಸೂಚಿಗಳನ್ನು ಪರಿಷ್ಕರಿಸಿ CMKKY 2.0 ಅನ್ನು ಜಾರಿಗೊಳಿಸಲಾಗುವುದು. ಈ ಯೋಜನೆಯಡಿ ಸಾಂಪ್ರದಾಯಿಕ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳೊಂದಿಗೆ ಈ ಕೆಳಗಿನ ಉಪಕ್ರಮಗಳನ್ನು ತೆಗೆದುಕೊಳ್ಳಲಾಗುವುದು.

i) ರಾಜ್ಯದ ನರ್ಸಿಂಗ್ ವಿದ್ಯಾರ್ಥಿಗಳಿಗೆ ಜರ್ಮನ್, ಇಟಾಲಿಯನ್, ಸ್ಪ್ಯಾನಿಷ್ ಮತ್ತು ಇತರೆ ವಿದೇಶೀ ಭಾಷಾ ಕೌಶಲ್ಯ ತರಬೇತಿ ನೀಡಲಾಗುವುದು.

ii) ವಿದೇಶದಲ್ಲಿ ಉದ್ಯೋಗಾವಕಾಶ ಕಲ್ಪಿಸಲು ಅಂತಾರಾಷ್ಟ್ರೀಯ ವಲಸೆ ಕೇಂದ್ರದ ಮೂಲಕ ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ಉದ್ಯೋಗ ಮೇಳವನ್ನು ಆಯೋಜಿಸಲಾಗುವುದು.

iii) ವಿದ್ಯಾರ್ಥಿಗಳು ಭವಿಷ್ಯದಲ್ಲಿ ಸೂಕ್ತ ವೃತ್ತಿಯನ್ನು ಆಯ್ಕೆ ಮಾಡಿಕೊಳ್ಳಲು ಮಾರ್ಗದರ್ಶನವನ್ನು ಒದಗಿಸಲು **'**ನನ್ನ ವೃತ್ತಿ**,** ನನ್ನ ಆಯ್ಕೆ**'** ಕಾರ್ಯಕ್ರಮದಡಿ ಸರ್ಕಾರಿ ಶಾಲಾ/ಕಾಲೇಜುಗಳಲ್ಲಿನ 2.30 ಲಕ್ಷ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ನೀಡಲಾಗುವುದು.

254. ವಿಶ್ವ ಕೌಶಲ್ಯ ಸ್ಪರ್ಧೆಯ ಪೂರ್ವಸಿದ್ಧತೆಗಾಗಿ ಆಯೋಜಿಸಲಾಗುವ ರಾಷ್ಟ್ರೀಯ ಮಟ್ಟದ India Skills-2026 ಸ್ಪರ್ಧೆಯನ್ನು ಬೆಂಗಳೂರಿನಲ್ಲಿ ಆಯೋಜಿಸಲು ಉದ್ದೇಶಿಸಲಾಗಿರುತ್ತದೆ.

255. ಅಳಿವಿನಂಚಿನಲ್ಲಿರುವ ಪಾರಂಪರಿಕ ಮತ್ತು ಪ್ರಾದೇಶಿಕ ಕೌಶಲ್ಯಗಳನ್ನು ಮುಂದಿನ ಪೀಳಿಗೆಗೆ ತಲುಪಿಸಲು 2,000 ಅಭ್ಯರ್ಥಿಗಳಿಗೆ ಅಗತ್ಯವಿರುವ ಟೂಲ್‌ಕಿಟ್‌ಗಳೊಂದಿಗೆ ಅಲ್ಪಾವಧಿ

ತರಬೇತಿಯನ್ನು ನೀಡಲಾಗುವುದು. ಲಂಬಾಣಿ ಜನಾಂಗದ ಕಸೂತಿ ಕಲೆಯ ಬಗ್ಗೆ ತರಬೇತಿಯನ್ನು 1,000 ಅಭ್ಯರ್ಥಿಗಳಿಗೆ ದಾವಣಗೆರೆ ಮತ್ತು ಬೀದರ್ ಜಿಲ್ಲೆಗಳಲ್ಲಿನ ಕೌಶಲ್ಯ ತರಬೇತಿ ಕೇಂದ್ರಗಳಲ್ಲಿ ನೀಡಲಾಗುವುದು.

256. ರಾಷ್ಟ್ರೀಯ ಜೀವನೋಪಾಯ ಅಭಿಯಾನದ ಸ್ವಸಹಾಯ ಗುಂಪುಗಳ ಮಹಿಳೆಯರಿಗೆ ಜೀವನೋಪಾಯ ಚಟುವಟಿಕೆ ಕೈಗೊಳ್ಳಲು ತ್ವರಿತ ಸಾಲ ಸೌಲಭ್ಯ ಒದಗಿಸಿ, ಆರ್ಥಿಕ ಅಗತ್ಯತೆಗಳ ಪೂರೈಕೆ ಮತ್ತು ಭದ್ರತೆ ಒದಗಿಸಿ, ಉಳಿತಾಯ ಮತ್ತು ಉದ್ಯಮಶೀಲತೆ ಹೆಚ್ಚಿಸುವ ಉದ್ದೇಶದಿಂದ ರಾಜ್ಯ ಮಟ್ಟದಲ್ಲಿ 'ಅಕ್ಕ ಕೋ–ಆಪರೇಟಿವ್ ಸೊಸೈಟಿ' ಸ್ಥಾಪಿಸಲಾಗುವುದು. 'ಗೃಹಲಕ್ಷ್ಮಿ' ಯೋಜನೆಯ ಯಜಮಾನಿಯರನ್ನು ಸ್ವಸಹಾಯ ಗುಂಪುಗಳ ಸದಸ್ಯರುಗಳನ್ನಾಗಿಸಿ ರಾಜ್ಯಮಟ್ಟದ 'ಅಕ್ಕ ಕೋ–ಆಪರೇಟಿವ್ ಸೊಸೈಟಿ' ವ್ಯಾಪ್ತಿಗೆ ತರಲಾಗುವುದು.

257. ರಾಷ್ಟ್ರೀಯ ಜೀವನೋಪಾಯ ಅಭಿಯಾನದಡಿ ಮಹಿಳಾ ಸ್ವ–ಸಹಾಯ ಸಂಘಗಳಿಂದ ಆಯ್ದ 50 ಸ್ಥಳಗಳಲ್ಲಿ ಶಿಶು ಪಾಲನೆಗಾಗಿ 'ವಾತ್ಸಲ್ಯ ಕೇಂದ್ರ'ಗಳನ್ನು ಸ್ಥಾಪಿಸಲಾಗುವುದು. ತಜ್ಞ ಚಿಕಿತ್ಸೆ ಪಡೆಯಲು ಸರ್ಕಾರಿ ಆಸ್ಪತ್ರೆಗಳಿಗೆ ಆಗಮಿಸುತ್ತಿರುವ ಬಡ

ರೋಗಿಗಳು ಹಾಗೂ ಅವರ ಆರೈಕದಾರರಿಗಾಗಿ ವಿಶ್ರಾಂತಿ ಗೃಹಗಳನ್ನು ಸ್ಥಾಪಿಸಲಾಗುವುದು.

258. ಇಂದಿರಾ ಕ್ಯಾಂಟೀನ್‌ಗಳ ನಿರ್ವಹಣೆಯನ್ನು ರಾಷ್ಟ್ರೀಯ ಜೀವನೋಪಾಯ ಅಭಿಯಾನದ ಸ್ವ–ಸಹಾಯ ಸಂಘಗಳ ಮಹಿಳೆಯರ ಮೂಲಕ ನಿರ್ವಹಿಸುವ ವ್ಯವಸ್ಥೆಯನ್ನು ಪ್ರಾಯೋಗಿಕವಾಗಿ 10 ನಗರ ಪ್ರದೇಶಗಳಲ್ಲಿ ಪ್ರಾರಂಭಿಸಲಾಗುವುದು.

259. ಪಿ.ಎಮ್. ಸ್ವನಿಧಿ ಯೋಜನೆಯಡಿ ಸಾಲದ ಗರಿಷ್ಠ ಮಿತಿಯನ್ನು ತಲುಪಿರುವ ಬೀದಿಬದಿ ವ್ಯಾಪಾರಿಗಳು, ತಮ್ಮ ವ್ಯಾಪಾರ ವಹಿವಾಟನ್ನು ವಿಸ್ತರಿಸಲು ಒಂದು ಲಕ್ಷದವರೆಗಿನ ಸಾಲ ಪಡೆದಲ್ಲಿ ಶೇ.8ರಷ್ಟು ಬಡ್ಡಿ ಸಹಾಯಧನವನ್ನು ಸರ್ಕಾರದಿಂದ ನೀಡಲಾಗುವುದು.

260. ಮಹಿಳಾ ಸಬಲೀಕರಣಕ್ಕಾಗಿ ಗ್ರಾಮ ಪಂಚಾಯತಿ ಸ್ವ–ಸಹಾಯ ಸಂಘಗಳ ಸಹಭಾಗಿತ್ವದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಕೈಗೊಳ್ಳಲಾಗುವುದು:

i) ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿ ಕಛೇರಿ ಆವರಣಗಳಲ್ಲಿ 'ಅಕ್ಕ ಕೆಫೆ ಮತ್ತು ಕ್ಯಾಂಟೀನ್' ಸ್ಥಾಪಿಸಲಾಗುವುದು.

ii) ಪ್ರತಿ ತಾಲ್ಲೂಕಿನಲ್ಲಿ ಒಂದು 'ಸಮಗ್ರ ಕೃಷಿ ಕ್ಲಸ್ಟರ್' ಅಭಿವೃದ್ಧಿಪಡಿಸಲಾಗುವುದು.

iii) ಶಾಲೆ, ಅಂಗನವಾಡಿ ಮತ್ತು ವಸತಿ ನಿಲಯಗಳಿಗೆ ಮೊಟ್ಟೆ ಮತ್ತು ತರಕಾರಿ ಪೂರೈಸಲು ಸ್ವ–ಸಹಾಯ ಸಂಘಗಳ 'ಕಿರು ಉದ್ಯಮ'ಗಳನ್ನು ಪ್ರೋತ್ಸಾಹಿಸಲಾಗುವುದು.

iv) ಸ್ವ–ಸಹಾಯ ಸಂಘಗಳ ಮೂಲಕ ಪ್ರತಿ ಜಿಲ್ಲೆಯಲ್ಲಿ ಒಂದು 'ಸಮುದಾಯ ಪ್ರವಾಸಿ ಯೋಜನೆ'ಯನ್ನು ಅನುಷ್ಠಾನ ಮಾಡಲಾಗುವುದು.

261. ಬೆಂಗಳೂರು, ಕಲಬುರಗಿ, ಮಂಗಳೂರು, ಮತ್ತು ಬೆಳಗಾವಿ ಕೆಜಿಟಿಟಿಐ ಕೇಂದ್ರಗಳಲ್ಲಿ 10 ಕೋಟಿ ರೂ. ವೆಚ್ಚದಲ್ಲಿ 'Industry-4.0' ಗೆ ಅನುಗುಣವಾಗಿ ಹೊಸ ತಂತ್ರಜ್ಞಾನ ಆಧಾರಿತ ಪಠ್ಯಕ್ರಮದೊಂದಿಗೆ ಹೊಸ ಪ್ರಯೋಗಾಲಯಗಳನ್ನು ಸ್ಥಾಪಿಸಲಾಗುವುದು.

262. ಉದ್ಯಮ ಸಂಬಂಧಿತ ಕೌಶಲ್ಯಗಳನ್ನು ಹೆಚ್ಚಿಸಿ ಸ್ಥಳೀಯ ಉದ್ಯೋಗ ಮತ್ತು ಉದ್ಯಮಶೀಲತೆಗೆ ಒತ್ತು ಕೊಡಲು KKRDB ವತಿಯಿಂದ ಕಲಬುರಗಿ ಜಿಲ್ಲೆ ಸೇಡಂನಲ್ಲಿರುವ ಸರ್ಕಾರಿ ITI ಯನ್ನು ಅಂತಾರಾಷ್ಟ್ರೀಯ ಗುಣಮಟ್ಟಕ್ಕೆ 25 ಕೋಟಿ ರೂ. ವೆಚ್ಚದಲ್ಲಿ ಉನ್ನತೀಕರಿಸಲಾಗುವುದು.

263. ಕಳೆದ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದ ಕಲಬುರಗಿ ಜಿ.ಟಿ.ಟಿ.ಸಿ ಬಹು ಕೌಶಲ್ಯ ಅಭಿವೃದ್ಧಿ ಕೇಂದ್ರಕ್ಕೆ 60 ಕೋಟಿ ರೂ. ಹಾಗೂ ಕೊಪ್ಪಳದ ತಳಕಲ್‌ನಲ್ಲಿರುವ ಕೇಂದ್ರಕ್ಕೆ 90 ಕೋಟಿ ರೂ. ಅನ್ನು KKRDB ವತಿಯಿಂದ ಒದಗಿಸಲಾಗಿತ್ತು. ಈ ಎರಡು ಕೇಂದ್ರಗಳಿಗೆ ಉಳಿದ ಅನುದಾನವನ್ನು ಒದಗಿಸುವುದರೊಂದಿಗೆ ಮೈಸೂರಿನ ವರುಣಾದಲ್ಲಿನ ಜಿಟಿಟಿಸಿ ಬಹು ಕೌಶಲ್ಯ ಅಭಿವೃದ್ಧಿ ಕೇಂದ್ರಕ್ಕೆ ನಬಾರ್ಡ್ ಸಹಯೋಗದೊಂದಿಗೆ 60 ಕೋಟಿ ರೂ. ಅನುದಾನ ಒದಗಿಸಿ ಪ್ರಸಕ್ತ ವರ್ಷದಲ್ಲಿ ಸದರಿ ಕೇಂದ್ರಗಳನ್ನು ಕಾರ್ಯಾರಂಭ ಮಾಡಲಾಗುವುದು.

264. ಮಧುಗಿರಿ ಮತ್ತು ಇಂಡಿಯಲ್ಲಿ ನಬಾರ್ಡ್ ಸಹಯೋಗದೊಂದಿಗೆ ಹಾಗೂ ಕಂಪ್ಲಿ, ರಾಯಚೂರು ಗ್ರಾಮೀಣ ಮತ್ತು ಸಿಂಧನೂರಿನಲ್ಲಿ KKRDB Macro ಅನುದಾನದಡಿಯಲ್ಲಿ ನೂತನ GTTC ಗಳನ್ನು ಸ್ಥಾಪಿಸಲು ಕ್ರಮವಹಿಸಲಾಗುವುದು

265. GIZ ಸಹಯೋಗದೊಂದಿಗೆ ಜಿಟಿಟಿಸಿ ಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಜರ್ಮನಿ ಹಾಗೂ ಇತರ ಯುರೋಪಿಯನ್ ದೇಶಗಳಲ್ಲಿ ಲಭ್ಯವಿರುವ ಉದ್ಯೋಗಾವಕಾಶಗಳ ಪೂರ್ಣ ಉಪಯೋಗ ಪಡೆಯಲು ವಿವಿಧ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ.

i) ಇಪ್ಪತ್ತು ಸಾವಿರ ವಿದ್ಯಾರ್ಥಿಗಳಿಗೆ ಭಾಷಾ ತರಬೇತಿ ನೀಡಲು 20 ಕೋಟಿ ರೂ. ವೆಚ್ಚದಲ್ಲಿ 36 ಜರ್ಮನ್ ಭಾಷಾ ಪ್ರಯೋಗಾಲಯಗಳನ್ನು ನಿರ್ಮಿಸಲಾಗುವುದು.

ii) ಜರ್ಮನ್ ಛೇಂಬರ್ ಆಫ್ ಕಾಮರ್ಸ್ ಸಹಯೋಗದಲ್ಲಿ 5,000 ವಿದ್ಯಾರ್ಥಿಗಳಿಗೆ ಜಾಗತಿಕ ಉದ್ಯೋಗಾವಕಾಶವನ್ನು ಹೆಚ್ಚಿಸಲು ಡಿಪ್ಲೋಮ ಕೋರ್ಸ್‌ನ ಭಾಗವಾಗಿ ಒಂದು ವರ್ಷದ ತರಬೇತಿಯನ್ನು ಜರ್ಮನಿಯಲ್ಲಿ ಪಡೆಯಲು ಅವಕಾಶ ಕಲ್ಪಿಸಲಾಗುವುದು.

iii) ಜಿಟಿಟಿಸಿ, ಜರ್ಮನ್ ವಿಶ್ವವಿದ್ಯಾಲಯಗಳು ಮತ್ತು ಉದ್ಯಮಗಳ ಸಹಯೋಗದೊಂದಿಗೆ ಜರ್ಮನಿಯ ಡ್ಯುಯಲ್ ಎಜುಕೇಷನ್ ಮಾದರಿಯಲ್ಲಿ ಬಿ.ಇ ಕಾರ್ಯಕ್ರಮಗಳನ್ನು ಪ್ರಾರಂಭಿಸಲಾಗುವುದು.

266. ಆಡಳಿತದಲ್ಲಿ ಸುಧಾರಣೆ ತರುವ ನಿಟ್ಟಿನಲ್ಲಿ ಕೌಶಲ್ಯಾಭಿವೃದ್ಧಿ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗಾವಣೆಯನ್ನು Online Counselling ಮೂಲಕ ನಿರ್ವಹಿಸಲಾಗುವುದು.

**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್**

267. ಗ್ರಾಮೀಣ ಭಾಗದ ರಸ್ತೆ ಸಂಪರ್ಕ ಜಾಲವನ್ನು ವ್ಯವಸ್ಥಿತವಾಗಿ ಮತ್ತು ಗುಣಾತ್ಮಕವಾಗಿ ಅಭಿವೃದ್ಧಿ ಪಡಿಸುವ ಉದ್ದೇಶದಿಂದ ಕಳೆದ ಸಾಲಿನ ಆಯವ್ಯಯದಲ್ಲಿ 5,200 ಕೋಟಿ ರೂ. ವೆಚ್ಚದಲ್ಲಿ 'ಪ್ರಗತಿ ಪಥ' ರಸ್ತೆ ಅಭಿವೃದ್ಧಿ ಯೋಜನೆಯನ್ನು ಬಾಹ್ಯ ನೆರವಿನೊಂದಿಗೆ ಪ್ರಾರಂಭಿಸುವುದಾಗಿ ಘೋಷಿಸಲಾಗಿರುತ್ತದೆ. ಈ ಯೋಜನೆಯನ್ನು 2025-26ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುವುದು.

268. ಜಲ ಜೀವನ್ ಮಿಷನ್ ಯೋಜನೆಗಾಗಿ ಇದುವರೆಗೆ ಕೇಂದ್ರ ಸರ್ಕಾರದಿಂದ 11,787 ಕೋಟಿ ರೂ. ಮತ್ತು ರಾಜ್ಯ ಸರ್ಕಾರದಿಂದ 20,703 ಕೋಟಿ ರೂ. ಬಿಡುಗಡೆ ಮಾಡಲಾಗಿರುತ್ತದೆ. 2024-25ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಬರಬೇಕಾಗಿದ್ದ 3,800 ಕೋಟಿ ರೂ.ಗಳಲ್ಲಿ ಕೇವಲ 571 ಕೋಟಿ ರೂ. ಮಾತ್ರ ಬಿಡುಗಡೆ ಮಾಡಲಾಗಿರುತ್ತದೆ. ಯೋಜನೆಯನ್ನು ಶೀಘ್ರವಾಗಿ ಅನುಷ್ಠಾನಗೊಳಿಸುವ ಹಿತದೃಷ್ಟಿಯಿಂದ ರಾಜ್ಯ ಸರ್ಕಾರದಿಂದ ಮುಂಗಡವಾಗಿ 8,400 ಕೋಟಿ ರೂ. ಬಿಡುಗಡೆ ಮಾಡಲಾಗಿರುತ್ತದೆ. 2025-26 ನೇ ಸಾಲಿಗೆ ಈ ಯೋಜನೆಗಾಗಿ ರಾಜ್ಯ ಸರ್ಕಾರದಿಂದ 6,050 ಕೋಟಿ ರೂ. ಒದಗಿಸಲಾಗುವುದು.

269. ಕಲ್ಯಾಣ ಕರ್ನಾಟಕ ಭಾಗದಲ್ಲಿ 38 ವಿಧಾನಸಭಾ ಕ್ಷೇತ್ರಗಳಿಗೆ ಘೋಷಿಸಲಾದ 'ಕಲ್ಯಾಣ ಪಥ' ಯೋಜನೆಯಡಿ 1,000 ಕೋಟಿ ರೂ. ಮೊತ್ತದ 286 ರಸ್ತೆ ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲಾಗುವುದು.

270. ಗ್ರಾಮ ಪಂಚಾಯತಿ ಮಟ್ಟದಲ್ಲಿನ ಅರಿವು ಕೇಂದ್ರಗಳಲ್ಲಿ ವಿಜ್ಞಾನ, ಕಲೆ, ಸಾಹಿತ್ಯ ಮತ್ತು ವೃತ್ತಿ ಮಾರ್ಗದರ್ಶನ ಕುರಿತಾದ 'ಚಿಗುರು' ಕಾರ್ಯಕ್ರಮ, ಮಕ್ಕಳು ಮತ್ತು ಮಹಿಳೆಯರಿಗಾಗಿ 'ಸಂವಿಧಾನ ಸಾಕ್ಷರತೆ', ಮಹಿಳೆಯರಿಗಾಗಿ 'ಡಿಜಿಟಲ್ ಮತ್ತು ಆರ್ಥಿಕ ಸಾಕ್ಷರತೆ' ಹಾಗೂ ಮಹಿಳಾ ಚುನಾಯಿತ ಪ್ರತಿನಿಧಿಗಳಿಗೆ 'ಅಧಿಕಾರ–ಸಾಕಾರ' ಸಾಮರ್ಥ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು.

271. ಸೌರಶಕ್ತಿಯನ್ನು ಬಳಸಿ ಗ್ರಾಮ ಪಂಚಾಯಿತಿಗಳ ವಿದ್ಯುತ್ ಬಿಲ್ಲಿನ ಹೊರೆಯನ್ನು ತಗ್ಗಿಸಲು ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಸೋಲಾರ್ ಮೈಕ್ರೋ–ಗ್ರಿಡ್‌ಗಳನ್ನು ಸ್ಥಾಪಿಸಲಾಗುವುದು.

272. ಪಂಚಾಯತ್ ರಾಜ್ ವ್ಯವಸ್ಥೆಯ ಬಲವರ್ಧನೆಗಾಗಿ ಮತ್ತು ಗ್ರಾಮೀಣ ಜನರಿಗೆ ವ್ಯವಸ್ಥಿತ ರೀತಿಯಲ್ಲಿ ಸೇವೆಗಳನ್ನು ಒದಗಿಸುವ ಹಿತದೃಷ್ಟಿಯಿಂದ ಈ ಕೆಳಕಂಡ ಉಪಕ್ರಮಗಳನ್ನು ಕೈಗೊಳ್ಳಲಾಗುವುದು;

i) ಎಲ್ಲಾ ಅಗತ್ಯ ದಾಖಲೆಗಳನ್ನು ಹೊಂದಿರುವ ಆಸ್ತಿಗಳಿಗೆ ಪ್ರಮಾಣ ಪತ್ರಗಳನ್ನು ವಿತರಿಸಲು 'ಇ–ಸ್ವತ್ತು ಅಭಿಯಾನ'ವನ್ನು ಆರಂಭಿಸಲಾಗುವುದು.

ii) ಪಂಚತಂತ್ರ ತಂತ್ರಾಂಶವನ್ನು ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿಗಳಿಗೂ ವಿಸ್ತರಿಸಲಾಗುವುದು.

iii) ವಿಕೇಂದ್ರಿಕೃತ ಡಿಜಿಟಲ್ ಗ್ರಂಥಾಲಯಗಳ ನಿರ್ವಹಣೆ ಮತ್ತು ಪ್ರಗತಿ ಹಾಗೂ ಸ್ವ–ಸಹಾಯ ಸಂಘಗಳ ಮೂಲಕ ಕೈಗೊಳ್ಳಲಾಗುತ್ತಿರುವ ಘನ ತ್ಯಾಜ್ಯ ನಿರ್ವಹಣೆಯ ಪ್ರಗತಿಯನ್ನು ಪಂಚತಂತ್ರ ತಂತ್ರಾಂಶದ ಮೂಲಕ ನಿರ್ವಹಿಸಲಾಗುವುದು.

iv) ಹಿರಿಯ ಅಧಿಕಾರಿಗಳಿಂದ ಗ್ರಾಮ ಪಂಚಾಯತಿಗಳನ್ನು ದತ್ತು ಪಡೆದು ಸಮಗ್ರವಾಗಿ ಅಭಿವೃದ್ಧಿಪಡಿಸುವ ಉದ್ದೇಶದಿಂದ 'ಗ್ರಾಮ ಪಂಚಾಯತಿ ದತ್ತು' ಕಾರ್ಯಕ್ರಮವನ್ನು ಆರಂಭಿಸಲಾಗುವುದು.

273. ಮಹಾತ್ಮಾ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿ ಈ ಕೆಳಕಂಡ ಕಾರ್ಯಯೋಜನೆಗಳನ್ನು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ:

i) ತ್ಯಾಜ್ಯ ನೀರನ್ನು ನಿರ್ವಹಣೆ ಮಾಡಲು 500 ಗ್ರಾಮಗಳಲ್ಲಿ ಬೂದು ನೀರು ನಿರ್ವಹಣಾ ಘಟಕಗಳನ್ನು ನಿರ್ಮಿಸಲಾಗುವುದು.

ii) ಗ್ರಾಮೀಣ ಪ್ರದೇಶದ ಸ್ವ–ಸಹಾಯ ಸಂಘಗಳ ಪಾಲ್ಗೊಳ್ಳುವಿಕೆಯೊಂದಿಗೆ ಮಿಶ್ರ ಬೆಳೆ ಪದ್ಧತಿಯಲ್ಲಿ ಸಂಬಾರ ಪದಾರ್ಥಗಳು ಹಾಗೂ ಹಣ್ಣಿನ ಬೆಳೆಗಳನ್ನು ಒಟ್ಟು 5,000 ಎಕರೆ ಪ್ರದೇಶದಲ್ಲಿ ಬೆಳೆಸಲಾಗುವುದು.

iii) ಗ್ರಾಮೀಣ ಪ್ರದೇಶಗಳಲ್ಲಿ ಹಾದುಹೋಗುವ ರಾಜ್ಯ ಮತ್ತು ಜಿಲ್ಲಾ ರಸ್ತೆಗಳ 5,000 ಕಿ.ಮೀ. ಬದಿಗಳಲ್ಲಿ ಸಸಿಗಳನ್ನು ಬೆಳೆಸಿ 'ಹಸಿರು ಪಥ'ಗಳನ್ನು ನಿರ್ಮಾಣ ಮಾಡಲಾಗುವುದು.

iv) ರೈತರ ಹೊಲಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳನ್ನು ಹಂತ ಹಂತವಾಗಿ ಅಭಿವೃದ್ಧಿಪಡಿಸಲು 'ಕೃಷಿ ಪಥ' ಯೋಜನೆಯನ್ನು ಜಾರಿಗೊಳಿಸಲಾಗುವುದು.

v) ರೈತರ ಜಮೀನುಗಳಲ್ಲಿ ಅಂತರ್ಜಲ ಹೆಚ್ಚಳ ಹಾಗೂ ಮಣ್ಣಿನ ಸಂರಕ್ಷಣೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ 'ಕೃಷಿ ಕವಚ' ಕಾರ್ಯಕ್ರಮ ರೂಪಿಸಿದ್ದು, ಗ್ರಾಮೀಣ ಪ್ರದೇಶಗಳಲ್ಲಿ ಒಟ್ಟು 50,000 ಹೆಕ್ಟೇರ್ ಬದು ನಿರ್ಮಾಣ ಮಾಡಲಾಗುವುದು.

274. ನೀರು ಸರಬರಾಜು ಮೂಲಭೂತ ಸೌಕರ್ಯಗಳ ಸುಸ್ಥಿರ ಮತ್ತು ವೈಜ್ಞಾನಿಕ ನಿರ್ವಹಣೆ ಸಲುವಾಗಿ ಭೌಗೋಳಿಕ ಮಾಹಿತಿ ವ್ಯವಸ್ಥೆ (GIS) ಆಧಾರಿತ ಮೊಬೈಲ್ ಮತ್ತು ವೆಬ್ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗುವುದು.

275. ಗ್ರಾಮ ಪಂಚಾಯತಿಗಳ ಸುಸ್ಥಿರ ಆದಾಯದ ಮೂಲಗಳನ್ನು ಬಲಪಡಿಸಲು ಗ್ರಾಮ ಪಂಚಾಯತಿ ಸ್ವತ್ತುಗಳನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಆದಾಯದ ಸೃಜನೆಗೆ ಅನುಕೂಲವಾಗುವಂತೆ ಅಭಿವೃದ್ಧಿಪಡಿಸಲಾಗುವುದು.

**ಯೋಜನೆ**

276. ರಾಜ್ಯದ ಅಭಿವೃದ್ಧಿ ಹಾಗೂ ಪ್ರಾದೇಶಿಕ ಅಸಮತೋಲನೆ ಬಗ್ಗೆ ಅಧ್ಯಯನ ನಡೆಸಲು ಪ್ರೊ. ಎಂ. ಗೋವಿಂದರಾವ್ ರವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಪ್ರಾದೇಶಿಕ ಅಸಮತೋಲನಾ ನಿವಾರಣಾ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯು ನೀಡುವ ವರದಿಯನ್ನು ಆಧರಿಸಿ, ಪ್ರಾದೇಶಿಕ ಅಸಮತೋಲನಾ ನಿವಾರಣೆಗೆ ಸೂಕ್ತ ಯೋಜನೆ ಮತ್ತು ಕಾರ್ಯಕ್ರಮಗಳನ್ನು ಅಳವಡಿಸಿಕೊಳ್ಳಲಾಗುವುದು.

277. ಕಲ್ಯಾಣ ಕರ್ನಾಟಕ ಪ್ರದೇಶಗಳ ಅಭಿವೃದ್ಧಿಗೆ 5,000 ಕೋಟಿ ರೂ. ಮೊತ್ತದ ಹೊಸ ಯೋಜನೆಗಳನ್ನು KKRDB ವತಿಯಿಂದ

ಅನುಷ್ಠಾನಗೊಳಿಸಲಾಗುವುದು. ಈ ಕಾಮಗಾರಿಗಳ ಗುಣಮಟ್ಟವನ್ನು ಖಚಿತ ಪಡಿಸಿಕೊಳ್ಳಲು ವಿಶೇಷ ಕ್ರಮ ತೆಗೆದುಕೊಳ್ಳಲಾಗುವುದು.

278. ಬಯಲುಸೀಮೆ, ಮಲೆನಾಡು ಹಾಗೂ ಕರಾವಳಿ ಪ್ರದೇಶಾಭಿವೃದ್ಧಿ ಮಂಡಳಿಗಳಿಗೆ ಒಟ್ಟಾರೆಯಾಗಿ 83 ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು.

279. ರಾಜ್ಯದ ಗಡಿಗಳಲ್ಲಿನ ಮೂಲಸೌಕರ್ಯ ಹಾಗೂ ಸಾಮಾಜಿಕ ಸುಧಾರಣೆ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಗಡಿ ಅಭಿವೃದ್ಧಿ ಪ್ರಾಧಿಕಾರವನ್ನು ಯೋಜನಾ ಇಲಾಖೆಯ ವ್ಯಾಪ್ತಿಗೆ ತರಲಾಗುವುದು.

**ನಗರಾಭಿವೃದ್ಧಿ**

280. ರಾಜ್ಯದ ಆರ್ಥಿಕತೆಗೆ ಬಹುಮುಖ್ಯ ಕೊಡುಗೆ ನೀಡುವ ಬೆಂಗಳೂರು ನಗರದ ಮೂಲಸೌಲಭ್ಯಗಳ ಅಭಿವೃದ್ಧಿಗೆ ನಮ್ಮ ಸರ್ಕಾರವು ಆದ್ಯತೆ ನೀಡುತ್ತದೆ. ಪ್ರತಿ ವರ್ಷ ನೀಡುತ್ತಿರುವ 3,000 ಕೋಟಿ ರೂ. ಅನುದಾನವನ್ನು ಪ್ರಸಕ್ತ ವರ್ಷದಲ್ಲಿ 7,000 ಕೋಟಿ ರೂ. ಗೆ ಹೆಚ್ಚಿಸಲಾಗುವುದು. ಈ ಅನುದಾನವನ್ನು ಬಳಸಿ ಬೃಹತ್ ಅಭಿವೃದ್ಧಿ ಕಾಮಗಾರಿಗಳನ್ನು ಆದ್ಯತೆಯ ಮೇಲೆ ಅನುಷ್ಠಾನಗೊಳಿಸಲು

ಹೊಸದಾಗಿ ವಿಶೇಷ ಉದ್ದೇಶಿತ ಸಂಸ್ಥೆ (Special Purpose Vehicle) ಸ್ಥಾಪಿಸಲಾಗುವುದು.

281. ಬೆಂಗಳೂರು ಮಹಾನಗರ ಪಾಲಿಕೆಯ ವತಿಯಿಂದ ಕೈಗೊಂಡಿರುವ ವಿವಿಧ ಸುಧಾರಣಾ ಕ್ರಮಗಳಿಂದ ಆಸ್ತಿ ತೆರಿಗೆ ಸಂಗ್ರಹಣೆಯಲ್ಲಿ ಗಣನೀಯ ಹೆಚ್ಚಳ ಸಾಧಿಸಲಾಗಿದೆ. ತಂತ್ರಜ್ಞಾನ ಬಳಸಿ ಆನ್‌ಲೈನ್ ಮೂಲಕ ಇ–ಖಾತಾ ವ್ಯವಸ್ಥೆಯನ್ನು ಅಳವಡಿಸಿರುವುದರಿಂದ ರಾಜಸ್ವ ಶೇಖರಣೆಯನ್ನು ಹೆಚ್ಚು ಮಾಡುವುದರೊಂದಿಗೆ ನಾಗರೀಕ ಸೇವೆಗಳನ್ನು ಸರಳವಾಗಿ ನೀಡಲು ಸಾಧ್ಯವಾಗಿದೆ. ಅಲ್ಲದೇ ಪಾಲಿಕೆಯ ಸ್ವಂತ ಆಸ್ತಿಗಳ ಉತ್ತಮ ನಿರ್ವಹಣೆ ಮತ್ತು ನಿಯಂತ್ರಣಕ್ಕೆ ಸಹಕಾರಿಯಾಗುವಂತೆ ಬಿಬಿಎಂಪಿ (ಎಸ್ಟೇಟ್) ನಿಯಮಗಳು 2024 ಅನ್ನು ಅಧಿಸೂಚಿಸಲಾಗಿದೆ. ಈ ಎಲ್ಲಾ ಸುಧಾರಣಾ ಕ್ರಮಗಳಿಂದ 2024–25ನೇ ಸಾಲಿನಲ್ಲಿ ಈವರೆಗೂ 4,556 ಕೋಟಿ ರೂ. ಸಂಗ್ರಹಣೆ ಮಾಡಲಾಗಿದೆ. ಇದರೊಂದಿಗೆ, ಪಾಲಿಕೆಯ ಜಾಹೀರಾತು ಉಪ–ವಿಧಿಗಳು 2025 ರ ಅನುಷ್ಠಾನದಿಂದ ವರ್ಷಕ್ಕೆ 750 ಕೋಟಿ ರೂ. ಆದಾಯವನ್ನು ಅಂದಾಜಿಸಲಾಗಿದೆ.

282. ಬಿಬಿಎಂಪಿಗೆ ಅಂದಾಜು ಮೊತ್ತ 40,000 ಕೋಟಿ ರೂ. ವೆಚ್ಚದಲ್ಲಿ ಉತ್ತರ–ದಕ್ಷಿಣ ಮತ್ತು ಪೂರ್ವ–ಪಶ್ಚಿಮ ಸುರಂಗ ಮಾರ್ಗದ

ಕಾರಿಡಾರ್‌ಗಳನ್ನು (Tunnel) ಕೈಗೊಳ್ಳಲು ಅನುಕೂಲವಾಗುವಂತೆ 19,000 ಕೋಟಿ ರೂ. ಗ್ಯಾರಂಟಿಯನ್ನು ಸರ್ಕಾರದಿಂದ ಒದಗಿಸಲಾಗಿದೆ.

283. ವಾಹನ ದಟ್ಟಣೆ ಸಮಸ್ಯೆಯನ್ನು ನಿವಾರಿಸಲು ಹಾಗೂ ಸುಗಮ ಸಂಚಾರಕ್ಕಾಗಿ ಬೆಂಗಳೂರು ನಗರದ ಮುಖ್ಯ ರಸ್ತೆಗಳನ್ನು ಸಿಗ್ನಲ್ ಮುಕ್ತಗೊಳಿಸುವ (signal-free) ನಿಟ್ಟಿನಲ್ಲಿ ಈ ಕೆಳಕಂಡ ಉಪಕ್ರಮಗಳನ್ನು ಕೈಗೊಳ್ಳಲಾಗಿದೆ.

i) ನಮ್ಮ ಮೆಟ್ರೋ ಹಂತ–3 ಯೋಜನೆಯೊಂದಿಗೆ 8,916 ಕೋಟಿ ರೂ. ವೆಚ್ಚದಲ್ಲಿ 40.50 ಕಿ.ಮೀ. ಉದ್ದದ Double Decker Flyover ರಸ್ತೆಯನ್ನು ನಿರ್ಮಿಸಲಾಗುವುದು.

ii) ಕಾಲುವೆಯ ಬಫರ್ ಪ್ರದೇಶವನ್ನು ಬಳಸಿಕೊಂಡು 3,000 ಕೋಟಿ ರೂ. ವೆಚ್ಚದಲ್ಲಿ 300 ಕಿ.ಮೀ. ಹೆಚ್ಚುವರಿ ರಸ್ತೆ ಜಾಲವನ್ನು ಅಭಿವೃದ್ಧಿಪಡಿಸಲಾಗುವುದು.

iii) ಬಿಬಿಎಂಪಿ ವ್ಯಾಪ್ತಿಯಲ್ಲಿರುವ 460 ಕಿ.ಮೀ. ಆರ್ಟೀರಿಯಲ್ ಮತ್ತು ಸಬ್ ಆರ್ಟೀರಿಯಲ್ ರಸ್ತೆ ಜಾಲವನ್ನು 660 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು.

iv) ನಗರದಲ್ಲಿ 120 ಕಿ.ಮೀ. ಉದ್ದದ Flyover ಹಾಗೂ Grade Separator ಗಳನ್ನು ನಿರ್ಮಿಸಲಾಗುವುದು.

284. ‘ಬ್ರ್ಯಾಂಡ್ ಬೆಂಗಳೂರು’ ಯೋಜನೆಯಡಿ 2024–25ನೇ ಸಾಲಿನಲ್ಲಿ ಅನುಮೋದನೆಗೊಂಡ 21 ಯೋಜನೆಗಳನ್ನು 1,800 ಕೋಟಿ ರೂ. ಮೊತ್ತದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

285. ಬೆಂಗಳೂರನ್ನು ಅಂತಾರಾಷ್ಟ್ರೀಯ ಆರೋಗ್ಯ ಮಾನದಂಡಗಳ ನಗರವನ್ನಾಗಿ ಮಾಡಲು, ‘ಬ್ರ್ಯಾಂಡ್ ಬೆಂಗಳೂರು’ ಅಭಿಯಾನದ ಅಡಿಯಲ್ಲಿ ಮುಂದಿನ ಮೂರು ವರ್ಷಗಳಲ್ಲಿ 413 ಕೋಟಿ ರೂ. ವೆಚ್ಚದಲ್ಲಿ ‘ಸಮಗ್ರ ಆರೋಗ್ಯ ಯೋಜನೆ’ಯನ್ನು ಜಾರಿಗೊಳಿಸಲಾಗುವುದು.

286. ಹವಾಮಾನ ವೈಪರೀತ್ಯದ ಪರಿಣಾಮವಾಗಿ ಬೆಂಗಳೂರು ನಗರವು ಎದುರಿಸುತ್ತಿರುವ ಪ್ರವಾಹವನ್ನು ನಿಯಂತ್ರಿಸಲು ವ್ಯವಸ್ಥಿತ ಒಳಚರಂಡಿ ಜಾಲ ಮತ್ತು ಎಸ್.ಟಿ.ಪಿ ಗಳನ್ನು ನಿರ್ಮಿಸಲು ಸರ್ಕಾರವು BBMP ಹಾಗೂ BWSSB ಗೆ 3,000 ಕೋಟಿ ರೂ. ಆರ್ಥಿಕ ನೆರವು ನೀಡಲು ತೀರ್ಮಾನಿಸಲಾಗಿರುತ್ತದೆ.

287. 2024–25ನೇ ಸಾಲಿನಲ್ಲಿ 5,550 ಕೋಟಿ ರೂ. ಮೊತ್ತದಲ್ಲಿ 775 MLD ಹೆಚ್ಚುವರಿ ನೀರಿನ ಸಾಮರ್ಥ್ಯವನ್ನು ಹೊಂದಿರುವ ಕಾವೇರಿ 5ನೇ ಹಂತದ ಯೋಜನೆಯನ್ನು ಸಾರ್ವಜನಿಕರಿಗೆ

ಲೋಕಾರ್ಪಣೆಗೊಳಿಸಲಾಗಿದೆ. ಇದರಿಂದ 110 ಹಳ್ಳಿಗಳಲ್ಲಿರುವ 50 ಲಕ್ಷ ನಿವಾಸಿಗಳಿಗೆ ಜೀವಜಲ ದೊರಕಿಸಲಾಗಿದೆ.

288. BWSSB ವತಿಯಿಂದ ಎಸ್.ಟಿ.ಪಿ ಘಟಕಗಳ ತ್ಯಾಜ್ಯವನ್ನು ಬಳಸಿ ಬಯೋಗ್ಯಾಸ್–ಆಧಾರಿತ ಆದಾಯ ಮತ್ತು ಕಾರ್ಬನ್ ಕ್ರೆಡಿಟ್‌ಗಳ ಉಪಯೋಗವನ್ನು ಪಡೆಯುವ ನಿಟ್ಟಿನಲ್ಲಿ PPP ಮಾದರಿಯಲ್ಲಿ ಯೋಜನೆಯನ್ನು ರೂಪಿಸಲಾಗುವುದು.

289. ನೆನೆಗುದಿಗೆ ಬಿದ್ದಿದ್ದ Peripheral Ring Road ಯೋಜನೆಯನ್ನು ಬೆಂಗಳೂರು ಬಿಸ್‌ನೆಸ್ ಕಾರಿಡಾರ್ ಎಂದು ಮರುನಾಮಕರಣಗೊಳಿಸಿ 73 ಕಿ.ಮೀ ಉದ್ದದ ರಸ್ತೆಯನ್ನು ನಿರ್ಮಿಸಲು ಹುಡ್ಕೋ ಬ್ಯಾಂಕ್ ನೆರವಿನೊಂದಿಗೆ 27,000 ಕೋಟಿ ರೂ. ಯೋಜನೆಯನ್ನು ರೂಪಿಸಲಾಗಿದೆ. ಪ್ರತ್ಯೇಕ ತಂಡಗಳನ್ನು ರಚಿಸಿ ಭೂಸ್ವಾದೀನ ಪ್ರಕ್ರಿಯೆ ಪ್ರಾರಂಭಿಸಲಾಗಿದೆ.

290. 'ನಮ್ಮ ಮೆಟ್ರೋ' ಪ್ರತಿದಿನ ಸರಾಸರಿ 8.5 ಲಕ್ಷ ಪ್ರಯಾಣಿಕರಿಗೆ ಸೇವೆಯನ್ನು ಒದಗಿಸುತ್ತಿದ್ದು, ಪ್ರಸ್ತುತ 68 ನಿಲ್ದಾಣಗಳನ್ನೊಳಗೊಂಡಂತೆ 79.65 ಕಿ.ಮೀ. ಮಾರ್ಗದ ಕಾರ್ಯಾಚರಣೆ ನಡೆಸುತ್ತಿದೆ. ಮುಂದಿನ ಎರಡು ವರ್ಷಗಳಲ್ಲಿ ಒಟ್ಟಾರೆ 98.60 ಕಿ.ಮೀ ಹೆಚ್ಚುವರಿ ಮಾರ್ಗಗಳ ಕಾರ್ಯಾಚರಣೆ ಜಾಲವನ್ನು ಅಭಿವೃದ್ಧಿಪಡಿಸುವ ಗುರಿಯನ್ನು ಹೊಂದಲಾಗಿದೆ.

ಮೆಟ್ರೋ ಜಾಲವನ್ನು ದೇವನಹಳ್ಳಿಯವರೆಗೆ ವಿಸ್ತರಿಸಲು ಯೋಜಿಸಲಾಗಿದೆ.

291. ಕಾವೇರಿ ಹಂತ–6 ಅನುಷ್ಠಾನಕ್ಕಾಗಿ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲಾಗುವುದು.

292. ಬಿಬಿಎಂಪಿ ವತಿಯಿಂದ 'ಬ್ರ್ಯಾಂಡ್ ಬೆಂಗಳೂರು – ಹಸಿರು ಬೆಂಗಳೂರು' ಅಡಿಯಲ್ಲಿ 35 ಕೋಟಿ ರೂ. ವೆಚ್ಚದ 14 ಕೆರೆಗಳ ಕಾಮಗಾರಿಗಳು ಪ್ರಗತಿಯಲ್ಲಿವೆ. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ವರ್ತೂರು ಮತ್ತು ಬೆಳ್ಳಂದೂರು ಕೆರೆಗಳ ಪುನರುಜ್ಜೀವನ ಕಾಮಗಾರಿಗಳನ್ನು 234 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ.

**ಪೌರಾಡಳಿತ**

293. ರಾಜ್ಯದ ಮಹಾನಗರ ಪಾಲಿಕೆಗಳಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಮಹಾತ್ಮಾ ಗಾಂಧಿ ನಗರ ವಿಕಾಸ್ 2.0 ಯೋಜನೆಗೆ 2,000 ಕೋಟಿ ರೂ. ಅನುದಾನವನ್ನು ಘೋಷಿಸಲಾಗಿರುತ್ತದೆ. ಪ್ರಸಕ್ತ ಸಾಲಿನಲ್ಲಿ, UIDF ರಡಿಯಲ್ಲಿ 600 ಕೋಟಿ ರೂ. ಅನುದಾನ ಒದಗಿಸಲಾಗಿದೆ.

294. ರಾಯಚೂರು, ಬೀದರ್ ಹಾಗೂ ಹಾಸನ ನಗರಸಭೆಗಳನ್ನು ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ. ಧಾರವಾಡ ಮಹಾನಗರ ಪಾಲಿಕೆಯನ್ನು ಹೊಸದಾಗಿ ರಚಿಸಲಾಗಿದೆ.

295. ನಗರೋತ್ಥಾನ 4ನೇ ಹಂತದ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು 2025–26ನೇ ಸಾಲಿನಲ್ಲಿ 500 ಕೋಟಿ ರೂ. ಒದಗಿಸಲಾಗುವುದು.

296. ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಿಂದ ನೀಡುತ್ತಿರುವ ನಾಗರಿಕ ಸೇವೆಗಳ ಪಾವತಿ ಹಾಗೂ ತೆರಿಗೆಗಳನ್ನು ತಂತ್ರಜ್ಞಾನ ಆಧರಿಸಿ online payment mechanism ಮೂಲಕ ಸಂಗ್ರಹಿಸುವ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲಾಗುವುದು.

297. ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳು, ಜಿಲ್ಲಾ ನಗರಾಭಿವೃದ್ಧಿ ಕೋಶಗಳು ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ Centre for E-Governance ಇಲಾಖೆಯ ಸಹಯೋಗದೊಂದಿಗೆ ಕಛೇರಿಯ ಸುಗಮ ಆಡಳಿತಕ್ಕೆ E–Office ವ್ಯವಸ್ಥೆಯನ್ನು ಕಡ್ಡಾಯಗೊಳಿಸಲಾಗುವುದು.

298. ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವತಿಯಿಂದ ರಾಮನಗರ ಮತ್ತು ಉಲ್ಲಾಳಕ್ಕೆ

705 ಕೋಟಿ ರೂ. ವೆಚ್ಚದಲ್ಲಿ ಕುಡಿಯುವ ನೀರು ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು. ಅಮೃತ್–2.0 ಯೋಜನೆಯಡಿಯಲ್ಲಿ 233 ಕುಡಿಯುವ ನೀರು ಯೋಜನೆಯನ್ನು ಕೈಗೆತ್ತಿಕೊಳ್ಳಲು ಉದ್ದೇಶಿಸಿದೆ. ಇದರೊಂದಿಗೆ, 142 ಕೋಟಿ ರೂ. ವೆಚ್ಚದಲ್ಲಿ ಶಿಕಾರಿಪುರ, ಸಾಗರ, ಐನಾಪುರ, ಎಮ್.ಕೆ. ಹುಬ್ಬಳ್ಳಿ, ಕುಡಚಿ, ಬೈಲಹೊಂಗಲ, ಶಹಾಪುರ ಹಾಗೂ ಶ್ರೀರಂಗಪಟ್ಟಣಕ್ಕೆ ಒಳಚರಂಡಿ ಯೋಜನೆಯನ್ನು ಕಲ್ಪಿಸುವ ಗುರಿಯನ್ನು ಹೊಂದಲಾಗಿದೆ.

299. ವಿನ್ಯಾಸ ಮತ್ತು ಕಟ್ಟಡ ನಕ್ಷೆಗಳಿಗೆ ಆನ್‌ಲೈನ್ ಮೂಲಕ ಅನುಮೋದನೆ ನೀಡಲು "ಯೂನಿಫೈಡ್ ಲ್ಯಾಂಡ್ ಮ್ಯಾನೇಜ್ ಮೆಂಟ್ ಸಿಸ್ಟಮ್" (ULMS) ತಂತ್ರಾಂಶ ಅಳವಡಿಸಿಕೊಳ್ಳಲಾಗುತ್ತಿದ್ದು, ಹಾರ್ಡ್‌ವೇರ್ ಸಾಮರ್ಥ್ಯವನ್ನು ಉನ್ನತೀಕರಿಸಲಾಗುವುದು. ನಗರ ಯೋಜಕರ ಕಾರ್ಯಕ್ಷಮತೆ ಹೆಚ್ಚಿಸಲು ಜಿಐಎಸ್ ತರಬೇತಿಗೆ ಅಗತ್ಯ ಅನುದಾನ ಒದಗಿಸಲಾಗುವುದು.

**ಮೂಲಸೌಕರ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ**

300. ವಿಜಯಪುರದಲ್ಲಿ 348 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವ ವಿಮಾನ ನಿಲ್ದಾಣದ ಕಾರ್ಯಾಚರಣೆಯನ್ನು 2025–26ನೇ ಸಾಲಿನಲ್ಲಿ ಪ್ರಾರಂಭಿಸಲಾಗುವುದು.

301. 219 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಅಭಿವೃದ್ಧಿ-ಪಡಿಸಲಾಗುತ್ತಿರುವ ರಾಯಚೂರು ವಿಮಾನ ನಿಲ್ದಾಣದ ಕಾಮಗಾರಿಗಳಿಗೆ ಇಲ್ಲಿಯವರೆಗೆ 53 ಕೋಟಿ ರೂ. ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ.

302. ಕಾರವಾರ ನೌಕಾನೆಲೆಯ ವಿಮಾನ ನಿಲ್ದಾಣದ ಭೂಸ್ವಾಧೀನ ಪ್ರಕ್ರಿಯೆಯು ಚಾಲ್ತಿಯಲ್ಲಿದ್ದು, ಪ್ರಸಕ್ತ ಸಾಲಿನಲ್ಲಿ ಅಗತ್ಯ ಅನುದಾನ ಒದಗಿಸಿ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು.

303. ಮೈಸೂರು ವಿಮಾನ ನಿಲ್ದಾಣದ ರನ್‌ವೇ ವಿಸ್ತರಣೆಯ ಭೂಸ್ವಾಧೀನಕ್ಕಾಗಿ 319 ಕೋಟಿ ರೂ. ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಇದಕ್ಕೆ ಅನುವಾಗುವಂತೆ utility shiftingಗೆ ಅಗತ್ಯ ಕ್ರಮವಹಿಸಲಾಗುವುದು.

304. ರಾಜ್ಯ ಸರ್ಕಾರವು ರೈಲ್ವೆಯೊಂದಿಗೆ 50:50 ರ ಅನುಪಾತದಲ್ಲಿ ಒಂಭತ್ತು ಯೋಜನೆಗಳನ್ನು ಕೈಗೆತ್ತಿಕೊಂಡಿದೆ. ಏಳು ಯೋಜನೆಗಳ

ಭೂಸ್ವಾಧೀನದ ಪೂರ್ಣ ವೆಚ್ಚವನ್ನು ರಾಜ್ಯ ಸರ್ಕಾರವೇ ಭರಿಸುತ್ತದೆ. ಒಟ್ಟಾರೆ 16,235 ಕೋಟಿ ರೂ. ವೆಚ್ಚದ ಈ ಯೋಜನೆಗಳಿಗೆ ರಾಜ್ಯ ಸರ್ಕಾರದ ವತಿಯಿಂದ 9,847 ಕೋಟಿ ರೂ.ಗಳನ್ನು ವೆಚ್ಚಗೊಳಿಸಲಾಗುವುದು. 2025–26ನೇ ಆಯವ್ಯಯದಲ್ಲಿ 600 ಕೋಟಿ ರೂ. ಒದಗಿಸಲಾಗಿದೆ. (ಯೋಜನೆಗಳ ವಿವರಗಳನ್ನು ಅನುಬಂಧ–5ರಲ್ಲಿ ಲಗತ್ತಿಸಿದೆ).

305. ವಾಹನ ದಟ್ಟಣೆ ಇರುವ ರೈಲ್ವೇ ಲೆವೆಲ್ ಕ್ರಾಸಿಂಗ್ ಗೇಟ್‌ಗಳ ಬದಲಿಗೆ ರಸ್ತೆ ಮೇಲ್ಸೇತುವೆ/ಕೆಳಸೇತುವೆ ನಿರ್ಮಿಸಲು ಈಗಾಗಲೇ ಅನುಮೋದನೆ ನೀಡಿರುವ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು 50 ಕೋಟಿ ರೂ. ಒದಗಿಸಲಾಗಿದೆ.

306. ಬೈಯ್ಯಪ್ಪನಹಳ್ಳಿ–ಹೊಸೂರು ಹಾಗೂ ಯಶವಂತಪುರ–ಚನ್ನಸಂದ್ರ ದ್ವಿಪಥೀಕರಣ ಯೋಜನೆಗಳಡಿಯಲ್ಲಿ 70 ಕಿ.ಮೀ ರೈಲ್ವೆ ಲೈನ್‌ಗಳನ್ನು ದ್ವಿಪಥೀಕರಣಗೊಳಿಸಲು ಒಟ್ಟಾರೆ 812 ಕೋಟಿ ರೂ. ಅಂದಾಜಿಸಲಾಗಿದೆ. ಇದಕ್ಕೆ ರಾಜ್ಯ ಸರ್ಕಾರದ ವತಿಯಿಂದ 406 ಕೋಟಿ ರೂ. ಒದಗಿಸಲಾಗುತ್ತಿದೆ. ಸದರಿ ಎರಡು ಯೋಜನೆಗಳನ್ನು ಪ್ರಸಕ್ತ ಸಾಲಿನಲ್ಲಿ ಸಾರ್ವಜನಿಕ ಸೇವೆಗೆ ಲೋಕಾರ್ಪಣೆ ಮಾಡಲಾಗುವುದು.

307. ಬೆಂಗಳೂರು ಉಪನಗರ ರೈಲ್ವೇ ಯೋಜನೆಯನ್ನು 15,767 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗಿದೆ. ಈ ಯೋಜನೆಯು 58 ರೈಲ್ವೇ ನಿಲ್ದಾಣಗಳು ಹಾಗೂ 148 ಕಿ.ಮೀ ಉದ್ದದ ರೈಲ್ವೇ ಜಾಲವನ್ನು ಹೊಂದಿರುತ್ತದೆ. ನಾಲ್ಕು ಕಾರಿಡಾರ್‌ಗಳನ್ನೊಳಗೊಂಡ ಈ ಯೋಜನೆಯ ಎರಡು ಕಾರಿಡಾರ್‌ಗಳ ಕಾಮಗಾರಿಗಳು ಪ್ರಗತಿಯಲ್ಲಿದೆ. ಇನ್ನುಳಿದ ಎರಡು ಕಾರಿಡಾರ್‌ಗಳ ಟೆಂಡರ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ, ಯೋಜನೆಯನ್ನು ಕಾಲಮಿತಿಯಲ್ಲಿ ಅನುಷ್ಠಾನಗೊಳಿಸಲಾಗುವುದು.

308. ಕರ್ನಾಟಕ ರಾಜ್ಯದಲ್ಲಿ ಜಲಸಾರಿಗೆ ಕ್ಷೇತ್ರದಲ್ಲಿ ಅಭಿವೃದ್ಧಿಗೆ ಅಪಾರ ಸಾಧ್ಯತೆಗಳಿವೆ. ಅಭಿವೃದ್ಧಿ ಯೋಜನೆಗಳಿಗೆ ಪೂರಕವಾಗಿ ಈಗಾಗಲೇ ಕರ್ನಾಟಕ ಜಲಸಾರಿಗೆ ನೀತಿಗೆ ಮಂಜೂರಾತಿ ನೀಡಲಾಗಿದೆ. ಕರಾವಳಿಯಲ್ಲಿ ವ್ಯವಸ್ಥಿತ ಮೂಲಸೌಲಭ್ಯ ಒದಗಿಸಲು ಹಾಗೂ ನೌಕಾ ಚಟುವಟಿಕೆಗಳ ನಿರ್ವಹಣೆಯಲ್ಲಿ ದಕ್ಷತೆ ತರಲು ನಮ್ಮ ಸರ್ಕಾರ ಬದ್ಧವಾಗಿದೆ. ಮಂಗಳೂರಿನಲ್ಲಿ ಅಂತರಾಷ್ಟ್ರೀಯ ಕ್ರೂಸ್, ವಾಟರ್ ಮೆಟ್ರೋ, ಕೋಸ್ಟಲ್ ಬರ್ತ್, ಉತ್ತರ ಕನ್ನಡ ಜಿಲ್ಲೆಯಲ್ಲಿ ಮಂಕಿ ಬಂದರು, ಹೊನ್ನಾವರದಲ್ಲಿ ಹಡಗು ನಿರ್ಮಾಣ ಕ್ಷೇತ್ರ ಹಾಗೂ ನದಿ ಕ್ರೂಸ್ ಪ್ರವಾಸೋದ್ಯಮ ಯೋಜನೆಗಳಿಗೆ ವಿಸ್ತೃತ ಯೋಜನೆ ಸಿದ್ದಪಡಿಸಲಾಗುವುದು.

309. ಪ್ರತಿ ವರ್ಷವೂ ಮುಂಗಾರು ಮಳೆಯ ಸಮಯದಲ್ಲಿ ಕರಾವಳಿ ತೀರದಲ್ಲಿ ಕಡಲು ಕೊರೆತದ ಘಟನೆಗಳು ಸಂಭವಿಸುವುದನ್ನು ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುವುದು:

i. ಕಡಲು ಕೊರೆತದ ಪರಿಣಾಮಗಳನ್ನು ಸಮಗ್ರವಾಗಿ ಎದುರಿಸಲು ಶೋರ್‌ಲೈನ್ ಮ್ಯಾನೇಜ್‌ಮೆಂಟ್ ಪ್ಲಾನ್ (Shoreline Management Plan) ಅನ್ನು ಚೆನ್ನೈ ಐ.ಐ.ಟಿ ವತಿಯಿಂದ ತಯಾರಿಸಲಾಗಿದೆ.

ii. ಶೋರ್‌ಲೈನ್ ಮ್ಯಾನೇಜ್‌ಮೆಂಟ್ ಪ್ಲಾನ್ (Shoreline Management Plan) ಅನ್ನು ಜಾರಿಗೊಳಿಸಲು ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಿಗೆ ಪ್ರತ್ಯೇಕವಾಗಿ ವಿಸ್ತೃತ ಯೋಜನಾ ವರದಿಗಳನ್ನು ಸಿದ್ಧಪಡಿಸಲಾಗುವುದು.

iii. ವರದಿಯಲ್ಲಿನ ಕಡಲು ಕೊರೆತದ ತಡೆಗಟ್ಟುವ ಕಾಮಗಾರಿಗಳನ್ನು ಹಂತ ಹಂತವಾಗಿ ಕೈಗೆತ್ತಿಕೊಳ್ಳಲಾಗುವುದು.

iv. ರಾಷ್ಟ್ರೀಯ ವಿಪತ್ತು ಉಪಶಮನ ನಿಧಿಯಡಿ 200 ಕೋಟಿ ರೂ. ಖರ್ಚು ಮಾಡಲಾಗುವುದು.

310. ಮಂಗಳೂರಿನಲ್ಲಿ ಜಲಸಾರಿಗೆ ಸಂಗ್ರಹಾಲಯ ಮತ್ತು ಅನುಭವ ಕೇಂದ್ರವನ್ನು ಪಿಪಿಪಿ ಮಾದರಿಯಲ್ಲಿ ಸ್ಥಾಪಿಸಲಾಗುವುದು.

311. ದೇವನಹಳ್ಳಿಯಲ್ಲಿ 407 ಎಕರೆ ಪ್ರದೇಶದಲ್ಲಿ ಅತ್ಯಾಧುನಿಕ ಬೆಂಗಳೂರು ಸಿಗ್ನೇಚರ್ ಬಿಸಿನೆಸ್ ಪಾರ್ಕ್ ಅನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಿದೆ. ಇದಕ್ಕೆ ಸಂಪರ್ಕ ಕಲ್ಪಿಸಲು ಮೇಲ್ಸೇತುವೆ ನಿರ್ಮಾಣಕ್ಕಾಗಿ ರಾಜ್ಯ ಸರ್ಕಾರದ ಪಾಲಿನ ಅನುದಾನದಲ್ಲಿ 50 ಕೋಟಿ ರೂ. ಈಗಾಗಲೇ ಬಿಡುಗಡೆ ಮಾಡಿದೆ.

**ಲೋಕೋಪಯೋಗಿ**

312. 2024–25ನೇ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆಯ ವಿವಿಧ ಮುಂದುವರೆದ ಯೋಜನೆಗಳಡಿ 1,330 ಕಿಮೀ ಉದ್ದದ ರಾಜ್ಯ ಹೆದ್ದಾರಿ ಮತ್ತು 1,259 ಕಿಮೀ ಉದ್ದದ ಜಿಲ್ಲಾ ಮುಖ್ಯ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ 1,850 ಕಿ.ಮೀ. ಉದ್ದದ ರಾಜ್ಯ ಹೆದ್ದಾರಿಗಳನ್ನು ಹಾಗೂ 2570 ಕಿ.ಮೀ. ಉದ್ದದ ಜಿಲ್ಲಾ ರಸ್ತೆಗಳನ್ನು 4,848 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು.

313. ರಾಜ್ಯದಲ್ಲಿ 140 ಸೇತುವೆ ನಿರ್ಮಾಣ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಆರು ಸೇತುವೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಅನುಮೋದನೆ ನೀಡಲಾಗಿದೆ. (ಕಾಮಗಾರಿಗಳ ವಿವರಗಳನ್ನು ಅನುಬಂಧ–6 ರಲ್ಲಿ ಲಗತ್ತಿಸಿದೆ)

314. ರಾಜ್ಯದಲ್ಲಿ ಶಿಥಿಲಾವಸ್ಥೆಯಲ್ಲಿರುವ 39 ಸೇತುವೆಗಳನ್ನು ಗುರುತಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಸದರಿ ಸೇತುವೆಗಳ ದುರಸ್ತಿ ಹಾಗೂ ಪುನರ್ ನಿರ್ಮಾಣಕ್ಕಾಗಿ 1,000 ಕೋಟಿ ರೂ. ಯೋಜನೆಯನ್ನು ರೂಪಿಸಲಾಗುವುದು.

315. ಕೊಡಗು ಜಿಲ್ಲೆಯ ವಿರಾಜಪೇಟೆ – ಪೊನ್ನಂಪೇಟೆ ಮತ್ತು ಮಡಿಕೇರಿ ತಾಲ್ಲೂಕಿನಲ್ಲಿ ಭಾರಿ ಮಳೆಯಿಂದಾಗಿ ಹಾನಿ ಒಳಗಾಗಿರುವ ರಸ್ತೆ ಮತ್ತು ಸೇತುವೆಗಳನ್ನು 20 ಕೋಟಿ ರೂ. ವೆಚ್ಚದಲ್ಲಿ ಪುನರ್ ನಿರ್ಮಾಣ ಮಾಡಲಾಗುವುದು.

316. 1,696 ಕೋಟಿ ರೂ. ಮೊತ್ತದ ರಾಯಚೂರು-ಸಿಂಧನೂರು ರಸ್ತೆ ಅಭಿವೃದ್ಧಿ ಕಾಮಗಾರಿಯಡಿ ಈವರೆಗೆ 20 ಕಿ.ಮೀ ಉದ್ದದ ರಸ್ತೆ ನಿರ್ಮಿಸಿದ್ದು, ಪ್ರಸಕ್ತ ಸಾಲಿನಲ್ಲಿ ಬಾಕಿ ಉಳಿದ ರಸ್ತೆಯನ್ನು ಪೂರ್ಣಗೊಳಿಸಲಾಗುವುದು.

317. 3,190 ಕೋಟಿ ರೂ. ಮೊತ್ತದ ದೇವನಹಳ್ಳಿ – ವಿಜಯಪುರ – ಹೆಚ್ ಕ್ರಾಸ್ – ವೇಮಗಲ್ – ಮಾಲೂರು – ತಮಿಳುನಾಡು ಗಡಿಯವರೆಗೆ ಕೈಗಾರಿಕಾ ಸಂಪರ್ಕ ಕಲ್ಪಿಸುವ 123 ಕಿಮೀ ರಸ್ತೆ ಅಭಿವೃದ್ಧಿ ಕಾಮಗಾರಿಯಡಿ ಪ್ರಸಕ್ತ ಸಾಲಿನಲ್ಲಿ 30 ಕಿ.ಮೀ ರಸ್ತೆಯನ್ನು ಪೂರ್ಣಗೊಳಿಸಲಾಗುವುದು.

318. SHDP ಹಂತ-5 ರಡಿ 9,000 ಕೋಟಿ ರೂ. ಮೊತ್ತದಲ್ಲಿ ಒಟ್ಟು 2,500 ಕಿಮೀ ಉದ್ದದ 'ಕೋರ್ ರೋಡ್ ನೆಟ್‌ವರ್ಕ್' ರಸ್ತೆಗಳ ಅಭಿವೃದ್ಧಿಯನ್ನು ಎರಡು ಘಟ್ಟಗಳಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿದೆ. ಘಟ್ಟ-1ರಲ್ಲಿ ಈವರೆಗೆ 150 ಕಿ.ಮೀ ಉದ್ದದ ರಸ್ತೆ ನಿರ್ಮಿಸಿದ್ದು, ಪ್ರಸಕ್ತ ಸಾಲಿನಲ್ಲಿ 1,317 ಕಿ.ಮೀ ಉದ್ದದ ರಸ್ತೆ ಅಭಿವೃದ್ಧಿಗೊಳಿಸಲಾಗುವುದು.

319. ಕೆಶಿಪ್-4 ಯೋಜನೆಯಡಿ 5,736 ಕೋಟಿ ರೂ. ಮೊತ್ತದಲ್ಲಿ ಏಷಿಯನ್ ಡೆವೆಲಪ್‌ಮೆಂಟ್ ಬ್ಯಾಂಕ್ ನೆರವಿನೊಂದಿಗೆ 875 ಕಿ.ಮೀ ಉದ್ದದ ರಾಜ್ಯದ 11 ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗುವುದು. (ಯೋಜನೆಯ ವಿವರಗಳನ್ನು ಅನುಬಂಧ-7 ರಲ್ಲಿ ಲಗತ್ತಿಸಿದೆ)

320. ರಾಯಚೂರು ನಗರಕ್ಕೆ KKRDB macro ಅನುದಾನದಡಿ ಹಾಗೂ ಬೈಲಹೊಂಗಲ ಪಟ್ಟಣಕ್ಕೆ ವರ್ತುಲ ರಸ್ತೆಗಳನ್ನು ನಿರ್ಮಿಸಲು ವಿಸ್ತೃತ ಯೋಜನಾ ವರದಿಗಳನ್ನು ತಯಾರಿಸಲಾಗುವುದು. ಈ ಯೋಜನೆಗಳಿಗೆ ಬೇಕಿರುವ ಜಮೀನನ್ನು Land Pooling ಮಾದರಿಯಲ್ಲಿ ಪಡೆಯಲಾಗುವುದು. ಮುಂದುವರೆದು ವಾಗ್ದಾರಿ-ರಿಬ್ಬನ್‌ಪಳ್ಳಿ ರಸ್ತೆಯನ್ನು ಅಭಿವೃದ್ಧಿಪಡಿಸಲು ಹಾಗೂ ಮದ್ದೂರು ನಗರದಲ್ಲಿ

ರಸ್ತೆಯ ಅಗಲೀಕರಣಕ್ಕಾಗಿ ವಿಸ್ತೃತ ಯೋಜನಾ ವರದಿಗಳನ್ನು ತಯಾರಿಸಲಾಗುವುದು.

**ಇಂಧನ**

321. ನಮ್ಮ ಸರ್ಕಾರವು ಜಾರಿಗೊಳಿಸಿದ 'ಗೃಹಜ್ಯೋತಿ' ಯೋಜನೆಯಡಿ 1.62 ಕೋಟಿ ಗ್ರಾಹಕರು ನೊಂದಾಯಿಸಿರುತ್ತಾರೆ. ಈ ಯೋಜನೆಗೆ 2024–25ನೇ ಸಾಲಿನಲ್ಲಿ 9,657 ಕೋಟಿ ರೂ. ಒದಗಿಸಲಾಗಿದೆ. ಪ್ರಸಕ್ತ ವರ್ಷದಲ್ಲಿ ಈ ಯೋಜನೆಗೆ 10,100 ಕೋಟಿ ರೂ. ಒದಗಿಸಲಾಗುವುದು.

322. ರಾಜ್ಯ ಸರ್ಕಾರದ ವತಿಯಿಂದ 10 ಹೆಚ್.ಪಿ. ವರೆಗಿನ ನೀರಾವರಿ ಪಂಪ್‌ಸೆಟ್ ವಿದ್ಯುತ್ ಸರಬರಾಜಿಗಾಗಿ ಧನಸಹಾಯ ನೀಡುವ ಯೋಜನೆಯಡಿ 33.84 ಲಕ್ಷ ಪಂಪ್‌ಸೆಟ್‌ಗಳಿಗೆ 16,021 ಕೋಟಿ ರೂ. ಒದಗಿಸಲಾಗಿದೆ. ಇದರಿಂದ ಒಂದು ಪಂಪ್‌ಸೆಟ್‌ಗೆ ಒಂದು ವರ್ಷಕ್ಕೆ ಸರಾಸರಿ 50,000 ರೂ. ಸಹಾಯಧನ ನೀಡಲಾಗುತ್ತಿದೆ.

323. ಹೆಚ್ಚಾಗುತ್ತಿರುವ ವಿದ್ಯುತ್ ಬೇಡಿಕೆಯನ್ನು ನೆರವೇರಿಸಲು ರಾಜ್ಯದ ಸ್ಥಾಪಿತ ಸಾಮರ್ಥ್ಯವನ್ನು 32 ಗಿಗಾವ್ಯಾಟ್ ನಿಂದ 60 ಗಿಗಾವ್ಯಾಟ್‌ಗೆ ಹೆಚ್ಚಿಸುವ ಗುರಿಯನ್ನು ಹಿಂದಿನ ಆಯವ್ಯಯದಲ್ಲಿ ನಿಗದಿಪಡಿಸಲಾಗಿದೆ. ಇದಕ್ಕಾಗಿ ಈ ಕೆಳಗಿನ ಉಪಕ್ರಮಗಳನ್ನು ಕೈಗೊಳ್ಳಲಾಗಿದೆ:

i) ವಿದ್ಯುತ್ ಉತ್ಪಾದನಾ ಸಾಮರ್ಥ್ಯವನ್ನು 31.83 ಗಿಗಾವ್ಯಾಟ್ ನಿಂದ 34.99 ಗಿಗಾವ್ಯಾಟ್‌ಗೆ ಹೆಚ್ಚಿಸಲಾಗಿದೆ.

ii) 2008 ರಿಂದ ನೆನೆಗುದಿಗೆ ಬಿದ್ದಿದ್ದ 13,000 ಕೋಟಿ ಯೋಜನಾ ವೆಚ್ಚದ 800 ಮೆಗಾವ್ಯಾಟ್ ಸಾಮರ್ಥ್ಯ ಗೋದ್ನಾ ಶಾಖೋತ್ಪನ್ನ ವಿದ್ಯುತ್ ಸ್ಥಾವರವನ್ನು TBCB (Tariff based competitive bidding) ಮಾದರಿಯಲ್ಲಿ ಕಾರ್ಯಗತಗೊಳಿಸಲು ನಿರ್ಧರಿಸಿದೆ.

iii) 10,240 ಕೋಟಿ ರೂ. ವೆಚ್ಚದ 2,000 ಮೆಗಾವ್ಯಾಟ್ ಶರಾವತಿ ಪಂಪ್ಡ್ ಸ್ಟೋರೇಜ್ ಪವರ್ ಪ್ಲಾಂಟ್ ಅನುಷ್ಠಾನಕ್ಕಾಗಿ ವನ್ಯಜೀವಿ ಮತ್ತು ಅರಣ್ಯ ಇಲಾಖೆಯ ಅನುಮತಿ ಪಡೆಯುವ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಟೆಂಡರ್ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ.

iv) ನವೀಕರಿಸಬಹುದಾದ ಮೂಲಗಳಿಂದ ಉತ್ಪಾದನೆಯಾಗುವ ಇಂಧನದ ಶೇಖರಣೆಗಾಗಿ ಕೆಪಿಟಿಸಿಎಲ್ ಮೂಲಕ ಏಳು ಸಬ್ ಸ್ಟೇಷನ್‌ಗಳಲ್ಲಿ 1,000 ಮೆಗಾವ್ಯಾಟ್ ಅವರ್ (MWhr) ಬ್ಯಾಟರಿ ಶಕ್ತಿ ಶೇಖರಣಾ ವ್ಯವಸ್ಥೆಯನ್ನು 1,846 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಪಿಪಿಪಿ ಮಾದರಿಯಲ್ಲಿ ಸ್ಥಾಪಿಸಲಾಗುವುದು.

v) ರೈತರ ನೀರಾವರಿ ಪಂಪ್‌ಸೆಟ್‌ಗಳ ವಿಕೇಂದ್ರೀಕೃತ ಫೀಡರ್ ಸೌರೀಕರಣ ಕಾರ್ಯವನ್ನು KUSUM-C ಯೋಜನೆಯಡಿ ಕೈಗೊಳ್ಳಲಾಗಿದೆ. ಪ್ರಥಮ ಹಂತದಲ್ಲಿ 1,302 ಮೆಗಾವ್ಯಾಟ್ ಸಾಮರ್ಥ್ಯದ ಗುರಿ ಹೊಂದಲಾಗಿದ್ದು, 21 MW ಸಾಮರ್ಥ್ಯದ ಐದು ಕಾಮಗಾರಿಗಳು ಪೂರ್ಣಗೊಂಡಿವೆ. ಎರಡನೇ ಹಂತದಲ್ಲಿ ಒಟ್ಟು 1,192 MW ಸಾಮರ್ಥ್ಯದ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

vi) KUSUM-B ಅಡಿಯಲ್ಲಿ ಸೋಲಾರ್ ಪಂಪ್ ಸೆಟ್ ಅಳವಡಿಸುವ ರೈತರ ಆರ್ಥಿಕ ಹೊರೆಯನ್ನು ಕಡಿಮೆ ಮಾಡುವ ಉದ್ದೇಶದಿಂದ ರಾಜ್ಯ ಸರ್ಕಾರದ ಪಾಲನ್ನು ಶೇ.50 ಕ್ಕೆ ಹೆಚ್ಚಿಸಿದ್ದು, ಫಲಾನುಭವಿಗಳು ಶೇ.20 ರಷ್ಟನ್ನು ಮಾತ್ರ ಭರಿಸಬೇಕಾಗುತ್ತದೆ. ಈ ಯೋಜನೆಯಡಿ 40,000 ಪಂಪ್‌ಸೆಟ್‌ಗಳಿಗೆ ಅನುಮೋದನೆ ನೀಡಲಾಗಿದ್ದು, ರಾಜ್ಯ ಸರ್ಕಾರದ ಪಾಲು 752 ಕೋಟಿ ರೂ. ವೆಚ್ಚ ಮಾಡಲಾಗುವುದು.

324. ಪ್ರಸರಣ ಜಾಲದ ಬಲವರ್ಧನೆಗಾಗಿ ನಮ್ಮ ಸರ್ಕಾರವು 115 ಹೊಸ ಉಪಕೇಂದ್ರಗಳ ಸ್ಥಾಪನೆ, 411 ಉಪ ಕೇಂದ್ರಗಳ ಉನ್ನತೀಕರಣ ಹಾಗೂ 3,490.81 ಕಿ.ಮೀ ಗಳ ಪ್ರಸರಣಾ ಮಾರ್ಗದ

ರಚನೆಯನ್ನು ಮಾಡಲಾಗಿದೆ. ಪ್ರಸಕ್ತ ಸಾಲಿನಲ್ಲಿ 8,833 ಕೋಟಿ ರೂ. ವೆಚ್ಚದಲ್ಲಿ 100 ಹೊಸ ಉಪಕೇಂದ್ರಗಳನ್ನು ಸ್ಥಾಪಿಸಲಾಗುವುದು.

325. ವಿತರಣಾ ಕ್ಷೇತ್ರದಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ 25,971 ಕೊಳವೆ ಬಾವಿಗಳ ವಿದ್ಯುದ್ದೀಕರಣ, 6,887 ಕುಡಿಯುವ ನೀರಿನ ಯೋಜನೆಗಳ ವಿದ್ಯುದ್ದೀಕರಣ, 1.94 ಲಕ್ಷ ವಿತರಣಾ ಪರಿವರ್ತಕಗಳ ಅಳವಡಿಕೆ, 51,975 HT ಮಾರ್ಗ ಮತ್ತು 45,047 LT ಮಾರ್ಗಗಳ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.

326. ಗ್ರಾಮ ಪಂಚಾಯತಿಗಳಲ್ಲಿ, ಬೀದಿ ದೀಪಗಳ ವಿದ್ಯುತ್ ಬಿಲ್ಲಿನ ಹೊರೆಯನ್ನು ತಗ್ಗಿಸಲು ಪ್ರತ್ಯೇಕವಾದ Phase wire ಅಳವಡಿಸುವ ಕಾಮಗಾರಿಯನ್ನು 850 ಕೋಟಿ ರೂ. ವೆಚ್ಚದಲ್ಲಿ ಎಸ್ಕಾಂಗಳ ಮೂಲಕ ಹಂತ ಹಂತವಾಗಿ ಅನುಷ್ಠಾನಗೊಳಿಸಲಾಗುವುದು.

327. ರಾಜ್ಯದಲ್ಲಿ ನವೀಕರಿಸಬಹುದಾದ ಇಂಧನ ಸ್ಥಾವರಗಳ ಸ್ಥಾಪನೆಗೆ ಉತ್ತೇಜನ ನೀಡುವ ಉದ್ದೇಶದಿಂದ ಕೃಷಿ ಭೂಮಿಗೆ ಭೂ ಪರಿವರ್ತನೆ ಪ್ರಕ್ರಿಯೆಯಿಂದ ವಿನಾಯಿತಿ ನೀಡಲಾಗುವುದು.

328. ವಿದ್ಯುತ್ ಪ್ರಸರಣ ವಲಯದಲ್ಲಿ ಹೆಚ್ಚಿನ ಪ್ರಾಮುಖ್ಯತೆಯನ್ನು ಹೊಂದುತ್ತಿರುವ Infrastructure Investment Trust

(InvIT) ಅನ್ನು KPTCL ನಲ್ಲಿ ರಚಿಸಲು ರಾಜ್ಯ ಸರ್ಕಾರವು ಅನುಮೋದನೆ ನೀಡಿದೆ. InvIT ಮೂಲಕ 5,000 ಕೋಟಿ ರೂ. ಹೂಡಿಕೆಯನ್ನು ಸಂಗ್ರಹಿಸಿ, ವಿವಿಧ ಯೋಜನೆಗಳಿಗೆ ಉಪಯೋಗಿಸಲಾಗುವುದು.

**ವಾಣಿಜ್ಯ ಮತ್ತು ಕೈಗಾರಿಕೆ**

329. ಕರ್ನಾಟಕ ರಾಜ್ಯವು ಡಿಸೆಂಬರ್ 2024ರ ಅಂತ್ಯಕ್ಕೆ 4.4 ಬಿಲಿಯನ್ ಯು.ಎಸ್.ಡಿ ವಿದೇಶಿ ಹೂಡಿಕೆ ಆಕರ್ಷಿಸುವುದರೊಂದಿಗೆ ದೇಶದಲ್ಲಿ 3ನೇ ಸ್ಥಾನದಲ್ಲಿ ಹಾಗೂ 88,853 ಮಿಲಿಯನ್ ಯು.ಎಸ್.ಡಿ ರಫ್ತು ಮಾಡುವುದರೊಂದಿಗೆ ಒಟ್ಟಾರೆ ರಫ್ತಿನಲ್ಲಿ ಅಗ್ರಸ್ಥಾನದಲ್ಲಿದೆ. ಹಿಂದಿನ ವರ್ಷಕ್ಕೆ ಹೋಲಿಸಿದರೆ ಒಟ್ಟಾರೆ ರಫ್ತಿನಲ್ಲಿ ರಾಜ್ಯವು ಶೇ. 11.17 ರಷ್ಟು ಬೆಳವಣಿಗೆಯನ್ನು ಸಾಧಿಸಿರುತ್ತದೆ. ಕರ್ನಾಟಕ ರಾಜ್ಯವು ಕೇಂದ್ರ ಸರ್ಕಾರದ Ease of Doing Business ನಲ್ಲಿಯೂ ಅತ್ಯುತ್ತಮ ಸಾಧಕ (Top Achiever) ಎಂದು ಗುರುತಿಸಲ್ಪಟ್ಟಿದೆ.

330. ಅಂತಾರಾಷ್ಟ್ರೀಯ ಹಾಗೂ ರಾಷ್ಟ್ರೀಯ ಬಂಡವಾಳವನ್ನು ರಾಜ್ಯಕ್ಕೆ ಆಕರ್ಷಿಸುವ ಸಂಬಂಧ ಏರ್ಪಡಿಸಿದ ವಿಶ್ವ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ (Invest Karnataka-2025) ವಿವಿಧ ಕಂಪನಿಗಳೊಂದಿಗೆ 10.27 ಲಕ್ಷ ಕೋಟಿ ರೂ. ಹೂಡಿಕೆಗೆ ಒಪ್ಪಂದಗಳನ್ನು

ಮಾಡಿಕೊಳ್ಳಲಾಗಿದೆ. ಇದರಿಂದ ಆರು ಲಕ್ಷಕ್ಕಿಂತ ಹೆಚ್ಚಿನ ಉದ್ಯೋಗವಕಾಶ ನಿರೀಕ್ಷಿಸಲಾಗಿದೆ.

331. ರಾಜ್ಯದಲ್ಲಿ ಕೈಗಾರಿಕೆಗಳಿಗೆ ಪೂರಕವಾದ ವಾತಾವರಣವನ್ನು ಸೃಷ್ಟಿಸುವ ಉದ್ದೇಶದಿಂದ ಘೋಷಿಸಲಾದ ಹೊಸ ಕೈಗಾರಿಕಾ ನೀತಿ 2025–30 ರಿಂದ 7.50 ಲಕ್ಷ ಕೋಟಿ ರೂ. ಬಂಡವಾಳ ಹೂಡಿಕೆ ಹಾಗೂ 20 ಲಕ್ಷ ಹೊಸ ಉದ್ಯೋಗ ಸೃಷ್ಟಿಸುವ ನಿರೀಕ್ಷೆ ಹೊಂದಿದೆ.

332. ಕೈಗಾರಿಕೋದ್ಯಮಿಗಳ ಅನುಸರಣೆಯ ನಿಯಮಗಳು ಮತ್ತು ಷರತ್ತುಗಳ ಸರಳೀಕರಣಕ್ಕೆ ಸಂಬಂಧಿಸಿದಂತೆ ನಮ್ಮ ಸರ್ಕಾರವು ಕರ್ನಾಟಕ ಉದ್ಯೋಗದಾತ ನಂಬಿಕೆ ವಿಧೇಯಕ ಹಾಗೂ ಕರ್ನಾಟಕ ಉದ್ಯೋಗದಾತ ಅನುಸರಣೆ ಜಾಲಬಂಧ ಮಸೂದೆಗಳನ್ನು ಜಾರಿಗೆ ತರಲಿದೆ. ಇದರ ಮೂಲಕ ಉದ್ಯೋಗದಾತರ ಷರತ್ತುಗಳ ಉಲ್ಲಂಘನೆಯನ್ನು ಕ್ರಿಮಿನಲ್ ಅಪರಾಧ ವ್ಯಾಪ್ತಿಯಿಂದ ಹೊರತುಪಡಿಸಲಾಗುವುದು (Decriminalise). ಷರತ್ತುಗಳ ಅನುಸರಣೆ ಪ್ರಕ್ರಿಯೆಯನ್ನು ಡಿಜಿಟಲೀಕರಣಗೊಳಿಸಲಾಗುವುದು. ಈ ರೀತಿಯ ಉಪಕ್ರಮಗಳನ್ನು ದೇಶದಲ್ಲೆ ಮೊದಲು ಜಾರಿಗೊಳಿಸಲಾಗುವ ಕೀರ್ತಿಯು ನಮ್ಮದಾಗಿದೆ.

333. ರಾಜ್ಯ ಸರ್ಕಾರವು Karnataka Clean Mobility Policy 2025-30 ಅನ್ನು ಘೋಷಿಸಿದ್ದು, ಇದರಿಂದ ಕ್ಲೀನ್ ಮೊಬಿಲಿಟಿ ವಾಹನ ಮೌಲ್ಯ ಸರಪಳಿಯಲ್ಲಿ 50,000 ಕೋಟಿ ರೂ. ಹೂಡಿಕೆಗಳನ್ನು ಆಕರ್ಷಿಸುವ ಹಾಗೂ ಸರಿಸುಮಾರು ಒಂದು ಲಕ್ಷ ಹೊಸ ಉದ್ಯೋಗಗಳನ್ನು ಸೃಷ್ಟಿಸುವ ಉದ್ದೇಶ ಹೊಂದಿದೆ.

334. E.V. ವಾಹನಗಳ ತಯಾರಿಕೆ ಹಾಗೂ ಬಳಕೆಗೆ ಉತ್ತೇಜನ ನೀಡಲು ಬೆಂಗಳೂರು ವಲಯದಲ್ಲಿ ಅತ್ಯಾಧುನಿಕ ತಂತ್ರಜ್ಞಾನವನ್ನೊಳಗೊಂಡ E.V ಕ್ಲಸ್ಟರ್‌ನ್ನು ನಿರ್ಮಿಸಲಾಗುವುದು. ಈ ಉದ್ದೇಶಕ್ಕಾಗಿ 25 ಕೋಟಿ ರೂ. ಅನುದಾನವನ್ನು ಒದಗಿಸಿದೆ.

335. ದೇವನಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ Foxconn ಸಂಸ್ಥೆಯಿಂದ ಮೊಬೈಲ್ ಫೋನ್‌ಗಳ ಉತ್ಪಾದನಾ ಘಟಕವು 21,911 ಕೋಟಿ ರೂ. ಬಂಡವಾಳ ಹೂಡಿಕೆಯೊಂದಿಗೆ ಪ್ರಾರಂಭಗೊಂಡಿದೆ. ಇದರಿಂದ 50,000 ಉದ್ಯೋಗ ಸೃಜನೆಯನ್ನು ನಿರೀಕ್ಷಿಸಲಾಗಿದೆ. ಈ ಕಂಪನಿಗೆ ಇ.ಎಸ್.ಡಿ.ಎಂನ ನೀತಿಯಡಿ 6,970 ಕೋಟಿ ರೂ.ಗಳ ಪ್ರೋತ್ಸಾಹಕಗಳನ್ನು ನೀಡಲಾಗುವುದು.

336. ಉದ್ಯೋಗಸ್ಥ ಮಹಿಳೆಯರಿಗೆ ಸುರಕ್ಷಿತ ಹಾಗೂ ಉತ್ತಮ ವಾತಾವರಣವನ್ನು ಕಲ್ಪಿಸಲು ಕೋಲಾರ ಜಿಲ್ಲೆಯ ನರಸಾಪುರದಲ್ಲಿ 173 ಕೋಟಿ ರೂ. ವೆಚ್ಚದಲ್ಲಿ 6,000 ಸಾಮರ್ಥ್ಯದ ಮಹಿಳಾ ವಸತಿ

ನಿಲಯ ಹಾಗೂ ತುಮಕೂರು ಜಿಲ್ಲೆಯ ವಸಂತನರಸಾಪುರದ ಕೈಗಾರಿಕಾ ಪ್ರದೇಶದಲ್ಲಿ 20 ಕೋಟಿ ರೂ. ವೆಚ್ಚದಲ್ಲಿ ಮಹಿಳಾ ವಸತಿ ನಿಲಯಗಳನ್ನು ನಿರ್ಮಿಸಲಾಗುವುದು.

337. ಉತ್ತರ ಕರ್ನಾಟಕ ಭಾಗದಲ್ಲಿ ಕೈಗಾರಿಕೆಗಳನ್ನು ಉತ್ತೇಜಿಸಲು ವಿಜಯಪುರದ ತಿಡಗುಂಡಿಯಲ್ಲಿ Plug & Play ಸೌಲಭ್ಯವಿರುವ Flat Factory ಅನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ.

338. ಮಾಲಿನ್ಯವನ್ನು ನಿಯಂತ್ರಣ ಮಾಡುವ ನಿಟ್ಟಿನಲ್ಲಿ ಕೋಲಾರ ಜಿಲ್ಲೆಯ ಶಿವಾರಪಟ್ಟಣದ ಕೈಗಾರಿಕಾ ಪ್ರದೇಶದಲ್ಲಿ Multi Sector Net Zero Sustainability Industrial Park ಅನ್ನು PPP ಮಾದರಿಯಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿದೆ.

339. ಚೆನ್ನೈ–ಬೆಂಗಳೂರು ಇಂಡಸ್ಟ್ರಿಯಲ್ ಕಾರಿಡಾರ್ ಯೋಜನೆಯಡಿ ಅಭಿವೃದ್ಧಿಪಡಿಸುತ್ತಿರುವ ತುಮಕೂರು ಕೈಗಾರಿಕಾ ನೋಡ್‌ನಲ್ಲಿ ಜಪಾನೀಸ್ ಇಂಡಸ್ಟ್ರಿಯಲ್ ಪಾರ್ಕ್ ಸ್ಥಾಪಿಸಲಾಗುವುದು. ಜಪಾನ್ ದೇಶದ ಒಸಕಾ ನಗರದಲ್ಲಿ ಆಯೋಜಿಸಲಾಗುತ್ತಿರುವ World Expo ವೇದಿಕೆಯನ್ನು ರಾಜ್ಯಕ್ಕೆ ಹೆಚ್ಚಿನ ಬಂಡವಾಳ ಆಕರ್ಷಿಸಲು ಬಳಸಿಕೊಳ್ಳಲಾಗುವುದು.

340. MSME ವಲಯಕ್ಕೆ ಪ್ರೋತ್ಸಾಹ ನೀಡಲು MSE ಕ್ಲಸ್ಟರ್ ಅಭಿವೃದ್ಧಿ ಯೋಜನೆಯಡಿ ಸಾಮಾನ್ಯ ಸೌಲಭ್ಯ ಕೇಂದ್ರಗಳನ್ನು

ಸ್ಥಾಪಿಸಲಾಗುವುದು. ಇದುವರೆಗೂ 16 ಕ್ಲಸ್ಟರ್‌ಗಳನ್ನು ಸ್ಥಾಪಿಸಲಾಗಿದ್ದು ಸುಮಾರು 1,379 MSME ಘಟಕಗಳು ಈ ಸಾಮಾನ್ಯ ಸೌಲಭ್ಯ ಕೇಂದ್ರಗಳ ಸೇವೆ ಬಳಸಿಕೊಳ್ಳುತ್ತಿವೆ. 26,750 ಉದ್ಯೋಗಗಳನ್ನು ಸೃಜಿಸಲಾಗಿದೆ. ಈ ಉದ್ದೇಶಕ್ಕಾಗಿ, ರಾಜ್ಯ ಸರ್ಕಾರದ ವಂತಿಗೆ 22 ಕೋಟಿ ರೂ. ಬಿಡುಗಡೆಗೊಳಿಸಲಾಗಿದೆ.

341. ನಮ್ಮ ಸರ್ಕಾರವು ಕುಶಲಕರ್ಮಿಗಳಿಗೆ ಪ್ರೋತ್ಸಾಹ ನೀಡಿ ಜೀವನ ಮಟ್ಟವನ್ನು ಸುಧಾರಿಸಲು ಬದ್ಧವಾಗಿದೆ. ಬಿದರಿ ಕಲಾಕೃತಿಗಳ ಹಾಗೂ ಶ್ರೀಗಂಧ ಕಲಾಕೃತಿಗಳ ಕಚ್ಚಾ ವಸ್ತುಗಳನ್ನು ರಿಯಾಯಿತಿ ದರದಲ್ಲಿ ನೀಡಲು ಒಂದು ಕೋಟಿ ರೂ. ಅನುದಾನ ಒದಗಿಸಲಾಗುವುದು.

342. ಕೈಗಾರಿಕಾ ನೀತಿ 2020–25 ರ ಅಡಿಯಲ್ಲಿ ಅಂದಾಜು 3,758 MSME ಘಟಕಗಳಿಗೆ ನೆರವು ನೀಡಲು 2025–26 ನೇ ಸಾಲಿನಲ್ಲಿ 185 ಕೋಟಿ ರೂ. ಒದಗಿಸಿದೆ.

343. ಕರ್ನಾಟಕದ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸಲು, MSME ಗಳ ಪ್ರಾಮುಖ್ಯತೆಯನ್ನು ಗುರುತಿಸಿ, ಆರ್ಥಿಕತೆಗೆ ವೇಗ ನೀಡಲು ಮತ್ತು ಪ್ರಾದೇಶಿಕ ಅಸಮತೋಲನವನ್ನು ನಿವಾರಿಸಿ MSME ವಲಯಕ್ಕೆ ಅಗತ್ಯವಾದ ಬೆಂಬಲವನ್ನು ಒದಗಿಸುವ ಉದ್ದೇಶದಿಂದ ಪ್ರತ್ಯೇಕ MSME ನೀತಿಯನ್ನು ರೂಪಿಸಲಾಗುವುದು.

344. 2024–25ನೇ ಸಾಲಿನಲ್ಲಿ ಹೊಸ ಮರಳು ಗಣಿಗಾರಿಕೆ ನಿಯಮಗಳನ್ನು ಜಾರಿಗೊಳಿಸಲಾಗಿದೆ. ಈ ನಿಯಮಗಳಡಿ reverse auction ಮೂಲಕ ಪಾರದರ್ಶಕವಾಗಿ ಮರಳು ಬ್ಲಾಕ್‌ಗಳನ್ನು ಮಂಜೂರು ಮಾಡಲಾಗುತ್ತಿದೆ. ಇದರಿಂದ, ರಾಜ್ಯಾದ್ಯಂತ ಏಕರೂಪ ದರದಲ್ಲಿ ಮರಳನ್ನು ಒದಗಿಸಲು ಸಹಕಾರಿಯಾಗಲಿದೆ.

345. ಖನಿಜಗಳ ಸಾಗಾಣಿಕೆಗೆ ಪರವಾನಗಿ ನೀಡಲು ಹಾಗೂ ಇತರೆ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಲು Integrated Lease Management System (ILMS) 2.0 ತಂತ್ರಾಂಶವನ್ನು ಅಭಿವೃದ್ಧಿಪಡಿಸಿ ಅನುಷ್ಠಾನಗೊಳಿಸಲಾಗುತ್ತಿದೆ.

346. 2024–25ನೇ ಸಾಲಿನಲ್ಲಿ 10 ಕಬ್ಬಿಣದ ಅದಿರಿನ ಖನಿಜ ಬ್ಲಾಕ್‌ಗಳನ್ನು ಹರಾಜು ಪ್ರಕ್ರಿಯೆಗೊಳಪಡಿಸಿ, ಹೆಚ್ಚಿನ ರಾಜಸ್ವ ಸಂಗ್ರಹಣೆಗೆ ಕ್ರಮವಹಿಸಲಾಗಿರುತ್ತದೆ. ಇದರಿಂದಾಗಿ ಮುಂದಿನ ವರ್ಷಗಳಲ್ಲಿ ಒಟ್ಟಾರೆ 5,847 ಕೋಟಿ ರೂ. ರಾಜಸ್ವ ಸಂಗ್ರಹಿಸಲಾಗುವುದು.

347. ರಾಜ್ಯದ ಸಕ್ಕರೆ ಕಾರ್ಖಾನೆಗಳು 2023–24ನೇ ಸಾಲಿನಲ್ಲಿ 585 ಲಕ್ಷ ಮೆಟ್ರಿಕ್ ಟನ್ ಕಬ್ಬು ನುರಿಸಿ, 53 ಲಕ್ಷ ಮೆಟ್ರಿಕ್ ಟನ್ ಸಕ್ಕರೆ ಉತ್ಪಾದಿಸಿವೆ. ಈ ಅವಧಿಯಲ್ಲಿ ಸಕ್ಕರೆ ಕಾರ್ಖಾನೆಗಳು ರೈತರಿಗೆ ಪಾವತಿ ಮಾಡಬೇಕಾದ ಸಂಪೂರ್ಣ ಬಿಲ್ಲುಗಳನ್ನು ಪಾವತಿಸಿವೆ.

348. ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿನ ರಸ್ತೆಗಳ ಅಭಿವೃದ್ಧಿಗಾಗಿ 2025–26ನೇ ಸಾಲಿಗೆ 20 ಕೋಟಿ ರೂ. ಒದಗಿಸಲಾಗಿದೆ.

349. ಕಾರ್ಮಿಕರ ಕೊರತೆಯಿಂದಾಗುವ ಕಬ್ಬು ಕಟಾವಿನ ಸಮಸ್ಯೆಯನ್ನು ನಿವಾರಿಸಲು ಹೈಟೆಕ್ ಹಾರ್ವೆಸ್ಟರ್ ಯಂತ್ರೋಪಕರಣಗಳನ್ನು ಬಾಡಿಗೆ ಆಧಾರದ ಮೇಲೆ ರೈತರಿಗೆ ಒದಗಿಸಲು 140 ಕ್ಕಿಂತ ಹೆಚ್ಚು ಶುಗರ್ ಕೇನ್ ಹಾರ್ವೆಸ್ಟರ್ ಹಬ್‌ಗಳನ್ನು (ಕಬ್ಬು ಕಟಾವು ಯಂತ್ರ) ಸ್ಥಾಪಿಸಲು 70 ಕೋಟಿ ರೂ. ಸಹಾಯಧನ ಒದಗಿಸಲಾಗಿದೆ.

350. ನೇಕಾರರಿಗೆ ಆರ್ಥಿಕ ಸ್ವಾವಲಂಬನೆಯನ್ನು ಕಲ್ಪಿಸಿ, ಅವರ ಜೀವನ ಮಟ್ಟವನ್ನು ಉನ್ನತೀಕರಿಸಲು ಮತ್ತು ನೇಕಾರಿಕೆ ಉದ್ದಿಮೆಯನ್ನು ಉತ್ತೇಜಿಸಲು, ಈಗ ಚಾಲ್ತಿಯಲ್ಲಿರುವ ಅನೇಕ ಉಪಯೋಜನೆಗಳನ್ನು ಒಗ್ಗೂಡಿಸಿ 'ನೇಕಾರರ ಪ್ಯಾಕೇಜ್–2.0' ಜಾರಿಗೊಳಿಸಲಾಗುವುದು.

351. ನೇಕಾರರಿಗೆ ಒಂದರಿಂದ 10 HP ವರೆಗಿನ ವಿದ್ಯುತ್ ಮಗ್ಗಗಳಿಗೆ ಉಚಿತ ವಿದ್ಯುತ್ ನೀಡಲಾಗುತ್ತಿದೆ. 10 HP ಯಿಂದ 20 HP ವರೆಗಿನ ಮಗ್ಗಗಳಿಗೆ ವಿಧಿಸಲಾಗಿದ್ದ ವಿದ್ಯುತ್ ಮಿತಿಯನ್ನು ಸಡಿಲಿಸಿದೆ. ಒಟ್ಟಾರೆ 90,645 ನೇಕಾರರಿಗೆ ಉಚಿತ ವಿದ್ಯುತ್ ಹಾಗೂ ರಿಯಾಯಿತಿ ವಿದ್ಯುತ್ ಸವಲತ್ತನ್ನು ಒದಗಿಸಲು 100 ಕೋಟಿ ರೂ. ಅನುದಾನ ಒದಗಿಸಲಾಗಿದೆ.

352. ರಾಜ್ಯದಲ್ಲಿ ಜವಳಿ ಹಾಗೂ ಸಿದ್ಧ ಉಡುಪು ಕ್ಷೇತ್ರದಲ್ಲಿ ಹೆಚ್ಚಿನ ಬಂಡವಾಳ ಆಕರ್ಷಿಸಿ ಸುಮಾರು ಎರಡು ಲಕ್ಷ ಉದ್ಯೋಗ ಸೃಜಿಸುವ ಉದ್ದೇಶದಿಂದ ನೂತನ 'ಜವಳಿ ನೀತಿ 2025–30'ನ್ನು ರೂಪಿಸಲಾಗುವುದು.

353. ಉದ್ಯೋಗ ಸೃಜನೆಯೊಂದಿಗೆ ಆರ್ಥಿಕ ಪ್ರಗತಿ ಸಾಧಿಸಲು ರಾಜ್ಯಾದ್ಯಂತ ಜವಳಿ ಪಾರ್ಕ್ ಗಳನ್ನು ಸ್ಥಾಪಿಸಲಾಗುತ್ತಿದೆ. ಕಾರ್ಕಳ, ರಾಣೆಬೆನ್ನೂರು, ರಾಯಚೂರು, ಕಡೂರು ಹಾಗೂ ಚಿಕ್ಕಮಗಳೂರಿನಲ್ಲಿ ಪಿ.ಪಿ.ಪಿ ಮಾದರಿಯಲ್ಲಿ ಹಾಗೂ ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಕಲಬುರಗಿಯಲ್ಲಿ ಪಿ.ಎಂ. ಮಿತ್ರ ಜವಳಿ ಪಾರ್ಕ್ ಸ್ಥಾಪಿಸಲಾಗುತ್ತಿದೆ.

## ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ

354. ಬೆಂಗಳೂರು ಹೊರತುಪಡಿಸಿ ಇತರ ನಗರಗಳಲ್ಲಿಯೂ ನಾವೀನ್ಯತೆ ಮತ್ತು ಉದ್ಯಮಶೀಲತೆಯನ್ನು ಉತ್ತೇಜಿಸಲು, 1,000 ಕೋಟಿ ರೂ. ವೆಚ್ಚದಲ್ಲಿ ಸ್ಥಳೀಯ ಆರ್ಥಿಕ ಆಕ್ಸಿಲರೇಟರ್ ಕಾರ್ಯಕ್ರಮ -LEAP ಅನ್ನು ಪ್ರಾರಂಭಿಸಲಾಗುವುದು. ಇದಕ್ಕೆ ಪ್ರಸಕ್ತ ಸಾಲಿನಲ್ಲಿ 200 ಕೋಟಿ ರೂ. ಅನುದಾನವನ್ನು ಒದಗಿಸಲಾಗಿದೆ. ಈ ಕಾರ್ಯಕ್ರಮಗಳಿಂದ ರಾಜ್ಯಾದ್ಯಂತ ಐದು ಲಕ್ಷ ಹೊಸ ಉದ್ಯೋಗ

ಸೃಷ್ಟಿಸುವ ಗುರಿ ಹೊಂದಿದೆ. ಈ ಕಾರ್ಯಕ್ರಮದಡಿಯಲ್ಲಿ ಕೆಳಗಿನ ಉಪಕ್ರಮಗಳನ್ನು ಕೈಗೊಳ್ಳಲಾಗುವುದು:

i) ಮೈಸೂರು, ಮಂಗಳೂರು–ಉಡುಪಿ–ಮಣಿಪಾಲ್, ಹುಬ್ಬಳ್ಳಿ–ಧಾರವಾಡ, ಬೆಳಗಾವಿ ಮತ್ತು ಕಲಬುರಗಿಗಳಲ್ಲಿ ನವೋದ್ಯಮ ಪರಿಸರ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲಾಗುವುದು.

ii) ಇನ್ಕ್ಯುಬೇಟರ್‌ಗಳು, ಆಕ್ಸಿಲರೇಟರ್‌ಗಳು, ಉತ್ಕೃಷ್ಟತಾ ಕೇಂದ್ರಗಳು ಮತ್ತು ಜಾಗತಿಕ ತಂತ್ರಜ್ಞಾನ ಕೇಂದ್ರಗಳನ್ನು (GTC) ಸ್ಥಾಪಿಸಲು ಲೈಫ್‌ಸೈಕಲ್ (Life Cycle) ವಿಧಾನ ಅನುಸರಿಸಲಾಗುವುದು.

iii) ಡೀಪ್–ಟೆಕ್ ಅಭಿವೃದ್ಧಿಗಾಗಿ 100 ಕೋಟಿ ರೂ. ಕಾರ್ಪಸ್ ನಿಧಿ ಹಾಗೂ 300 ಕೋಟಿ ರೂ.ಗಳ Fund of Funds (FoF) ಸ್ಥಾಪಿಸಲಾಗುವುದು.

355. ವಾಣಿಜ್ಯೋದ್ಯಮ, ಮಾಹಿತಿ ತಂತ್ರಜ್ಞಾನ ಮತ್ತು ಅವಿಷ್ಕಾರಕ್ಕೆ ಸಂಬಂಧಿಸಿದ ಜಾಗತಿಕ ಮತ್ತು ರಾಷ್ಟ್ರೀಯ ಸೂಚ್ಯಂಕಗಳಲ್ಲಿ ಕರ್ನಾಟಕವು ಅಗ್ರಸ್ಥಾನದಲ್ಲಿದೆ ಎಂಬುದು ಹೆಮ್ಮೆಯ ವಿಷಯವಾಗಿದೆ. ರಾಜ್ಯಕ್ಕೆ ಹೆಚ್ಚಿನ ಬಂಡವಾಳ ಹೂಡಿಕೆ ಹಾಗೂ ಹೊಸ ಉದ್ಯೋಗಗಳನ್ನು ಸೃಜಿಸುವ ಉದ್ದೇಶದಿಂದ

ಈ ವಲಯದಲ್ಲಿ ಪ್ರೋತ್ಸಾಹಕಗಳನ್ನೊಳಗೊಂಡ ಅನೇಕ ನೀತಿಗಳನ್ನು ಜಾರಿಗೊಳಿಸಲಾಗಿರುತ್ತದೆ. (ನೀತಿಯ ವಿವರಗಳನ್ನು ಅನುಬಂಧ–8ರಲ್ಲಿ ಒದಗಿಸಿದೆ).

356. ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ರಾಜ್ಯವನ್ನು ಇನ್ನಷ್ಟು ಬಲಪಡಿಸುವ ಉದ್ದೇಶದಿಂದ ಹೊಸ ಐ.ಟಿ ನೀತಿಯನ್ನು 2025ನೇ ಸಾಲಿನಲ್ಲಿ ಜಾರಿಗೊಳಿಸಲಾಗುವುದು. ಕ್ಲೌಡ್ ಕಂಪ್ಯೂಟಿಂಗ್ (Cloud Computing) ಮತ್ತು ನೂತನ ತಂತ್ರಜ್ಞಾನಗಳ ಅಭಿವೃದ್ಧಿಗೆ ಒತ್ತು ನೀಡುವುದರ ಜೊತೆಗೆ ಶ್ರೇಣಿ–2 ಮತ್ತು ಶ್ರೇಣಿ–3 ನಗರಗಳಿಗೂ ಮಾಹಿತಿ ತಂತ್ರಜ್ಞಾನ ಕ್ಷೇತ್ರ ವಿಸ್ತರಿಸಿ ಜಾಗತಿಕ ತಂತ್ರಜ್ಞಾನ ಕೇಂದ್ರವನ್ನಾಗಿ ಕರ್ನಾಟಕದ ಸ್ಥಾನವನ್ನು ಬಲಪಡಿಸುತ್ತದೆ

357. ಕರ್ನಾಟಕವನ್ನು ಕೃತಕ ಬುದ್ಧಿಮತ್ತೆ (AI) ಆಧಾರಿತ ಕೇತ್ರದಲ್ಲಿ ಪಾರಮ್ಯ ಸಾಧಿಸಲು ಮುಂದಿನ ಐದು ವರ್ಷಗಳಲ್ಲಿ 50 ಕೋಟಿ ರೂ. ಹೂಡಿಕೆಯೊಂದಿಗೆ Centre for Applied AI for Tech Solutions (CATS) ಸ್ಥಾಪಿಸಲಾಗುವುದು. ರಾಜ್ಯವನ್ನು AI ಕ್ಷೇತ್ರದಲ್ಲಿ ಮುಂಚೂಣಿಗೆ ತರಲು ಸರ್ಕಾರ ಬದ್ಧವಾಗಿದೆ.

358. ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆಯ ಸಹಯೋಗದೊಂದಿಗೆ ಕ್ವಾಂಟಮ್ ತಂತ್ರಜ್ಞಾನದ ಅಭಿವೃದ್ಧಿಯನ್ನು ಉತ್ತೇಜಿಸಲು ಕ್ವಾಂಟಮ್ ರಿಸರ್ಚ್ ಪಾರ್ಕ್ ಹಂತ–2 ಅನ್ನು 48

ಕೋಟಿ ರೂ. ವೆಚ್ಚದಲ್ಲಿ ಮುಂದಿನ ಮೂರು ವರ್ಷಗಳಲ್ಲಿ ಸ್ಥಾಪಿಸಲಾಗುವುದು.

359. ಕರ್ನಾಟಕ ಜೈವಿಕ ತಂತ್ರಜ್ಞಾನ ನೀತಿ 2024–2029, MSME ಮತ್ತು ದೊಡ್ಡ ಉದ್ಯಮ ವಿಭಾಗದಲ್ಲಿ 1,500 ಕೋಟಿ ರೂ. ಹೂಡಿಕೆಯನ್ನು ಆಕರ್ಷಿಸುವ ಉದ್ದೇಶ ಹೊಂದಲಾಗಿದ್ದು, 220 ಕೋಟಿ ರೂ. ಪ್ರೋತ್ಸಾಹದ ಮೂಲಕ ಜಾರಿಗೆ ತರಲಾಗುವುದು.

360. ಬೆಂಕಿ ಅನಾಹುತದಲ್ಲಿ ತೀವ್ರ ಹಾನಿ ಸಂಭವಿಸಿದ ಬೆಂಗಳೂರು ಬಯೋ–ಇನ್ನೋವೇಷನ್ ಸೆಂಟರ್‌ನ ಪುನರ್ ನಿರ್ಮಾಣಕ್ಕೆ ಒಟ್ಟು 57 ಕೋಟಿ ರೂ. ನೆರವು ನೀಡಲಾಗುವುದು. ಪ್ರಸಕ್ತ ಸಾಲಿನಲ್ಲಿ 20 ಕೋಟಿ ರೂ. ಅನುದಾನ ಒದಗಿಸಿದೆ.

361. ಜಾಗತಿಕ ಸಾಮರ್ಥ್ಯ ಕೇಂದ್ರಗಳ (GCC) ವಲಯದಲ್ಲಿ ಕರ್ನಾಟಕದ ನಾಯಕತ್ವವನ್ನು ಮತ್ತಷ್ಟು ಬಲಪಡಿಸಲು, ಕಿಯೋನಿಕ್ಸ್ ಮೂಲಕ ಗ್ಲೋಬಲ್ ಇನ್ನೋವೇಶನ್ ಡಿಸ್ಟ್ರಿಕ್ಟ್ ಅನ್ನು ಮೈಸೂರು, ಬೆಳಗಾವಿ, ಧಾರವಾಡ ಮತ್ತು ಬೆಂಗಳೂರಿನಲ್ಲಿ ಅಭಿವೃದ್ಧಿಪಡಿಸಲಾಗುವುದು.

362. ಕೋಲಾರ, ರಾಮನಗರ, ಚಿತ್ರದುರ್ಗ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಹೊಸ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರಗಳನ್ನು

ಸ್ಥಾಪಿಸಲಾಗುವುದು. ಪ್ರಸಕ್ತ ಸಾಲಿನಲ್ಲಿ ಒಂಭತ್ತು ಕೋಟಿ ರೂ. ಒದಗಿಸಿದೆ.

363. ಎಲೆಕ್ಟ್ರಾನಿಕ್ಸ್ ಉತ್ಪಾದನೆಗೆ ಪೂರಕ ವ್ಯವಸ್ಥೆಯನ್ನು ಸೃಷ್ಟಿಸಲು ಮೈಸೂರಿನ 150 ಎಕರೆ ಪ್ರದೇಶದಲ್ಲಿ ಅತ್ಯಾಧುನಿಕ Printed Circuit Board (PCB) ಪಾರ್ಕ್ ಅನ್ನು ಅಭಿವೃದ್ಧಿಪಡಿಸಲಾಗುತ್ತಿದೆ.

364. ಕರ್ನಾಟಕದಲ್ಲಿ ಸಂವೇದಕಗಳಿಗೆ ಸಂಶೋಧನೆ ಮತ್ತು ಅಭಿವೃದ್ಧಿ, ಕೌಶಲ್ಯ ಮತ್ತು ಪರಿಸರ ವ್ಯವಸ್ಥೆಯನ್ನು ಉತ್ತೇಜಿಸಲು ಕೈಗಾರಿಕೆಗಳ ಮತ್ತು ಭಾರತ ಸರ್ಕಾರದ ಸಹಭಾಗಿತ್ವದಲ್ಲಿ ಸೆನ್ಸರ್‌ಟೆಕ್ ಇನ್ನೋವೇಶನ್ ಹಬ್, ಒಟ್ಟು 99 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುವುದು.

365. ಕಿಯೋನಿಕ್ಸ್ ವತಿಯಿಂದ ಮಂಗಳೂರು, ಹುಬ್ಬಳ್ಳಿ ಮತ್ತು ಬೆಳಗಾವಿಯಲ್ಲಿ ಪ್ಲಗ್–ಅಂಡ್–ಪ್ಲೇ ಸೌಲಭ್ಯಗಳನ್ನೊಳಗೊಂಡ ಮೂರು ಹೊಸ ಜಾಗತಿಕ ತಂತ್ರಜ್ಞಾನ ಕೇಂದ್ರ (GTC) ಗಳನ್ನು ಸ್ಥಾಪಿಸಲಾಗುವುದು.

366. ಕೃಷಿ ಕ್ಷೇತ್ರದಲ್ಲಿ ತಂತ್ರಜ್ಞಾನದ ಏಕೀಕರಣದ ಅಗತ್ಯವಿರುವುದರಿಂದ ಕಲಬುರಗಿಯಲ್ಲಿ ಅಗ್ರಿ–ಟೆಕ್ ವೇಗವರ್ಧಕ (Agri-Tech Accelerator) ವನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ.

367. ಕಲಬುರಗಿಯಲ್ಲಿ Plug & Play ಸೌಲಭ್ಯವಿರುವ Flat Factory ಅನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ.

**ಕನ್ನಡ ಮತ್ತು ಸಂಸ್ಕೃತಿ**

368. ಬಾಗಲಕೋಟೆ ಜಿಲ್ಲೆಯ ಇತಿಹಾಸ ಪ್ರಸಿದ್ಧ ಮತ್ತು ಪಾರಂಪರಿಕ ತಾಣವಾದ ಬಾದಾಮಿಯ ಚಾಲುಕ್ಯ ಉತ್ಸವದಲ್ಲಿ ನೃತ್ಯೋತ್ಸವ ಕಾರ್ಯಕ್ರಮವನ್ನು ಎರಡು ಕೋಟಿ ರೂ. ವೆಚ್ಚದಲ್ಲಿ ಆಯೋಜಿಸಲಾಗುವುದು.

369. ಅಂತಾರಾಷ್ಟ್ರೀಯ ಬಸವ ಆಧ್ಯಾತ್ಮಿಕ ಹಾಗೂ ವಚನ ಅಧ್ಯಯನ ಕೇಂದ್ರವನ್ನು ಬೆಂಗಳೂರಿನಲ್ಲಿ ಸ್ಥಾಪನೆ ಮಾಡಲು ತಾತ್ವಿಕ ಅನುಮೋದನೆ ನೀಡಿದ್ದು, ಈ ಬಗ್ಗೆ ತಜ್ಞರ ಸಮಿತಿಯನ್ನು ರಚಿಸಿ ವಿಸ್ತೃತ ವರದಿ ಪಡೆದು ಕ್ರಮ ಕೈಗೊಳ್ಳಲಾಗುವುದು.

370. ತಾಯಿ ಭುವನೇಶ್ವರಿಯ ಭವ್ಯವಾದ ಪ್ರತಿಮೆಯನ್ನು ರಾಜ್ಯದ ಆಡಳಿತ ಕೇಂದ್ರ ಸ್ಥಾನವಾದ ವಿಧಾನಸೌಧದ ಆವರಣದಲ್ಲಿ ಪ್ರತಿಷ್ಠಾಪಿಸಲಾಗಿದೆ.

371. ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಶ್ರೀ ಬೊಳುವಾರು ಮೊಹಮ್ಮದ್ ಕುಂಞಿ ಅವರ 'ಸ್ವಾತಂತ್ರ್ಯದ ಓಟ' ಕಾದಂಬರಿಯನ್ನು ಒಂದು ಕೋಟಿ ರೂ. ವೆಚ್ಚದಲ್ಲಿ ನಾಟಕ

ರೂಪದಲ್ಲಿ ನಿರ್ಮಾಣ ಮಾಡಿ ರಾಜ್ಯಾದ್ಯಂತ ಪ್ರದರ್ಶಿಸಲಾಗುವುದು.

372. 'ಕನ್ನಡ ಭಾರತಿ' ಎನ್ನುವ ಪುಸ್ತಕ ಮಾಲಿಕೆಯಡಿ ಬೇರೆ ಬೇರೆ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದ ಶ್ರೇಷ್ಠ ಸಾಧಕರ ಜೀವನವನ್ನು ಪರಿಚಯಿಸುವ ಪುಸ್ತಕಗಳನ್ನು 50 ಲಕ್ಷ ರೂ. ಗಳಲ್ಲಿ ಪ್ರಕಟಿಸಲಾಗುವುದು.

373. ದಾವಣಗೆರೆಯ ಕೊಂಡಜ್ಜಿ ಬೆಟ್ಟದ ಪರಿಸರದಲ್ಲಿ ಸ್ಥಾಪಿಸಲಾಗಿರುವ ವೃತ್ತಿರಂಗಭೂಮಿ ರಂಗಾಯಣದಲ್ಲಿ ಮೂರು ಕೋಟಿ ರೂ. ವೆಚ್ಚದಲ್ಲಿ ಮೂಲಭೂತ ಸೌಕರ್ಯ, ವೃತ್ತಿ ರಂಗಾಯಣ ಸಮುಚ್ಛಯ ಹಾಗೂ ಥಿಯೇಟರ್ ಮ್ಯೂಸಿಯಂ ನಿರ್ಮಾಣ ಮಾಡಲಾಗುವುದು.

374. ಕಲೆ, ಸಾಹಿತ್ಯ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲಿನ ಕಲಾವಿದರ ಮಾಸಾಶನವನ್ನು 2,000 ರೂ. ಗಳಿಂದ 2,500 ರೂ. ಗಳಿಗೆ ಹೆಚ್ಚಿಸಲಾಗುವುದು.

375. ರಾಷ್ಟ್ರಕವಿ ಡಾ. ಜಿ.ಎಸ್. ಶಿವರುದ್ರಪ್ಪ ಟ್ರಸ್ಟ್‌ನ ಕಾರ್ಯಚಟುವಟಿಕೆಗಳನ್ನು ಕೈಗೊಳ್ಳಲು, ಬೆಂಗಳೂರಿನಲ್ಲಿ ಸುಸಜ್ಜಿತ ಕಟ್ಟಡ ನಿರ್ಮಾಣ ಮಾಡಲು ಒಂದು ಕೋಟಿ ರೂ. ಅನುದಾನ ಒದಗಿಸಲಾಗುವುದು.

376. ಸೇವಾದಳ ಸಂಸ್ಥಾಪಕ ಹಾಗೂ ಸ್ವಾತಂತ್ರ್ಯ ಸೇನಾನಿ ಪದ್ಮಭೂಷಣ ಡಾ॥ ಎನ್.ಎಸ್.ಹರ್ಡೀಕರ ರವರ ಸ್ಮಾರಕವನ್ನು ಬೆಳಗಾವಿ ಜಿಲ್ಲೆಯ ಘಟಪ್ರಭಾದ ಆರೋಗ್ಯ ಧಾಮದಲ್ಲಿ ನಿರ್ಮಿಸಲು ಎರಡು ಕೋಟಿ ರೂ. ಒದಗಿಸಲಾಗುವುದು.

377. ಮೈಸೂರು ವಿಶ್ವವಿದ್ಯಾಲಯದ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯಲ್ಲಿರುವ 2,500 ಪ್ರಾಚೀನ ತಾಳೆಗರಿಯ ಹಸ್ತಪ್ರತಿಗಳ ಡಿಜಿಟಲೀಕರಣ ಯೋಜನೆಯನ್ನು ಒಂದು ಕೋಟಿ ರೂ. ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗುವುದು.

378. ಮತೀಯವಾದದಿಂದ ಪ್ರಭಾವಿತವಾಗುತ್ತಿರುವ ಇಂದಿನ ಯುವಜನತೆಗೆ ಸಾಮರಸ್ಯದಿಂದ ಬದುಕುವಂತೆ ಪ್ರೇರೇಪಿಸುವ ರಾಮ್ ಮನೋಹರ್ ಲೋಹಿಯಾ ಹಾಗೂ ಇತರ ಮಹನೀಯರ ಪುಸ್ತಕಗಳಲ್ಲಿನ ಸೌಹಾರ್ದತೆಯ ಅಂಶಗಳನ್ನು ಕ್ರೋಢೀಕರಿಸಿ ಕನ್ನಡ ಭಾಷೆಯಲ್ಲಿ ಪ್ರಕಟಿಸಲಾಗುವುದು. ಈ ಕುರಿತು ಕಮ್ಮಟ, ಕಾರ್ಯಾಗಾರಗಳನ್ನು ಏರ್ಪಡಿಸಲಾಗುವುದು.

379. ಮೈಸೂರಿನ ರಂಗಾಯಣದ ಕಾರ್ಯಚಟುವಟಿಕೆಗಳಿಗೆ ಎರಡು ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು.

380. ಸಂತ ಕವಿ ಕನಕದಾಸ ಮತ್ತು ತತ್ವ ಪದಕಾರರ ಅಧ್ಯಯನ ಕೇಂದ್ರಕ್ಕೆ ತತ್ವಪದ ಪಾರಿಭಾಷಿಕ ಪದಕೋಶದ ಸಿದ್ಧತೆ ಮತ್ತು ಪ್ರಕಟಣೆ ಕಾರ್ಯಕ್ಕಾಗಿ ಒಂದು ಕೋಟಿ ರೂ. ಒದಗಿಸಲಾಗುವುದು

381. ಶಿಕ್ಷಣ ತಜ್ಞ, ಪದ್ಮಭೂಷಣ ಡಾ.ಹೆಚ್.ನರಸಿಂಹಯ್ಯನವರ ಸ್ಮರಣಾರ್ಥವಾಗಿ ಡಾ.ಹೆಚ್.ನರಸಿಂಹಯ್ಯ ಪ್ರಾಧಿಕಾರವನ್ನು ಸ್ಥಾಪಿಸಲಾಗುವುದು. ಅವರು ವ್ಯಾಸಂಗ ಮಾಡಿದ, ಗೌರಿಬಿದನೂರಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯನ್ನು ಉನ್ನತೀಕರಿಸಲಾಗುವುದು.

**ಪ್ರವಾಸೋದ್ಯಮ**

382. ರಾಜ್ಯದಲ್ಲಿ ಪ್ರವಾಸೋದ್ಯಮ ವಲಯದ ವಿಪುಲ ಅವಕಾಶ ಮತ್ತು ಸಾಮರ್ಥ್ಯದ ಸದ್ಬಳಕೆ ಮಾಡಿಕೊಳ್ಳಲು ನೂತನ ಪ್ರವಾಸೋದ್ಯಮ ನೀತಿ 2024-29 ನ್ನು ಜಾರಿಗೊಳಿಸಲಾಗಿದೆ. ಪ್ರವಾಸೋದ್ಯಮ ಕ್ಷೇತ್ರವನ್ನು ಆಶಾದಾಯಕ ಮತ್ತು ಸುಸ್ಥಿರ ಅಭಿವೃದ್ಧಿಯ ಮೂಲಕ ಆದ್ಯತೆಯ ವಲಯವಾಗಿಸುವ ಉದ್ದೇಶ ಹೊಂದಿರುವ ಈ ನೀತಿಯಿಂದ ರಾಜ್ಯದಲ್ಲಿ 8,000 ಕೋಟಿ ರೂ. ಹೂಡಿಕೆಯ ನಿರೀಕ್ಷೆ ಹಾಗೂ 1.5 ಲಕ್ಷ ಉದ್ಯೋಗ ಸೃಜನೆಯ ಗುರಿ ಹೊಂದಿದ್ದೇವೆ.

383. ರಾಜ್ಯದ ಪ್ರಮುಖ ಧಾರ್ಮಿಕ ಸ್ಥಳವಾದ ಸವದತ್ತಿಯ ಶ್ರೀ ರೇಣುಕಾ ಯಲ್ಲಮ್ಮ ಕ್ಷೇತ್ರ ಹಾಗೂ ಬೆಂಗಳೂರಿನಲ್ಲಿರುವ ದೇವಿಕಾರಾಣಿ ರೋರಿಚ್ ಎಸ್ಟೇಟ್ ಅನ್ನು ವಿಶೇಷ ಬಂಡವಾಳ ಯೋಜನೆಯಡಿ ಒಟ್ಟಾರೆ 199 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು.

384. ರಾಜ್ಯದ ಆಯ್ದ 10 ಜಿಲ್ಲೆಗಳಲ್ಲಿನ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸಲು 2025–26ನೇ ಸಾಲಿನಲ್ಲಿ 50 ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು.

385. ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಕಡಲ ತೀರದ ಅಭಿವೃದ್ಧಿ ಹಾಗೂ ರಸ್ತೆಬದಿ ಸೌಲಭ್ಯಗಳನ್ನು (Highway Hubs) ಉನ್ನತೀಕರಿಸುವ ಮೂಲಕ ಶೈಕ್ಷಣಿಕ, ಆರೋಗ್ಯ, ಸಾಹಸ, ಪರಿಸರ, ಜಲಸಾರಿಗೆ ಹಾಗೂ ಕಡಲ ತೀರದ ಪ್ರವಾಸೋದ್ಯಮಗಳಿಗೆ ಲಭ್ಯವಿರುವ ಅವಕಾಶಗಳನ್ನು ಉಪಯೋಗಿಸಿಕೊಳ್ಳಲಾಗುವುದು.

386. UNESCO ಪಾರಂಪರಿಕ ಪ್ರವಾಸಿ ತಾಣಗಳ ಪಟ್ಟಿಗೆ ಸೇರ್ಪಡೆಗೊಂಡಿರುವ ಬೇಲೂರು–ಹಳೇಬೀಡು–ಸೋಮನಾಥಪುರ ಪ್ರವಾಸಿ ತಾಣಗಳಲ್ಲಿ ಮೂಲಸೌಲಭ್ಯಗಳನ್ನು ಅಭಿವೃದ್ಧಿಪಡಿಸಲಾಗುವುದು.

387. ಪ್ರವಾಸಿಗರ ಸುರಕ್ಷತೆಗಾಗಿ ಪ್ರವಾಸಿ ತಾಣಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರವಾಸಿ ಮಿತ್ರರಿಗೆ ತರಬೇತಿ ನೀಡಿ ಅವರ ಸಂಖ್ಯೆಯನ್ನು 1,000 ಕ್ಕೆ ಹೆಚ್ಚಿಸಲಾಗುವುದು ಹಾಗೂ ಪ್ರವಾಸಿಗರಿಗೆ ಮಾಹಿತಿ ನೀಡಲು 24X7 ಪ್ರವಾಸಿ ಸಹಾಯವಾಣಿ ತೆರೆಯಲಾಗುವುದು.

388. ರಾಜ್ಯದ ಸ್ಮಾರಕಗಳ ಸಂರಕ್ಷಣೆಗೆ ಅಗತ್ಯವಾಗಿರುವ ಮೂಲಸೌಕರ್ಯಗಳನ್ನು ಸೃಷ್ಟಿಸಲು 25 ಸ್ಮಾರಕಗಳನ್ನು ದತ್ತು ನೀಡಲಾಗಿದೆ. ಮುಂದಿನ ಹಂತದಲ್ಲಿ ಇನ್ನೂ ಹೆಚ್ಚಿನ ಸ್ಮಾರಕಗಳನ್ನು 'ನಮ್ಮ ಸ್ಮಾರಕ' ಡಿಜಿಟಲ್ ವೇದಿಕೆಯ ಮುಖಾಂತರ ದತ್ತು ನೀಡಲು ಉದ್ದೇಶಿಸಲಾಗಿದೆ.

389. ರಾಜ್ಯದ ಪ್ರವಾಸಿ ತಾಣಗಳ ಸಮಗ್ರ ಮಾಹಿತಿಯನ್ನು ಸಂಗ್ರಹಿಸಲು ONE-TAC Digital Grid ಅನ್ನು ಉಪಯೋಗಿಸಲಾಗುವುದು.

390. ಐತಿಹಾಸಿಕ ಲಕ್ಕುಂಡಿಯಲ್ಲಿನ ಪಾರಂಪರಿಕ ದೇವಾಲಯಗಳನ್ನು ವಿಶ್ವ ಪಾರಂಪರಿಕ ತಾಣಗಳ ಪಟ್ಟಿಗೆ ಸೇರ್ಪಡೆಗೊಳಿಸಲು ಅಗತ್ಯ ಸೌಕರ್ಯಗಳನ್ನು ಒದಗಿಸಲಾಗುವುದು ಹಾಗೂ ಪ್ರಾಚ್ಯಾವಶೇಷಗಳ ಸಂರಕ್ಷಣೆಗಾಗಿ ಬಯಲು ವಸ್ತು ಸಂಗ್ರಹಾಲಯವನ್ನು ಪ್ರಾರಂಭಿಸಲಾಗುವುದು.

391. ರಾಜ್ಯದ ಸಂಸ್ಕೃತಿ, ನಾಗರಿಕತೆಯ ಉಗಮ, ವಿಕಾಸಗಳೂ ಸೇರಿದಂತೆ ಐತಿಹಾಸಿಕ, ಸಾಮಾಜಿಕ ಸಂಗತಿಗಳನ್ನು ಬಿಂಬಿಸುವ ರಾಜ್ಯ ಮಟ್ಟದ ವಸ್ತು ಸಂಗ್ರಹಾಲಯವನ್ನು ಮೈಸೂರು ನಗರದ ಹಳೆ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಸ್ಥಾಪಿಸಲಾಗುವುದು.

**ಯುವಸಬಲೀಕರಣ ಮತ್ತು ಕ್ರೀಡೆ**

392. ಗುರಿ–ಒಲಿಂಪಿಕ್ ಪದಕ ಯೋಜನೆಯಡಿ ರಾಜ್ಯದ ಅತ್ಯಂತ ಪ್ರತಿಭಾನ್ವಿತ 60 ಕ್ರೀಡಾಪಟುಗಳನ್ನು ಗುರುತಿಸಿ, ಒಲಂಪಿಕ್ಸ್ – 2028ಕ್ಕೆ ತಯಾರಿ ಕೈಗೊಳ್ಳಲು ವಾರ್ಷಿಕ ತಲಾ 10 ಲಕ್ಷ ರೂ.ನಂತೆ ಪ್ರೋತ್ಸಾಹ ಧನವನ್ನು ಮೂರು ವರ್ಷ ನೀಡಲಾಗುವುದು. ಈ ವರ್ಷಕ್ಕೆ 6 ಕೋಟಿ ರೂ. ಒದಗಿಸಲಾಗುವುದು.

393. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಆದಿನಾರಾಯಣ ಹೊಸಹಳ್ಳಿಯಲ್ಲಿರುವ 20 ಎಕರೆ ನಿವೇಶನದಲ್ಲಿ ಜಿಲ್ಲಾ ಕ್ರೀಡಾಂಗಣ ನಿರ್ಮಿಸಲಾಗುವುದು ಹಾಗೂ ಸೈಕ್ಲಿಂಗ್ ಕ್ರೀಡೆಗೆ ಉತ್ತೇಜನ ನೀಡಲು 5 ಕೋಟಿ ರೂ. ವೆಚ್ಚದಲ್ಲಿ ಆಧುನಿಕ ಸೈಕ್ಲಿಂಗ್ ವೆಲೋಡ್ರೋಮ್ ನಿರ್ಮಿಸಲಾಗುವುದು. ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಜಿಲ್ಲಾ ಕ್ರೀಡಾಂಗಣ ಅಭಿವೃದ್ಧಿಗೆ ತಲಾ 3 ಕೋಟಿ ರೂ. ನಂತೆ ಒಟ್ಟು 6 ಕೋಟಿ ರೂ. ಒದಗಿಸಲಾಗುವುದು.

394. ನಿವೇಶನ ಲಭ್ಯವಿರುವ 12 ತಾಲ್ಲೂಕು ಕೇಂದ್ರಗಳಿಗೆ ತಲಾ 2 ಕೋಟಿ ರೂ. ವೆಚ್ಚದಲ್ಲಿ ತಾಲ್ಲೂಕು ಕ್ರೀಡಾಂಗಣಗಳನ್ನು ನಿರ್ಮಿಸಲಾಗುವುದು. ಪ್ರಸಕ್ತ ಸಾಲಿನಲ್ಲಿ ಒಟ್ಟು 12 ಕೋಟಿ ರೂ ಒದಗಿಸಲಾಗುವುದು.

395. ಯಲಬುರ್ಗಾದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ತಾಲ್ಲೂಕು ಕ್ರೀಡಾಂಗಣ ಹಾಗೂ ಟಿ.ನರಸೀಪುರ ತಾಲ್ಲೂಕು ಕ್ರೀಡಾಂಗಣವನ್ನು ಆರು ಕೋಟಿ ರೂ. ಅನುದಾನದಲ್ಲಿ ಅಭಿವೃದ್ಧಿಗೊಳಿಸಲಾಗುವುದು.

396. ರಾಜ್ಯದ ನಾಲ್ಕು ವಿಭಾಗಗಳಲ್ಲಿ ತಲಾ ಒಂದರಂತೆ ಜಿಲ್ಲಾ ಕ್ರೀಡಾಂಗಣಗಳಲ್ಲಿ ಶೂಟಿಂಗ್ ರೇಂಜ್ ಗಳನ್ನು ಮುಂದಿನ ಮೂರು ವರ್ಷಗಳಲ್ಲಿ ಒಟ್ಟು 3 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವುದು.

397. ಗ್ರಾಮೀಣ ಕ್ರೀಡೆಗಳಾದ ಕಂಬಳ, ಎತ್ತಿನಬಂಡಿ ಓಟ ಮತ್ತು ಮಲ್ಲಕಂಭ ಕ್ರೀಡೆಗಳಿಗೆ ಉತ್ತೇಜನ ನೀಡಲಾಗುವುದು. ಅತೀ ಹಿಂದುಳಿದ ಅರಣ್ಯಾಧಾರಿತ ಬುಡಕಟ್ಟು ವರ್ಗದವರಿಗೆ ಪ್ರತಿ ವರ್ಷ ಕ್ರೀಡಾಕೂಟ ಆಯೋಜಿಸಲಾಗುವುದು. 2025–26 ನೇ ಸಾಲಿನಲ್ಲಿ ಈ ಉದ್ದೇಶಕ್ಕೆ 2 ಕೋಟಿ ರೂ. ಒದಗಿಸಲಾಗುವುದು.

398. ಕೂಡಿಗೆ ಕ್ರೀಡಾ ಶಾಲೆಯ ಸೌಲಭ್ಯಗಳ ಉನ್ನತೀಕರಣಕ್ಕಾಗಿ 3 ಕೋಟಿ ರೂ. ಒದಗಿಸಲಾಗುವುದು. ಯಾದಗಿರಿಯ ಶಹಾಪುರದಲ್ಲಿ ಸುಸಜ್ಜಿತವಾದ ಕ್ರೀಡಾ ವಸತಿ ಶಾಲೆಯನ್ನು 10 ಕೋಟಿ ರೂ. ವೆಚ್ಚದಲ್ಲಿ ಆರಂಭಿಸಲಾಗುವುದು.

399. ಮೈಸೂರು ಮತ್ತು ಬೆಳಗಾವಿಯಲ್ಲಿ ಹೊಸದಾಗಿ ಕ್ರೀಡಾ ವಿಜ್ಞಾನ ಕೇಂದ್ರಗಳನ್ನು 7 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುವುದು.

400. ಬೆಂಗಳೂರಿನ ವಿದ್ಯಾನಗರದಲ್ಲಿರುವ ಈಜುಕೊಳವನ್ನು ಹೀಟಿಂಗ್ ಮತ್ತು ಡೈವಿಂಗ್ ಪೂಲ್ ವ್ಯವಸ್ಥೆಗಳನ್ನೊಳಗೊಂಡು ಅಂತಾರಾಷ್ಟ್ರೀಯ ಮಟ್ಟಕ್ಕೆ ಮೇಲ್ದರ್ಜೆಗೇರಿಸಲಾಗುವುದು. ಚಾಮರಾಜನಗರದಲ್ಲಿ ಒಲಂಪಿಕ್ಸ್ ಮಾದರಿಯ (50 ಮೀಟರ್) ಈಜುಕೊಳವನ್ನು 2 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವುದು.

401. ಮೈಸೂರಿನಲ್ಲಿ ಕುಸ್ತಿ, ವಾಲಿಬಾಲ್, ಖೋಖೋ ಅಕಾಡೆಮಿಗಳನ್ನು ಸ್ಥಾಪಿಸಲು 2 ಕೋಟಿ ರೂ. ಒದಗಿಸಲಾಗುವುದು.

402. ಕ್ರೀಡಾಪಟುಗಳು ತರಬೇತಿ ಪಡೆಯಲು ಹಾಗೂ ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಸಹಕಾರಿಯಾಗುವಂತೆ ಶಾಲಾ–ಕಾಲೇಜುಗಳ (ವೃತ್ತಿಪರ ಕಾಲೇಜುಗಳು ಸೇರಿದಂತೆ) ವಾರ್ಷಿಕ ಹಾಜರಾತಿಯಲ್ಲಿ ರಾಜ್ಯ ಮತ್ತು ರಾಷ್ಟ್ರ ಮಟ್ಟದವರೆಗಿನ ಕ್ರೀಡಾಪಟುಗಳಿಗೆ ಶೇ.15 ರಷ್ಟು ಹಾಗೂ ಅಂತಾರಾಷ್ಟ್ರೀಯ ಕ್ರೀಡಾಪಟುಗಳಿಗೆ ಶೇ.25ರಷ್ಟು

ಹಾಜರಾತಿ ವಿನಾಯಿತಿ ನೀಡಲಾಗುವುದು. ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಪದಕ ವಿಜೇತ ಕ್ರೀಡಾಪಟುಗಳಿಗೆ ಶೇ.5ರಷ್ಟು ಕೃಪಾಂಕವನ್ನು ವೃತ್ತಿಪರ, ಪದವಿ ಮತ್ತು ಉನ್ನತ ಶಿಕ್ಷಣದ ಪ್ರವೇಶದಲ್ಲಿ ನೀಡಲಾಗುವುದು.

403. ಉದ್ಯೋಗ ಖಾತರಿ ಯೋಜನೆಯೊಂದಿಗೆ ಸಂಯೋಜಿಸಿ 100 ಶಾಲೆಗಳಲ್ಲಿ ಆಟದ ಮೈದಾನ ನಿರ್ಮಿಸಲು ತಲಾ 5 ಲಕ್ಷ ರೂ. ವರೆಗೆ ನೆರವು ನೀಡಲಾಗುವುದು.

404. ನಿವೃತ್ತಿ ಹೊಂದಿದ ಕುಸ್ತಿಪಟುಗಳಿಗೆ ನೀಡಲಾಗುತ್ತಿರುವ ಮಾಸಾಶನವನ್ನು, ಅಂತಾರಾಷ್ಟ್ರೀಯ ಮಟ್ಟದ ಕುಸ್ತಿಪಟುಗಳಿಗೆ 6,000 ರೂ.ಗಳಿಗೆ, ರಾಷ್ಟ್ರ ಮಟ್ಟದ ಕುಸ್ತಿಪಟುಗಳಿಗೆ 5,000 ರೂ.ಗಳಿಗೆ ಹಾಗೂ ರಾಜ್ಯ ಮಟ್ಟದ ಕುಸ್ತಿಪಟುಗಳಿಗೆ 4,500 ರೂ. ಗಳಿಗೆ ಹೆಚ್ಚಿಸಲಾಗುವುದು.

405. ಒಲಂಪಿಕ್ಸ್, ಕಾಮನ್ ವೆಲ್ತ್ ಹಾಗೂ ಏಷಿಯನ್ ಗೇಮ್ಸ್ ಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳ ಸೇವೆಯನ್ನು ವಿವಿಧ ಕ್ರೀಡಾ ಸಂಸ್ಥೆಗಳಲ್ಲಿ ಮಾರ್ಗದರ್ಶಕರಾಗಿ ಪಡೆಯಲಾಗುವುದು.

**ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ**

406. ಕೃಷಿ ಅರಣ್ಯ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡುವ ಮೂಲಕ ಇಂಗಾಲದ ಸಂಗ್ರಹಣಾ ಸಾಮರ್ಥ್ಯ ಹೆಚ್ಚಾಗಿರುವ ಸಸ್ಯ ಪ್ರಭೇದಗಳನ್ನು ಬೆಳೆಸಲು 'ಕೃಷಿ ಅರಣ್ಯ ಮತ್ತು ಕಾರ್ಬನ್ ಕ್ರೆಡಿಟ್' ನೀತಿಯ ಮೂಲಕ ರೈತರ ಆರ್ಥಿಕ ಬಲವರ್ಧನೆಗೆ ಕ್ರಮ ಕೈಗೊಳ್ಳಲಾಗುವುದು.

407. ವಿವಿಧ ಕಾರ್ಯಕ್ರಮದಡಿ ಅರಣ್ಯ ಪ್ರದೇಶದಲ್ಲಿ 28,494 ಹೆಕ್ಟೇರ್‌ನಲ್ಲಿ 213 ಲಕ್ಷ ಸಸಿಗಳನ್ನು ಹಾಗೂ ಅರಣ್ಯೇತರ ಪ್ರದೇಶದಲ್ಲಿ 1,200 ಹೆಕ್ಟೇರ್‌ನಲ್ಲಿ 3.50 ಲಕ್ಷ ಸಸಿಗಳನ್ನು ಬೆಳೆಸಿ ನೆಡುತೋಪುಗಳನ್ನು ನಿರ್ವಹಣೆ ಮಾಡುವ ಮೂಲಕ 'ಹಸಿರು ಕವಚ'ವನ್ನು ಹೆಚ್ಚಿಸಲಾಗುವುದು.

408. ಹವಮಾನ ಬದಲಾವಣೆಯ ಪರಿಣಾಮವನ್ನು ನಿಯಂತ್ರಿಸಲು ಪರಿಸರದ ಮೇಲೆ ಕಾಳಜಿ ಹೊಂದಿರುವ ಕಾರ್ಪೊರೇಟ್ ಸಂಸ್ಥೆಗಳು ಹಾಗೂ ಸ್ವಯಂ ಸೇವಕರ ಸಹಯೋಗದೊಂದಿಗೆ 'ಕರ್ನಾಟಕ ಅರಣ್ಯ, ವನ್ಯಜೀವಿ ಮತ್ತು ಹವಾಮಾನ ಬದಲಾವಣೆ ಪ್ರತಿಷ್ಠಾನ' (KFWCCMF) ವನ್ನು ರಚಿಸಿ, ಸಿಎಸ್‌ಆರ್ (CSR) ಕೊಡುಗೆ ಮತ್ತು ದೇಣಿಗೆ ಮೂಲಕ ಪರಿಸರ ಅಭಿವೃದ್ಧಿಗೆ ಅನುಕೂಲ ಕಲ್ಪಿಸಲಾಗುವುದು.

409. ಹವಾಮಾನ ವೈಪರೀತ್ಯದ ಅಪಾಯಗಳನ್ನು ತಗ್ಗಿಸಲು ಮತ್ತು ಸುಸ್ಥಿರ ಅಭಿವೃದ್ಧಿಗೆ 'ಕರ್ನಾಟಕ ರಾಜ್ಯ ಸಮಗ್ರ ಹವಾಮಾನ ಬದಲಾವಣೆ ಕ್ರಿಯಾ ಯೋಜನೆ'ಯನ್ನು ಪ್ರಸಕ್ತ ಸಾಲಿನಲ್ಲಿ ಜಾರಿಗೊಳಿಸಲಾಗುವುದು.

410. ವನ್ಯ ಪ್ರಾಣಿಗಳ ದಾಳಿಯಿಂದ ಉಂಟಾಗುವ ಮಾನವ ಪ್ರಾಣ ಹಾನಿ ಪ್ರಕರಣಗಳಲ್ಲಿ ನೀಡಲಾಗುತ್ತಿರುವ ದಯಾತ್ಮಕ ಧನವನ್ನು 15 ಲಕ್ಷ ರೂ.ಗಳಿಂದ 20 ಲಕ್ಷ ರೂ.ಗಳಿಗೆ ಹೆಚ್ಚಿಸಲಾಗುವುದು.

411. ಕೃಷಿ ಭೂಮಿಯಲ್ಲಿ ಸಾಗುವಾನಿ ಮತ್ತು ಇತರೆ ಬೆಲೆ ಬಾಳುವ ಮರಗಳನ್ನು ಬೆಳೆಸಲು ಉತ್ತೇಜನ ನೀಡಲು ಪ್ರಸ್ತುತ ಇರುವ ಸಾಗಾಣಿಕೆ ನಿಯಮಾವಳಿಗಳನ್ನು ಸರಳೀಕರಣಗೊಳಿಸಲಾಗುವುದು.

412. ರಾಜ್ಯದಲ್ಲಿ ಕಾಡಾನೆ ಹಾಗೂ ಚಿರತೆ ಹಾವಳಿಯನ್ನು ನಿಯಂತ್ರಿಸಲು ಈಗಾಗಲೇ ಎಂಟು ಆನೆ ಕಾರ್ಯಪಡೆ ಹಾಗೂ ಎರಡು ಚಿರತೆ ಕಾರ್ಯಪಡೆಗಳನ್ನು ರಚಿಸಿದ್ದು, ಪ್ರಸಕ್ತ ಸಾಲಿನಲ್ಲಿ 17 ಕೋಟಿ ರೂ. ಒದಗಿಸುವ ಮೂಲಕ ಕಾರ್ಯ ಯೋಜನೆಯನ್ನು ಮುಂದುವರೆಸಲಾಗುವುದು.

413. ಮಾನವ–ಆನೆ ಸಂಘರ್ಷ ತಡೆಗಟ್ಟಲು 2015 ರಿಂದ ಇಲ್ಲಿಯವರೆಗೆ 392 ಕಿ.ಮೀ. ರೈಲ್ವೆ ಬ್ಯಾರಿಕೇಡ್‌ಗಳನ್ನು ನಿರ್ಮಿಸಲಾಗಿದೆ. ಇನ್ನೂ

150 ಕಿ.ಮೀ. ರೈಲ್ವೆ ಬ್ಯಾರಿಕೇಡ್ ಕಾಮಗಾರಿಗಳಿಗಾಗಿ 2025–26ನೇ ಸಾಲಿನಲ್ಲಿ 60 ಕೋಟಿ ರೂ. ಮೀಸಲಿರಿಸಲಾಗಿದೆ.

414. ಕರ್ನಾಟಕದಲ್ಲಿ ಮಾನವ–ಆನೆ ಸಂಘರ್ಷದ ಸಮಸ್ಯೆಯನ್ನು ಪರಿಹರಿಸಲು ಭದ್ರಾ ಹುಲಿ ಸಂರಕ್ಷಿತ ಪ್ರದೇಶದಲ್ಲಿ 20 ಚದರ ಕಿ.ಮೀ ವ್ಯಾಪ್ತಿಯಲ್ಲಿ 'ಕಾಡಾನೆ Soft Release ಕೇಂದ್ರ' ವನ್ನು ಸ್ಥಾಪಿಸಲು 20 ಕೋಟಿ ರೂ. ನೀಡಲಾಗುವುದು.

415. ಬೆಂಗಳೂರು ನಗರದಲ್ಲಿರುವ 3,000 ಕೊಳಚೆ ನೀರು ಸಂಸ್ಕರಣಾ ಘಟಕಗಳ (STP) ಕಾರ್ಯಾಚರಣೆಯ ಮೇಲುಸ್ತುವಾರಿಯನ್ನು ತಂತ್ರಾಂಶದ ಮೂಲಕ ನಿರ್ವಹಿಸಿ ಸಾರ್ವಜನಿಕರಿಗೆ ದೈನಂದಿನ ಮಾಹಿತಿ ಲಭ್ಯಪಡಿಸಲಾಗುವುದು.

416. ಕೈಗಾರಿಕೆಗಳ ನಿಯಂತ್ರಕ ಅನುಪಾಲನಾ ಹೊರೆಯನ್ನು ಸರಳೀಕರಣಗೊಳಿಸಲು, ಸ್ವಯಂ ಪ್ರಮಾಣೀಕರಣ ಮೂಲಕ ಸ್ವಯಂಚಾಲಿತ ಸಮ್ಮತಿ ನವೀಕರಣಗಳನ್ನು ನೀಡಲಾಗುವುದು.

417. ಅರಣ್ಯದಲ್ಲಿ ಬೆಳೆದಿರುವ ಲಂಟಾನ ಮತ್ತು ಯುಫಟೋರಿಯಂ ಕಳೆಗಳನ್ನು ನರೇಗಾ ಯೋಜನೆಯ ಸಹಯೋಗದೊಂದಿಗೆ ಸ್ವಚ್ಛಗೊಳಿಸಿ ವನ್ಯ ಪ್ರಾಣಿಗಳಿಗೆ ಪೂರಕವಾದ ಹುಲ್ಲು ಬೆಳೆಯಲು ಕ್ರಮಕೈಗೊಳ್ಳಲಾಗುವುದು.

**ಕಂದಾಯ**

418. ಪಹಣಿಗಳಿಗೆ ಆಧಾರ್ ಜೋಡಣೆ ಸಂದರ್ಭದಲ್ಲಿ ಪೌತಿ ಎಂದು ಗುರುತಿಸಲಾದ ಜಮೀನುಗಳ ಪಹಣಿಗಳನ್ನು ವಾರಸುದಾರರಿಗೆ ಖಾತೆ ಮಾಡಲು ಪ್ರಸಕ್ತ ಸಾಲಿನಲ್ಲಿ ಇ-ಪೌತಿ ಆಂದೋಲನವನ್ನು ಜಾರಿಗೊಳಿಸಲು ಉದ್ದೇಶಿಸಲಾಗಿದೆ.

419. ಗ್ರಾಮ ಹಾಗೂ ತಾಲ್ಲೂಕು ಮಟ್ಟದ ಭೂದಾಖಲೆಗಳನ್ನು ತಾಳೆ ಮಾಡಿ ಕ್ರಮಬದ್ಧಗೊಳಿಸುವ ವಿಧಾನವಾದ ಜಮಾಬಂದಿ ಪ್ರಕ್ರಿಯೆಯನ್ನು ವೇಗವಾಗಿ ನಿರ್ವಹಿಸಲು ಇ-ಜಮಾಬಂದಿ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗುವುದು.

420. ಪ್ರಸ್ತುತ ಚಾಲ್ತಿಯಲ್ಲಿರುವ ಕರ್ನಾಟಕ ಭೂ-ಕಂದಾಯ ಕಾಯ್ದೆಯು ತುಂಬ ಹಳೆಯದಾಗಿದ್ದು, ಕ್ಷೇತ್ರ ಮಟ್ಟದಲ್ಲಿ ಅನುಷ್ಠಾನಗೊಳಿಸಲು ಹಾಗೂ ಪರಿಣಾಮಕಾರಿಯಾಗಿ ಜಾರಿಗೊಳಿಸಲು ಹೆಚ್ಚಿನ ಸ್ಪಷ್ಟತೆ ನೀಡುವ ಹಿನ್ನೆಲೆಯಲ್ಲಿ ಸಮಗ್ರವಾಗಿ ಅಧ್ಯಯನ ನಡೆಸಿ, ಹೊಸ ಭೂ-ಕಂದಾಯ ಕಾಯ್ದೆ ತರಲಾಗುವುದು.

421. ಬೆಳಗಾವಿ ನಗರದಲ್ಲಿ 55 ಕೋಟಿ ರೂ. ವೆಚ್ಚದಲ್ಲಿ ಜಿಲ್ಲಾಧಿಕಾರಿಗಳ ಕಛೇರಿ ಕಟ್ಟಡವನ್ನು ನಿರ್ಮಾಣ ಮಾಡಲಾಗುವುದು.

422. ರೈತರು ಮತ್ತು ಸಾರ್ವಜನಿಕರ ಅನುಕೂಲಕ್ಕಾಗಿ ಸಮರ್ಪಕ ಸೌಲಭ್ಯಗಳನ್ನೊಳಗೊಂಡ ಹೊಸ 100 ನಾಡ ಕಛೇರಿಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ.

423. ರಾಜ್ಯದಲ್ಲಿ ಹೊಸದಾಗಿ ರಚನೆಯಾದ 63 ತಾಲ್ಲೂಕುಗಳ ಪೈಕಿ ಒಂಭತ್ತು ತಾಲ್ಲೂಕುಗಳಲ್ಲಿ ಪ್ರಜಾಸೌಧ ನಿರ್ಮಾಣವಾಗಿದ್ದು, ಐದು ತಾಲ್ಲೂಕುಗಳಲ್ಲಿ ಪ್ರಗತಿಯಲ್ಲಿವೆ. 2024–25ನೇ ಸಾಲಿನಲ್ಲಿ 28 ತಾಲ್ಲೂಕುಗಳಲ್ಲಿ ಪ್ರಜಾಸೌಧಕ್ಕೆ ಅನುಮೋದನೆ ನೀಡಲಾಗಿದೆ. 2025–26ನೇ ಸಾಲಿನಲ್ಲಿ 21 ತಾಲ್ಲೂಕುಗಳಲ್ಲಿ ಪ್ರಜಾಸೌಧ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗುವುದು. (ವಿವರಗಳನ್ನು ಅನುಬಂಧ–9 ರಲ್ಲಿ ಲಗತ್ತಿಸಿದೆ)

424. ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರಕ್ಕೆ ಅಭಿವೃದ್ಧಿ ಕಾರ್ಯಗಳಿಗಾಗಿ 2025–26ನೇ ಸಾಲಿನಲ್ಲಿ 34 ಕೋಟಿ ರೂ. ಒದಗಿಸಲಾಗುವುದು.

425. ಬಸವಕಲ್ಯಾಣ ಅಭಿವೃದ್ಧಿ ಮಂಡಳಿ ವತಿಯಿಂದ ನಿರ್ಮಿಸಲಾಗುತ್ತಿರುವ 'ಅನುಭವ ಮಂಟಪ' ಕಾಮಗಾರಿಯು ಪ್ರಗತಿಯಲ್ಲಿದ್ದು, ಶೀಘ್ರವಾಗಿ ಪೂರ್ಣಗೊಳಿಸಲಾಗುವುದು.

426. ಭೂಮಾಪನ ಇಲಾಖೆಯು ಕೈಗೊಳ್ಳುತ್ತಿರುವ ದೈನಂದಿನ ಸಾಂಪ್ರದಾಯಿಕ ಸರ್ವೆ ಕಾರ್ಯಗಳನ್ನು ಸಂಪೂರ್ಣವಾಗಿ

ಆಧುನಿಕ ತಂತ್ರಜ್ಞಾನ ಬಳಸಿ ಡಿಜಿಟಲೀಕರಿಸಿ ಸಾರ್ವಜನಿಕರಿಗೆ ತ್ವರಿತ ಹಾಗೂ ಪಾರದರ್ಶಕ ಸೇವೆಯನ್ನು ಒದಗಿಸಲಾಗುವುದು.

427. ಕೇಂದ್ರ ಸರ್ಕಾರದ ಸಹಯೋಗದೊಂದಿಗೆ 'ನಕ್ಷಾ' ಯೋಜನೆಯಡಿಯಲ್ಲಿ ಪ್ರಾರಂಭಿಕವಾಗಿ ರಾಜ್ಯದ 10 ನಗರಸಭೆ / ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಆಸ್ತಿಗಳನ್ನು ಡ್ರೋನ್ (Drone) ಬಳಸಿ ಸರ್ವೆ ಮಾಡುವ ಮೂಲಕ ಡಿಜಿಟಲೀಕರಿಸಲಾಗುವುದು.

428. ಸಾಮಾಜಿಕ ಭದ್ರತಾ ಪಿಂಚಣಿ ಮಂಜೂರಾತಿ ಸೇವೆಯನ್ನು ನೀಡಲು ಸಕಾಲ ಕಾಯ್ದೆಯಡಿ ಪ್ರಸ್ತುತ ಇರುವ ಕಾಲಮಿತಿಯನ್ನು 45 ದಿನಗಳಿಂದ 21 ದಿನಗಳಿಗೆ ಇಳಿಸಲಾಗುವುದು.

429. ಕರ್ನಾಟಕ ಜಲ ಭದ್ರತೆ ಮತ್ತು ವಿಪತ್ತು ತಡೆಯುವಿಕೆ ಕಾರ್ಯಕ್ರಮದಡಿ, 3,500 ಕೋಟಿ ರೂ. ವಿಶ್ವಬ್ಯಾಂಕ್ ಸಾಲ ಹಾಗೂ ರಾಜ್ಯ ಸರ್ಕಾರದ 1,500 ಕೋಟಿ ರೂ. ಸೇರಿ ಒಟ್ಟು 5,000 ಕೋಟಿ ರೂ. ವೆಚ್ಚದಲ್ಲಿ 2025–2031ರ ಅವಧಿಯಲ್ಲಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುವುದು:

i) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ 2,000 ಕೋಟಿ ರೂ. ವೆಚ್ಚದಲ್ಲಿ ಪ್ರವಾಹ ನಿರ್ವಹಣಾ ವ್ಯವಸ್ಥೆಯನ್ನು ಕೈಗೊಳ್ಳಲಾಗುವುದು.

ii) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವತಿಯಿಂದ 1,070 ಕೋಟಿ ರೂ. ವೆಚ್ಚದಲ್ಲಿ ತ್ಯಾಜ್ಯ ನೀರು ಸಂಸ್ಕರಣೆ ಹಾಗೂ ಒಳಚರಂಡಿ ಪಂಪಿಂಗ್ ವ್ಯವಸ್ಥೆಯನ್ನು ಕೈಗೊಳ್ಳಲಾಗುವುದು.

iii) ವಿಪತ್ತು ನಿರ್ವಹಣೆಯ ಸಾಂಸ್ಥಿಕ ಸುಧಾರಣೆ ಕ್ರಮಗಳಿಗೆ 1,680 ಕೋಟಿ ರೂ. ಒದಗಿಸಲಾಗುವುದು. ಇದರಡಿಯಲ್ಲಿ ಶಾಸನ ರಚನೆ, ಅಂತಾರಾಷ್ಟ್ರೀಯ ಉತ್ಕೃಷ್ಟತಾ ಕೇಂದ್ರ, ವಿಪತ್ತು ಅನುಭವ ಕಲಿಕಾ ಕೇಂದ್ರ ಸ್ಥಾಪನೆ, ವಿಪತ್ತು ಮುನ್ನೆಚ್ಚರಿಕೆ ನೀಡಲು Karnataka Multi Risk Hazard Information System, 1950 ಟೆಲಿಮೆಟ್ರಿಕ್ ಮಳೆ ಮಾಪನ ಕೇಂದ್ರಗಳ ಸ್ಥಾಪನೆ ಹಾಗೂ ಭೂ ಕುಸಿತ ಉಪಶಮನ ಕ್ರಮಗಳನ್ನು ಅನುಷ್ಠಾನಗೊಳಿಸಲಾಗುವುದು.

iv) ವಿಪತ್ತು ಉಪಶಮನ ಕಾರ್ಯಕ್ರಮದಡಿ ಸಣ್ಣ ನೀರಾವರಿ ಇಲಾಖೆಯು 250 ಕೋಟಿ ರೂ. ವೆಚ್ಚದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ 41 ಕೆರೆ ತುಂಬಿಸುವ ಕಾಮಗಾರಿಯನ್ನು ಅನುಷ್ಠಾನಗೊಳಿಸಲಿದೆ.

430. ರಾಜ್ಯ ವಿಪತ್ತು ಉಪಶಮನ ನಿಧಿ ಹಾಗೂ ರಾಷ್ಟ್ರೀಯ ವಿಪತ್ತು ಉಪಶಮನ ನಿಧಿ ಅನುದಾನದಡಿ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುವುದು;

i) ಕರಾವಳಿ ಹಾಗೂ ಮಲೆನಾಡು ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಶಿವಮೊಗ್ಗ, ಹಾಸನ, ಕೊಡಗು ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ 200 ಕೋಟಿ ರೂ. ವೆಚ್ಚದಲ್ಲಿ ಭೂ ಕುಸಿತ ತಡೆಯುವುದು.

ii) ಬೆಂಗಳೂರು ನಗರದಲ್ಲಿ 239 ಕೋಟಿ ರೂ. ವೆಚ್ಚದಲ್ಲಿ ಮಳೆ ನೀರು ಚರಂಡಿಗಳ ಪುನರ್ ನಿರ್ಮಾಣ ಮತ್ತು ಕೆರೆಗಳ ಪುನಃಶ್ಚೇತನಗೊಳಿಸುವುದು.

iii) ಬರ ಉಪಶಮನಕ್ಕಾಗಿ 100 ಕೋಟಿ ರೂ. ವೆಚ್ಚದಲ್ಲಿ ಕೃಷಿ ಹೊಂಡಗಳನ್ನು ನಿರ್ಮಿಸುವುದು.

iv) ಕರಾವಳಿ ಜಿಲ್ಲೆಗಳಲ್ಲಿ 200 ಕೋಟಿ ರೂ. ವೆಚ್ಚದಲ್ಲಿ ಸಮುದ್ರ ಕೊರೆತ ತಗ್ಗಿಸುವುದು.

v) ನವಲಗುಂದ ತಾಲ್ಲೂಕಿನ ಬೆಣ್ಣೆಹಳ್ಳದಲ್ಲಿ ಪ್ರವಾಹ ನಿಯಂತ್ರಿಸಲು ಉಪಶಮನ ಕ್ರಮಗಳನ್ನು 200 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲು ಅನುಮೋದನೆ ನೀಡಿರುವ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವುದು.

vi) ರೋಣ ತಾಲ್ಲೂಕಿನ ಕೋಟುಮಚಗಿ ಗ್ರಾಮದಿಂದ ಕೊಪ್ಪಳ ಜಿಲ್ಲೆಯ ವೀರಾಪುರ ಗ್ರಾಮದವರೆಗೆ ಹಿರೇಹಳ್ಳದಲ್ಲಿ ಹೂಳೆತ್ತುವ ಮೂಲಕ 60 ಕೋಟಿ ರೂ. ವೆಚ್ಚದಲ್ಲಿ

ಪ್ರವಾಹ ನಿಯಂತ್ರಣ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುವುದು.

431. ಕಾವೇರಿ-2.0 ತಂತ್ರಾಂಶದ ಮೂಲಕ ಸರ್ಕಾರದ ಇ-ಸ್ಟ್ಯಾಂಪಿಂಗ್ ವ್ಯವಸ್ಥೆಯನ್ನು ಜಾರಿಗೆ ತರಲಾಗುವುದು. ಇದರಿಂದ ನಾಗರಿಕರಿಗೆ ಸುಲಭ ಮತ್ತು ಸರಳವಾದ ರೀತಿಯಲ್ಲಿ ದಸ್ತಾವೇಜುಗಳನ್ನು ತಯಾರಿಸಲು ಹಾಗೂ ಮುದ್ರಾಂಕ ಶುಲ್ಕವು ನೇರವಾಗಿ ಯಾವುದೇ ಮಧ್ಯವರ್ತಿಗಳಿಲ್ಲದೆ ಸರ್ಕಾರಕ್ಕೆ ಜಮೆ ಮಾಡಲು ನೆರವಾಗಲಿದೆ.

432. ನೋಂದಣಿ ಪ್ರಕ್ರಿಯೆಯನ್ನು ಸುಗಮಗೊಳಿಸಲು ಕಾವೇರಿ-2.0 ತಂತ್ರಾಂಶವನ್ನು ನೋಂದಣಿ ಮತ್ತು ಮುದ್ರಾಂಕ ಇಲಾಖೆಯಡಿಯಲ್ಲಿಯೇ ನಿರ್ವಹಿಸಲು ಕ್ರಮವಹಿಸಲಾಗುವುದು.

433. ರಾಜ್ಯದ ಒಟ್ಟಾರೆ ನೋಂದಣಿಯಲ್ಲಿ ಶೇ.75 ರಷ್ಟು ನೋಂದಣಿಗಳು ನಡೆಯುವ ಬೆಂಗಳೂರಿನ 36 ನೋಂದಣಿ ಕಛೇರಿಗಳನ್ನು ಆಧುನೀಕರಣಗೊಳಿಸಿ, ಮೂಲಭೂತ ಸೌಲಭ್ಯ ಹಾಗೂ ಉತ್ಕೃಷ್ಟ ಸೇವೆಯನ್ನು 76 ಕೋಟಿ ರೂ. ವೆಚ್ಚದಲ್ಲಿ ಕಲ್ಪಿಸಲಾಗುವುದು.

434. ರಾಜ್ಯದಲ್ಲಿ ಒತ್ತುವರಿಯಾಗಿರುವ 328 ದೇವಾಲಯಗಳ ಆಸ್ತಿಗಳನ್ನು ಸಂರಕ್ಷಿಸಲು ಒತ್ತುವರಿಯನ್ನು ತೆರವುಗೊಳಿಸಲಾಗುವುದು. 'ಭೂ-ವರಾಹ' ಯೋಜನೆಯಡಿಯಲ್ಲಿ ಈ ದೇವಾಲಯಗಳ ಸ್ಥಿರಾಸ್ತಿಗಳನ್ನು ದಾಖಲೀಕರಣಗೊಳಿಸಲಾಗುವುದು.

435. ರಾಜ್ಯದಲ್ಲಿ ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಯಲ್ಲಿರುವ 25,551 ಧಾರ್ಮಿಕ ಸಂಸ್ಥೆಗಳ/ ದೇವಾಲಯಗಳಲ್ಲಿರುವ ಅರ್ಚಕರಿಗೆ ಪ್ರಸ್ತುತ ಪಾವತಿಸುತ್ತಿರುವ ವಾರ್ಷಿಕ ತಸ್ತೀಕ್ ಮೊತ್ತವನ್ನು 60,000 ರೂ.ಗಳಿಂದ 72,000 ರೂ.ಗಳಿಗೆ ಹೆಚ್ಚಿಸಲಾಗುವುದು.

436. ಕರ್ನಾಟಕ ಧಾರ್ಮಿಕ ದತ್ತಿ ಇಲಾಖೆಯ ಅಧಿಸೂಚಿತ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ಅಧಿಕಾರಿ/ನೌಕರರ ವೇತನ ಮತ್ತಿತರ ಭತ್ಯೆಗಳನ್ನು ಇದುವರೆವಿಗೂ ದೇವಾಲಯಗಳ ನಿಧಿಯಿಂದ ಭರಿಸಲಾಗುತ್ತಿತ್ತು. 2025–26 ನೇ ಸಾಲಿನಿಂದ ಇವರುಗಳ ವೇತನವನ್ನು ಸರ್ಕಾರದ ವತಿಯಿಂದ ಪಾವತಿಸಲು ಕ್ರಮವಹಿಸಲಾಗುವುದು.

437. ರಾಜ್ಯದ ಪ್ರಮುಖ 400 ದೇವಾಲಯ ಹಾಗೂ ಹೊರ ರಾಜ್ಯಗಳಲ್ಲಿರುವ ರಾಜ್ಯ ಛತ್ರಗಳಲ್ಲಿ ಲಭ್ಯವಿರುವ ಅಂದಾಜು 3,500 ಕೊಠಡಿಗಳಲ್ಲಿ ಯಾತ್ರಾರ್ಥಿಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಮತ್ತು ಕೊಠಡಿಗಳ ಕಾಯ್ದಿರಿಸುವಿಕೆ ಹಾಗೂ ನಿರ್ವಹಣೆ ಮಾಡಲು 'ಕರ್ನಾಟಕ ದೇವಾಲಯಗಳ ವಸತಿ ಕೋಶ'ವನ್ನು ಸ್ಥಾಪಿಸಲಾಗುವುದು.

438. ಸೊರಬ ತಾಲ್ಲೂಕಿನ ಚಂದ್ರಗುತ್ತಿ ಗ್ರಾಮವನ್ನು ಧಾರ್ಮಿಕ ಹಾಗೂ ಪ್ರವಾಸೋದ್ಯಮ ತಾಣವಾಗಿ ಅಭಿವೃದ್ಧಿಪಡಿಸಲು ಚಂದ್ರಗುತ್ತಿ ಅಭಿವೃದ್ಧಿ ಪ್ರಾಧಿಕಾರವನ್ನು ರಚನೆ ಮಾಡಲಾಗುವುದು.

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ**

439. ಸಿನಿಮಾ ಕ್ಷೇತ್ರವನ್ನು ಉದ್ಯಮವೆಂದು ಪರಿಗಣಿಸಿ, ಕೈಗಾರಿಕಾ ನೀತಿಯಡಿ ಒದಗಿಸಲಾಗುವ ಸೌಲಭ್ಯಗಳನ್ನು ನಮ್ಮ ಸರ್ಕಾರವು ಸಿನಿಮಾ ಕ್ಷೇತ್ರಕ್ಕೆ ಒದಗಿಸಲಿದೆ.

440. ಬೆಂಗಳೂರಿನ ನಂದಿನಿ ಲೇಔಟ್‌ನಲ್ಲಿ ಚಲನಚಿತ್ರ ಅಕಾಡೆಮಿಯು ಹೊಂದಿರುವ 2.5 ಎಕರೆ ನಿವೇಶನದಲ್ಲಿ ಬಹುಪರದೆಗಳಿರುವ ಚಿತ್ರಮಂದಿರ ಸಮುಚ್ಚಯವನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸಲಾಗುವುದು.

441. ಸಾಮಾಜಿಕ, ಚಾರಿತ್ರಿಕ ಹಾಗೂ ಸಾಂಸ್ಕೃತಿಕ ಮೌಲ್ಯಗಳನ್ನು ಬಿಂಬಿಸುವ ಕನ್ನಡ ಚಲನಚಿತ್ರಗಳನ್ನು ಡಿಜಿಟಲ್ ಹಾಗೂ ನಾನ್–ಡಿಜಿಟಲ್ ಮಾದರಿಯಲ್ಲಿ ಸಂರಕ್ಷಿಸಲು 3 ಕೋಟಿ ರೂ. ವೆಚ್ಚದಲ್ಲಿ ಚಲನಚಿತ್ರ ಭಂಡಾರವನ್ನು ಸ್ಥಾಪಿಸಲಾಗುವುದು.

442. ಸಂಕಷ್ಟದಲ್ಲಿರುವ ಪತ್ರಕರ್ತರಿಗೆ ಪ್ರಸ್ತುತ ನೀಡುತ್ತಿರುವ 12,000 ರೂ. ಮಾಸಾಶನವನ್ನು 15,000 ರೂ.ಗಳಿಗೆ ಹಾಗೂ ಕುಟುಂಬ

ಮಾಸಾಶನವನ್ನು 6,000 ರೂ.ಗಳಿಂದ 7,500 ರೂ.ಗಳಿಗೆ ಹೆಚ್ಚಿಸಲಾಗುವುದು.

443. ಕನ್ನಡ ಚಲನಚಿತ್ರಗಳ ಪ್ರೋತ್ಸಾಹಕ್ಕಾಗಿ OTT ವೇದಿಕೆಯನ್ನು ಸೃಜಿಸಲು ಕ್ರಮಕೈಗೊಳ್ಳಲಾಗುವುದು.

444. ಮಾಧ್ಯಮ ಮಾನ್ಯತೆ ಹೊಂದಿರುವ ರಾಜ್ಯದ ಒಟ್ಟು 2,500 ಪತ್ರಕರ್ತರು ಹಾಗೂ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ 5 ಲಕ್ಷ ರೂ.ವರೆಗೆ ನಗದುರಹಿತ ಚಿಕಿತ್ಸೆಗಾಗಿ 'ಮುಖ್ಯಮಂತ್ರಿಗಳ ಮಾಧ್ಯಮ ಸಂಜೀವಿನಿ' ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು.

445. ಅಂತಾರಾಷ್ಟ್ರೀಯ ದರ್ಜೆಯ ಚಿತ್ರನಗರಿಯನ್ನು ಪಿಪಿಪಿ ಮಾದರಿಯಲ್ಲಿ ಅಂದಾಜು 500 ಕೋಟಿ ರೂ. ವೆಚ್ಚದಲ್ಲಿ ಮೈಸೂರಿನಲ್ಲಿ ಸ್ಥಾಪಿಸಲು 150 ಎಕರೆ ಜಮೀನನ್ನು ಕಾಯ್ದಿರಿಸಲಾಗಿದೆ. ಮುಂದಿನ ವರ್ಷಗಳಲ್ಲಿ ಚಿತ್ರನಗರಿಯನ್ನು ಸ್ಥಾಪಿಸಲು ಸರ್ಕಾರ ಬದ್ಧವಾಗಿದೆ.

446. ರಾಜ್ಯದ ಮಲ್ಟಿಪ್ಲೆಕ್ಸ್‌ಗಳೂ ಸೇರಿದಂತೆ ಎಲ್ಲಾ ಚಿತ್ರಮಂದಿರಗಳಲ್ಲಿ ಪ್ರದರ್ಶಿಸಲಾಗುವ ಪ್ರತಿ ಪ್ರದರ್ಶನಕ್ಕೆ ಪ್ರವೇಶ ದರವನ್ನು 200 ರೂ.ಗಳಿಗೆ ಸೀಮಿತಗೊಳಿಸಲಾಗುವುದು.

**ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ**

447. ನಮ್ಮ ಸರ್ಕಾರವು ಆಯೋಜಿಸಿದ ರಾಜ್ಯಮಟ್ಟದ ಎರಡು ಜನಸ್ಪಂದನ ಕಾರ್ಯಕ್ರಮಗಳಲ್ಲಿ ಸ್ವೀಕರಿಸಿದ 2,43,676 ಅಹವಾಲುಗಳಲ್ಲಿ ಶೇ.97 ರಷ್ಟನ್ನು ಪರಿಹರಿಸಲಾಗಿದೆ. ಸಾರ್ವಜನಿಕರ ಕುಂದು ಕೊರತೆಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು AI ಚಾಲಿತ ತಂತ್ರಜ್ಞಾನಗಳಿಂದ ನವೀಕರಿಸಿ iPGRS-2.0 ಮೂಲಕ ಕರ್ನಾಟಕವನ್ನು ನಾಗರಿಕ ಕೇಂದ್ರಿತ ಡಿಜಿಟಲ್ ಆಡಳಿತದಲ್ಲಿ ಮುಂಚೂಣಿಯಲ್ಲಿ ಇರಿಸಲಾಗುವುದು.

448. ನಿವೃತ್ತ ಅಧಿಕಾರಿ ನೌಕರರ ವಿಶ್ರಾಂತಿ ವೇತನದ ಮಂಜೂರಾತಿ ಮತ್ತು ಬಟವಾಡೆ ವ್ಯವಸ್ಥೆಯನ್ನು ಖಜಾನೆ–2 ರ ಅಧೀನದಲ್ಲಿ ಸರಳೀಕರಿಸಲಾಗುವುದು.

449. 7ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನಂತೆ ರಾಜ್ಯ ಸರ್ಕಾರಿ ನೌಕರರ ವೇತನ, ಪಿಂಚಣಿ ಮತ್ತು ಕೆಲವು ನಿರ್ದಿಷ್ಟ ಭತ್ಯೆಗಳನ್ನು ಪರಿಷ್ಕರಿಸಿ ದಿನಾಂಕ: 01.08.2024 ರಿಂದ ಜಾರಿಗೆ ಬರುವಂತೆ ಅನುಷ್ಠಾನಗೊಳಿಸಲಾಗಿದೆ. ಇದಕ್ಕಾಗಿ ರಾಜ್ಯವು ವಾರ್ಷಿಕ 19,401 ಕೋಟಿ ರೂ. ಹೆಚ್ಚುವರಿ ಮೊತ್ತವನ್ನು ಭರಿಸುತ್ತಿದೆ.

450. ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರದ (KSRSAC) ಕರ್ನಾಟಕ – ಜಿಐಎಸ್ (ಕೆ–ಜಿಐಎಸ್)

ಪೋರ್ಟಲ್‌ನಲ್ಲಿ ಇಲಾಖೆಗಳ ಆಸ್ತಿಗಳ ಮಾಹಿತಿ ಲಭ್ಯವಿದ್ದು, 29 ಸಾವಿರಕ್ಕೂ ಹೆಚ್ಚು ಕಂದಾಯ ಗ್ರಾಮಗಳ ಹಿಸ್ಸಾ ನಕ್ಷೆಗಳನ್ನು ಡಿಜಿಟಲೀಕರಿಸಲಾಗಿದೆ. ಈ ಪೋರ್ಟಲ್‌ನ್ನು ಆಧುನಿಕ ತಂತ್ರಜ್ಞಾನಗಳಾದ AI/ML ಮತ್ತು ಇತರ ಪರಿಕರಗಳನ್ನು ಬಳಸಿ 2025–26 ನೇ ಸಾಲಿನಿಂದ ಹಂತ ಹಂತವಾಗಿ 150 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಉನ್ನತೀಕರಿಸಲಾಗುವುದು.

451. ಕೃತಕ ಬುದ್ಧಿಮತ್ತೆ (AI) ಹಾಗೂ ಭೌಗೋಳಿಕ ಮಾಹಿತಿ ವ್ಯವಸ್ಥೆಯಂತಹ (GIS) ಅತ್ಯಾಧುನಿಕ ತಂತ್ರಜ್ಞಾನಗಳನ್ನು ಬಳಸಿಕೊಂಡು ಎಲ್ಲಾ ಇಲಾಖೆಗಳಲ್ಲಿ ಸುಧಾರಿತ ಕರ್ನಾಟಕ ಹಾಜರಾತಿ ನಿರ್ವಹಣಾ ವ್ಯವಸ್ಥೆಯನ್ನು ಪರಿಚಯಿಸಲಾಗುವುದು.

452. ಕರ್ನಾಟಕ ರಾಜ್ಯ ದತ್ತಾಂಶ ಕೇಂದ್ರದಲ್ಲಿನ (SDC) ಭದ್ರತಾ ಕಾರ್ಯಾಚರಣೆ ಕೇಂದ್ರವನ್ನು ನವೀಕರಿಸಲು ಮತ್ತು ಸೈಬರ್ ಭದ್ರತೆಯನ್ನು ಮತ್ತಷ್ಟು ಬಲಪಡಿಸಲು ಆದ್ಯತೆ ನೀಡಲಾಗುವುದು.

453. ಆಡಳಿತದಲ್ಲಿ ಪಾರದರ್ಶಕತೆ, ಹೊಣೆಗಾರಿಕೆ ಮತ್ತು ದಕ್ಷತೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರವು ಹಲವು ಯೋಜನೆಗಳನ್ನು ರೂಪಿಸಿದೆ. ಇದರಲ್ಲಿ ಪ್ರಮುಖವಾಗಿ –

i) DBT ವೇದಿಕೆಯ ಮೂಲಕ ಇಲ್ಲಿಯವರೆಗೆ ಸುಮಾರು 50,000 ಕೋಟಿ ರೂ. ವಿತರಿಸಲಾಗಿದೆ. ಮುಂದಿನ

ವರ್ಷದಲ್ಲಿ ಸರ್ಕಾರದ ಎಲ್ಲಾ ನಗದು ಮತ್ತು ನಗದುರಹಿತ ಪ್ರಯೋಜನದ ಯೋಜನೆಗಳನ್ನು DBT ವೇದಿಕೆಗೆ ತರಲು ಸೂಕ್ತ ಕ್ರಮವಹಿಸಲಾಗುವುದು.

ii) KSWAN ಯೋಜನೆಯನ್ನು ರಾಜ್ಯದಾದ್ಯಂತ ಹೆಚ್ಚುವರಿ 10,000 ಕಛೇರಿಗಳಿಗೆ ವಿಸ್ತರಿಸಲು ಉದ್ದೇಶಿಸಲಾಗಿದೆ.

iii) ಕೃತಕ ಬುದ್ಧಿಮತ್ತೆ (AI) ಚಾಲಿತ ಆಡಳಿತವನ್ನು ಬಲಪಡಿಸಲು ಕರ್ನಾಟಕ AI ಕೋಶವನ್ನು ಸ್ಥಾಪಿಸಲಾಗಿದೆ. ಕಂಪ್ಯೂಟರ್ ವಿಷನ್, NLP, LLM ಮತ್ತು ಇತರ AI ತಂತ್ರಜ್ಞಾನಗಳನ್ನು ಬಳಸಿಕೊಂಡು, AI–ಆಧಾರಿತ ಆಡಳಿತ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲಾಗುತ್ತಿದೆ.

454. ರಾಜ್ಯದ ಬಹುತೇಕ ಎಲ್ಲಾ ಕಛೇರಿಗಳಲ್ಲಿ ಇ–ಆಫೀಸ್ ತಂತ್ರಾಂಶವನ್ನು ಅನುಷ್ಠಾನಗೊಳಿಸಲಾಗಿದೆ. ಈ ವ್ಯವಸ್ಥೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರವು ತನ್ನದೇ ಆದ ಇ–ಆಫೀಸ್ ತಂತ್ರಾಂಶವನ್ನು ಅಭಿವೃದ್ಧಿಪಡಿಸಲು ಯೋಜಿಸಲಾಗುವುದು.

**ಒಳಾಡಳಿತ**

455. ರಾಜ್ಯದ ಆರ್ಥಿಕ ಪ್ರಗತಿಯಲ್ಲಿ ಕಾನೂನು ಮತ್ತು ಸುವ್ಯವಸ್ಥೆಯು ಅತ್ಯಂತ ಮಹತ್ವದ ಪಾತ್ರವನ್ನು ವಹಿಸುತ್ತದೆ. ಇದಕ್ಕಾಗಿ ಈ ಕೆಳಕಂಡ ಉಪಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.

i) ಸಮಾಜದಲ್ಲಿ ಗಲಭೆ ಉಂಟು ಮಾಡುವವರ ವಿರುದ್ಧ ಶೂನ್ಯ ಸಹಿಷ್ಣುತೆ ನೀತಿಯನ್ನು ಅಳವಡಿಸಿಕೊಳ್ಳಲಾಗಿದ್ದು, ಕಠಿಣ ಮತ್ತು ನಿರ್ದಾಕ್ಷಿಣ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ii) ಬೆಂಗಳೂರು ಸೇಫ್ ಸಿಟಿ ಯೋಜನೆಯನ್ನು 667 ಕೋಟಿ ರೂ. ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗಿದ್ದು, ಯೋಜನೆಯ ಭಾಗವಾಗಿ ಬೆಂಗಳೂರು ನಗರದಾದ್ಯಂತ ಒಟ್ಟು 7,500 ಕ್ಯಾಮರಾಗಳನ್ನು ಅಳವಡಿಸಿದ್ದು, 10 ಡ್ರೋನ್ ಗಳನ್ನು (Drone) ಮತ್ತು 560 ಬಾಡಿ ವೋರ್ನ್ (Body Worn) ಕ್ಯಾಮರಾಗಳನ್ನು ಒದಗಿಸಲಾಗಿರುತ್ತದೆ.

iii) ಸಾರ್ವಜನಿಕವಾಗಿ ಮಹಿಳೆಯರಿಗೆ ಭದ್ರತೆಯ ವಿಶ್ವಾಸವನ್ನು ಮೂಡಿಸುವ ಜೊತೆಗೆ ದೌರ್ಜನ್ಯಕ್ಕೊಳಗಾದ ಮಹಿಳೆಯರು ಮತ್ತು ಮಕ್ಕಳಿಗೆ ಕೂಡಲೇ ಪೊಲೀಸ್ ನೆರವನ್ನು ಒದಗಿಸುವ ಉದ್ದೇಶದಿಂದ ನಗರದಾದ್ಯಂತ ಒಟ್ಟು 60 ಮಹಿಳಾ ಔಟ್ ಪೋಸ್ಟ್‌ಗಳನ್ನು ಸ್ಥಾಪಿಸಲಾಗಿರುತ್ತದೆ.

iv) ಏಳು ಪೊಲೀಸ್ ಠಾಣೆ ಮತ್ತು ಕಛೇರಿ ಕಟ್ಟಡಗಳನ್ನು ಪೂರ್ಣಗೊಳಿಸಿ ಲೋಕಾರ್ಪಣೆಗೊಳಿಸಲಾಗುವುದು. ಮುಂದುವರೆದು, 12 ಪೋಲೀಸ್ ಠಾಣೆ, ಒಂದು ಉಪವಿಭಾಗ ಕಛೇರಿ, ಎರಡು ವೃತ್ತ ಕಛೇರಿ ಮತ್ತು ಒಂದು ಹೊರಠಾಣೆ ಕಟ್ಟಡಗಳ ನಿರ್ಮಾಣವನ್ನು 30 ಕೋಟಿ ರೂ. ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, ಅವುಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲು ಕ್ರಮವಹಿಸಲಾಗುವುದು.

v) ನ್ಯಾಯ ವಿಜ್ಞಾನ ಪ್ರಯೋಗಾಲಯಗಳಿಂದ ನೀಡಲಾಗುವ ವರದಿಗಳ ಕಾಯುವಿಕೆ ಅವಧಿಯು ಸರಾಸರಿ ಮೂರು ವರ್ಷಗಳಿಂದ ಆರು ತಿಂಗಳಿಗೆ ಇಳಿಕೆಯಾಗಿರುತ್ತದೆ. ಮೊಬೈಲ್ ಆಡಿಯೋ ವಿಡಿಯೋ ವಿಭಾಗವನ್ನು ಸದೃಢಗೊಳಿಸಲಾಗಿರುತ್ತದೆ.

456. ಚಲನಶೀಲತೆಯನ್ನು ಹೆಚ್ಚಿಸುವ ಉದ್ದೇಶದಿಂದ ಒಳಾಡಳಿತ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಇಲಾಖೆಗಳಿಗೆ ಒಟ್ಟು 1,000 ನೂತನ ವಾಹನಗಳನ್ನು ಖರೀದಿಸುವ ಸಲುವಾಗಿ ಪೊಲೀಸ್ ಮೊಬಿಲಿಟಿ ಯೋಜನೆಯಡಿ 2025–26ನೇ ಸಾಲಿಗೆ 50 ಕೋಟಿ ರೂ. ಒದಗಿಸಲಾಗುವುದು.

457. ನಮ್ಮ ಸರ್ಕಾರದ ಅವಧಿಯಲ್ಲಿ ಆರು ಜನ ಭೂಗತ ನಕ್ಸಲರು ನಕ್ಸಲ್ ಶರಣಾಗತಿ ಮತ್ತು ಪುನರ್ವಸತಿ ಯೋಜನೆ ಸಮಿತಿಯ ಮುಂದೆ ಶರಣಾಗಿರುತ್ತಾರೆ. ಇದರೊಂದಿಗೆ ರಾಜ್ಯವು ನಕ್ಸಲ್ ಮುಕ್ತವಾಗಿರುವುದರಿಂದ ನಕ್ಸಲ್ ನಿಗ್ರಹ ಪಡೆಯನ್ನು ವಿಸರ್ಜಿಸಲಾಗುವುದು. ಶರಣಾಗಿರುವ ನಕ್ಸಲರನ್ನು ಸಮಾಜದ ಮುಖ್ಯ ವಾಹಿನಿಗೆ ಸೇರ್ಪಡೆಗೊಳಿಸಲು ಹಾಗೂ ನಕ್ಸಲ್ ಪೀಡಿತ ಪ್ರದೇಶಗಳಲ್ಲಿ ಮೂಲಸೌಕರ್ಯ ಒದಗಿಸಲು 10 ಕೋಟಿ ರೂ. ವಿಶೇಷ ಪ್ಯಾಕೇಜ್ ರೂಪಿಸಲಾಗುವುದು.

458. ನಮ್ಮ ಸರ್ಕಾರವು ಹೆಚ್ಚುತ್ತಿರುವ ಸೈಬರ್ ಅಪರಾಧ ಮತ್ತು ಮಾದಕ ದ್ರವ್ಯ ಬಳಕೆ ಮತ್ತು ವ್ಯಾಪಾರದ ವಿರುದ್ದ ಕಠಿಣ ಕ್ರಮ ಕೈಗೊಳ್ಳಲು ಬದ್ಧವಾಗಿದ್ದು, ಈ ನಿಟ್ಟಿನಲ್ಲಿ ಮಾದಕ ದ್ರವ್ಯ ಮತ್ತು ಸೈಬರ್ ಅಪರಾಧ ವಿಭಾಗವನ್ನು ಬಲಗೊಳಿಸಲು 5 ಕೋಟಿ ರೂ. ಒದಗಿಸಲಾಗುವುದು.

459. ನಂದಿ ಬೆಟ್ಟದ ಬಳಿ ಕೂಡುಗುರ್ಕಿ ಮತ್ತು ಕೆಜಿಎಫ್ ಬಳಿ ಎರಡು ಭಾರತೀಯ ಮೀಸಲು ಪೊಲೀಸ್ ಪಡೆಗಳನ್ನು ಸ್ಥಾಪಿಸಲು 80 ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು.

460. ಪೊಲೀಸ್ ಗೃಹ–2025 ಯೋಜನೆಯಡಿ ಇದುವರೆಗೆ 2,016 ವಸತಿ ಗೃಹಗಳ ನಿರ್ಮಾಣ ಕಾರ್ಯ ಪೂರ್ಣವಾಗಿದ್ದು, 2,068

ವಸತಿ ಗೃಹಗಳ ನಿರ್ಮಾಣ ಕಾರ್ಯ ಪ್ರಗತಿಯಲ್ಲಿರುತ್ತದೆ. 2025–26ನೇ ಸಾಲಿನಲ್ಲಿ 300 ಕೋಟಿ ರೂ. ಮೊತ್ತದ ವಸತಿ ಗೃಹಗಳ ನಿರ್ಮಾಣ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗುವುದು.

461. ಪೊಲೀಸ್ ಇಲಾಖೆಯ ಬಲವರ್ಧನೆಗಾಗಿ ಈ ಕೆಳಕಂಡ ಸುಧಾರಣಾ ಕ್ರಮಗಳನ್ನು ಕೈಗೊಳ್ಳಲಾಗುವುದು.

i) ಬೆಂಗಳೂರು ನಗರದ ಪರಿಣಾಮಕಾರಿ ಪೊಲೀಸ್ ವ್ಯವಸ್ಥೆಗಾಗಿ ಈಗಿರುವ ಎಂಟು ಪೊಲೀಸ್ ವಿಭಾಗಗಳನ್ನು 11 ಕ್ಕೆ ಹೆಚ್ಚಿಸಲಾಗುವುದು.

ii) ರಾಜ್ಯದಲ್ಲಿ ಪ್ರಸ್ತುತ ಐದು ಬಾಂಬ್ ಪತ್ತೆ ಮತ್ತು ನಿಷ್ಕ್ರಿಯ ದಳಗಳು (Bomb Detection and Disposal Squad) ಕಾರ್ಯ ನಿರ್ವಹಿಸುತ್ತಿದ್ದು, ಪ್ರಸಕ್ತ ವರ್ಷ ಬಳ್ಳಾರಿ, ದಾವಣಗೆರೆ, ಮೈಸೂರು ಮತ್ತು ಬೆಂಗಳೂರು ಕೇಂದ್ರ ವಲಯಗಳಲ್ಲಿ ಬಾಂಬ್ ಪತ್ತೆ ಮತ್ತು ನಿಷ್ಕ್ರಿಯ ದಳಗಳನ್ನು ಸ್ಥಾಪಿಸಲಾಗುವುದು.

iii) ಪೊಲೀಸ್ ಸಿಬ್ಬಂದಿಯು ಸದೃಢ ಮತ್ತು ಆರೋಗ್ಯವಾಗಿರಬೇಕಾದುದು ಅವಶ್ಯವಾಗಿದ್ದು, ಪೊಲೀಸ್ ಸಿಬ್ಬಂದಿಗಳ ವಾರ್ಷಿಕ ಆರೋಗ್ಯ ತಪಾಸಣೆಗಾಗಿ ಪ್ರಸಕ್ತ

ನೀಡಲಾಗುತ್ತಿರುವ ಮೊತ್ತವನ್ನು ತಲಾ 1,000 ರೂ. ಗಳಿಂದ 1,500 ರೂ.ಗಳಿಗೆ ಹೆಚ್ಚಿಸಲಾಗುವುದು.

iv) ಬಂದೋಬಸ್ತ್‌ಗೆ ನಿಯೋಜಿಸುವ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಪ್ರಸ್ತುತ ಚಾಲ್ತಿಯಲ್ಲಿರುವ ಆಹಾರ ಭತ್ಯೆಯ ದರವನ್ನು 200 ರೂ. ರಿಂದ 300 ರೂ. ಕ್ಕೆ ಹೆಚ್ಚಿಸಲು ಕ್ರಮವಹಿಸಲಾಗುವುದು.

v) ಗೃಹರಕ್ಷಕ ಮತ್ತು ಪೌರ ರಕ್ಷಣಾ ಸ್ವಯಂ ಸೇವಕರು ಕರ್ತವ್ಯಕ್ಕೆ ಹಾಗೂ ತರಬೇತಿಗೆ ನಿಯೋಜಿಸಿದ ಸಂದರ್ಭದಲ್ಲಿ ಮರಣ ಹೊಂದಿದಲ್ಲಿ ಅವರ ಕುಟುಂಬಕ್ಕೆ ಹಾಲಿ ನೀಡಲಾಗುತ್ತಿರುವ 5 ಲಕ್ಷ ರೂ. ಪರಿಹಾರ ಧನವನ್ನು 10 ಲಕ್ಷ ರೂ.ಗಳಿಗೆ ಹೆಚ್ಚಿಸಲಾಗುವುದು.

462. ಕಾರಾಗೃಹ ಇಲಾಖೆಯಡಿಯಲ್ಲಿನ ಮೂಲಸೌಕರ್ಯದ ಅಭಿವೃದ್ಧಿಗಾಗಿ 100 ಕೋಟಿ ರೂ. ಅನುದಾನ ಒದಗಿಸಲಾಗುವುದು.

463. ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯಿಂದ 2024-25ನೇ ಸಾಲಿನಲ್ಲಿ 4,300 ಜನರನ್ನು ಅಗ್ನಿ ಅನಾಹುತದಿಂದ ರಕ್ಷಿಸಿ ಸುಮಾರು 1,501 ಕೋಟಿ ರೂ. ಮೊತ್ತದ ಖಾಸಗಿ ಮತ್ತು ಸಾರ್ವಜನಿಕ ಆಸ್ತಿ ಪಾಸ್ತಿಗಳನ್ನು ರಕ್ಷಿಸಲಾಗಿದೆ. 2025-26ನೇ

ಸಾಲಿನಲ್ಲಿ ಈ ಕೆಳಕಂಡ ಉಪಕ್ರಮಗಳನ್ನು ತೆಗೆದುಕೊಳ್ಳಲಾಗುವುದು.

i) K-SAFE -2 ಯೋಜನೆಯಡಿ ಉಪಕರಣಗಳ ಖರೀದಿ ಮತ್ತು ಕಟ್ಟಡ ನಿರ್ಮಾಣಕ್ಕಾಗಿ 50 ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು.

ii) ಬಹುಮಹಡಿ ಕಟ್ಟಡಗಳಲ್ಲಿ ಸಂಭವಿಸಬಹುದಾದ ಅಗ್ನಿ ಅನಾಹುತ ತಡೆಗಟ್ಟುವ ಸಲುವಾಗಿ 52-54 ಮೀಟರ್ ಎತ್ತರಕ್ಕೆ ತಲುಪುವ ಏರಿಯಲ್ ಲ್ಯಾಡರ್ ಪ್ಲಾಟ್‌ಫಾರಂ ವಾಹನ ಒದಗಿಸಲಾಗುವುದು.

iii) ಇಲಾಖೆಯ ವಿಸ್ತರಣೆ ಮತ್ತು ಆಧುನೀಕರಣ ಕಾರ್ಯವನ್ನು 15ನೇ ಹಣಕಾಸು ಆಯೋಗದ ಅನುದಾನದಡಿ 330 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲಾಗುವುದು.

iv) ಮೈಸೂರು ನಗರದ ವ್ಯಾಪ್ತಿಯಲ್ಲಿ 3 ಕೋಟಿ ರೂ. ವೆಚ್ಚದಲ್ಲಿ ಹೊಸ ಅಗ್ನಿ ಶಾಮಕ ಠಾಣಾ ಕಟ್ಟಡವನ್ನು ನಿರ್ಮಿಸಲು ಕ್ರಮವಹಿಸಲಾಗುವುದು.

**ಸಾರಿಗೆ**

464. ಮಹಿಳೆಯರ ಸಬಲೀಕರಣಕ್ಕಾಗಿ ಮತ್ತು ಸಾಮರ್ಥ್ಯ ವೃದ್ಧಿಗಾಗಿ ಪ್ರಪ್ರಥಮವಾಗಿ ಜಾರಿಗೆ ತರಲಾಗಿರುವ 'ಶಕ್ತಿ' ಯೋಜನೆಯಡಿ ಪ್ರಸಕ್ತ ವರ್ಷ ಇದುವರೆಗೆ ಒಟ್ಟು 226.53 ಕೋಟಿ ಮಹಿಳಾ ಪ್ರಯಾಣಿಕರು ಸೌಲಭ್ಯ ಪಡೆದಿರುತ್ತಾರೆ. ಮಹಿಳೆಯರ ಸ್ವಾವಲಂಬನೆ ಮತ್ತು ಆರ್ಥಿಕ ಅಭಿವೃದ್ಧಿಗೆ ಶಕ್ತಿ ತುಂಬಿದ ಈ ಯೋಜನೆಗಾಗಿ 2024–25 ನೇ ಸಾಲಿನಲ್ಲಿ 5,015 ಕೋಟಿ ರೂ. ವೆಚ್ಚ ಭರಿಸಲಾಗಿದ್ದು, 2025–26ನೇ ಸಾಲಿಗೆ 5,300 ಕೋಟಿ ರೂ. ಒದಗಿಸಲಾಗಿರುತ್ತದೆ.

465. ಬೆಂಗಳೂರು ಮೆಜೆಸ್ಟಿಕ್ ಬಸ್ ನಿಲ್ದಾಣದ ಜಾಗವನ್ನು 'ಪ್ರಾಜೆಕ್ಟ್ ಮೆಜೆಸ್ಟಿಕ್' ಯೋಜನೆಯಡಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದ ಆಧಾರದ ಮೇಲೆ ಪುನರ್ ಅಭಿವೃದ್ಧಿಪಡಿಸಿ, ವಾಣಿಜ್ಯ ಸಂಕೀರ್ಣದೊಂದಿಗೆ ಸಾರಿಗೆ ಹಬ್ ನಿರ್ಮಿಸಲು ಉದ್ದೇಶಿಸಲಾಗಿದೆ.

466. ರಾಜ್ಯದಲ್ಲಿ ಪ್ರಗತಿಯಲ್ಲಿರುವ 42 ಸ್ವಯಂಚಾಲಿತ ಪರೀಕ್ಷಾ ಪಥಗಳ ನಿರ್ಮಾಣವನ್ನು ಸದರಿ ಸಾಲಿನಲ್ಲಿ ಪೂರ್ಣಗೊಳಿಸಲಾಗುವುದು. 2025–26ನೇ ಸಾಲಿನಲ್ಲಿ ಹೊನ್ನಾವರ, ಚಾಮರಾಜನಗರ ಮತ್ತು ಚಿತ್ರದುರ್ಗದಲ್ಲಿ 20 ಕೋಟಿ ರೂ. ವೆಚ್ಚದಲ್ಲಿ ಸ್ವಯಂಚಾಲಿತ

ಪರೀಕ್ಷಾ ಪಥಗಳನ್ನು ನಿರ್ಮಿಸಲು ಕ್ರಮವಹಿಸಲಾಗುವುದು. ಈ ಉದ್ದೇಶಕ್ಕಾಗಿ 12 ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು.

467. ಸಾರಿಗೆ ಇಲಾಖೆಯ ಅಧೀನ ಕಛೇರಿಗಳಲ್ಲಿನ ಎಲ್ಲಾ ದಾಖಲೆಗಳನ್ನು ಹಂತಹಂತವಾಗಿ ಡಿಜಿಟಲೀಕರಣ ಮಾಡುವ ಉದ್ದೇಶ ಹೊಂದಲಾಗಿರುತ್ತದೆ. 2025–26ನೇ ಸಾಲಿನಲ್ಲಿ ಐದು ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿನ ದಾಖಲೆಗಳನ್ನು ಒಟ್ಟು 25 ಕೋಟಿ ರೂ. ವೆಚ್ಚದಲ್ಲಿ ಡಿಜಿಟಲೀಕರಣಗೊಳಿಸಲಾಗುವುದು.

468. ರಾಜ್ಯದಲ್ಲಿ ವಾಹನ ಸಂಚಾರವನ್ನು ಮೇಲ್ವಿಚಾರಣೆ ಮಾಡಲು ಮತ್ತು ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳನ್ನು ಪತ್ತೆ ಹಚ್ಚಿ ನಿಯಂತ್ರಿಸಲು ದಾವಣಗೆರೆ, ಧಾರವಾಡ, ಕಲಬುರಗಿ, ಬೆಳಗಾವಿ, ಚಿತ್ರದುರ್ಗ, ಹಾವೇರಿ, ಹೊಸಪೇಟೆ, ಬಳ್ಳಾರಿ, ವಿಜಯಪುರ, ದಕ್ಷಿಣ ಕನ್ನಡ ಜಿಲ್ಲೆಗಳ ಒಟ್ಟು 60 ಸ್ಥಳಗಳಲ್ಲಿ 50 ಕೋಟಿ ರೂ. ವೆಚ್ಚದಲ್ಲಿ AI ಆಧಾರಿತ ವಿದ್ಯುನ್ಮಾನ ಕ್ಯಾಮರಾಗಳನ್ನು ಅಳವಡಿಸಲಾಗುವುದು.

469. ರಾಜ್ಯದಲ್ಲಿನ ಸಾರಿಗೆ ಸಂಪರ್ಕವನ್ನು ಸದೃಢಗೊಳಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

i) 2024–25 ನೇ ಸಾಲಿನಲ್ಲಿ ನಾಲ್ಕು ರಾಜ್ಯ ರಸ್ತೆ ಸಾರಿಗೆ ನಿಗಮಗಳಿಗೆ ಒಟ್ಟಾರೆಯಾಗಿ 2,381 ಸಂಖ್ಯೆಯ ಡೀಸೆಲ್ ಬಸ್ಸುಗಳನ್ನು ಹಾಗೂ 716 ಸಂಖ್ಯೆಯ ವಿದ್ಯುತ್ ಚಾಲಿತ ಬಸ್ಸುಗಳನ್ನು ಹೊಸದಾಗಿ ಸೇರ್ಪಡೆ ಮಾಡಲಾಗಿರುತ್ತದೆ.

ii) 2025–26ನೇ ಸಾಲಿನಲ್ಲಿ ಸ್ವಚ್ಛ ಪರಿಸರದ ಹಿತದೃಷ್ಟಿಯಿಂದ ವಿದ್ಯುತ್ ಚಾಲಿತ ಬಸ್ಸುಗಳನ್ನು ಸೇರ್ಪಡೆ ಮಾಡಲು ಆದ್ಯತೆ ನೀಡಲಾಗುತ್ತಿದ್ದು, PM E-DRIVE, PM-eBus Sewa ಮತ್ತು ಬಾಹ್ಯ ನೆರವಿನ ಯೋಜನೆಯಡಿ ಒಟ್ಟಾರೆ 14,750 ಹೊಸ ವಿದ್ಯುತ್ ಚಾಲಿತ ಬಸ್ಸುಗಳನ್ನು ಸೇರ್ಪಡೆ ಮಾಡುವ ಗುರಿ ಹೊಂದಿದ್ದು, ಇದರಲ್ಲಿ 9,000 ಬಸ್ಸುಗಳನ್ನು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗೆ ಸೇರ್ಪಡೆ ಮಾಡಲು ಉದ್ದೇಶಿಸಲಾಗಿದೆ.

iii) ರಾಜ್ಯದ ವಿವಿಧ ಸಾರಿಗೆ ನಿಗಮಗಳಲ್ಲಿ 1,000 ಹೊಸ ಡೀಸೆಲ್ ಬಸ್ಸುಗಳನ್ನು GCC ಆಧಾರದಲ್ಲಿ ಸೇರ್ಪಡೆಗೊಳಿಸಲಾಗುವುದು.

iv) ಸಾರಿಗೆ ನಿಗಮಗಳಿಗೆ ಆರ್ಥಿಕ ಚೈತನ್ಯ ತುಂಬುವ ಉದ್ದೇಶದಿಂದ 2,000 ಕೋಟಿ ರೂ. ಸಾಲವನ್ನು ಹಣಕಾಸು ಸಂಸ್ಥೆಗಳಿಂದ ಪಡೆಯಲು ನಾಲ್ಕು ಸಾರಿಗೆ ನಿಗಮಗಳಿಗೆ ಸರ್ಕಾರದ ಖಾತರಿ ನೀಡಲಾಗಿರುತ್ತದೆ.

v) ಸಾರ್ವಜನಿಕರ ಸುಗಮ ಸಂಚಾರಕ್ಕಾಗಿ ಹಾಗೂ ಸಾರಿಗೆ ನಿಗಮಗಳಲ್ಲಿನ ಮೂಲಭೂತ ಸೌಕರ್ಯಗಳನ್ನು ಹೆಚ್ಚಿಸುವ ಉದ್ದೇಶದಿಂದ ಪ್ರಸಕ್ತ ವರ್ಷ ಬೆಂಗಳೂರು ಪೂರ್ವ ಭಾಗದ ಕೆ.ಆರ್.ಪುರಂ ನಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದ ಆಧಾರದಲ್ಲಿ ಹೊಸ ಸ್ಯಾಟಲೈಟ್ ಬಸ್ ನಿಲ್ದಾಣವನ್ನು ನಿರ್ಮಿಸಲಾಗುವುದು.

vi) ಮೈಸೂರಿನ ಬನ್ನಿಮಂಟಪದಲ್ಲಿ ಅತ್ಯಾಧುನಿಕ ಬಸ್ ನಿಲ್ದಾಣವನ್ನು ಒಟ್ಟಾರೆ 120 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವುದು.

**ಕಾನೂನು**

470. ಆಧುನಿಕ ತಂತ್ರಜ್ಞಾನದ ಭಾಗವಾಗಿ AI ತಂತ್ರಜ್ಞಾನದ ಮೂಲಕ ರಾಜ್ಯದ ನ್ಯಾಯಾಲಯಗಳ ಕಾರ್ಯ ಕಲಾಪಗಳ ಪ್ರತಿಲೇಖನ, ನ್ಯಾಯಾಂಗ ದಾಖಲೆಗಳ ಅನುವಾದ ಮತ್ತಿತರ ಮಾಹಿತಿಯನ್ನು

ಪಡೆಯಲು ಎರಡು ಕೋಟಿ ರೂ. ವೆಚ್ಚದಲ್ಲಿ Smart System ಅನ್ನು ಅನುಷ್ಠಾನಗೊಳಿಸಲು ಉದ್ದೇಶಿಸಿದೆ.

471. ಕರ್ನಾಟಕ ಉಚ್ಛ ನ್ಯಾಯಾಲಯ ಮತ್ತು ಜಿಲ್ಲಾ ನ್ಯಾಯಾಲಯಗಳಲ್ಲಿನ ಗ್ರಂಥಾಲಯಗಳನ್ನು ಮೇಲ್ದರ್ಜೆಗೇರಿಸಲು ಮತ್ತು ಡಿಜಿಟಲ್ ಗ್ರಂಥಾಲಯಗಳನ್ನು ಪ್ರಾರಂಭಿಸಲು ಈ ಆರ್ಥಿಕ ವರ್ಷದಲ್ಲಿ ಎರಡು ಕೋಟಿ ರೂ. ಹಂಚಿಕೆ ಮಾಡಲಾಗಿದೆ.

472. ಬಾರ್ ಅಸೋಸಿಯೇಷನ್ ಸದಸ್ಯರಿಗೆ ಚಂದಾದಾರಿಕೆಯೊಂದಿಗೆ ಕಾಯಿದೆ/ ನಿಯಮಗಳು / ಕಾನೂನು ಪುಸ್ತಕಗಳು ಸುಲಭವಾಗಿ ದೊರಕುವಂತೆ ಮಾಡಲು ಅಡ್ವೊಕೇಟ್ ಜನರಲ್ ಕಛೇರಿ ಸಹಯೋಗದೊಂದಿಗೆ ಆನ್‌ಲೈನ್ ಗ್ರಂಥಾಲಯವನ್ನು 50 ಲಕ್ಷ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುವುದು.

473. ಕೃಷ್ಣಾ ಮೇಲ್ದಂಡೆ ಯೋಜನೆಯಡಿ ಭೂಸ್ವಾಧೀನ ಕುರಿತಂತೆ ನ್ಯಾಯಾಲಯಗಳಲ್ಲಿ ದಾಖಲಿಸಿರುವ ಪ್ರಕರಣಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಿ ಸೂಕ್ತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಭೂಸ್ವಾಧೀನ ಪ್ರಕರಣಗಳ ವಿಶೇಷ ತ್ವರಿತಗತಿ (Fast-track) ನ್ಯಾಯಾಲಯವನ್ನು ಬಾಗಲಕೋಟೆ ಜಿಲ್ಲೆಯಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿದೆ.

474. ಕೊಪ್ಪಳ ಜಿಲ್ಲೆಯಲ್ಲಿ ನೂತನ ನ್ಯಾಯಾಲಯ ಸಂಕೀರ್ಣ ನಿರ್ಮಾಣಕ್ಕೆ 50 ಕೋಟಿ ರೂ. ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಕುಕನೂರು ಮತ್ತು ಕಾರಟಗಿ ತಾಲ್ಲೂಕಿನಲ್ಲಿ JMFC ನ್ಯಾಯಾಲಯವನ್ನು ತಲಾ ಒಂಭತ್ತು ಕೋಟಿ ರೂ. ವೆಚ್ಚದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ವತಿಯಿಂದ ಸ್ಥಾಪಿಸಲಾಗುವುದು.

**ತೆರಿಗೆ ಪ್ರಸ್ತಾವನೆಗಳು**

**ವಾಣಿಜ್ಯ ತೆರಿಗೆ**

475. 2024–25ನೇ ಸಾಲಿಗೆ ದೇಶದಲ್ಲಿ ಅತಿ ಹೆಚ್ಚು ಜಿ.ಎಸ್.ಟಿ ತೆರಿಗೆ ಸಂಗ್ರಹಿಸುವ ರಾಜ್ಯಗಳಲ್ಲಿ ಕರ್ನಾಟಕ ರಾಜ್ಯವು 2 ನೇ ಸ್ಥಾನದಲ್ಲಿದೆ. 2024–25ರ ಪರಿಷ್ಕೃತ ಅಂದಾಜಿನಲ್ಲಿ ವಾಣಿಜ್ಯ ತೆರಿಗೆಯಿಂದ ಒಟ್ಟು 1,05,000 ಕೋಟಿ ರೂ.ಗಳ ರಾಜಸ್ವವನ್ನು ನಿರೀಕ್ಷಿಸಲಾಗಿದೆ.

476. ವೃತ್ತಿ ತೆರಿಗೆ ಅಧಿನಿಯಮದಡಿ ವಾರ್ಷಿಕವಾಗಿ ಅನುಮತಿಸಬಹುದಾದ ಗರಿಷ್ಠ ಮಿತಿ 2,500 ರೂ.ಗಳಿಗೆ ಅನುಗುಣವಾಗಿ, ಸಂಬಳ ಅಥವಾ ಮಜೂರಿ ಪಡೆಯುವ ವ್ಯಕ್ತಿಗಳು ಫೆಬ್ರವರಿ ತಿಂಗಳಲ್ಲಿ ಪಾವತಿಸುತ್ತಿರುವ ವೃತ್ತಿ ತೆರಿಗೆಯನ್ನು ಪ್ರಸ್ತುತ 200 ರೂ.ಗಳಿಂದ 300 ರೂ.ಗಳಿಗೆ ಹೆಚ್ಚಿಸಲು ಸೂಕ್ತ ತಿದ್ದುಪಡಿ ತರಲಾಗುವುದು.

477. ವೃತ್ತಿ ತೆರಿಗೆ ಆಡಳಿತವನ್ನು ಮತ್ತಷ್ಟು ಅನುಕೂಲಕರ ಹಾಗೂ ದಕ್ಷತೆಗೊಳಿಸುವ ಉದ್ದೇಶದಿಂದ, ಜಿ.ಎಸ್.ಟಿ ಅಧಿನಿಯಮದಡಿ ಕೈಗೊಂಡಂತೆ ವೃತ್ತಿ ತೆರಿಗೆ ಅಡಿಯಲ್ಲಿಯೂ ಸಹ ಸೂಚನಾ ಪತ್ರ, ಆದೇಶ ಮುಂತಾದ ಸಂವಹನಾ ಕ್ರಮಗಳನ್ನು ಆನ್‌ಲೈನ್ ಮುಖಾಂತರ ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

478. 2025-26 ನೇ ಸಾಲಿಗೆ ವಾಣಿಜ್ಯ ತೆರಿಗೆ ಇಲಾಖೆಯ ರಾಜಸ್ವ ಸಂಗ್ರಹಣೆಯ ಗುರಿಯನ್ನು 1,20,000 ಕೋಟಿ ರೂ.ಗಳಿಗೆ ನಿಗದಿಪಡಿಸಲಾಗಿದೆ.

**ಅಬಕಾರಿ**

479. ಪ್ರೀಮಿಯಂ ಮದ್ಯದ ಬೆಲೆಗಳನ್ನು ನೆರೆಯ ರಾಜ್ಯಗಳಲ್ಲಿ ವಿಧಿಸುತ್ತಿರುವ ಬೆಲೆಗಳಿಗೆ ಅನುಸಾರವಾಗಿ ಪರಿಷ್ಕರಿಸುವುದರೊಂದಿಗೆ ಸರ್ಕಾರವು ಅಬಕಾರಿ ಸ್ಲ್ಯಾಬ್ ಗಳನ್ನು ತರ್ಕಬದ್ಧಗೊಳಿಸಿದೆ. 2025-26ರಲ್ಲಿಯೂ ಅಬಕಾರಿ ಸ್ಲ್ಯಾಬ್‌ಗಳನ್ನು ತರ್ಕಬದ್ಧಗೊಳಿಸುವ ಪ್ರಕ್ರಿಯೆಯನ್ನು ಮುಂದುವರಿಸಲಾಗುವುದು.

480. ಖಾಲಿ ಅಥವಾ ಲಭ್ಯವಿರುವ ಮದ್ಯದ ಪರವಾನಗಿಗಳನ್ನು ಪಾರದರ್ಶಕ ಎಲೆಕ್ಟ್ರಾನಿಕ್ ಹರಾಜಿನ ಮೂಲಕ ಹಂಚಿಕೆ ಮಾಡಲು

ಪ್ರಸ್ತಾಪಿಸಲಾಗಿದೆ, ಇದರಿಂದ ಹೆಚ್ಚುವರಿ ರಾಜಸ್ವ ಸಂಗ್ರಹಣೆಯಾಗುವ ನಿರೀಕ್ಷೆಯಿದೆ.

481. ಅಬಕಾರಿ ಇಲಾಖೆಯ ಎಲ್ಲಾ ಸೇವೆಗಳಿಗೆ ಸರ್ಕಾರವು ತಂತ್ರಾಂಶವನ್ನು ಸಿದ್ಧಪಡಿಸಿ ಆನ್‌ಲೈನ್ ಪ್ರಕ್ರಿಯೆಯನ್ನು ಅಭಿವೃದ್ಧಿಪಡಿಸಿದೆ. ಇದು ಆಡಳಿತದಲ್ಲಿ ದಕ್ಷತೆಯನ್ನು ಹೆಚ್ಚಿಸುತ್ತದೆ ಮತ್ತು ಸಾರ್ವಜನಿಕ ಸೇವೆಯನ್ನು ಮತ್ತಷ್ಟು ಸುಧಾರಿಸಲು ಸಹಕಾರಿಯಾಗಲಿದೆ.

482. 2024–25ರ ಪರಿಷ್ಕೃತ ಅಂದಾಜಿನಲ್ಲಿ ಅಬಕಾರಿ ತೆರಿಗೆಯಿಂದ ಒಟ್ಟು 36,500 ಕೋಟಿ ರೂ.ಗಳ ರಾಜಸ್ವವನ್ನು ನಿರೀಕ್ಷಿಸಲಾಗಿದೆ.

483. 2025–26ನೇ ಸಾಲಿಗೆ 40,000 ಕೋಟಿ ರೂ.ಗಳ ಸಂಗ್ರಹಣಾ ಗುರಿಯನ್ನು ಅಬಕಾರಿ ಇಲಾಖೆಗೆ ನೀಡಲಾಗಿದೆ.

**ನೋಂದಣಿ ಮತ್ತು ಮುದ್ರಾಂಕ**

484. ಆಸ್ತಿ ನೋಂದಣಿಯನ್ನು ಸುಗಮಗೊಳಿಸಲು ನೋಂದಣಿ ಮತ್ತು ಮುದ್ರಾಂಕ ಇಲಾಖೆಯು ಇ–ಖಾತಾ ವ್ಯವಸ್ಥೆಯನ್ನು ಪರಿಚಯಿಸಿದೆ. ಈ ಕ್ರಮವು ಆಸ್ತಿ ವಂಚನೆ ಮತ್ತು ತೆರಿಗೆ ತಪಿಸಲು ಆಸ್ತಿಗಳ ಮೌಲ್ಯ ಕಡಿಮೆ ಮಾಡುವುದನ್ನು ನಿಯಂತ್ರಿಸಲಿದೆ. ಇದು

ಮೌಲ್ಯಮಾಪನ ಮಾಡದ ಆಸ್ತಿಗಳನ್ನು ಮೌಲ್ಯಮಾಪನ ಜಾಲಕ್ಕೆ ತರುತ್ತದೆ.

485. ದಾಖಲೆಗಳನ್ನು ನೋಂದಾಯಿಸುವಾಗ ವಂಚನೆ ಮತ್ತು ದುರುಪಯೋಗವನ್ನು ತಡೆಗಟ್ಟಲು ಸರ್ಕಾರವು ಪ್ರಸಕ್ತ ವರ್ಷದಿಂದ ನೋಂದಾಯಿಸಲಾಗದ ದಾಖಲೆಗಳಿಗೆ ಡಿಜಿಟಲ್ ಇ-ಸ್ಟ್ಯಾಂಪಿಂಗ್ ಅನ್ನು ಜಾರಿಗೆ ತರಲಿದೆ.

486. ಅನೇಕ ಸ್ಥಳಗಳಲ್ಲಿ ಒಂದು ಆಸ್ತಿಯಿಂದ ಇನ್ನೊಂದು ಆಸ್ತಿಯ ಮಾರ್ಗಸೂಚಿ ಮೌಲ್ಯದಲ್ಲಿನ ವ್ಯತ್ಯಾಸಗಳನ್ನು ಸರಿಪಡಿಸಲು GIS ತಂತ್ರಜ್ಞಾನವನ್ನು ಬಳಸಿಕೊಂಡು ಮಾರ್ಗಸೂಚಿ ಮೌಲ್ಯವನ್ನು ವೈಜ್ಞಾನಿಕವಾಗಿ ನಿರ್ಧರಿಸಲು ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ.

487. 2024-25ರ ಪರಿಷ್ಕೃತ ಅಂದಾಜಿನಲ್ಲಿ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಿಂದ ಒಟ್ಟು 24,000 ಕೋಟಿ ರೂ.ಗಳ ರಾಜಸ್ವವನ್ನು ನಿರೀಕ್ಷಿಸಲಾಗಿದೆ.

488. 2025-26ನೇ ಸಾಲಿಗೆ ನೋಂದಣಿ ಮತ್ತು ಮುದ್ರಾಂಕ ಇಲಾಖೆಗೆ 28,000 ಕೋಟಿ. ರೂ.ಗಳ ರಾಜಸ್ವ ಗುರಿ ನಿಗದಿ ಪಡಿಸಲಾಗಿದೆ.

**ಮೋಟಾರು ವಾಹನ**

489. 2024–25ರ ಪರಿಷ್ಕೃತ ಅಂದಾಜಿನಲ್ಲಿ ಮೋಟಾರು ವಾಹನ ತೆರಿಗೆಯಿಂದ ಒಟ್ಟು 12,500 ಕೋಟಿ ರೂ.ಗಳ ರಾಜಸ್ವವನ್ನು ನಿರೀಕ್ಷಿಸಲಾಗಿದೆ.

490. 2025–26 ನೇ ಸಾಲಿಗೆ ಸಾರಿಗೆ ಇಲಾಖೆಗೆ 15,000 ಕೋಟಿ. ರೂ.ಗಳ ರಾಜಸ್ವ ಗುರಿ ನೀಡಲಾಗಿದೆ

**ಗಣಿ ಮತ್ತು ಭೂ ವಿಜ್ಞಾನ**

491. 2024–25ರ ಪರಿಷ್ಕೃತ ಅಂದಾಜಿನಲ್ಲಿ ಗಣಿಗಾರಿಕೆಯಿಂದ ಒಟ್ಟು 7,250 ಕೋಟಿ ರೂ.ಗಳ ರಾಜಸ್ವವನ್ನು ನಿರೀಕ್ಷಿಸಲಾಗಿದೆ.

492. ಪ್ರಸ್ತುತ, ಗಣಿ ಮತ್ತು ಖನಿಜ ಅಭಿವೃದ್ಧಿ ಮತ್ತು ನಿಯಂತ್ರಣ (MMDR) ಕಾಯ್ದೆಯ ನಿಬಂಧನೆಗಳ ಪ್ರಕಾರ ರಾಜಧನವನ್ನು ಮಾತ್ರ ವಿಧಿಸಲಾಗುತ್ತಿದೆ. ಆದರೆ, ಸುಪ್ರೀಂ ಕೋರ್ಟ್ ತೀರ್ಪಿನ ಹಿನ್ನಲೆಯಲ್ಲಿ, ರಾಜ್ಯ ಸರ್ಕಾರವು ರಾಜಧನದ ಜೊತೆಗೆ ಪ್ರಮುಖ ಖನಿಜಗಳ ಮೇಲೆ ತೆರಿಗೆ ವಿಧಿಸಬಹುದಾಗಿದೆ. ಅಲ್ಲದೆ, ವಿಧನಾಮಂಡಲದಲ್ಲಿ ಈ ಕುರಿತ ಮಸೂದೆಯನ್ನು ಅಂಗೀಕರಿಸಲಾಗಿದೆ. ಈ ಹಿನ್ನೆಲೆಯಲ್ಲಿ 2025–26ನೇ ಸಾಲಿಗೆ

ಖನಿಜಗಳ ಮೇಲೆ ವಿಧಿಸುವ ತೆರಿಗೆಯಿಂದ 3,000 ಕೋಟಿ ರೂ.ಗಳ ತೆರಿಗೆ ರಾಜಸ್ವ ಸ್ವೀಕೃತಿಯನ್ನು ಅಂದಾಜಿಸಲಾಗಿದೆ.

493. ಸಣ್ಣ ಖನಿಜಗಳನ್ನು ಸಾಗಿಸಲು ಸರಕು ಮತ್ತು ಸೇವಾ ತೆರಿಗೆ ಪೋರ್ಟಲ್ ಮೂಲಕ ಸೃಜಿಸಲಾಗುವ ಇ–ವೇ ಬಿಲ್ ಅನ್ನು ಕಡ್ಡಾಯಗೊಳಿಸಲು ಕರ್ನಾಟಕ ಸಣ್ಣ ಖನಿಜ ನಿಯಮಗಳು, 1994 ಕ್ಕೆ ತಿದ್ದುಪಡಿ ತರಲಾಗುವುದು. ಈ ಕ್ರಮವು ರಾಯಲ್ಟಿ ಮತ್ತು ಜಿಎಸ್‌ಟಿ ತಪ್ಪಿಸುವಿಕೆಯನ್ನು ತಡೆಯುವ ಗುರಿಯನ್ನು ಹೊಂದಿದ್ದು, ಇದರಿಂದ ಹೆಚ್ಚುವರಿ ಆದಾಯ ಗಳಿಸುವ ನಿರೀಕ್ಷೆಯಿದೆ.

494. 2025–26 ನೇ ಸಾಲಿಗೆ ರಾಜಧನ ಸಂಗ್ರಹದಿಂದ 9,000 ಕೋಟಿ ರೂ.ಗಳ ತೆರಿಗೆಯೇತರ ರಾಜಸ್ವವನ್ನು ಅಂದಾಜಿಸಲಾಗಿದೆ.

**ಪರಿಷ್ಕೃತ ಅಂದಾಜು 2024–25**

495. 2024–25ರ ಪರಿಷ್ಕೃತ ಅಂದಾಜಿನಲ್ಲಿ ಒಟ್ಟು ಸ್ವೀಕೃತಿಗಳು 3,58,657 ಕೋಟಿ ರೂ.ಗಳು ಎಂದು ಅಂದಾಜಿಸಲಾಗಿದೆ. ರಾಜಸ್ವ ಸ್ವೀಕೃತಿಗಳು 2,57,801 ಕೋಟಿ ರೂ.ಗಳೆಂದು ಅಂದಾಜಿಸಲಾಗಿದ್ದು, ಇದರಲ್ಲಿ ರಾಜ್ಯದ ಸ್ವಂತ ತೆರಿಗೆ ರಾಜಸ್ವವು 1,80,368 ಕೋಟಿ ರೂ.ಗಳು, ತೆರಿಗೆಯೇತರ ರಾಜಸ್ವವು 14,500 ಕೋಟಿ ರೂ.ಗಳು ಮತ್ತು ಕೇಂದ್ರದಿಂದ 62,933 ಕೋಟಿ ರೂ.ಗಳ ರಾಜಸ್ವ ಸ್ವೀಕೃತಿ ಸೇರಿದೆ.

496. 2024–25ರ ಪರಿಷ್ಕೃತ ಅಂದಾಜಿನಲ್ಲಿ, ಒಟ್ಟು ವೆಚ್ಚವು 3,65,865 ಕೋಟಿ ರೂ.ಗಳು ಎಂದು ಅಂದಾಜಿಸಲಾಗಿದೆ, ಇದರಲ್ಲಿ 2,83,928 ಕೋಟಿ ರೂ.ಗಳ ರಾಜಸ್ವ ವೆಚ್ಚ ಮತ್ತು ಸಾಲ ಮರುಪಾವತಿ ಒಳಗೊಂಡು ಬಂಡವಾಳ ವೆಚ್ಚ 81,937 ಕೋಟಿ ರೂ.ಗಳು ಸೇರಿದೆ.

**ಆಯವ್ಯಯ ಅಂದಾಜು 2025–26**

497. 2025–26ನೇ ಸಾಲಿಗೆ ಒಟ್ಟು 2,92,477 ಕೋಟಿ ರೂ.ಗಳ ರಾಜಸ್ವ ಸ್ವೀಕೃತಿಯನ್ನು ಅಂದಾಜಿಸಲಾಗಿದೆ. ಇದರಲ್ಲಿ 2,08,100 ಕೋಟಿ ರೂ.ಗಳ ಸ್ವಂತ ತೆರಿಗೆ ರಾಜಸ್ವ, 16,500 ಕೋಟಿ ರೂ.ಗಳ ತೆರಿಗೆಯೇತರ ರಾಜಸ್ವ ಮತ್ತು ಕೇಂದ್ರ ಸರ್ಕಾರದ ಸ್ವೀಕೃತಿ 67,877 ಕೋಟಿ ರೂ.ಗಳು ಸೇರಿವೆ. 2025–26ನೇ ಸಾಲಿಗೆ ಒಟ್ಟು 1,16,000 ಕೋಟಿ ರೂ.ಗಳ ಸಾಲ ಮತ್ತು 170 ಕೋಟಿ ರೂ.ಗಳ ಋಣೇತರ ಬಂಡವಾಳ ಸ್ವೀಕೃತಿಯನ್ನು ಅಂದಾಜಿಸಲಾಗಿದೆ. ಈ ಎಲ್ಲಾ ಸ್ವೀಕೃತಿಗಳು ಸೇರಿ 2025–26ನೇ ಸಾಲಿನಲ್ಲಿ ಒಟ್ಟು 4,08,647 ಕೋಟಿ ರೂ.ಗಳ ಸ್ವೀಕೃತಿಯನ್ನು ಅಂದಾಜಿಸಲಾಗಿದೆ.

498. 2025–26ರ ಆಯವ್ಯಯದಲ್ಲಿ ಒಟ್ಟು 4,09,549 ಕೋಟಿ ರೂ. ವೆಚ್ಚವನ್ನು ಅಂದಾಜಿಸಲಾಗಿದೆ, ಇದರಲ್ಲಿ 3,11,739 ಕೋಟಿ ರೂ.

ರಾಜಸ್ವ ವೆಚ್ಚ, 71,336 ಕೋಟಿ ಬಂಡವಾಳ ವೆಚ್ಚ ಮತ್ತು 26,474 ಕೋಟಿ ರೂ.ಗಳ ಸಾಲ ಮರುಪಾವತಿ ಒಳಗೊಂಡಿದೆ.

499. 2025-26ನೇ ಸಾಲಿಗೆ, 19,262 ಕೋಟಿ ರೂ.ಗಳ ರಾಜಸ್ವ ಕೊರತೆಯನ್ನು ಅಂದಾಜಿಸಲಾಗಿದ್ದು, ಜಿ.ಎಸ್.ಡಿ.ಪಿ.ಯ ಶೇ. 0.63ರಷ್ಟಿದೆ. ವಿತ್ತೀಯ ಕೊರತೆ 90,428 ಕೋಟಿ ರೂ.ಗಳು ಎಂದು ಅಂದಾಜಿಸಲಾಗಿದ್ದು, ಜಿ.ಎಸ್.ಡಿ.ಪಿ ಯ ಶೇ. 2.95ರಷ್ಟಿದೆ. 2025-26 ರ ಅಂತ್ಯಕ್ಕೆ ರಾಜ್ಯದ ಒಟ್ಟು ಹೊಣೆಗಾರಿಕೆಗಳು 7,64,655 ಕೋಟಿ ರೂ.ಗಳು ಎಂದು ಅಂದಾಜಿಸಲಾಗಿದ್ದು, ಜಿ.ಎಸ್.ಡಿ.ಪಿ ಯ ಶೇ. 24.91ರಷ್ಟಿದೆ. 2025-26ನೇ ಸಾಲಿಗೆ ರಾಜ್ಯದ ವಿತ್ತೀಯ ಕೊರತೆ ಮತ್ತು ಒಟ್ಟು ಹೊಣೆಗಾರಿಕೆಗಳನ್ನು, ಕರ್ನಾಟಕ ಆರ್ಥಿಕ ಹೊಣೆಗಾರಿಕೆ ಅಧಿನಿಯಮದ ಮಾನದಂಡದಂತೆ ಪಾಲನೆ ಮಾಡಲಾಗಿದ್ದು, ವಿತ್ತೀಯ ಶಿಸ್ತನ್ನು ಕಾಯ್ದುಕೊಳ್ಳಲಾಗಿದೆ.

ಆನೆಯನೇರಿಕೊಂಡು ಹೋದಿರೇ ನೀವು
ಕುದುರೆಯನೇರಿಕೊಂಡು ಹೋದಿರೇ ನೀವು
ಕುಂಕುಮ ಕಸ್ತೂರಿಯ ಪೂಸಿಕೊಂಡು ಹೋದಿರೇ ಅಣ್ಣಾ
ಸತ್ಯದ ನಿಲುವನರಿಯದೆ ಹೋದಿರಲ್ಲಾ

\- **ವಿಶ್ವಗುರು ಸಾಂಸ್ಕೃತಿಕ ನಾಯಕ ಬಸವಣ್ಣ**

**ಸನ್ಮಾನ್ಯ ಸಭಾಧ್ಯಕ್ಷರೆ,**

500. ನಾನು ರಾಜ್ಯದ ವಿತ್ತೀಯ ಪರಿಸ್ಥಿತಿಯನ್ನು ನಿರ್ವಹಿಸುವ ಜೊತೆಗೆ ಸುಸ್ಥಿರ ಆರ್ಥಿಕ ಬೆಳವಣಿಗೆಗೆ ಪೂರಕವಾಗುವ ಆಯವ್ಯಯವನ್ನು ಮಂಡಿಸುತ್ತಿದ್ದೇನೆ. ಮೂಲಸೌಕರ್ಯ, ನೀರಾವರಿಯಂತಹ ಪ್ರಮುಖ ಕ್ಷೇತ್ರಗಳು ಒಳಗೊಂಡು ಸಾಮಾಜ ಕಲ್ಯಾಣಕ್ಕೆ ಆಯವ್ಯಯದಲ್ಲಿ ಆದ್ಯತೆ ನೀಡುವ ಮೂಲಕ, ದೀರ್ಘಕಾಲೀನ ಬೆಳವಣಿಗೆಗೆ ಯೋಜನೆ ಮಾಡಲಾಗಿದೆ. ಅಲ್ಲದೆ, ಆಯವ್ಯಯದಲ್ಲಿ ಅಂದಾಜಿಸಿರುವಂತೆ ವಿತ್ತೀಯ ಶಿಸ್ತನ್ನು ಪಾಲಿಸುವ ಮೂಲಕ ನಮ್ಮ ಸರ್ಕಾರವು ರಾಜ್ಯದ ಹಣಕಾಸು ಪರಿಸ್ಥಿತಿಯನ್ನು ಸುಸ್ಥಿರ ಮತ್ತು ಸಧೃಡ ಪಡಿಸುತ್ತಿರುವುದನ್ನು ಇದು ಖಚಿತಪಡಿಸುತ್ತದೆ. ಈ ಆಯವ್ಯಯವು ಬೆಳವಣಿಗೆಯನ್ನು ಉತ್ತೇಜಿಸುವುದಲ್ಲದೆ, ರಾಜ್ಯದ ಒಟ್ಟಾರೆ ವಿತ್ತೀಯ ಪರಿಸ್ಥಿಯನ್ನು ಮತ್ತಷ್ಟು ಬಲಗೊಳಿಸಲಿದೆ. ಈ ಆಯವ್ಯಯದಲ್ಲಿ ಪ್ರಸ್ತಾಪಿಸಿರುವ ಯೋಜನೆಗಳನ್ನು ಕಾರ್ಯರೂಪಕ್ಕೆ ತರಲು ಈ ಸದನದ ಪ್ರತಿಯೊಬ್ಬ ಸದಸ್ಯರ ಬೆಂಬಲವನ್ನು ನಾನು ಕೇಳುತ್ತೇನೆ. ರಾಜ್ಯದ ಪ್ರಗತಿಗೆ ನಿಮ್ಮೆಲ್ಲರ ಬೆಂಬಲ ದೊರೆಯಲಿದೆ ಎಂದು ನನಗೆ ವಿಶ್ವಾಸವಿದೆ.

501. ನಾನು 2025–26ನೇ ಸಾಲಿನ ಈ ಆಯವ್ಯಯವನ್ನು ಗೌರವಾನ್ವಿತ ಸದನದ ಪರಿಗಣನೆಗೆ ಮಂಡಿಸುತ್ತೇನೆ ಮತ್ತು ಈ ಆಯವ್ಯಯದಲ್ಲಿ ಅಂದಾಜಿಸಿರುವಂತೆ ಮಾರ್ಚ್ 31, 2026 ರವರೆಗಿನ ವೆಚ್ಚವನ್ನು ನಿರ್ವಹಿಸಲು ಪೂರ್ಣ ಆಯವ್ಯಯವನ್ನು ಅಂಗೀಕರಿಸಲು ಕೋರುತ್ತಿದ್ದೇನೆ.

**ಜೈ ಹಿಂದ್**

**ಜೈ ಕರ್ನಾಟಕ**

**ಅನುಬಂಧ–1 (ಕಂಡಿಕೆ–97)**

**ಕೃಷ್ಣಾ ಕಣಿವೆ, ಕಾವೇರಿ ಕಣಿವೆ ಹಾಗೂ ಇತರ ನದಿಗಳ ಕಣಿವೆಯ ಯೋಜನೆಗಳ ವಿವರ:**

1. ವಿಜಯಪುರ ಜಿಲ್ಲೆಯ ಹೊರ್ತಿ– ರೇವಣಸಿದ್ದೇಶ್ವರ,
2. ಬಾಗಲಕೋಟೆ ಜಿಲ್ಲೆಯ ಕೆರೂರು ಮತ್ತು ಭಗವತಿ
3. ರಾಯಚೂರು ಜಿಲ್ಲೆಯ ನಂದವಾಡಗಿ
4. ವಿಜಯಪುರ ಜಿಲ್ಲೆಯ ಇಂಡಿ ತಾಲ್ಲೂಕಿನ ತಿಡಿಗುಂದಿ ಶಾಖಾ ಕಾಲುವೆ ಮುಖಾಂತರ 16 ಕೆರೆ ತುಂಬುವ ಯೋಜನೆ
5. ಸುರಪುರ ತಾಲ್ಲೂಕಿನಡಿ ಬೂದಿಹಾಳ –ಪೀರಾಪೂರ ಏತ ನೀರಾವರಿ ಯೋಜನೆ ವಿಸ್ತರಣೆ
6. ಬೀಳಗಿ ತಾಲ್ಲೂಕಿನಡಿ ಹೆರಕಲ್ ಏತ ನೀರಾವರಿ (ದಕ್ಷಿಣ) ವಿಸ್ತರಣೆ ಯೋಜನೆ
7. ಮಸ್ಕಿ ಮತ್ತು ಪಾಮನಕಲ್ಲೂರು ಏತ ನೀರಾವರಿ ಯೋಜನೆ
8. ಬೆಳಗಾವಿ ಜಿಲ್ಲೆಯ ಚನ್ನವೃಷಬೇಂದ್ರ, ಕರಗಾಂವ್ ಮತ್ತು ಅಥಣಿ ತಾಲ್ಲೂಕಿನ ಕೊಟ್ಟಲಗಿ ಅಮ್ಮಾಜೇಶ್ವರಿ
9. ಕಲಬುರಗಿ ಜಿಲ್ಲೆಯ ಐನಾಪೂರ
10. ಬಾಗಲಕೋಟೆ ಜಿಲ್ಲೆಯ ಮಳ್ಳಿಗೇರಿ–ಹಲಗಲಿ ನೀರಾವರಿ ಯೋಜನೆ
11. ಬಾಗಲಕೋಟೆ ಜಿಲ್ಲೆಯ ಅನವಾಳ ನೀರಾವರಿ ಯೋಜನೆ
12. ಕೊಪ್ಪಳ ಜಿಲ್ಲೆಯ ಅಳವಂಡಿ–ಬೆಟಗೇರಿ
13. ಉಡುಪಿ ಜಿಲ್ಲೆಯ ಸಿದ್ದಾಪುರ ಯೋಜನೆ
14. ಚಿಕ್ಕಮಗಳೂರು ಜಿಲ್ಲೆಯ, ಕಡೂರು ಕೆರೆ ತುಂಬಿಸುವ ಯೋಜನೆ
15. ಬೈಲಹೊಂಗಲದ ಚಚಡಿ, ಮುರಗೋಡು ಏತ ನೀರಾವರಿ

16. ಕಲಘಟಗಿಯ ಬೇಡ್ತಿ ಕೆರೆ ತುಂಬಿಸುವ ಯೋಜನೆ
17. ಯಲಬುರ್ಗ ಕುಕನೂರು ಎರಡು ಹಂತದಲ್ಲಿ ಕೆರೆ ತುಂಬಿಸುವ ಯೋಜನೆ
18. ಹಳಿಯಾಳ ಕೆರೆ ತುಂಬಿಸುವ ಯೋಜನೆ
19. ಬೆಳಗಾವಿ ಜಿಲ್ಲೆಯ ಕಾಗವಾಡದ ಕೆಂಪವಾಡ–ಬಸವೇಶ್ವರ ಕೆರೆ ತುಂಬಿಸುವ ಯೋಜನೆ
20. ಗದಗದ ಶಿರಹಟ್ಟಿ ಕೆರೆ ತುಂಬಿಸುವ ಯೋಜನೆ
21. ವಿಜಯನಗರ ಜಿಲ್ಲೆಯ ಕೂಡ್ಲಿಗಿ ಕೆರೆ ತುಂಬಿಸುವ ಯೋಜನೆ
22. ರಾಯಚೂರಿನ ಗುಂಜಳ್ಳಿ ಕೆರೆ ತುಂಬಿಸುವ ಯೋಜನೆ
23. ಆಳಂದದ ಬೋರಿ ಕೆರೆ ತುಂಬಿಸುವ ಯೋಜನೆ
24. ಬಸವಕಲ್ಯಾಣದ ಕೊಂಗಳಿ ಕೆರೆ ತುಂಬಿಸುವ ಯೋಜನೆ
25. ಕಿತ್ತೂರು ಕೆರೆ ತುಂಬಿಸುವ ಯೋಜನೆ
26. ಹಿರೆಕೆರೂರಿನ ಸರ್ವಜ್ಞ ಕೆರೆ ತುಂಬಿಸುವ ಯೋಜನೆ
27. ಜಗಳೂರು ಕೆರೆ ತುಂಬಿಸುವ ಯೋಜನೆ
28. ಸೊರಬದ ಕಛವಿ ಕೆರೆ ತುಂಬಿಸುವ ಯೋಜನೆ
29. ಹಾನಗಲ್ ನ ಹಿರೇಕೌಂಶಿ ಕೆರೆ ತುಂಬಿಸುವ ಯೋಜನೆ
30. ಹೊನ್ನಾಳಿಯ ಬೆನಕನಹಳ್ಳಿ, ಗೋವಿನ ಕೋವಿ ಮತ್ತು ಹನುಮಸಾಗರ ಕೆರೆ ತುಂಬಿಸುವ ಯೋಜನೆ
31. ಹೇಮಾವತಿ ವೈನಾಲೆ 15.727 ಕಿ.ಮೀ. ರಿಂದ 21.175 ಕಿ.ಮೀ ವರೆಗಿನ ನಾಲಾ ಆಧುನೀಕರಣ
32. ತುಮಕೂರು ಶಾಖಾ ನಾಲೆ 0.00 ಕಿ.ಮೀ. ರಿಂದ 166.90 ಕಿ.ಮೀ ವರೆಗಿನ ನಾಲಾ ಆಧುನೀಕರಣ
33. ಶ್ರೀರಂಗ ಕುಡಿಯುವ ನೀರಿನ ಯೋಜನೆ

34. ತುಮಕೂರು ಜಿಲ್ಲೆಯ ಬಿಕ್ಕೆಗುಡ್ಡ ಕುಡಿಯುವ ನೀರಿನ ಯೋಜನೆ
35. ರಾಮನಗರ ಜಿಲ್ಲೆ ಕನಕಪುರ ತಾಲ್ಲೂಕಿನ ಗರಳಾಪುರ ಮತ್ತು ಇತರೆ 12 ಕೆರೆ ತುಂಬಿಸುವ ಯೋಜನೆ
36. ಚನ್ನರಾಯಪಟ್ಟಣದ ಅಮಾನಿ ಕೆರೆಯಿಂದ 25 ಕೆರೆಗಳ ತುಂಬಿಸುವ ಯೋಜನೆ
37. ಕನಕಪುರ ತಾಲ್ಲೂಕು ದೊಡ್ಡಾಲಹಳ್ಳಿ ಹನಿ ನೀರಾವರಿ ಯೋಜನೆ.

**ಅನುಬಂಧ–2 (ಕಂಡಿಕೆ–98)**

**ಕೃಷ್ಣಾ ಕಣಿವೆಯ ಅನುಷ್ಠಾನ ಹಂತದಲ್ಲಿರುವ ಆಧುನೀಕರಣ ಮತ್ತು ಏತನೀರಾವರಿ ಯೋಜನೆಗಳನ್ನು PMKSY-AIBP ಯೋಜನೆಯಡಿ ಸಲ್ಲಿಸಲಿರುವ ಪ್ರಸ್ತಾವನೆಗಳ ವಿವರ:**

1. ರಾಮಥಾಳ
2. ಬೂದಿಹಾಳ–ಪಿರಾಪುರ
3. ತಿಮ್ಮಾಪುರ
4. ನಂದವಾಡಗಿ
5. ಸನ್ನತಿ ಏತ ನೀರಾವರಿ ಯೋಜನೆ

**ಅನುಬಂಧ–3 (ಕಂಡಿಕೆ–103)**

**ಸಣ್ಣನೀರಾವರಿ ಯೋಜನೆಗಳು**

1. ಆಳಂದ ತಾಲ್ಲೂಕಿನಲ್ಲಿ ಸಣ್ಣ ನೀರಾವರಿ ಯೋಜನೆಗಳು
2. ಯಲಬುರ್ಗ ವಿಧಾನ ಸಭಾ ಕ್ಷೇತ್ರದಲ್ಲಿ ಸಣ್ಣ ನೀರಾವರಿ ಯೋಜನೆಗಳು.
3. ರಾಯಚೂರು ಜಿಲ್ಲೆಯ ಚಿಕ್ಕಪರ್ಲವಿ ಹತ್ತಿರ Bridge cum barrage.
4. ಮಾನ್ವಿ ತಾಲ್ಲೂಕಿನ ಕುರ್ಡಿ ಕೆರೆ ತುಂಬಿಸುವ ಯೋಜನೆ
5. ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನಲ್ಲಿ ಜುಂಜರವಾಡ ಏತ ನೀರಾವರಿ ಯೋಜನೆ.
6. ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನಲ್ಲಿ ಕೆರೆ ತುಂಬಿಸುವ ಯೋಜನೆ

**ಅನುಬಂಧ–4 (ಕಂಡಿಕೆ–139)**

**ಕಲ್ಯಾಣ ಕರ್ನಾಟಕ ಸಂಪೂರ್ಣ ಆರೋಗ್ಯ ಅಭಿವೃದ್ಧಿ ಯೋಜನೆಯಡಿ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸಲು ಕೈಗೆತ್ತಿಕೊಳ್ಳಲಿರುವ ವಿವಿಧ ಕಾರ್ಯಯೋಜನೆಗಳು:**

1. ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳು–24
2. ಹೊಸ ನಗರ ಆರೋಗ್ಯ ಕೇಂದ್ರಗಳು–07
3. ಪ್ರಾಥಮಿಕ ಆರೋಗ್ಯ ಕೇಂದ್ರದಿಂದ 30 ಹಾಸಿಗೆಯ ಸಮುದಾಯ ಆರೋಗ್ಯ ಕೇಂದ್ರಕ್ಕೆ ಮೇಲ್ದರ್ಜೆಗೇರಿಸುವುದು–10
4. ಹೊಸ ನಗರ ಸಮುದಾಯ ಆರೋಗ್ಯ ಕೇಂದ್ರಗಳು–04
5. 30 ಹಾಸಿಗೆಗಳ ಸಮುದಾಯ ಕೇಂದ್ರಗಳನ್ನು 50 ಹಾಸಿಗೆಗಳ FRU ಗಳಿಗೆ ಮೇಲ್ದರ್ಜೆಗೇರಿಸುವುದು–25
6. ಕಮಲಾಪುರ, ಕಂಪ್ಲಿ, ಕುರಗೋಡು, ಶಹಬಾದ್, ಕುಕನೂರು, ಕಾರಟಗಿ, ಕನಕಗಿರಿಯಲ್ಲಿ 100 ಹಾಸಿಗೆಗಳ ತಾಲ್ಲೂಕು ಆಸ್ಪತ್ರೆಗಳನ್ನಾಗಿ ಪರಿವರ್ತಿಸಲಾಗುವುದು.
7. ಸಿರಗುಪ್ಪ, ಸಂಡೂರು, ಭಾಲ್ಕಿ, ಸೇಡಂ, ಚಿತ್ತಾಪುರ, ಜೇವರ್ಗಿ, ಗಂಗಾವತಿ, ಕೂಡ್ಲಗಿ, ಶಹಾಪುರದಲ್ಲಿ 100 ಹಾಸಿಗೆಗಳ ತಾಲ್ಲೂಕು ಆಸ್ಪತ್ರೆಗಳನ್ನು 150 ಹಾಸಿಗೆಗಳ ವಿಭಾಗೀಯ ಆಸ್ಪತ್ರೆಗಳಾಗಿ ಮೇಲ್ದರ್ಜೇಗೇರಿಸುವುದು.
8. ಬಸವಕಲ್ಯಾಣ ಮತ್ತು ಲಿಂಗಸುಗೂರು ವಿಭಾಗೀಯ ಆಸ್ಪತ್ರೆಗಳನ್ನು ಜಿಲ್ಲಾ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲಾಗುವುದು.

**ಅನುಬಂಧ–5 (ಕಂಡಿಕೆ–304)**

**ರಾಜ್ಯ ಸರ್ಕಾರವು ರೈಲ್ವೆ ಸಹಯೋಗದೊಂದಿಗೆ ಕೈಗೆತ್ತಿಕೊಂಡ ಪ್ರಗತಿಯಲ್ಲಿರುವ ಒಂಭತ್ತು ವಿವಿಧ ರೈಲು ಯೋಜನೆಗಳು:**

1. ಗಿಣಿಗೇರ–ರಾಯಚೂರು
2. ತುಮಕೂರು–ರಾಯದುರ್ಗ
3. ಚಿಕ್ಕಮಗಳೂರು–ಬೇಲೂರು
4. ಕುಡಚಿ–ಬಾಗಲಕೋಟೆ
5. ಗದಗ–ವಾಡಿ
6. ತುಮಕೂರು–ದಾವಣಗೆರೆ
7. ಬೇಲೂರು–ಹಾಸನ
8. ಶಿವಮೊಗ್ಗ–ಶಿಕಾರಿಪುರ–ರಾಣೆಬೆನ್ನೂರು
9. ಧಾರವಾಡ–ಕಿತ್ತೂರು–ಬೆಳಗಾವಿ

**ಅನುಬಂಧ–6 (ಕಂಡಿಕೆ–313)**

**2025–26 ನೇ ಸಾಲಿನಲ್ಲಿ ಹೊಸ ಸೇತುವೆಗಳ ನಿರ್ಮಾಣಕ್ಕಾಗಿ ಅನುಮೋದಿಸಿರುವ ಯೋಜನೆಗಳ ವಿವರ:**

1. ದಕ್ಷಿಣ ಕನ್ನಡ ಜಿಲ್ಲೆಯ ವ್ಯಾಪ್ತಿಯಲ್ಲಿ ನೇತ್ರಾವತಿ ನದಿಗೆ ಅಡ್ಡಲಾಗಿ ಎರಡು ಸೇತುವೆಗಳು.
2. ವಿಜಯಪುರ ಜಿಲ್ಲೆಯ ತಾಳಿಕೋಟೆ ಹತ್ತಿರ ಸೇತುವೆ
3. ಮೈಸೂರು ಜಿಲ್ಲೆ ಕಬಿನಿ ನದಿಗೆ ಅಡ್ಡಲಾಗಿ ಹಾಗೂ ಕಪ್ಪಡಿ ಗ್ರಾಮದ ಬಳಿ ಕಾವೇರಿ ನದಿಗೆ ಅಡ್ಡಲಾಗಿ ಸೇತುವೆಗಳು.
4. ಕಲಬುರಗಿ ಜಿಲ್ಲೆಯ ಚಿತ್ತಾಪೂರ ತಾಲ್ಲೂಕಿನಲ್ಲಿ ದಂಡೋತಿ ಗ್ರಾಮದ ಹತ್ತಿರ ಕಾಗಿನಾ ನದಿಗೆ ಅಡ್ಡಲಾಗಿ ಸೇತುವೆ.

**ಅನುಬಂಧ–7 (ಕಂಡಿಕೆ–319)**

## K-SHIP-4 ಯೋಜನೆಯಡಿ ಅಭಿವೃದ್ಧಿಪಡಿಸಲಾಗುವ ರಸ್ತೆಗಳ ವಿವರ:

1. ಮಳವಳ್ಳಿ–ಬವಲಿ (ಕೇರಳ ಗಡಿ) (ಬನ್ನೂರು, ಹೆಚ್.ಡಿ.ಕೋಟೆ ಮಾರ್ಗ)–141 ಕಿ.ಮೀ
2. ಹುಲ್ಲಹಳ್ಳಿ–ತಗಡೂರು–ಸಂತೇಮರಹಳ್ಳಿ–55 ಕಿ.ಮೀ
3. ಮಡಿಕೇರಿ–ದೋಣಿಗಲ್ (NH–75) (ಮಾದಪುರ, ಸೋಮವಾರಪೇಟೆ, ಶನಿವಾರಸಂತೆ, ಕೊಡ್ಲಿಪೇಟೆ ಮಾರ್ಗ)–95 ಕಿ.ಮೀ
4. ಹನೂರು–ರಾಂಪುರ–ಪಾಲಾರ್–70 ಕಿ.ಮೀ
5. ಶ್ರೀರಂಗಪಟ್ಟಣ (ಪಾಂಡವಪುರ ರೈಲ್ವೆ ನಿಲ್ದಾಣ)– ಬಿ.ಎಮ್. ರೋಡ್ ಜಂಕ್ಷನ್ ಚನ್ನರಾಯಪಟ್ಟಣ (ಕೆ.ಆರ್.ಪೇಟೆ ಮಾರ್ಗ)–63 ಕಿ.ಮೀ
6. ಮಾಗಡಿ–ಹುಣಸನಹಳ್ಳಿ (ತಮಿಳುನಾಡು ಗಡಿ) (ರಾಮನಗರ, ಕನಕಪುರ ಮಾರ್ಗ)–95 ಕಿ.ಮೀ
7. ಚಡಚಣ–ಗಾಣಗಾಪುರ (ಝಳಕಿ, ಇಂಡಿ, ಅಫಜಲ್‌ಪುರ ಮಾರ್ಗ)–115 ಕಿ.ಮೀ
8. ದಿಂಡವಾರ (SH–41) – ನಲತವಾಡ (ಸೊಮನಾಳ್, ಸಾಸನೂರು, ಮುಖಿಹಳ್, ಹುಳಗಬಳ್ ಮಾರ್ಗ)–95 ಕಿ.ಮೀ
9. ಸಂಕೇಶ್ವರ–ಲೋಕಾಪುರ (ಕಮತ್‌ನೂರು ಕ್ರಾಸ್–ಹುಕ್ಕೇರಿ–ಘಟಪ್ರಭ–ಅರಭಾವಿ ಮಠ–ವಡರಟ್ಟಿ–ಮಸಗುಪ್ಪಿ–ತಿಗಡಿ–ಯಾದವಾಡ ಮಾರ್ಗ)–100 ಕಿ.ಮೀ
10. ಗಿಣಿಗೇರ–ಮುಂಡರಗಿ (ಕೊಪ್ಪಳ ಮಾರ್ಗ)–41 ಕಿ.ಮೀ
11. ಮ್ಯಾದ್ನೇರಿ ಕ್ರಾಸ್ (NH-50)–ಕತ್ರಾಳ ಕ್ರಾಸ್ (NH–367) (ಬೇವಿನಕಟ್ಟೆ ಕ್ರಾಸ್)–45 ಕಿ.ಮೀ

**ಅನುಬಂಧ–8 (ಕಂಡಿಕೆ–355)**

**ರಾಜ್ಯಕ್ಕೆ ಹೆಚ್ಚಿನ ಬಂಡವಾಳ ಹೂಡಿಕೆ ಹಾಗೂ ಹೊಸ ಉದ್ಯೋಗಗಳನ್ನು ಸೃಜಿಸುವ ಉದ್ದೇಶದಿಂದ ಹೊಸದಾಗಿ ಜಾರಿಗೊಳಿಸಲಾದ ನೀತಿಗಳ ವಿವರ:**

1. ಕರ್ನಾಟಕ ಮಾಹಿತಿ ತಂತ್ರಜ್ಞಾನ ನೀತಿ 2020–25: ಒಟ್ಟು ಹೂಡಿಕೆ USD 300 Billion / 1.5 ಲಕ್ಷ ಉದ್ಯೋಗ ಸೃಜನೆ.
2. ಕರ್ನಾಟಕ ಡೇಟಾ ಸೆಂಟರ್ ನೀತಿ 2022–27: ಒಟ್ಟು ಹೂಡಿಕೆ 10,000 ಕೋಟಿಗಳು / ಒಟ್ಟು ಸಾಮರ್ಥ್ಯ 200MW.
3. ಕರ್ನಾಟಕ ಸೈಬರ್ ಭದ್ರತಾ ನೀತಿ 2024–29: ವ್ಯವಹಾರಗಳಲ್ಲಿ ಸೈಬರ್ ಭದ್ರತೆ ಮತ್ತು ಡೇಟಾ ಗೌಪ್ಯತೆಯನ್ನು ಕಾಪಾಡುವ ದೃಷ್ಟಿಯಿಂದ 2024ನೇ ಸಾಲಿನಲ್ಲಿ ಹೊಸದಾಗಿ ಸೈಬರ್ ಭದ್ರತಾ ನೀತಿಯನ್ನು ಜಾರಿಗೊಳಿಸಲಾಗಿದೆ.
4. ಕರ್ನಾಟಕ ಜಾಗತಿಕ ಸಾಮರ್ಥ್ಯ ಕೇಂದ್ರ GCC ನೀತಿ 2020–25: ಒಟ್ಟು ಹೂಡಿಕೆ 5,000 ಕೋಟಿ/ 3.5 ಲಕ್ಷ ಉದ್ಯೋಗ ಸೃಜನೆ.
5. ಕರ್ನಾಟಕ ಸ್ಟಾರ್ಟ್‌ಅಪ್ ನೀತಿ (Startup) 2022–27: 10,000 ಉದ್ಯೋಗ ಸೃಜನೆ.
6. ESDM ಮತ್ತು ESDM ವಿಶೇಷ ಪ್ರೋತ್ಸಾಹ ಯೋಜನೆ 2020–25: 50,000 ಕೋಟಿ ಹೂಡಿಕೆ/ 60,000 ಉದ್ಯೋಗ ಸೃಜನೆ.
7. ಕರ್ನಾಟಕ AVGC XR ನೀತಿ 2024–29: ಐದು ವರ್ಷಗಳಲ್ಲಿ 149 ಕೋಟಿ ರೂ. ಹೂಡಿಕೆ/ 30,000 ಉದ್ಯೋಗ ಸೃಜನೆ.
8. ಕರ್ನಾಟಕ ಜೈವಿಕ ತಂತ್ರಜ್ಞಾನ ನೀತಿ 2024–29: USD 300 Billion ಹೂಡಿಕೆ

**ಅನುಬಂಧ–9 (ಕಂಡಿಕೆ–423)**

ರಾಜ್ಯದಲ್ಲಿ ಹೊಸದಾಗಿ ರಚನೆಯಾದ 63 ತಾಲ್ಲೂಕುಗಳಲ್ಲಿನ ಪ್ರಜಾಸೌಧ ಕಾಮಗಾರಿಗಳ ಹಂತದ ವಿವರ:

1. ಪೂರ್ಣಗೊಂಡಿರುವ ತಾಲ್ಲೂಕು ಪ್ರಜಾಸೌಧಗಳು–09 (ಯಲಹಂಕ, ಕೆ.ಜಿ.ಎಫ್, ಮೂಡುಬಿದರೆ, ಕಡಬ, ಬ್ರಹ್ಮಾವರ, ಕಾಪು, ಬೈಂದೂರು, ಹೆಬ್ರಿ, ಬಬಲೇಶ್ವರ)
2. ಪ್ರಗತಿಯಲ್ಲಿರುವ ತಾಲ್ಲೂಕು ಪ್ರಜಾಸೌಧಗಳು–05 (ಮೂಲ್ಕಿ, ಕುರಗೋಡು, ಕಂಪ್ಲಿ, ತಿಕೋಟಾ, ದಾಂಡೇಲಿ)
3. 2024–25 ನೇ ಸಾಲಿನಲ್ಲಿ ಅನುಮೋದನೆ ನೀಡಿರುವ ತಾಲ್ಲೂಕು ಪ್ರಜಾಸೌಧಗಳು–28 (ಹಾರೋಹಳ್ಳಿ, ಕಳಸ, ಕುಶಾಲನಗರ, ಪೊನ್ನಂಪೇಟೆ, ಸರಗೂರು, ಕಾಳಗಿ, ಕಮಲಾಪುರ, ಯಡ್ರಾಮಿ, ಶಹಬಾದ್, ವಡಗೆರೆ, ಗುರುಮಿಟ್ಕಲ್, ಹುಣಸಗಿ, ಚಿಟಗುಪ್ಪ, ಹುಲಸೂರು, ಕಮಲಾನಗರ, ಕುಕುನೂರು, ಕನಕಗಿರಿ, ಕಾರಟಗಿ, ಸಿರವಾರ, ಮಸ್ಕಿ, ಕಾಗವಾಡ, ಇಳಕಲ್, ಕೊಲ್ಹಾರ, ತಾಳಿಕೋಟೆ, ಅಳ್ನಾವರ, ಗಜೇಂದ್ರಗಢ, ರಟ್ಟಿಹಳ್ಳಿ, ಕೊಟ್ಟೂರು.
4. ಹೊಸದಾಗಿ ನಿರ್ಮಿಸಲು ಉದ್ದೇಶಿಸಿರುವ ತಾಲ್ಲೂಕು ಪ್ರಜಾಸೌಧಗಳು–21 (ಚೇಳೂರು, ಮಂಚೇನಹಳ್ಳಿ, ನ್ಯಾಮತಿ, ಹನೂರು, ಅಜ್ಜಂಪುರ, ಉಳ್ಳಾಲ, ಸಾಲಿಗ್ರಾಮ, ಅರಕೇರಾ, ಮೂಡಲಗಿ, ಯರಗಟ್ಟಿ, ನಿಪ್ಪಾಣಿ, ಗುಳೇದಗುಡ್ಡ, ರಬಕವಿ–ಬನಹಟ್ಟಿ, ತೇರದಾಳ, ನಿಡಗುಂದಿ, ದೇವರ ಹಿಪ್ಪರಗಿ, ಚಡಚಣ, ಆಲಮೇಲ, ಅಣ್ಣಿಗೇರಿ, ಹುಬ್ಬಳ್ಳಿ ನಗರ, ಲಕ್ಷ್ಮೇಶ್ವರ)

## ಆಯವ್ಯಯ ವಿಹಂಗಮ ನೋಟ


ರೂ. ಕೋಟಿಗಳಲ್ಲಿ


| | ಆಯವ್ಯಯ ಅಂದಾಜು 2024-25 | ಪರಿಷ್ಕೃತ ಅಂದಾಜು 2024-25 | ಆಯವ್ಯಯ ಅಂದಾಜು 2025-26 |
|---|---|---|---|
| ಪ್ರಾರಂಭ ಶಿಲ್ಕು | **-3006.55** | **4699.35** | **4557.17** |
| ಎ. ರಾಜಸ್ವ ಲೆಕ್ಕ | | | |
| I. ಜಮೆ | | | |
| ರಾಜ್ಯ ತೆರಿಗೆ | 189893.03 | 180368.03 | 208100.00 |
| ಕೇಂದ್ರ ತೆರಿಗೆಯಲ್ಲಿ ಪಾಲು | 44485.49 | 46932.72 | 51876.54 |
| ಕೇಂದ್ರ ಸರ್ಕಾರದ ಅನುದಾನಗಳು | 15299.70 | 16000.00 | 16000.00 |
| ತೆರಿಗೆಯೇತರ ರಾಜಸ್ವ | 13499.60 | 14499.98 | 16500.00 |
| ಒಟ್ಟು-ಎ (I) | **263177.82** | **257800.73** | **292476.54** |
| II. ವೆಚ್ಚ | | | |
| ಸಾಮಾಜಿಕ ಸೇವೆ | 116639.83 | 115132.10 | 120433.94 |
| ಆರ್ಥಿಕ ಸೇವೆ | 71199.07 | 71176.95 | 75814.35 |
| ಸಾಮಾನ್ಯ ಸೇವೆ | 95858.92 | 90732.77 | 109104.99 |
| ಸಹಾಯಾನುದಾನ ಮತ್ತು ಅಂಶದಾನ | 6833.54 | 6885.95 | 6385.45 |
| ಒಟ್ಟು-ಎ (II) | **290531.35** | **283927.76** | **311738.73** |
| ಎ. ರಾಜಸ್ವ ಲೆಕ್ಕ ಹೆಚ್ಚುವರಿ/ಕೊರತೆ | **-27353.54** | **-26127.04** | **-19262.19** |


## ಆಯವ್ಯಯ ವಿಹಂಗಮ ನೋಟ


ರೂ. ಕೋಟಿಗಳಲ್ಲಿ

| | ಆಯವ್ಯಯ ಅಂದಾಜು 2024-25 | ಪರಿಷ್ಕೃತ ಅಂದಾಜು 2024-25 | ಆಯವ್ಯಯ ಅಂದಾಜು 2025-26 |
|---|---|---|---|
| ಬಿ. ಬಂಡವಾಳ ಲೆಕ್ಕ | | | |
| I. ಜಮೆ: | | | |
| ಕೇಂದ್ರ ಸರ್ಕಾರದಿಂದ ಸಾಲ | 6855.00 | 6855.00 | 7000.00 |
| ಬಹಿರಂಗ ಮಾರುಕಟ್ಟೆ ಸಾಲ | 96840.00 | 90000.00 | 105000.00 |
| ಎಲ್ಐಸಿ.ಎನ್ಎಸ್ಎಸ್ಎಫ್, ಎನ್ಸಿಡಿಸಿ ಮತ್ತು ಆರ್.ಐ.ಡಿ.ಎಫ್ ಗಳಿಂದ ಸಾಲ | 1551.00 | 3851.00 | 4000.01 |
| ವಿವಿಧ ಬಂಡವಾಳ ಜಮೆಗಳು | 37.50 | 38.00 | 36.00 |
| ಸಾಲಗಳು ಮತ್ತು ಮುಂಗಡಗಳ ವಸೂಲಿ | 212.55 | 112.01 | 134.01 |
| ಒಟ್ಟು-ಬಿ (I) | **105496.05** | **100856.01** | **116170.02** |
| II. ಬಟವಾಡೆ: | | | |
| ಬಂಡವಾಳ ವೆಚ್ಚ | 52902.96 | 54411.87 | 68172.24 |
| ಕೇಂದ್ರ ಸರ್ಕಾರದ ಸಾಲಗಳ ಮರುಸಂದಾಯ | 1639.33 | 1639.33 | 1989.57 |
| ಮಾರುಕಟ್ಟೆ ಸಾಲಗಳ ಮರುಪಾವತಿ | 20500.03 | 20500.03 | 21187.53 |
| ಎಲ್ಐಸಿ, ಜಿಐಸಿ, ಎನ್ಎಸ್ಎಸ್ಎಫ್, ಎನ್ಸಿಡಿಸಿ ಮತ್ತು ಆರ್.ಐ.ಡಿ.ಎಫ್ ಸಾಲಗಳ ಮರುಸಂದಾಯ | 2834.94 | 2834.94 | 3297.37 |
| ಸಾಲಗಳು ಮತ್ತು ಮುಂಗಡಗಳ ಬಟವಾಡೆ | 2974.19 | 2551.24 | 3163.80 |
| ಒಟ್ಟು-ಬಿ (II) | **80851.44** | **81937.40** | **97810.51** |
| ಸಂಚಿತ ನಿಧಿ | **371382.80** | **365865.16** | **409549.24** |
| ಡಿ. ಮುಕ್ತಾಯ ಶಿಲ್ಕು | **3849.86** | **4557.17** | **-3561.14** |


ಜಮೆ-ರೂಪಾಯಿ ಎಷ್ಟು ಭಾಗ ಯಾವುದರಿಂದ (2025-26 ಆಯವ್ಯಯ ಅಂದಾಜು) (ಪೈಸೆ)
ರಾಜ್ಯ ತೆರಿಗೆಯೇತರ ರಾಜಸ್ವದಿಂದ, 4
ಕೇಂದ್ರ ಸರ್ಕಾರದ ಸಹಾಯಾನುದಾನ, 4
ಕೇಂದ್ರ ತೆರಿಗೆ ಪಾಲಿನಿಂದ, 13
ರಾಜ್ಯ ತೆರಿಗೆ ಆದಾಯದಿಂದ, 52
ಸಾಲದಿಂದ, 27


ವೆಚ್ಚ 2025-26 ಆಯವ್ಯಯ ಅಂದಾಜು-ರೂಪಾಯಿ ಯಾವ ಭಾಗ ಎಷ್ಟೆಷ್ಟು (ಪೈಸೆಗಳಲ್ಲಿ)
ಇತರ ಸಾಮಾಜಿಕ ಸೇವೆಗಳು, 3
ನೀರು ಪೂರೈಕೆ ಮತ್ತು ನೈರ್ಮಲ್ಯ, 3
ಸಾಲ ಮರುಪಾವತಿ, 18
ಆರೋಗ್ಯ, 5
ಶಿಕ್ಷಣ, 10
ಇತರ ಸಾಮಾನ್ಯ ಸೇವೆಗಳು, 18
ಕೃಷಿ,ನೀರಾವರಿ ಮತ್ತು ಗ್ರಾಮೀಣ ಅಭಿವೃದ್ಧಿ, 14
ಇತರ ಆರ್ಥಿಕ ಸೇವೆಗಳು, 14
ಸಮಾಜ ಕಲ್ಯಾಣ, 15


ರಾಜ್ಯದ ಸ್ವಂತ ತೆರಿಗೆ ರಾಜಸ್ವಗಳ ವಿವರಗಳು 2025-26 ಆಯವ್ಯಯ ಅಂದಾಜುಗಳು
(ರೂ.ಕೋಟಿಗಳಲ್ಲಿ)
ವಾಣಿಜ್ಯ ತೆರಿಗೆಗಳು, 120000, 58%
ರಾಜ್ಯ ಅಬಕಾರಿ, 40000, 19%
ನೋಂದಣಿ ಮತ್ತು ಮುದ್ರಾಂಕ, 28000, 14%
ಮೋಟಾರು ವಾಹನ ತೆರಿಗೆ, 15000, 7%
ಇತರೆ, 5100, 2%


ಒಟ್ಟಾರೆ ಹಂಚಿಕೆ(ಒಟ್ಟು ಅಭಿಯಾಚನೆ) 2025–26 (ರೂ.ಕೋಟಿಗಳಲ್ಲಿ) (ಒಟ್ಟಾರೆ ಹಂಚಿಕೆಯ ಶೇಕಡವಾರು)
ಶಿಕ್ಷಣ, 45286, 10%
ಮಹಿಳಾ ಮತ್ತು ಮಕ್ಕಳ ಕಲ್ಯಾಣ, 34955, 8%
ಇಂಧನ, 26896, 6%
ಗ್ರಾಮೀಣಾಭಿವೃದ್ಧಿ & ಪಂಚಾಯತ್ ರಾಜ್, 26735, 6%
ನೀರಾವರಿ, 22181, 5%
ನಗರಾಭಿವೃದ್ಧಿ & ವಸತಿ, 21405, 5%
ಒಳಾಡಳಿತ ಮತ್ತು ಸಾರಿಗೆ, 20625, 5%
ಆರೋಗ್ಯ & ಕುಟುಂಬ ಕಲ್ಯಾಣ, 17473, 4%
ಕಂದಾಯ, 17201, 4%
ಸಮಾಜ ಕಲ್ಯಾಣ, 16955, 4%
ಲೋಕೋಪಯೋಗಿ, 11841, 3%
ಆಹಾರ ಮತ್ತು ನಾಗರೀಕ ಸರಬರಾಜು, 8275, 2%
ಕೃಷಿ ಮತ್ತು ತೋಟಗಾರಿಕೆ, 7145, 2%
ಪಶುಸಂಗೋಪನೆ ಮತ್ತು ಮೀನುಗಾರಿಕೆ, 3977, 1%
ಇತರೆ, 149857, 35%

# ಟಿಪ್ಪಣಿ

# ಟಿಪ್ಪಣಿ

# ಟಿಪ್ಪಣಿ